ಸಂಪುಟ: 04 ಸಂಚಿಕೆ: 153 ಪುಟಗಳು: 08 ಗುರುವಾರ 15 ಆಗಸ್ಟ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833 9448225696 +91 8035841833 ₹5
ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ




'ಈ ಗ್ಯಾರಂಟಿ ಯೋಜನೆಗಳು ಬಡವರಿಗೆ ತಲುಪಬೇಕು, ಶ್ರೀಮಂತರಿಗೆ ಬೇಡ ಎಂದು ಜನ ಹೇಳುತ್ತಿದ್ದಾರೆ. ಹೋಟೆಲ್‌ಗಳಲ್ಲಿ , ಕೆಲಸಗಾರರು ಸೇರಿದಂತೆ ಎಲ್ಲೆಡೆಯೂ ಇದೇ ಚರ್ಚೆಯಾಗುತ್ತಿದೆ. ಶ್ರೀಮಂತರಿಗೆ ಯಾಕೆ ನೀಡುತ್ತಿದ್ದೀರಿ ಬಡವರಿಗೆ ನೀಡಿ ಎಂದು ಪ್ರತಿಪಕ್ಷಗಳು ಕೂಡಾ ಕೇಳಿವೆ'

# ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಪ್ರತಿಪಕ್ಷಗಳಿಂದ ತೀವ್ರ ಖಂಡನೆ



ಗ್ಯಾರಂಟಿ ಯೋಜನೆಗಳು ನಿಲ್ಲಲ್ಲ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿಯ ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸುವ ಅಗತ್ಯವಿದೆ ಎಂಬ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಹೇಳಿಕೆ ಚರ್ಚೆಗೆ ಗ್ರಾಸವಾಗಿದೆ. ಆರ್ಥಿಕವಾಗಿ ದುರ್ಬಲ ವರ್ಗದವರಿಗೆ ಮಾತ್ರ ಯೋಜನೆ ನೀಡಿ. ಶ್ರೀಮಂತರನ್ನು ಯೋಜನೆಯಿಂದ ಹೊರಗಿಡಬೇಕು. ಇದರಿಂದಾಗಿ ವಾರ್ಷಿಕವಾಗಿ ರೂ. 10,000 ಕೋಟಿ ಉಳಿತಾಯವಾಗಲಿದೆ ಎಂದು ಜಾರಕಿಹೊಳಿ ಹೇಳಿದ್ದಾರೆ.

ಈ ವರ್ಷದ ಆರಂಭದಲ್ಲಿ ರಾಜ್ಯ ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, 2024-25ನೇ ಸಾಲಿನಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ರೂ.52,000 ಕೋಟಿ ಮೀಸಲಿಟ್ಟಿರುವುದಾಗಿ ಘೋಷಿಸಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಜಾರಕಿಹೊಳಿ, ಪಕ್ಷದ ವರಿಷ್ಠರನ್ನು ಭೇಟಿ ಮಾಡಿದಾಗ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವಂತೆ ನಾನು ಹೇಳಿಲ್ಲ. ಈ ಗ್ಯಾರಂಟಿ ಯೋಜನೆಗಳು ಬಡವರಿಗೆ ತಲುಪಬೇಕು, ಶ್ರೀಮಂತರಿಗೆ ಬೇಡ ಎಂದು ಜನ ಹೇಳುತ್ತಿದ್ದಾರೆ. ಹೋಟೆಲ್‌ಗಳಲ್ಲಿ, ಕೆಲಸಗಾರರು ಸೇರಿದಂತೆ ಎಲ್ಲೆಡೆಯೂ ಇದೇ ಚರ್ಚೆಯಾಗುತ್ತಿದೆ. ಶ್ರೀಮಂತರಿಗೆ ಯಾಕೆ ನೀಡುತ್ತಿದ್ದೀರಿ ಬಡವರಿಗೆ ನೀಡಿ ಎಂದು ಪ್ರತಿಪಕ್ಷಗಳು ಕೂಡಾ ಕೇಳಿವೆ ಎಂದರು.

ಯೋಜನೆಗಳ ಪರಿಷ್ಕರಣೆಯಿಂದ ಸರ್ಕಾರದಿಂದ ಜನಪ್ರಿಯತೆ ಹೆಚ್ಚಲಿದೆ. ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸಲು ಯಾರು ಹೇಳಿದ್ದು ಅದನ್ನು ನಾವು ಸ್ಥಗಿತಗೊಳಿಸುವುದಿಲ್ಲ. ಇದರ ಬಗ್ಗೆ ಕ್ಯಾಬಿನೆಟ್ ಹಾಗೂ ಶಾಸಕಾಂಗ ಪಕ್ಷದ ಸಭೆಯಲ್ಲಿ ಚರ್ಚೆ ನಡೆದಿಲ್ಲ. ಇದರ ಬಗ್ಗೆ ಪಕ್ಷದ ವರಿಷ್ಠರು ನಿರ್ಧಾರ ತೆಗೆದುಕೊಳ್ಳಬೇಕಾಗಿದೆ ಎಂದು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

ಆದಾಗ್ಯೂ, ಈ ಗ್ಯಾರಂಟಿಗಳ ಪ್ರಯೋಜನವನ್ನು ಬಿಪಿಎಲ್ ಕುಟುಂಬ ಗಳಿಗೆ ಮಾತ್ರ ನೀಡಬೇಕು, ಬೇರೆವರಿಗೆ ಬೇಡ ಎಂಬ ಸಲಹೆಯನ್ನು ಬೆಂಬಲಿಸಿದರು. ರಾಜ್ಯದಲ್ಲಿ ಶೇ. 82 ರಷ್ಟು ಬಿಪಿಎಲ್ ಕುಟುಂಬಗಳಿವೆ. ಆ ಕುಟುಂಬಗಳು ಪ್ರಯೋಜನ ಪಡೆಯಬೇಕೆಂಬುದು ಗುರಿಯಾಗಿದೆ. ನಮ್ಮಂತಹವರು ಇದರ ಲಾಭ ಪಡೆಯುವುದರಲ್ಲಿ ಏನು ಪ್ರಯೋಜನ ಎಂಬ ಚಿಂತನೆ ಬಹಳ ದಿನಗಳಿಂದ ನಡೆಯುತ್ತಿದೆ. ಗ್ಯಾರಂಟಿ ಯೋಜನೆಗಳ ಬಗ್ಗೆ ಸಮಗ್ರ ಪರಾಮರ್ಶೆಯ ಅಗತ್ಯವಿದೆ. ಸೂಕ್ತ ಸಂದರ್ಭದಲ್ಲಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ಈಗಿನ ಸ್ಥಿತಿಯಲ್ಲಿ ಗ್ಯಾರಂಟಿ ಯೋಜನೆಗಳು ಮುಂದುವರಿದರೆ ಅಪಾಯ ಕಟ್ಟಿಟ್ಟ ಬುತ್ತಿ. ಗ್ಯಾರಂಟಿ ಯೋಜನೆಯಿಂದ ರಾಜಕೀಯವಾಗಿಯೂ ಕೂಡ ಲಾಭವಾಗುವ ಬಗ್ಗೆ ಅನುಮಾನವಿದೆ. ಅಭಿವೃದ್ಧಿಯನ್ನೇ ಮೆಚ್ಚಿಕೊಂಡು ಚುನಾವಣೆ ಮಾಡುವವರಿಗೆ ಬಹಳ ಸಂಕಷ್ಟ ಎದುರಾಗಲಿದೆ.

ಕ್ಷೇತ್ರದಲ್ಲಿ ಅಭಿವೃದ್ಧಿಯಾಗದಿದ್ದರೆ ನಿರೀಕ್ಷಿತ ಪ್ರಮಾಣದಲ್ಲಿ ಮತಗಳು ಬರುವುದಿಲ್ಲ. ಮುಂಬರುವ ಎಲ್ಲಾ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಪಕ್ಷಕ್ಕೆ ಹಾನಿಯಾಗುವ ಸಾಧ್ಯತೆಯಿದೆ. ಹೀಗಾಗಿ ತಕ್ಷಣವೇ ಗ್ಯಾರಂಟಿ ಯೋಜನೆಗಳಿಗೆ ಒಂದು ಸ್ಪಷ್ಟವಾದ ಪರಿಷ್ಕೃತ ರೂಪ ನೀಡುವ ಮೂಲಕ ಜನರೊಂದಿಗೆ ನಿಲ್ಲುವಂತೆ ಮನವರಿಕೆ ಮಾಡಿರುವ ನಾಯಕರು.

ಈ ಹಿಂದೆಯೂ ಸಹ ಶಾಸಕಾಂಗ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ್ದ ಶಾಸಕರು ಸಚಿವರು. ಇದೀಗ ಮತ್ತೆ ಮುನ್ನಲೆಗೆ ಬಂದಿದೆ. ಹೀಗಾಗಿ ಗ್ಯಾರಂಟಿ ಯೋಜನೆ ಬಂದ್ ಆಗುತ್ತಾ ಪರಿಷ್ಕರಣೆಯೊಂದಿಗೆ ಮುಂದುವರಿಯುತ್ತಾ ಕಾದು ನೋಡಬೇಕು.

1 ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಕುರಿತು ಸರ್ಕಾರದ ಹಂತದಲ್ಲಿ ಚರ್ಚೆಯಾಗಿಲ್ಲ ಎಂದ ಸಚಿವ ಜಿ ಪರಮೇಶ್ವರ.

2 ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳಿಗೆ ರೂ. 56 ಸಾವಿರ ಕೋಟಿ ಮೀಸಲಿಡಲಾಗಿದೆ; ಪರಿಷ್ಕರಣೆ ಇಲ್ಲ ಎಂದ ಸಚಿವ.

3 ಬಡವರಿಗೆ ಮಾತ್ರ ತಲುಪಬೇಕು ಎಂಬುದು ಬಹುತೇಕರ ಅಭಿಪ್ರಾಯ ಎಂದ ಗೃಹ ಸಚಿವ.

## ಗ್ಯಾರಂಟಿ ಪರಿಷ್ಕರಣೆ ಮಾಡುವುದು ಸಾಧ್ಯವಿಲ್ಲ



ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಕುರಿತು ಸರ್ಕಾರದ ಹಂತದಲ್ಲಿ ಚರ್ಚೆಯಾಗಿಲ್ಲ. ಗ್ಯಾರಂಟಿ ಯೋಜನೆಗಳು ಬಡವರಿಗೆ ಮಾತ್ರ ತಲುಪಬೇಕು ಎಂಬುದು ಬಹಳ ಜನರ ಅಭಿಪ್ರಾಯವಾಗಿದೆ. ಈಗಾಗಲೇ ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳಿಗೆ ರೂ. 56 ಸಾವಿರ ಕೋಟಿ ಮೀಸಲಿಡಲಾಗಿದೆ. ಹೀಗಾಗಿ ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಣೆ ಮಾಡುವುದು ಸಾಧ್ಯವಿಲ್ಲ. ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಚರ್ಚೆಗಳಾಗುತ್ತಿರುವುದು ನಿಜ. ಶಾಸಕರು, ಕಾರ್ಯಕರ್ತರು ಸಾರ್ವಜನಿಕವಾಗಿ ಅಲ್ಲಲ್ಲಿ ಮಾತನಾಡಿರಬಹುದು. ಪಕ್ಷದ ವೇದಿಕೆಯಲ್ಲಿ, ಸರ್ಕಾರದ ಹಂತದಲ್ಲಿ ಚರ್ಚೆಯಾಗಿಲ್ಲ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶೇ.13ರಷ್ಟು ಮತ ಹೆಚ್ಚಾಗಿವೆ. ಗ್ಯಾರಂಟಿ ಯೋಜನೆಗಳಿಂದ ಮತ ಹೆಚ್ಚಾಗಿದೆ ಎಂದು ಯಾಕೆ ವಿಶ್ಲೇಷಣೆ ಮಾಡಬಾರದು. ಗ್ಯಾರಂಟಿ ಯೋಜನೆ ಪರಿಷ್ಕರಣೆ ಬಗ್ಗೆ ನನ್ನ ಅಭಿಪ್ರಾಯವೊಂದೇ ಮುಖ್ಯವಾಗುವುದಿಲ್ಲ. ಒಬ್ಬೊಬ್ಬರು ಒಂದೊಂದು ಹೇಳಿಕೆಗಳನ್ನು ನೀಡುತ್ತಾ ಹೋದರೆ ಗೊಂದಲ ಉಂಟಾಗುತ್ತದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು.



ಶಕ್ತಿ ಯೋಜನೆ ಎಲ್ಲರಿಗೂ ಉಪಯೋಗವಾಗುತ್ತಿದೆ. ಇದನ್ನು ಹೊರತುಪಡಿಸಿ ನಾಲ್ಕೂ ಯೋಜನೆಗಳನ್ನೂ ಅರ್ಹರಿಗೆ ನೀಡುವಂತಾಗಲಿ, ಈ ಬಗ್ಗೆ ಆಯಾ ಯೋಜನೆ ಯಡಿ ಬರುವ ಸಚಿವರ ಅಭಿಪ್ರಾಯವನ್ನು ತಿಳಿಸಲಿ. ಮುಖ್ಯವಾಗಿ ಗೃಹ ಲಕ್ಷ್ಮೀ ಯೋಜನೆ ಪರಿಷ್ಕರಣೆ ಬಗ್ಗೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರತಿಕ್ರಿಯಿಸಬೇಕು

-ಕೆ.ಹೆಚ್ ಮುನಿಯಪ್ಪ, ಆಹಾರ ಸಚಿವ

**ಬಿಜೆಪಿಯವರು ನೂರು ಜನ್ಮ ಎತ್ತಿ ಬಂದರೂ ಗ್ಯಾರಂಟಿ ನಿಲ್ಲಲ್ಲ**

ಬಿಜೆಪಿಯವರು ನೂರು ಜನ್ಮ ಎತ್ತಿಬಂದರೂ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ. ಮಾಧ್ಯಮಗಳಲ್ಲಿ ಬಂದಿರುವ ವರದಿ ಸುಳ್ಳು. ಪಕ್ಷದ ಅಧ್ಯಕ್ಷನಾದ ನಾನು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ಯಾರಂಟಿ ಯೋಜನೆಗಳನ್ನು ಬದಲಿಸುವ ಅಥವಾ ಕತ್ತರಿ ಹಾಕುವ ಉದ್ದೇಶವಿಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದೇವೆ. ಆದಾಯ ಹೆಚ್ಚಾಗಿರುವವರು, ತೆರಿಗೆ ಪಾವತಿದಾರರು ಕೂಡ ಈ ಯೋಜನೆ ಪಡೆಯುತ್ತಿದ್ದಾರೆ ಎಂದು ಕೆಲವರು ದೂರಿದ್ದಾರೆ. ಅಂತಹ ಪ್ರಕರಣಗಳ ಪರಿಶೀಲನೆ ಮಾಡಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು



ಗ್ಯಾರಂಟಿ ಯೋಜನೆ ಪರಿಷ್ಕರಣೆ ಮಾಡುವ ವಿಚಾರದ ಬಗ್ಗೆ ನಾನು ಮಾತನಾಡೊಲ್ಲ. ಕೆಲವರು ಎರಡು ಮೂರು ಕಡೆ ಅನುಕೂಲ ಪಡೆಯುತ್ತಿದ್ದಾರೆ. ಆ ರೀತಿಯ ದುರುಪಯೋಗ ಆಗಬಾರದು. ಪರಿಷ್ಕರಣೆ ಬಗ್ಗೆ ಸಚಿವರು ಮಾತನಾಡಿದ್ದರೆ ಅದು ಅವರ ವೈಯಕ್ತಿಕ ಅಭಿಪ್ರಾಯ. ನಾನು ಗ್ಯಾರಂಟಿ ಯೋಜನೆಗಳು ದುರುಪಯೋಗ ಆಗಬಾರದು ಎಂದು ಮಾತ್ರ ಹೇಳುತ್ತೇನೆ. ದೆಹಲಿ ಮಟ್ಟದಲ್ಲಿ ಪರಿಷ್ಕರ ಈ ಸಂಬಂಧ ಏನೇ ತೀರ್ಮಾನ ಮಾಡಿದ್ರೂ ನಮ್ಮ ಸರ್ಕಾರ ಮಾಡುತ್ತದೆ

-ಮಧು ಬಂಗಾರಪ್ಪ, ಸಚಿವ



ಕಾಂಗ್ರೆಸ್ ಸರ್ಕಾರಕ್ಕೆ ಬಿಟ್ಟ ಭಾಗ್ಯಗಳನ್ನು ಜನಸಾಮಾನ್ಯರಿಗೆ ವಿತರಿಸಲೂ ಆಗುತ್ತಿಲ್ಲ, ನಿರ್ವಹಿಸಲೂ ಆಗುತ್ತಿಲ್ಲ, ಅದಕ್ಕೆ ಬೇಕಾದ ಹಣವನ್ನು ಹೊಂದಿಸಲೂ ಆಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಸಚಿವರ ಮೂಲಕ ಗ್ಯಾರಂಟಿಗಳ ವಿರುದ್ಧ ಅಪಸ್ವರ ಎತ್ತಿಸಿರುವ ಕಾಂಗ್ರೆಸ್ ನಾಯಕರು ಭಾಗ್ಯಗಳಿಗೆ ಕತ್ತರಿ ಪ್ರಯೋಗಿಸುವುದಲ್ಲದೇ, ಸಂಪೂರ್ಣವಾಗಿ ನಿಲ್ಲಿಸಿದರೂ ಆಶ್ಚರ್ಯಪಡಬೇಕಿಲ್ಲ

-ಬಿ.ವೈ. ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ



ಕಾಂಗ್ರೆಸ್ ಶಾಸಕರೇ ಸರ್ಕಾರಕ್ಕೆ ಧಿಕ್ಕಾರ ಹಾಕುವ ಸ್ಥಿತಿ ಬರಲಿದೆ. ಯಾವುದೇ ಪಕ್ಷದ ಸರ್ಕಾರ ಬಂದರೂ ಸಾಲ ಮಾಡಲೇಬೇಕು. ಇಂತಹ ಸ್ಥಿತಿಯಲ್ಲಿ ಸಂಪನ್ಮೂಲದ ಗ್ಯಾರಂಟಿಯೇ ಇಲ್ಲದೆ, ಜನರಿಗೆ ಟೋಪಿ ಹಾಕಿ ಗ್ಯಾರಂಟಿ ಯೋಜನೆ ತರಲಾಗಿದೆ. ಇದನ್ನು ನಿರ್ವಹಿಸಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ. ಬೆಸ್ಕಾಂ ಹಾಗೂ ಇಲಾಖೆಗಳು ನಷ್ಟದಲ್ಲಿವೆ. ಕಾಂಗ್ರೆಸ್ ಶಾಸಕರೇ ಸರ್ಕಾರದ ವಿರುದ್ಧ ಧಿಕ್ಕಾರ ಹಾಕುವ ಸ್ಥಿತಿ ಬರಲಿದೆ. ಅದಕ್ಕೂ ಮುಂದೆ ಎಚ್ಚೆತ್ತುಕೊಳ್ಳಲಿ

-ಆರ್.ಅಶೋಕ, ಪ್ರತಿಪಕ್ಷ ನಾಯಕ

## ಚುನಾವಣೆ ಮುಂದೂಡುವುದು ಸಂವಿಧಾನಕ್ಕೆ ಅಪಚಾರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ರಾಜ್ಯ ಕಾಂಗ್ರೆಸ್ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಮುಂದೂಡುವುದು ಸಂವಿಧಾನಕ್ಕೆ ಮಾಡುವ ಅಪಚಾರ. ಜೊತೆಗೆ ಸರ್ಕಾರ ಚಿಕ್ಕಬಳ್ಳಾಪುರ ನಗರಸಭಾಧ್ಯಕ್ಷ ಸ್ಥಾನವನ್ನು ಪರಿಶಿಷ್ಟ ಜಾತಿ-ಮಹಿಳೆಗೆ ಮೀಸಲಿಡದೆ ವಂಚಿಸಿದೆ ಎಂದು ಸಂಸದ ಡಾ.ಕೆ.ಸುಧಾಕರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಯಾವುದೇ ಚುನಾವಣೆ ಬೇಕಿಲ್ಲ. ಲೋಕಸಭೆ ಚುನಾವಣಾ ಫಲಿತಾಂಶದಿಂದ ಭಯಗೊಂಡು ಪಂಚಾಯಿತಿ ಚುನಾವಣೆ ಮುಂದೂಡಿದ್ದಾರೆ. ಬಿಬಿಎಂಪಿ ಚುನಾವಣೆ ಮುಂದೂಡುವ ಉದ್ದೇಶದಿಂದ ಅದನ್ನು ವಿಭಜನೆ ಮಾಡಲಾಗಿದೆ. ನಗರಸಭಾ ಸದಸ್ಯರಿಂದ ಅಧಿಕಾರ ಮೊಟಕಾಗುವ ಆತಂಕದಿಂದ ಶಾಸಕರು ಹೀಗೆ ಮಾಡಿರಬಹುದು. ಆದರೆ ಇದು ಸಂವಿಧಾನಕ್ಕೆ ಅಪಚಾರವೆಸಗುವ ಕೆಲಸ. ಸ್ಥಳೀಯ ಆಡಳಿತದಲ್ಲಿ ಸಮಯಕ್ಕೆ ಸರಿಯಾಗಿ ಚುನಾವಣೆ ನಡೆಯಬೇಕಿದ್ದರೂ, ಆ ವ್ಯವಸ್ಥೆಗೆ ವಿರುದ್ಧವಾಗಿ ಕಾಂಗ್ರೆಸ್ ಸರ್ಕಾರ ವರ್ತಿಸಿದೆ ಎಂದು ದೂರಿದರು. ಕಾಂಗ್ರೆಸ್ ನಾಯಕರು ಬಾಬಾ ಸಾಹೇಬ್ ಅಂಬೇಡ್ಕರ್ ಬಗ್ಗೆ ಮಾತಾಡುತ್ತಾರೆ. ನಗರಾಭಿವೃದ್ಧಿ ಇಲಾಖೆಯ ಕರಡಿನಲ್ಲಿದ್ದುದನ್ನು ಬದಲಿಸಿ ಹುನ್ನಾರ ಮಾಡಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ವಿದ್ಯುತ್ ಬಿಲ್ ನಲ್ಲಿಯೂ ಸುಲಿಗೆ ಗ್ರಾಹಕರಿಗೆ ಕರೆಂಟ್ ಶಾಕ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಖಜಾನೆಯನ್ನು ಗುಡಿಸಿ ಗುಂಡಾಂತರ ಮಾಡಿರುವ ಕಾಂಗ್ರೆಸ್ ಸರ್ಕಾರ ಈಗ ದಿನನಿತ್ಯದ ಖರ್ಚಿಗೆ ಜನರನ್ನು ಸುಲಿಗೆ ಮಾಡಲು ನಿಂತಿದೆ ಎಂದು ರಾಜ್ಯ ಬಿಜೆಪಿ ಘಟಕ ಕಿಡಿಕಾರಿದೆ. ಸಿಎಂ ಸಿದ್ದರಾಮಯ್ಯ ಅವರ ದಿವಾಳಿ ಸರ್ಕಾರದಲ್ಲಿ, ಬೆಲೆ ಹೆಚ್ಚಳ ಮಾಡಿ ಜನರಿಗೆ ಬರೆ ಹಾಕಿದ್ದ ಕೈಗಳು ಈಗ ವಿದ್ಯುತ್ ಬಿಲ್‌ನಲ್ಲೂ ಮೋಸ ಮಾಡಿ ಗ್ರಾಹಕರಿಗೆ ಶಾಕ್ ನೀಡುತ್ತಿದೆ.

ಗ್ಯಾರಂಟಿ ವೆಚ್ಚದಿಂದ ಆರ್ಥಿಕವಾಗಿ ಕಂಗೆಟ್ಟ ಇಂಧನ ಇಲಾಖೆ ಒಂದಿಲ್ಲೊಂದು ರೀತಿಯಲ್ಲಿ ಲೂಟಿಗೆ ನಿಂತು ಜನಸಾಮಾನ್ಯರ ಬದುಕು ದುರ್ಬರಗೊಳಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ.

ಮನೆಯಲ್ಲಿ ವಾಸವಿಲ್ಲದವರಿಗೂ, ಕಡಿಮೆ ವಿದ್ಯುತ್ ಬಳಸುವವರಿಗೂ ಹೆವಿ ಲೋಡ್ ಹೆಸರಲ್ಲಿ ದುಬಾರಿ ಮೊತ್ತದ ಬಿಲ್ ಪಾವತಿಗೆ ಹೇಳಿ ಗ್ರಾಹಕರಿಗೆ ಶಾಕ್ ನೀಡಲಾಗುತ್ತಿದೆ. ರಾಜ್ಯ ಸರ್ಕಾರ ಜನರಿಗೆ ಕರೆಂಟ್ ಶಾಕ್ ನೀಡುತ್ತಿದೆ ಎಂದು ವಾಗ್ದಾಳಿ ನಡೆಸಿದೆ.

## ರಾಜ್ಯದ ಆರು ಗ್ರಾ. ಪಂ. ಮಹಿಳಾ ಅಧ್ಯಕ್ಷರಿಗೆ ಆಹ್ವಾನ

• ಉದಯವಾಹಿನಿ, ಬೆಂಗಳೂರು

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನವದೆಹಲಿಯ ಕೆಂಪುಕೋಟೆಯಲ್ಲಿ ನಡೆಯಲಿರುವ ರಾಷ್ಟ್ರಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಕರ್ನಾಟಕದ ಗ್ರಾಮ ಪಂಚಾಯತಿಗಳ ಆರು ಮಂದಿ ಮಹಿಳಾ ಅಧ್ಯಕ್ಷರನ್ನು ಆಹ್ವಾನಿಸಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಶೇಷ ಆಹ್ವಾನಿತರಾಗಿ ಆಮಂತ್ರಣಗೊಂಡಿರುವ ಮಹಿಳಾ ಅಧ್ಯಕ್ಷರನ್ನು ಅಭಿನಂದಿಸಿ, ಮಾಹಿತಿ ಹಂಚಿಕೊಂಡಿರುವ ಅವರು, ಅಧ್ಯಕ್ಷೆಯರಾದ ಕುಮಾರಿ ಲಕ್ಷ್ಮಿನರಸಮ್ಮ, ನಫೀಜಾ, ರಾಜೇಶ್ವರಿ ಗುತ್ತಿ, ದೇವಿ ಪಿ ಟಿ, ಶಿವಮ್ಮ, ಉಪಾಧ್ಯಕ್ಷೆ ಜಯಶ್ರೀ, ಇಂದು ದೆಹಲಿಯಲ್ಲಿ ನಡೆಯಲಿರುವ ಸ್ವಾತಂತ್ರ್ಯೋತ್ಸವದಲ್ಲಿ ಭಾಗವಹಿಸುತ್ತಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಟಿ.ಕೆ.ರಮೇಶ್ ನೇತೃತ್ವದಲ್ಲಿ ಈ ತಂಡ ಸಮಾರಂಭದಲ್ಲಿ ಪಾಲ್ಗೊಳ್ಳಲಿದೆ ಎಂದು ತಿಳಿಸಿದ್ದಾರೆ.

ಬಸ್ಸಿನಲ್ಲಿ ಟಿಕೆಟ್ ಇಲ್ಲದೇ ಪ್ರಯಾಣ

## 6.03 ಲಕ್ಷ ದಂಡ ವಸೂಲಿ

• ಉದಯವಾಹಿನಿ, ಬೆಂಗಳೂರು:

ರಾಜ್ಯಾದ್ಯಂತ ಕೆ ಎಸ್ ಆರ್ ಟಿ ಸಿ ಬಸ್ಸಿನಲ್ಲಿ ಟಿಕೆಟ್ ಇಲ್ಲದೇ ಪ್ರಯಾಣಿಸಿದಂತ ಪ್ರಯಾಣಿಕರಿಗೆ ತನಿಖಾಧಿಕಾರಿಗಳು ಬಿಗ್ ಶಾಕ್ ನೀಡಿದ್ದಾರೆ. ಜುಲೈ.2024ರ ತಿಂಗಳಲ್ಲಿ ಟಿಕೇಟ್ ಇಲ್ಲದೆ ಪ್ರಯಾಣಿಸಿದ 3695 ಪ್ರಯಾಣಿಕರಿಗೆ ದಂಡವನ್ನು ವಸೂಲಿ ಮಾಡಿದ್ದಾರೆ. ಈ ಕುರಿತಂತೆ ಕೆಎಸ್‌ಆರ್‌ಟಿಸಿ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, ಜುಲೈ -2024 ರ ಮಾಹೆಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿ ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ 44879 ವಾಹನಗಳನ್ನು ತನಿಖೆಗೊಳಪಡಿಸಿ 3593 ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ ಎಂದಿದೆ. ತನಿಖೆಯಲ್ಲಿ ಪತ್ತೆಯಾದಂತ 3695 ಟಿಕೇಟ್ ರಹಿತ ಪ್ರಯಾಣಿಕರಿಂದ 6,03,642/- ರೂ ಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಿರುತ್ತಾರೆ. ನಿಗಮದ ಆದಾಯದಲ್ಲಿ ಸೋರಿಕೆ ಆಗುತ್ತಿದ್ದ 83,747/- ರೂಗಳನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದಾರೆ, ಹಾಗೂ ತಪ್ಪಿತಸ್ಥರ ವಿರುದ್ಧ ಇಲಾಖಾ ರೀತ್ಯಾ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗಿದೆ ಎಂದು ಹೇಳಿದೆ. ಆದ್ದರಿಂದ ಸಾರ್ವಜನಿಕ ಪ್ರಯಾಣಿಕರು, ಬಸ್ಸಿನಲ್ಲಿ ಪ್ರಯಾಣಿಸುವಾಗ ಸರಿಯಾದ ಟಿಕೇಟ್/ ಪಾಸ್ ಪಡೆದು ಪ್ರಯಾಣ ಮಾಡುವಂತೆ, ನಿಗಮವು ಈ ಮೂಲಕ ಪ್ರಯಾಣಿಕರಲ್ಲಿ ಕೋರಿದೆ.

## ಪೊಲೀಸರ ಮೇಲಿನ ಸಿಟ್ಟಿಗೆ ಬೈಕ್‌ಗೆ ಬೆಂಕಿ ಹಚ್ಚಿದ ಯುವಕ..!

• ಉದಯವಾಹಿನಿ, ಬೆಂಗಳೂರು



ವಿಧಾನಸೌಧದ ಮುಂದೆ ಯುವಕನೋರ್ವ ತನ್ನ ಬೈಕ್ ಗೆ ಬೆಂಕಿ ಹಚ್ಚಿದ ಘಟನೆ ನಡೆದಿದೆ. ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ಮೂಲದ ಪ್ರಥ್ವಿರಾಜ್ ಎಂಬಾತ ವಿಧಾನಸೌಧದ ಮುಂದೆ ತನ್ನ ಎಲೆಕ್ಟ್ರಿಕ್ ಗೆ ಬೈಕ್ ಗೆ ಬೆಂಕಿ ಹಚ್ಚಿದ್ದಾನೆ ಎಂದು ತಿಳಿದು ಬಂದಿದೆ. ಪೊಲೀಸರ ಮೇಲಿನ ಸಿಟ್ಟಿಗೆ ಈತ ಈ ಕೃತ್ಯ ಎಸಗಿದ್ದು, ತನ್ನ ತಾಯಿಗೆ ಪೊಲೀಸರು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ಆರೋಪಿಸಿದ್ದಾನೆ. ಟ್ರಕ್ಕಿಂಗ್ ನಲ್ಲಿ ಯುವಕ ಪ್ರಥ್ವಿರಾಜ್ ಮಿಸ್ ಆಗಿದ್ದರು. ನಂತರ ಯುವಕನ ತಾಯಿ ದೂರು ನೀಡಲು ಚಳ್ಳಕೆರೆ ಠಾಣೆಗೆ ಹೋದಾಗ ಪೊಲೀಸರು ತನ್ನ ತಾಯಿಗೆ ಬೈಯ್ದಿದ್ದರು ಎಂದು ಯುವಕ ಆರೋಪಿಸಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಅಗ್ನಿಶಾಮದ ದಳದ ಸಿಬ್ಬಂದಿಗಳು ದೌಡಾಯಿಸಿ ಬೆಂಕಿ ನಂದಿಸಿದ್ದಾರೆ. ಸದ್ಯ, ಪ್ರಥ್ವಿರಾಜ್ ನನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ತಿಳಿದು ಬಂದಿದೆ.

## ದೇವರಾಜ ಅರಸು ಪ್ರಶಸ್ತಿಗೆ ಮಾಜಿ ಸಚಿವ ಎಸ್.ಕೆ ಕಾಂತ ಆಯ್ಕೆ!

• ಉದಯವಾಹಿನಿ, ಬೆಂಗಳೂರು:



2024-25 ನೇ ಸಾಲಿನ ದೇವರಾಜ ಅರಸು ಪ್ರಶಸ್ತಿ ಘೋಷಣೆಯಾಗಿದೆ. ರಾಜ್ಯ ಸರ್ಕಾರ ಹಿರಿಯ ರಾಜಕಾರಣಿ, ಮಾಜಿ ಸಚಿವ ಎಸ್.ಕೆ. ಕಾಂತ ಅವರಿಗೆ ಪ್ರಶಸ್ತಿ ಘೋಷಣೆ ಮಾಡಿದೆ. ಆಗಸ್ಟ್ 20 ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಲಾಗುತ್ತೆ. ಕರ್ನಾಟಕ ರಾಜ್ಯದ ಮಾಜಿ ಮುಖ್ಯ ಮಂತ್ರಿಗಳಾದ ಡಿ.ದೇವರಾಜ ಅರಸುರವರ ಜನ್ಮದಿನಾಚರಣೆಯನ್ನು ಪ್ರತಿ ವರ್ಷ ಆಗಸ್ಟ್ 20 ರಂದು ಆಚರಿಸಲಾಗುತ್ತಿದೆ.

ವಿಕಾಸಸೌಧದಲ್ಲಿ ಈ ಕುರಿತು ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಅವರು, ಸಾಹಿತಿ ಅಲ್ಲಮಪ್ರಭು ಬೆಟ್ಟದೂರ ಅವರ ನೇತೃತ್ವದ ಆಯ್ಕೆ ಸಮಿತಿ ಪ್ರಶಸ್ತಿ ಪುರಸ್ಕೃತರನ್ನು ಆಯ್ಕೆ ಮಾಡಿದೆ.

ಈ ಪ್ರಶಸ್ತಿಯು ರೂ.5 ಲಕ್ಷ ನಗದು ಹಾಗೂ ಪ್ರಶಸ್ತಿ ಪತ್ರ ಒಳಗೊಂಡಿದೆ. ಆ.20ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೆಳಗ್ಗೆ 11 ಗಂಟೆಗೆ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆ ಕಾರ್ಯಕ್ರಮ ನಡೆಯಲಿದೆ ಎಂದರು. ಈ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಎಸ್. ಕೆ .ಕಾಂತ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದರು.

# ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ

**ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ: ಡಿಸಿಎಂ ಡಿಕೆಶಿ**

• ಉದಯವಾಹಿನಿ, ಬೆಂಗಳೂರು

ಬಿಜೆಪಿಯವರು ನೂರು ಜನ್ಮ ಎತ್ತಿಬಂದರೂ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟನೆ ನೀಡಿದ್ದಾರೆ.

ಪದ್ಮನಾಭನಗರ ವಿಧಾನಸಭಾ ಕ್ಷೇತ್ರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಹಾಗೂ ಕಾಂಗ್ರೆಸ್ ಜನಸಂಪರ್ಕ ಕೇಂದ್ರ ಉದ್ಘಾಟನೆ ಮಾಡಿ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್ ಗ್ಯಾರಂಟಿ ಯೋಜನೆಗಳೆ ಕಾಂಗ್ರೆಸ್ ಪಕ್ಷದ ಶಕ್ತಿ ಎಂದು ಹೇಳಿದ್ದಾರೆ.

ಇಂದಿರಾ ಗಾಂಧಿ ಅವರು ವೃದ್ಧಾಪ್ಯ, ವಿಧವಾ ವೇತನ, ಬ್ಯಾಂಕ್ ರಾಷ್ಟ್ರೀಕರಣ, ಉಳುವವನಿಗೆ ಭೂಮಿ ಯೋಜನೆ ಜಾರಿಗೆ ತಂದರು. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ರೈತರ ಪಂಪ್‌ಸೆಟ್‌ಗೆ 10 ಹೆಚ್‌ಪಿ ಉಚಿತ ವಿದ್ಯುತ್, ಕೃಷ್ಣ ಅವರ ಕಾಲದಲ್ಲಿ ಸ್ತ್ರೀಶಕ್ತಿ ಸಂಘ ಯೋಜನೆ ಜಾರಿಗೆ ಬಂದಿತು. ಇದರಲ್ಲಿ ಯಾವುದಾದರೂ ಒಂದು ಯೋಜನೆಯನ್ನು ನಿಲ್ಲಿಸಲಾಗಿದೆಯೇ.

ಬಡವರಿಗೆ ನಿವೇಶನ, ಮನೆ ನೀಡುವ ಯೋಜನೆ ನಿಂತಿದೆಯೇ. ಅದೇ ರೀತಿ ಬಿಜೆಪಿಯವರು ನೂರು ಜನ್ಮ ತಳೆದರೂ ಐದು ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲು ಸಾಧ್ಯವಿಲ್ಲ. ಇದೇ ಕಾಂಗ್ರೆಸ್ ಪಕ್ಷದ ಶಕ್ತಿ ಎಂದು ಬಣ್ಣಿಸಿದ್ದಾರೆ.

ಪದ್ಮನಾಭನಗರದಲ್ಲಿ ನಮ್ಮ ಕಾರ್ಯಕರ್ತರ ಹುಮ್ಮಸ್ಸು, ಶಕ್ತಿ ಸ್ಫೂರ್ತಿ ನೋಡುವ ಅವಕಾಶ ಸಿಕ್ಕಿರುವುದು ನನ್ನ ಭಾಗ್ಯ. ನಮ್ಮ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಕಚೇರಿ ಉದ್ಘಾಟನೆ ಮಾಡಿದ್ದೇವೆ. ನಮ್ಮ ಈ ಐದು ಗ್ಯಾರಂಟಿ ಯೋಜನೆಗಳ ಜಾರಿ ಬಂದಿದ್ದು ಯಾಕೆ. ಇವುಗಳ ಅವಶ್ಯಕತೆ ಏನು ಎಂಬುದು ಪ್ರಮುಖವಾದ ವಿಚಾರವಾಗಬೇಕು. ಅಧಿಕಾರ ಬರುತ್ತದೆ, ಹೋಗುತ್ತದೆ. ರಾಜಕಾರಣ ಎಂದ ಮೇಲೆ ಗೆಲುವು, ಸೋಲು ಇರುತ್ತದೆ. ಆದರೆ ಕಾಂಗ್ರೆಸ್ ಪಕ್ಷ ಸದಾ ಜನರ ಬದುಕಿನ ಬಗ್ಗೆ ಆಲೋಚಿಸುತ್ತದೆ. ಜನರ ಬದುಕು ಕಟ್ಟುವ ಕೆಲಸ ಮಾಡುತ್ತದೆ. ಬಿಜೆಪಿಯವರು ದೇವರು, ಧರ್ಮ, ಜಾತಿ ಆಧಾರವಾಗಿ, ಭಾವನೆ ಮೇಲೆ ರಾಜಕಾರಣ ಮಾಡುತ್ತಾರೆ ಎಂದು ಕಿಡಿಕಾರಿದ್ದಾರೆ.



ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಚೆಂದ. ನೀವು ದಿನ ಬೆಳಗಾದರೆ ಕೈನಲ್ಲಿ ದೇವರನ್ನು ಕಾಣುತ್ತಾ ಪ್ರಾರ್ಥನೆ ಮಾಡುತ್ತೀರಿ. ದುಡಿಮೆಯ ಶಕ್ತಿ ಈ ಕೈ. ಇಂದಿರಾ ಗಾಂಧಿ ಅವರು ಕೊಟ್ಟ ಈ ಕೈಯನ್ನು ಸುಭದ್ರವಾಗಿ ಕಾಪಾಡಿಕೊಳ್ಳುವ ಜವಾಬ್ದಾರಿ ನಿಮ್ಮ ಮೇಲಿದೆ

-ಡಿ.ಕೆ ಶಿವಕುಮಾರ್, ಡಿಸಿಎಂ

ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲಾ ವರ್ಗದವರು ಅಧಿಕಾರಕ್ಕೆ ಬಂದಂತೆ. ಬಿಜೆಪಿಯವರೂ ಈ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆಯುತ್ತಿದ್ದಾರೆ. ಹಾಗಿದ್ದರೆ ಅಶೋಕ್ ಅವರು ತಮ್ಮ ಕಾರ್ಯಕರ್ತರಿಗೆ ಹೇಳಿ ಈ ಗ್ಯಾರಂಟಿ ಯೋಜನೆ ಪ್ರಯೋಜನ ಪಡೆಯದಂತೆ ಸಲಹೆ ನೀಡಲಿ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ನಾಯಕ ಸ್ಥಾನವನ್ನು ಸಂವಿಧಾನವೇ ನೀಡಿದೆ. ವಿರೋಧ ಪಕ್ಷದ ನಾಯಕರ ಕ್ಷೇತ್ರದಿಂದಲೇ ಈ ಗ್ಯಾರಂಟಿ ಯೋಜನೆಗಳ ಸಮಿತಿಯನ್ನು ಕಚೇರಿ ಉದ್ಘಾಟನೆ ಮಾಡಿದ್ದೇವೆ, ಮುಂದಿನ ದಿನಗಳಲ್ಲಿ ರಾಜ್ಯದ 224 ಕ್ಷೇತ್ರಗಳಲ್ಲೂ ಚಾಲನೆ ನೀಡಲಾಗುವುದು ಎಂದು ಹೇಳಿದ್ದಾರೆ.

**ಜನರ ವಿಶ್ವಾಸಗಳಿಸಬೇಕು. ಮನುಷ್ಯನಿಗೆ ನಂಬಿಕೆ ಮುಖ್ಯ**

ದೇವರು ವರ ಹಾಗೂ ಶಾಪ ನೀಡುವುದಿಲ್ಲ. ಕೇವಲ ಅವಕಾಶ ನೀಡುತ್ತಾನೆ. ನೀವು ಕ್ಷೇತ್ರದಲ್ಲಿ ಮನೆ ಮನೆಗೆ ಹೋಗಿ ಗ್ಯಾರಂಟಿ ಯೋಜನೆಗಳು ತಲುಪುತ್ತಿವೆಯೇ, ಇಲ್ಲವೇ ಎಂದು ಪರಿಶೀಲನೆ ಮಾಡಬೇಕು. ಜನರ ವಿಶ್ವಾಸಗಳಿಸಬೇಕು. ಮನುಷ್ಯನಿಗೆ ನಂಬಿಕೆ ಮುಖ್ಯ. ನಮ್ಮ ಕೆಲಸ ಬಡವರಿಗೆ ಅನುಕೂಲವಾಗುತ್ತದೆ ಎಂದು ನಾವು ನಂಬಿದ್ದೇವೆ. ಲೋಕಸಭೆ ಚುನಾವಣೆಯೇ ಬೇರೆ, ವಿಧಾನಸಭಾ ಕ್ಷೇತ್ರ ಚುನಾವಣೆಯೇ ಬೇರೆ. ಪಾಲಿಕೆ ಚುನಾವಣೆಯೂ ಮುಂದಿನ ದಿನಗಳಲ್ಲಿ ನಡೆಯಲಿದೆ. ಮುಂದೆ ನಿಮ್ಮೆಲ್ಲರ ಆಶೀರ್ವಾದ ಕಾಂಗ್ರೆಸ್ ಪಕ್ಷದ ನಾಯಕರ ಮೇಲೆ ಇರಲಿ.

ಈ ದಿನದ ದರ ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹6,927/Gram24ct ₹6,350/Gram22ct ಬೆಳ್ಳಿ: ₹81.50/Gram



## ಸಿದ್ದಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

# ಅನಿಮಿತ್ತವಾಯ್ತು ವಿಶ್ವಭ್ರಾಂತಿ

ನಿಜಗುಣರ ಪರಮಾನುಭವ ಬೋಧೆಯ ಮಾತು. ಕನಸಿನಲ್ಲಿ ತೋರುವ ಸ್ವಾಪ್ನ ಪ್ರಪಂಚ ಹಾಗೂ ಅದನ್ನು ಕಾಣುವವ ಎರಡೂ ಸುಳ್ಳು. ಅಲ್ಲಿ ಏನೂ ಇಲ್ಲದೆಯೂ ಏನೆಲ್ಲವೂ ತೋರುವುದು. ಆದ್ದರಿಂದಲೇ ಅದು ಸುಳ್ಳು. ಅದರಂತೆ ಈ ಜಗತ್ತೂ ಸುಳ್ಳು. ಯಾವುದೇ ಕಾರ್ಯ ಆಗಲು ಉಪಾದಾನಕಾರಣ, ಸಹಕಾರಿ ಕಾರಣ, ನಿಮಿತ್ತಕಾರಣ ಎಂದು ಮೂರು ಕಾರಣಗಳು ಬೇಕು. ಕಾರಣವೇ ಕಾರ್ಯರೂಪ ಪಡೆಯುವುದು ಉಪಾದಾನಕಾರಣ. ಉದಾಹರಣೆಗೆ ಮಡಕೆಯಾಗಲು ಮಣ್ಣು ಉಪಾದಾನಕಾರಣ. ಕಾರ್ಯಕ್ಕೆ ಅನುಕೂಲವಾದವುಗಳು ಸಹಕಾರಿ ಕಾರಣಗಳು. ಉದಾಹರಣೆಗೆ ಮಡಕೆಯ ತಯಾರಿಕೆಯಲ್ಲಿ ಉಪಯೋಗವಾಗುವ ಚಕ್ರ, ಅದನ್ನು ತಿರುಗಿಸುವ ಕೋಲು ಮುಂತಾದವುಗಳು. ಕಾರ್ಯವನ್ನು ಮಾಡುವ ಕರ್ತಾ ನಿಮಿತ್ತಕಾರಣ. ಉದಾಹರಣೆಗೆ ಕುಂಬಾರ. ಆದರೆ ಈ ಜಗತ್ತು ಎಂಬ ಕಾರ್ಯಕ್ಕೆ ಯಾವ ಕಾರಣವೂ ಇಲ್ಲ! ಶುದ್ಧ ಪರಮಾತ್ಮ ನಿಷ್ಕ್ರಿಯನಾದ್ದರಿಂದ ಆತ ಜಗತ್ತಿನ ಕರ್ತಾ ನಿಮಿತ್ತನಲ್ಲ. ಆತನನ್ನು ಬಿಟ್ಟು ಇನ್ನಾವುದೂ ಇಲ್ಲದ್ದರಿಂದ ಸಹಕಾರಿ ಕಾರಣವಾಗಲೀ, ಕಾರ್ಯವಾಗಿ ಬದಲಾಗಲು ಉಪಾದಾನ ಕಾರಣವಾಗಲೀ ಇಲ್ಲ. ಹೀಗೆ ಕಾರಣವಿಲ್ಲದೇ ನಿಮಿತ್ತವಿಲ್ಲದೇ ತೋರುವ ಈ ಜಗತ್ತು ಅನಿಮಿತ್ತ. ಏನೂ ಇಲ್ಲದೇ ತೋರುವ ಸ್ವಪ್ನದಂತೆ ಮಿಥ್ಯಾ. ಬ್ರಹ್ಮ ಪರಮಾತ್ಮನಲ್ಲಿ ತೋರುವ ಕಲ್ಪಿತ ಪುರುಷನೇ ಈ ಜಗತ್ತಿನ ಕರ್ತಾ ಎನ್ನಲಾಗದು. ಕಾರಣನಾದ ಕಲ್ಪಿತ ಪುರುಷನೇ ಸುಳ್ಳು ಎಂದ ಬಳಿಕ ಜಗತ್ತು ಸತ್ಯವಾದೀತೇ? ಕೃತಕ ಬಂಗಾರದಿಂದ ಮಾಡಿದ ಆಭರಣ ನಿಜ ಬಂಗಾರವಾದೀತೇ?

## ರಾಮಲಲ್ಲಾ ಮೂರ್ತಿ ಶಿಲ್ಪಿ ಅರುಣ್ ಯೋಗಿ ರಾಜ್‌ಗೆ ಅಮೇರಿಕಾ ವೀಸಾ ನಿರಾಕರಣೆ

• **ಉದಯವಾಹಿನಿ, ಬೆಂಗಳೂರು**

ಅಯೋಧ್ಯೆಯ ರಾಮಲಲ್ಲಾ ಮೂರ್ತಿಯ ಶಿಲ್ಪಿ ಅರುಣ್ ಯೋಗಿ ರಾಜ್ ಅವರಿಗೆ ಅಮೇರಿಕಾ ವೀಸಾ ನೀಡುವುದನ್ನು ನಿರಾಕರಿಸಿದೆ. ಈ ಮೂಲಕ ಶಿಲ್ಪಿ ಅರುಣ್ ಯೋಗಿ ರಾಜ್ ಅವರಿಗೆ ಅಮೇರಿಕಾದಲ್ಲಿನ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗುವುದಕ್ಕೆ ಅವಕಾಶ ಮಾಡಿಕೊಟ್ಟಿಲ್ಲ.


ಉದಯವಾಹಿನಿ ಚಿತ್ರ

ಅಕ್ಕ ಸಮ್ಮೇಳನ ಸೇರಿದಂತೆ ವಿವಿಧ ಕಾರ್ಯಕ್ರಮದಲ್ಲಿ ಅಮೇರಿಕಾದಲ್ಲಿ ಭಾಗಿಯಾಗೋದಕ್ಕಾಗಿ ಶಿಲ್ಪಿ ಅರುಣ್ ಯೋಗಿ ರಾಜ್ ಅವರು ಅಮೇರಿಕಾ ವೀಸಾಕ್ಕಾಗಿ ಅರ್ಜಿ ಸಲ್ಲಿಸಿದ್ದರು. ಆದರೇ ಅವರಿಗೆ ವಿಸಾವನ್ನು ಅಮೇರಿಕಾ ನಿರಾಕಿರಿಸಿರುವುದಾಗಿ ತಿಳಿದು ಬಂದಿದೆ. 20 ದಿನಗಳ ಪ್ರವಾಸಕ್ಕಾಗಿ ಅಮೇರಿಕಾಕ್ಕೆ ಅರುಣ್ ಯೋಗಿರಾಜ್ ತೆರಳೋದಕ್ಕಾಗಿ ವೀಸಾಗೆ ಅರ್ಜಿ ಸಲ್ಲಿಸಿದ್ದರು. ಅಕ್ಕ ಸಮ್ಮೇಳನದಲ್ಲೂ ಅವರು ಭಾಗಿಯಾಗೋದಕ್ಕೆ ಆಹ್ವಾನ ಬಂದಿದ್ದರಿಂದ ವೀಸಾಗೆ ಅರ್ಜಿಯನ್ನು ಸಲ್ಲಿಸಿದ್ದರು. ಆದರೇ ಇದೀಗ ಅಮೇರಿಕಾ ರಾಮಲಲ್ಲಾ ಮೂರ್ತಿಯ ಶಿಲ್ಪಿ ಅರುಣ್ ಯೋಗಿ ರಾಜ್ ಅವರಿಗೆ ವಿಸಾ ನೀಡಲು ನಿರಾಕಿರಿಸಿದೆ.

## ಆ.28ರವರೆಗೆ ಮತ್ತೆ ನ್ಯಾಯಾಂಗ ಬಂಧನ ಅವಧಿ ವಿಸ್ತರಿಸಿ ಕೋರ್ಟ್ ಆದೇಶ

• **ಉದಯವಾಹಿನಿ, ಬೆಂಗಳೂರು**

ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವಂತ ದರ್ಶನ್ ಅಂಡ್ ಗ್ಯಾಂಗ್‌ಗೆ ಮತ್ತೆ ಜೈಲೇಗತಿ ಎನ್ನುವಂತೆ ಆಗಿದೆ. ಕೋರ್ಟ್ ಅವರಿಗೆ ಆಗಸ್ಟ್.28ರವರೆಗೆ ನ್ಯಾಯಾಂಗ ಬಂಧನ ವಿಧಿಸಿ ಆದೇಶಿಸಿದೆ. ಬೆಂಗಳೂರಿನ 24ನೇ


ಉದಯವಾಹಿನಿ ಚಿತ್ರ

ಎಸಿಎಂಎಂ ಕೋರ್ಟ್ ನಲ್ಲಿ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧದ ಅರ್ಜಿಯ ವಿಚಾರಣೆಯನ್ನು ನಡೆಸಲಾಯಿತು. ಎಲ್ಲಾ ಆರೋಪಿಗಳನ್ನು ವೀಡಿಯೋ ಕಾನ್ಫರೆನ್ಸ್ ಮೂಲಕ ಕೋರ್ಟ್‌ಗೆ ಜೈಲು ಅಧಿಕಾರಿಗಳು ಹಾಜರು ಪಡಿಸಿದ್ದರು. ಈ ಪ್ರಕರಣದ ವಿಚಾರಣೆ ನಡೆಸಿದಂತ ಬೆಂಗಳೂರಿನ 24ನೇ ಎಸಿಎಂಎಂ ಕೋರ್ಟ್ ನ ನ್ಯಾಯಾಧೀಶರಾದಂತ ವಿಶ್ವನಾಥ ಸಿ ಗೌಡರ್ ಅವರು, ದರ್ಶನ್ ಸೇರಿದಂತೆ ಎಲ್ಲಾ ಆರೋಪಿಗಳಿಗೆ ಆಗಸ್ಟ್.28ರವರೆಗೆ ನ್ಯಾಯಾಂಗ ಬಂಧನವನ್ನು ವಿಸ್ತರಿಸಿ ಆದೇಶಿಸಿದ್ದಾರೆ. ಹೀಗಾಗಿ ದರ್ಶನ್ ಅಂಡ್ ಗ್ಯಾಂಗ್‌ಗೆ ಜೈಲೇ ಗತಿ ಎನ್ನುವಂತೆ ಆಗಿದೆ.

## ಜೈಲಿನಲ್ಲಿ ಸುಮಲತಾ ಅಮ್ಮನ ಬಗ್ಗೆ ವಿಚಾರಿಸಿದ ದಾಸ!

• **ಉದಯವಾಹಿನಿ, ಬೆಂಗಳೂರು**

ಚಿತ್ರರಂಗದ ಏಳಿಗೆಗಾಗಿ ಕನ್ನಡ ಕಲಾವಿದರ ಸಂಘದ ಕಚೇರಿಯಲ್ಲಿ ಚಂದನವನದ ಎಲ್ಲಾ ಕಲಾವಿದರು ಭಾಗಿಯಾಗಿ ಹೋಮ ಹವನ ಮಾಡಿದರು. ಈ ಪೂಜೆಯನ್ನು ಜೈಲಿನಲ್ಲಿರುವ ದರ್ಶನ್ ಬಹುಬೇಗ ಹೊರಬರಲೆಂದು ಮಾಡಿದ್ದಾರೆನ್ನುವ ಸುದ್ದಿ ಹರಿದಾಡುತ್ತಿದೆ. ಅಲ್ಲದೆ ಇದರಲ್ಲಿ ಭಾಗಿಯಾಗಿದ್ದ ಕನ್ನಡದ ಹಾಸ್ಯನಟ ಚಿಕ್ಕಣ್ಣ, ನಟ ಅಭಿಷೇಕ್ ಅಂಬರೀಷ್ ಅವರು ಪೂಜೆ ಬಳಿಕ ಪರಪ್ಪನ ಅಗ್ರಹಾರ ಜೈಲಿಗೆ ಭೇಟಿ ನೀಡಿ ದರ್ಶನ್ ಅವರ ಆರೋಗ್ಯ ವಿಚಾರಿಸಿದ್ದಾರೆ. ಹೌದು... ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ತೂಗುದೀಪ ಜೈಲುವಾಸ ಅನುಭವಿಸುತ್ತಿದ್ದಾರೆ. ದರ್ಶನ್ ಜೈಲಿಗೆ ಹೋದಾಗಿನಿಂದ ಹಲವಾರು ಕಲಾವಿದರು ಅವರನ್ನು ಭೇಟಿ ಮಾಡಿದ್ದಾರೆ. ಆದರೆ ಅಭಿಷೇಕ್ ಅವರು ದರ್ಶನ್ ಅವರನ್ನು ಭೇಟಿ ಮಾಡಿರಲಿಲ್ಲ. ಆದರೆ ಇಂದು ಪೂಜೆ ಬಳಿಕ ಜೈಲಿಗೆ ಹೋಗಿ ಅವರ ಆರೋಗ್ಯವನ್ನು ವಿಚಾರಿಸಿ ಬಂದಿದ್ದಾರೆ. ದರ್ಶನ್ ಭೇಟಿ ಮಾಡಿದ ತಕ್ಷಣ ಅವರನ್ನು ಅಪ್ಪಿಕೊಂಡು ಅಭಿಷೇಕ್ ಭಾವುಕರಾದರು ಎಂದು ತಿಳಿದು ಬಂದಿದೆ. ದರ್ಶನ್ ಸಮಯದಲ್ಲಿ ಸುಮಲತಾ ಅಂಬರೀಷ್ ಅವರ ಆರೋಗ್ಯವನ್ನು ವಿಚಾರಿಸಿದ್ದಾರೆನ್ನಲಾಗುತ್ತಿದೆ. ಅರ್ಧ ಗಂಟೆಗಳ ಕಾಲ ಅವರೊಂದಿಗೆ ಮಾತನಾಡಿ ಅಭಿಷೇಕ್ ಬಳಿಕ ಕಣ್ಣೀರಾಕುತ್ತಲೇ ಹೊರಬಂದಿದ್ದಾರೆ.

## ನ್ಯಾಯಾಲಯದಲ್ಲಿ ಇತ್ಯರ್ಥವಾಗಿರುವ ಒತ್ತುವರಿಗಳನ್ನು ಮಾತ್ರ ತೆರವುಗೊಳಿಸಲು ಸೂಚನೆ

• **ಉದಯವಾಹಿನಿ, ಬೆಂಗಳೂರು**

ಅರಣ್ಯ ಭೂಮಿ ಒತ್ತುವರಿ ಪ್ರಕರಣ ನ್ಯಾಯಾಲಯದಲ್ಲಿ ಇತ್ಯರ್ಥವಾಗಿದ್ದರೂ ತೆರವಾಗಿರದ ಒತ್ತುವರಿಗಳನ್ನು ಮಾತ್ರ ತೆರವುಗೊಳಿಸಲು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಈ ಬಗ್ಗೆ ರೈತರು ಆತಂಕ ಪಡುವ ಅಗತ್ಯ ಇಲ್ಲ ಎಂದು ಅರಣ್ಯ ಇಲಾಖಾ ಸಚಿವ ಈಶ್ವರ್ ಖಂಡ್ರೆ ಭರವಸೆ ನೀಡಿದ್ದಾರೆ.ವಿಧಾನ ಸೌಧದಲ್ಲಿ ತಮನ್ನು ಭೇಟಿಯಾದ ಚಿಕ್ಕಮಗಳೂರು ಜಿಲ್ಲೆಯ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ನೇತೃತ್ವದ ಜನಪ್ರತಿನಿಧಿಗಳ ಮತ್ತು ಮಲೆನಾಡು ಕರಾವಳಿ ಜನಪರ ಒಕ್ಕೂಟದ ಪ್ರತಿನಿಧಿಗಳ ನಿಯೋಗಕ್ಕೆ ಸಚಿವರು ಭರವಸೆ ನೀಡಿದ್ದಾರೆ. ಒತ್ತುವರಿ ತೆರವುಗೊಳಿಸುವ ಕುರಿತು ಈಗಾಗಲೇ ಸ್ಪಷ್ಟವಾಗಿ ಆದೇಶ ಕೊಟ್ಟಿದ್ದೇನೆ. ಒತ್ತುವರಿ ಪ್ರಕರಣ ನ್ಯಾಯಾಲಯದಲ್ಲಿ ಇತ್ಯಾರ್ಥವಾಗಿದ್ದರೂ ತೆರವಾಗದೆ ಇರುವ ಬಗ್ಗೆ ನ್ಯಾಯಾಲಯ ಸಹ ಸರ್ಕಾರಕ್ಕೆ ನೋಟಿಸ್ ನೀಡುತ್ತಿದೆ. ಆದ್ದರಿಂದ ಇಂತಹ ಒತ್ತುವರಿಗಳನ್ನು 2015 ರ ನಂತರ ಅತಿಕ್ರಮಣವಾಗಿರುವುದನ್ನು ಮಾತ್ರ ತೆರವಿಗೆ ಸೂಚನೆ ನೀಡಲಾಗಿದೆ. ಉಳಿದಂತೆ 3 ಎಕರೆ ಒಳಗಿನ ಒತ್ತುವರಿ ಇತರೆ ಅರ್ಜಿಗಳು ವಿಲೇವಾರಿ ಆಗದೆ ಇರುವ ಒತ್ತುವರಿಗಳನ್ನು ಮುಟ್ಟಬಾರದು ಎಂದು ಸೂಚಿಸಿದ್ದೇನೆ ಎಂದು ಸಚಿವರು ನಿಯೋಗಕ್ಕೆ ತಿಳಿಸಿದ್ದಾರೆ.

# ವಿಜಯೇಂದ್ರ-ಯತ್ನಾಳ್ ಬಣಗಳ ನಡುವೆ ಸಂಧಾನ ಸಭೆ

## ಯತ್ನಾಳ್ ಬಣದ 20 ಮಂದಿ ಮಾತ್ರ ಸಭೆಗೆ ಬರುವಂತೆ ಸಂಘ ಪರಿವಾರದ ನಾಯಕರು ಕಟ್ಟುನಿಟ್ಟಿನ ಸೂಚನೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಬಿಜೆಪಿಯಲ್ಲಿ ಉಂಟಾಗಿರುವ ಬಿಕ್ಕಟ್ಟು ಶಮನಕ್ಕೆ ಕೊನೆಗೂ ಸಂಘ ಪರಿವಾರದ ನಾಯಕರು ಮಧ್ಯ ಪ್ರವೇಶಿಸಿದ್ದು, ಇದೇ ತಿಂಗಳ 21 ರಂದು ವಿಜಯೇಂದ್ರ-ಯತ್ನಾಳ್ ಬಣಗಳ ನಡುವೆ ಸಂಧಾನ ಸಭೆ ನಡೆಸಲಿದ್ದಾರೆ. ಚಾಮರಾಜಪೇಟೆಯಲ್ಲಿರುವ ಕೇಶವಕೃಪದಲ್ಲಿ ಆರ್‌ಎಸ್‌ಎಸ್ ಪ್ರಮುಖರಾದ ಮುಕುಂದ್ ನೇತೃತ್ವದಲ್ಲಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಬಿಜೆಪಿ ರಾಜ್ಯಾಧ್ಯಕ್ಷ ಬಸನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಒಟ್ಟು 40 ಮಂದಿಯನ್ನು ಸಭೆಗೆ ಆಹ್ವಾನಿಸಲಾಗಿದೆ. ವಿಜಯೇಂದ್ರ ಬಣದ 20 ಮಂದಿ ಹಾಗೂ ಯತ್ನಾಳ್ ಬಣದ 20 ಮಂದಿ ಮಾತ್ರ ಸಭೆಗೆ ಬರುವಂತೆ ಸಂಘ ಪರಿ ವಾರದ ನಾಯಕರು ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಯಾರೂ ಕೂಡ ಬಲಾಬಲ ಪ್ರದರ್ಶನ ನಡೆಸುವಂತಿಲ್ಲ ಎಂದು ತಾಕೀತು ಮಾಡಿದೆ.

ರಾಜ್ಯ ಬಿಜೆಪಿಯಲ್ಲಿ ಬಿಕ್ಕಟ್ಟು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಸಚಿವರೊಬ್ಬರ ಮನವಿಯಂತೆ ಆರ್ ಎಸ್‌ಎಸ್ ನಾಯಕರು ಸಂಧಾನ ಸಭೆಯನ್ನು ಏರ್ಪಡಿಸಿದ್ದಾರೆ. ಎರಡು ಬಣದವರನ್ನು ಒಟ್ಟಿಗೆ ಕೂರಿಸಿ ಸಮಸ್ಯೆಯನ್ನು ಸೌಹಾರ್ದಯುತವಾಗಿ ಪರಿಹರಿಸುವುದು ಇದರ ಮೂಲ ಉದ್ದೇಶವಾಗಿದೆ ಎಂದು ತಿಳಿದುಬಂದಿದೆ. ಕಳೆದ ಒಂದು ವಾರದಿಂದ ನಡೆಯುತ್ತಿರುವ ಬೆಳವಣಿಗೆಗಳಿಂದ ಪಕ್ಷದ


ಉದಯವಾಹಿನಿ ಚಿತ್ರ

ಸಂಘಟನೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ. ಎಲ್ಲರೂ ಕೂಡ ಪ್ರತಿಷ್ಠೆಗೆ ಬಿದ್ದವರಂತೆ ನಡೆದುಕೊಳ್ಳುತ್ತಿರುವುದರಿಂದ ಸಮಸ್ಯೆ ಬೃಹದಾಕಾರವಾಗಿ ಬೆಳೆಯುವ ಮೊದಲೇ ಪ್ರಾರಂಭಿಕ ಹಂತದಲ್ಲೇ ಚಿವುಟಿ ಹಾಕಬೇಕೆಂದು ಕೇಂದ್ರದ ಸಚಿವರೊಬ್ಬರು ಆರ್‌ಎಸ್‌ಎಸ್ ಶಿವಮೊಗ್ಗ ಮೂಲದ ಪ್ರಭಾವಿ ನಾಯಕರ ಜೊತೆ ಮಾತು ಕತೆ ನಡೆಸಿದ್ದರು.

**ರಾಷ್ಟ್ರೀಯ ಸಂಘಟನಾ ಕಾರ್ಯ**

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರಿಗೂ ಆತ್ಮೀಯರಾಗಿರುವ ಆರ್ ಎಸ್‌ಎಸ್ ಈ ಪ್ರಭಾವಿ ನಾಯಕರು ಸಾಮಾನ್ಯವಾಗಿ ಬಿಜೆಪಿಯ ಚಟುವಟಿಕೆಗಳಲ್ಲಿ ಮಧ್ಯಪ್ರವೇಶ ಮಾಡುವುದು, ಇಲ್ಲವೇ ತಲೆ ಹಾಕುವುದು ತೀರಾ ವಿರಳ. ವಿಜಯೇಂದ್ರ, ಬಿಎಸ್ವೈ, ಕೇಂದ್ರ ಸಚಿವರ ಮನವಿ ಮೇರೆಗೆ ಸಭೆ ನಡೆಸುವಂತೆ ಮುಕುಂದ್ ಅವರಿಗೆ ಪ್ರಭಾವಿ ನಾಯಕರು ನಿರ್ದೇಶನ ನೀಡಿದ್ದಾರೆ.

> **ಇದೀಗ 21 ರಂದು ಉಭಯ ಬಣಗಳು ಮುಖಾಮುಖಿಯಾಗಲಿದ್ದು, ತಮತಮ ವಾದವನ್ನು ಮುಂದಿಡಲಿದ್ದಾರೆ. ರಾಜ್ಯಾಧ್ಯಕ್ಷನಾದ ಮೇಲೆ ಮಾಡಿರುವ ಸಂಘಟನೆ ಲೋಕಸಭಾ ಚುನಾವಣಾ ಫಲಿತಾಂಶ ದಾವಣಗೆರೆ, ಕಲಬುರಗಿ, ಬೀದರ್, ಚಿಕ್ಕೋಡಿ ಇತರೆ ಕ್ಷೇತ್ರಗಳಲ್ಲಿ ಸೋಲಿಗೆ ಕಾರಣಗಳೇನು? ಎಂಬುದರ ಕುರಿತು ವಿಜಯೇಂದ್ರ ವರದಿ ನೀಡಲಿದ್ದಾರೆ. ನನ್ನ ಮೇಲೆ ಹೊಂದಾಣಿಕೆ ರಾಜಕಾರಣ ಆರೋಪ ಮಾಡುವವರು ಆಡಳಿತಾರೂಢ ಕಾಂಗ್ರೆಸ್ ನಾಯಕರ ಜೊತೆ ಹೇಗೆ ಹೊಂದಾಣಿಕೆ ಮಾಡಿಕೊಂಡಿದ್ದಾರೆಂಬುದನ್ನು ಎಳೆಎಳೆಯಾಗಿ ಬಿಡಿಸಿಡಲಿದ್ದಾರೆ.**
> -ವಿಜಯೇಂದ್ರ

ಸಮಸ್ಯೆ ಉಂಟಾಗಲು ಕಾರಣಗಳೇನು ಎಂಬುದರ ಕುರಿತು ವಿಸ್ತೃತವಾಗಿ ವರದಿಯನ್ನು ತರಬೇಕೆಂದು ಎರಡು ಬಣದವರಿಗೆ ಸೂಚನೆ ಕೊಡಲಾಗಿದೆ. ಮುಡಾ ಪಾದಯಾತ್ರೆ ಯಶಸ್ವಿಯಾಗಿದೆಯೇ ಪಾದಯಾತ್ರೆ ಆರಂಭಕ್ಕೂ ಮುನ್ನ ಯಾರ್ಯಾರನ್ನು ಆಹ್ವಾನಿಸಲಾಗಿತ್ತು, ಕೆಲವರು ಗೈರು ಹಾಜರಾಗಲು ಕಾರಣಗಳೇನು ಇತ್ಯಾದಿಗಳನ್ನು ಸವಿಸ್ತಾರವಾಗಿ ನೀಡಬೇಕೆಂದು ವಿಜಯೇಂದ್ರ ಬಣಕ್ಕೆ ಸೂಚನೆ ನೀಡಿದ್ದಾರೆ.

### ಬಹಿರಂಗವಾಗಿ ಮಾಧ್ಯಮಗಳ ಮುಂದೆ ಹೇಳಿಕೆ

**ಇದೇ ರೀತಿ ಯತ್ನಾಳ್ ಬಣಕ್ಕೂ ವಿಜಯೇಂದ್ರ ಮೇಲೆ ಮುನಿಸಿಕೊಳ್ಳಲು ಕಾರಣವೇನು ಪ್ರತ್ಯೇಕ ಸಭೆ ನಡೆಸಿದ್ದರ ಔಚಿತ್ಯವಾದರೂ ಏನು ಪಾದಯಾತ್ರೆಗೆ ಏಕೆ ಪಾಲ್ಗೊಳ್ಳಲಿಲ್ಲ ಪಕ್ಷದ ಚಿಹ್ನೆಯಡಿ ಕೂಡಲಸಂಗಮದಿಂದ ಬಳ್ಳಾರಿವರೆಗೂ ಪಾದಯಾತ್ರೆ ನಡೆಸುತ್ತೀರಾ ಇದರಲ್ಲಿ ವಿಜಯೇಂದ್ರ ಭಾಗಿಯಾಗಬೇಕೇ ಬೇಡವೇ ಹೊಂದಾಣಿಕೆಯ ರಾಜ ಕಾರಣ ಪದೇ ಪದೇ ಕೇಳಿಬರುತ್ತಿರುವುದೇಕೆ ಪಕ್ಷದ ವೇದಿಕೆಯಲ್ಲಿ ಚರ್ಚಿಸಬೇಕಾದ ವಿಷಯಗಳನ್ನು ಬಹಿರಂಗವಾಗಿ ಮಾಧ್ಯಮಗಳ ಮುಂದೆ ಹೇಳಿಕೆ ಕೊಡುತ್ತಿರುವುದರ ಬಗ್ಗೆಯೂ ಉತ್ತರಿಸುವಂತೆ ಸೂಚನೆ ನೀಡಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.**

ಆರೋಪ-ಪ್ರತ್ಯಾರೋಪಗಳನ್ನು ಮಾಡುವ ಬದಲಿಗೆ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳ ವಿರುದ್ಧ ವೈಮನಸ್ಸು ಮರೆತು ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು ಎಂದು ಸಂಘ ಪರಿವಾರದ ನಾಯಕರು ಎರಡೂ ಬಣದವರಿಗೆ ಸೂಚನೆ ಕೊಡಲಿದ್ದಾರೆ ಎಂದು ತಿಳಿದುಬಂದಿದೆ.

## ಗ್ಯಾರಂಟಿ ಯೋಜನೆಗಳ ತಿಂಗಳ ವೆಚ್ಚ ನೋಡಿ ರಾಜ್ಯ ಸರ್ಕಾರವೇ ಶಾಕ್

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವಂತ ಪಂಚ ಗ್ಯಾರಂಟಿ ಯೋಜನೆಗಳು ಜಾರಿಗೊಂಡು ವರ್ಷಗಳೇ ಉರುಳುತ್ತಿವೆ. ಈ ಗ್ಯಾರಂಟಿ ಯೋಜನೆಗಳಿಗೆ ತಗಲುತ್ತಿರುವಂತ ವೆಚ್ಚವನ್ನು ಕಂಡು ಸರ್ಕಾರವೇ ಬೆಚ್ಚಿ ಬಿದ್ದಿರುವುದಾಗಿ ಹೇಳಲಾಗುತ್ತಿದೆ. ಇದೇ ಕಾರಣಕ್ಕಾಗಿ ಗ್ಯಾರಂಟಿ ಸ್ಕೀಂಗಳನ್ನು ಪರಿಷ್ಕರಣೆ ಮಾಡಬೇಕು.

ರಾಜ್ಯ ಸರ್ಕಾರ ಜಾರಿಗೊಳಿಸಿರುವಂತ ಅನ್ನಭಾಗ್ಯ, ಗೃಹ ಜ್ಯೋತಿ, ಗೃಹ ಲಕ್ಷ್ಮೀ, ಯುವನಿಧಿ, ಶಕ್ತಿ ಯೋಜನೆಗೆ ಕಳೆದ 8 ತಿಂಗಳಿನಿಂದ ಕೋಟಿ ಕೋಟಿ ಖರ್ಚಾಗಿ ದೆಯಂತೆ. ಕಳೆದ 8 ತಿಂಗಳು ಗ್ಯಾರಂಟಿ ಯೋಜನೆಗಳಿಗೆ ಆಗಿರುವಂತ ಖರ್ಚು ನೋಡಿದಂತ ಸರ್ಕಾರ, ಫುಲ್ ಶಾಕ್‌ಗೆ ಒಳಗಾಗಿದೆ ಎನ್ನಲಾಗುತ್ತಿದೆ.

ಈ ನಡುವೆಯೂ ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾತ್ರ ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ಸ್ಥಗಿ




ತಗೊಳಿಸುವುದಿಲ್ಲ. ಗ್ಯಾರಂಟಿ ಸ್ಕೀಂಗಳನ್ನು ಜಾರಿಗೊಳಿಸಿರುವುದೇ ಬಡವರು, ಮಧ್ಯಮ ವರ್ಗದವರ ಅನುಕೂಲಕ್ಕಾಗಿ ಆಗಿದೆ.

ಕಾಂಗ್ರೆಸ್ ಸರ್ಕಾರ ಇರುವವರೆಗೂ ಮುಂದು ವರೆಯಲಿದೆ ಎಂಬುದಾಗಿ ಪದೇ ಪದೇ ಸ್ಪಷ್ಟಪಡಿಸಿದ್ದಾರೆ. ಅಂದಹಾಗೇ ಗೃಹ ಲಕ್ಷ್ಮೀ ಯೋಜನೆಗೆ ಪ್ರತಿ ತಿಂಗಳು ಕೋಟ್ಯಂತರ ರೂ ಖರ್ಚಾಗುತ್ತಿದೆಯಂತೆ. ಗೃಹ ಜ್ಯೋತಿಯ ಪ್ರಯೋಜನವನ್ನು ರಾಜ್ಯದಲ್ಲಿ 1 ಕೋಟಿ 29 ಸಾವಿರ ಮಂದಿ ಪಡೆದಿದ್ದಾರೆ. ಇನ್ನೂ ಅನ್ನಭಾಗ್ಯ ಯೋಜನೆಯಡಿ 4 ಕೋಟಿ 37 ಲಕ್ಷ ಜನರು ಪ್ರಯೋಜನ ಪಡೆಯುತ್ತಿದ್ದಾರೆ.

> **ಈ ಎಲ್ಲಾ ಕಾರಣಗಳಿಂದಾಗಿ ರಾಜ್ಯ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಮತ್ತೆ ಪರಿಷ್ಕರಣೆಗೆ ಮುಂದಾಗಿದೆ. ಸೇವೆ, ಸೌಲಭ್ಯಗಳನ್ನು ಪಡೆಯಲು ಫಲಾನುಭವಿಗಳಿಗೆ ಮತ್ತಷ್ಟು ಷರತ್ತುಗಳನ್ನು ನಿಗದಿ ಪಡಿಸೋ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಆ ಬಗ್ಗೆ ಖಚಿತ ಮಾಹಿತಿ ಸರ್ಕಾರದಿಂದ ಹೊರಬೀಳಬೇಕಿದೆ.**

ಶಕ್ತಿ ಯೋಜನೆಯ ಅಡಿಯಲ್ಲಿ ದಿನ ನಿತ್ಯ 62 ರಿಂದ 64 ಲಕ್ಷ ಮಹಿಳೆಯರು ಸಾರಿಗೆ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ಇಲ್ಲಿಯವರೆಗೆ ಶಕ್ತಿ ಯೋಜನೆಯಡಿ ಪ್ರಯಾಣಿಸಿದವರ ಸಂಖ್ಯೆ ಬರೋಬ್ಬರಿ 225 ಕೋಟಿ ಮಹಿಳೆಯರು ಆಗಿದ್ದಾರೆ.

## ಚನ್ನಪಟ್ಟಣ ಉಪಚುನಾವಣೆ ದೋಸ್ತಿ ಟಿಕೆಟ್ ಯಾರಿಗೆ..?

• **ಉದಯವಾಹಿನಿ, ಬೆಂಗಳೂರು**

ಚನ್ನಪಟ್ಟಣ ಉಪ ಚುನಾವಣೆ ಟಿಕೆಟ್ ಯಾರಿಗೆ ಎಂಬ ಕುತೂಹಲ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದೆ. ಟಿಕೆಟ್ಟಾಗಿ ಸಿಪಿ ಯೋಗೇಶ್ವರ್ ಹರ ಸಾಹಸ ಪಡುತ್ತಿದ್ದು, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ನಡೆಯ ಮೇಲೆ ಯಾರಿಗೆ ಟಿಕೆಟ್ ಎಂಬ ಬಗ್ಗೆ ಅಂತಿಮ ನಿರ್ಧಾರವಾಗಲಿದೆ.

ಮಾಜಿ ಸಚಿವ ಸಿಪಿ ಯೋಗೇಶ್ವರ್ ಚನ್ನಪಟ್ಟಣದಿಂದ ಟಿಕೆಟ್ ಪಡೆದುಕೊಳ್ಳಲು ಹರ ಸಾಹಸ ಪಡುತ್ತಿದ್ದಾರೆ. ಕ್ಷೇತ್ರದಲ್ಲಿ ತಮ್ಮದೇ ಆದ ವರ್ಚಸ್ಸು ಹೊಂದಿದ್ದಾರೆ. ಬಿಜೆಪಿ, ಕಾಂಗ್ರೆಸ್, ಸಮಾಜವಾದಿ ಪಕ್ಷ ಸ್ವತಂತ್ರ ಅಭ್ಯರ್ಥಿಯಾಗಿಯೂ ಕ್ಷೇತ್ರದಲ್ಲಿ ಯೋಗೇಶ್ವರ್ ತಮ್ಮದೇ ಆದ ರಾಜಕೀಯ ಶಕ್ತಿಯನ್ನು ಸಂಪಾದಿಸಿದ್ದಾರೆ. ಸದ್ಯ ವಿಧಾನಪರಿಷತ್ ಬಿಜೆಪಿ ಸದಸ್ಯರಾಗಿರುವ ಅವರು, ಚನ್ನಪಟ್ಟಣದಲ್ಲಿ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ. ಆದರೆ ಇದಕ್ಕೆ ತೊಡಕಾಗಿರುವುದು ಕೇಂದ್ರ ಸಚಿವರಾಗಿರುವ ಎಚ್.ಡಿ.ಕುಮಾರಸ್ವಾಮಿ ಅವರ ನಡೆ.ರಾಮನಗರ ಜಿಲ್ಲೆ ( ಬೆಂಗಳೂರು ದಕ್ಷಿಣ) ದಲ್ಲಿ ಕೇವಲ ಒಂದು ಕ್ಷೇತ್ರವನ್ನು ಮಾತ್ರ ಜೆಡಿಎಸ್ ಹೊಂದಿದೆ.

**ಚನ್ನಪಟ್ಟಣದಲ್ಲಿ ಬಿಜೆಪಿ ಚಿಹ್ನೆ ಅಡಿಯಲ್ಲಿ ಸ್ಪರ್ಧಿಸಬೇಕು ಎಂಬುವುದು ಸಿಪಿ ಯೋಗೇಶ್ವರ್ ಒಲವಾಗಿದೆ. ಆದರೆ ಇದಕ್ಕೆ ಎಚ್ಡಿಕೆ ಒಪ್ಪಿಗೆ ಸೂಚಿಸುತ್ತಿಲ್ಲ. ಹೀಗಿರುವಾಗ ಹೈಕಮಾಂಡ್ ಬಳಿಯೂ ಯೋಗೇಶ್ವರ್ ಮಾತುಕತೆ ನಡೆಸಿದ್ದಾರೆ. ಆದರೆ ಪೂರಕವಾದ ಬೆಳವಣಿಗೆಗಳು ನಡೆದಿಲ್ಲ. ಸಹಜವಾಗಿ ಎಚ್ಡಿಕೆಗೆ ಚನ್ನಪಟ್ಟಣ ಅನಿವಾರ್ಯವಾಗಿದೆ. ಆ ಕ್ಷೇತ್ರವನ್ನು ಜೆಡಿಎಸ್ನಲ್ಲೇ ಉಳಿಸಿಕೊಳ್ಳಬೇಕು ಎಂಬುವುದು ಅವರ ತಂತ್ರಗಾರಿಕೆಯಾಗಿದೆ. ಆದರೆ ಅವರು ಯಾರನ್ನು ಕಣಕ್ಕಿಳಿಸುತ್ತಾರೆ? ಎಂಬುವುದು ಮಾತ್ರ ಕುತೂಹಲಕ್ಕೆ ಕಾರಣವಾಗಿದೆ.**


ಉದಯವಾಹಿನಿ ಚಿತ್ರ

ಉಳಿದವು ಕಾಂಗ್ರೆಸ್ ಪಾಲಾಗಿವೆ. ಹೀಗಿರುವಾಗ ಇದ್ದ ಒಂದು ಕ್ಷೇತ್ರವನ್ನು ತಮ ಬಳಿಯೇ ಉಳಿಸಿಕೊಳ್ಳುವುದು ದಳಪತಿಗಳಿಗೆ ಅನಿವಾರ್ಯವಾಗಿದೆ.

## ಚಾಮರಾಜಪೇಟೆಯ ಸೀತಾಪತಿ ಅಗ್ರಹಾರದಲ್ಲಿ ಗುರುಗಳ ಆರಾಧನೆ

• **ಉದಯವಾಹಿನಿ, ಬೆಂಗಳೂರು**

ಚಾಮರಾಜಪೇಟೆಯ ಸೀತಾಪತಿ ಅಗ್ರಹಾರದಲ್ಲಿ 90 ವರ್ಷಗಳನ್ನು ಪೂರೈಸಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಆಗಸ್ಟ್ 20 ರಿಂದ 23ರ ವರೆಗೆ ಶ್ರೀ ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ನಾಲ್ಕೂ ದಿನಗಳಲ್ಲಿಯೂ ಬೆಳಗ್ಗೆ ಫಲಪಂಚಾಮೃತ ಅಭಿಷೇಕ, ಕನಕಾಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ ಮತ್ತು ಅನ್ನದಾನ ಸೇವೆಗಳು ನಡೆಯಲಿದೆ. ಸಂಜೆಯ ಸಾಂಸ್ಕೃತಿಕ ಕಾರ್ಯಕ್ರಮಗಳು ಈ ರೀತಿ ಇವೆ : ಆಗಸ್ಟ್ 20, ಮಂಗಳವಾರ ಸಂಜೆ 6-00ಕ್ಕೆ ಶ್ರೀಮತಿ ಸುಮಲತಾ ಮಂಜುನಾಥ್ ಮತ್ತು ಶ್ರೀಮತಿ ಐಶ್ವರ್ಯ ಶ್ರೀನಿಧಿ ಕುಲಕರ್ಣಿ ಇವರಿಂದ ದಾಸವಾಣಿ. ವಾದ್ಯ ಸಹಕಾರ : ಶ್ರೀ ಎಸ್. ಶಶಿಧರ್ (ಪಿಟೀಲು) ಶ್ರೀ ಶ್ರೀನಿವಾಸ್ ಅನಂತರಾಮಯ್ಯ (ಮೃದಂಗ). ನಂತರ ಅಂಬಾಭವಾನಿ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ರಥೋತ್ಸವ, ಮಹಾಮಂಗಳಾರತಿ.

**ಆಗಸ್ಟ್ 21, ಬುಧವಾರ :** ಸಂಜೆ 6-00ಕ್ಕೆ ಲಾಸ್ಯ ನೃತ್ಯ ಕ್ಷೇತ್ರ ತಂಡದವರಿಂದ ಭರತನಾಟ್ಯ. ನಂತರ ಶ್ರೀ ರಾಮ ರಾಘವೇಂದ್ರ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ರಥೋತ್ಸವ, ಮಹಾಮಂಗಳಾರತಿ.

**ಆಗಸ್ಟ್ 22, ಗುರುವಾರ :** ಸಂಜೆ 6-00ಕ್ಕೆ : ಕು|| ಪ್ರತೀಕ್ಷಾ ಜಿ. ರಾವ್ ಮತ್ತು ಸಂಗಡಿಗರಿಂದ ದಾಸವಾಣಿ. ನಾಟ್ಯೇಶ್ವರ ನೃತ್ಯ ಶಾಲೆಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ. ಪವಿತ್ರ ಗಾನ ವೃಂದದವರಿಂದ ಭಜನೆ, ರಥೋತ್ಸವ, ಮಹಾಮಂಗಳಾರತಿ.

**ಆಗಸ್ಟ್ 23, ಶುಕ್ರವಾರ :** ಸಂಜೆ 6-00ಕ್ಕೆ ವಿದ್ವಾನ್ ಶ್ರೀನಿಧಿ ಆಚಾರ್ಯ ಮತ್ತು ಸಂಗಡಿಗರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ. ನಂತರ ಮಹಾಮಂಗಳಾರತಿ, ಕಾರ್ಯಕ್ರಮದ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಶ್ರೀ ಮಠದ ವಿಚಾರಣಾಕರ್ತರಾದ ಶ್ರೀ ಎಸ್. ಎನ್. ವೆಂಕಟೇಶ್ ಆಚಾರ್ ಮತ್ತು ಶ್ರೀಮಠದ ವ್ಯವಸ್ಥಾಪಕರಾದ ಶ್ರೀ ವಿ. ಎನ್. ಶ್ರೀಧರ್ ಅವರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

## ಮಹಿಳಾ ನೌಕರರಿಗೂ ಹೆರಿಗೆ ರಜೆ : ಹೈಕೋರ್ಟ್ ಮಹತ್ವದ ಆದೇಶ

• **ಉದಯವಾಹಿನಿ, ಬೆಂಗಳೂರು**

ಹೊರಗುತ್ತಿಗೆ ಮಹಿಳಾ ನೌಕರರ ಹೆರಿಗೆ ರಜೆ ಕುರಿತಂತೆ ಕರ್ನಾಟಕ ಹೈಕೋರ್ಟ್ ಪೀಠ ಮಹತ್ವದ ತೀರ್ಪು ನೀಡಿದೆ. ವಿಜಯ ನಗರ ಮೂಲದ ಚಾಂದಬಿ ಬಳಿಗಾರ್ ಹೂವಿನಹಡಗಲಿಯ ರೈತ ಸಂಪರ್ಕ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದರು. ಇಲ್ಲಿ ಅವರನ್ನು ಜೂನ್ 2014 ರಲ್ಲಿ ಗುತ್ತಿಗೆ (ಗುತ್ತಿಗೆ ನೌಕರರ ಹೆರಿಗೆ ರಜೆ) ಮೇಲೆ ಒಂದು ವರ್ಷದ ಅಕೌಂಟೆಂಟ್ ಆಗಿ ನೇಮಿಸಲಾಯಿತು.

ಮಹಿಳೆ ಎರಡನೇ ಮಗುವನ್ನು ಗರ್ಭಧರಿಸಿದಾಗ, ಅವರು ಮೇ 6, 2023, ಆಗಸ್ಟ್ 31, 2023 ರ ನಡುವೆ ಹೆರಿಗೆ ರಜೆಗೆ ಅರ್ಜಿ ಸಲ್ಲಿಸಿದ್ದರು. ಸೆಪ್ಟೆಂಬರ್ 1, 2023 ರಂದು, ಮಹಿಳೆ ಹೂವಿನಹಡಗಲಿ ಕೃಷಿ ಅಧಿಕಾರಿಯ ಮುಂದೆ ಕೆಲಸಕ್ಕೆ ಮರಳಿದಾಗ, ಅವಳ ಸ್ಥಾನದಲ್ಲಿ ಬೇರೊಬ್ಬರಿಗೆ ಕೆಲಸ ನೀಡಲಾಗಿದೆ ಎಂದು ತಿಳಿಸಲಾಯಿತು. ನಂತರ, ಮಹಿಳೆ ತನ್ನ ದೂರಿನೊಂದಿಗೆ ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಿದರು. ಅನೇಕ ಅಧಿಕಾರಿಗಳ ಮುಂದೆ ಮನವಿ ಮಾಡಿದರು ಆದರೆ ಸಮಾಧಾನವನ್ನು ಹೊರತುಪಡಿಸಿ ಬೇರೇನೂ ಸಿಗಲಿಲ್ಲ. ಎಲ್ಲಾ ಕಡೆಯಿಂದಲೂ ಮನವಿ ಮಾಡಿ ಸುಸ್ತಾಗಿದ್ದ ಮಹಿಳೆ ಕರ್ನಾಟಕ ಹೈಕೋರ್ಟ್ನ ಬಾಗಿಲು ತಟ್ಟಿದರು. ಸಂಬಂಧ ವಕೀಲ ರೋಶನ್ ಛಬ್ಬಿ ಕರ್ನಾಟಕ ಹೈಕೋರ್ಟ್‌ನ ಧಾರವಾಡ ಪೀಠದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳು, ಅರ್ಜಿದಾರರಿಗೆ ಲೆಕ್ಕಾಧಿಕಾರಿ ಹುದ್ದೆ ವಹಿಸಿಕೊಳ್ಳಲು ಅವಕಾಶ ನೀಡುವಂತೆ ವಿಜಯನಗರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು, ಹೂವಿನಹಡಗಲಿಯ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗೆ ನಿರ್ದೇಶನ ನೀಡಿದರು.

## ಜುಲೈನಲ್ಲಿ 7971.73 ಕೋಟಿ ರೂ. ವಾಣಿಜ್ಯ ತೆರಿಗೆ ಸಂಗ್ರಹ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯದ ಜುಲೈ ತಿಂಗಳಿನ 7971.73 ಕೋಟಿ ರೂ. ವಾಣಿಜ್ಯ ತೆರಿಗೆ ಸಂಗ್ರಹವಾಗಿದೆ. ಕಳೆದ ಜೂನ್ ತಿಂಗಳಿಗೆ ಹೋಲಿಸಿದರೆ 197.9 ಕೋಟಿ ರೂ. ಹೆಚ್ಚು ಸಂಗ್ರಹವಾಗಿದೆ. ವಾಣಿಜ್ಯ ತೆರಿಗೆಗಳ ಇಲಾಖೆಯ ಮಾಹಿತಿ ಪ್ರಕಾರ ಜುಲೈ ತಿಂಗಳಿನಲ್ಲಿ 5990.38 ಕೋಟಿ ರೂ.ಸರಕು ಮತ್ತು ಸೇವಾ ತೆರಿಗೆ, 1893.31 ಕೋಟಿ ರೂ. ಕರ್ನಾಟಕ ಮಾರಾಟ ತೆರಿಗೆ ಹಾಗೂ 88.04 ಕೋಟಿ ರೂ. ವೃತ್ತಿ ತೆರಿಗೆ ಸಂಗ್ರಹಿಸಲಾಗಿದೆ.



ಉದಯವಾಹಿನಿ ಚಿತ್ರ

ಜೂನ್ ತಿಂಗಳಿಗೆ ಹೋಲಿಸಿದರೆ, ವೃತ್ತಿ ತೆರಿಗೆ ಸಂಗ್ರಹ ಕಡಿಮೆಯಾಗಿದ್ದು, ಸರಕು ಮತ್ತು ಸೇವಾ ತೆರಿಗೆ, ಕರ್ನಾಟಕ ಮಾರಾಟ ತೆರಿಗೆಗಳ ಸಂಗ್ರಹದಲ್ಲಿ ಹೆಚ್ಚಳ ಕಂಡುಬಂದಿದೆ. ಈ ಮೂರು ತೆರಿಗೆಗಳಿಂದ ಏಪ್ರಿಲ್ ತಿಂಗಳಲ್ಲಿ 9664.63 ಕೋಟಿ ರೂ. ಸಂಗ್ರಹವಾಗಿತ್ತು.

**ಇದರಲ್ಲಿ ಸರಕು ಸೇವಾ ತೆರಿಗೆ 25033.82 ಕೋಟಿ ರೂ., ಕರ್ನಾಟಕ ಮಾರಾಟ ತೆರಿಗೆ 7321.76 ಕೋಟಿ ರೂ. ವೃತ್ತಿ ತೆರಿಗೆ 478.92 ಕೋಟಿ ರೂ. ಸಂಗ್ರಹವಾದಂತಾಗಿದೆ. 2023-24ನೇ ಆರ್ಥಿಕ ಸಾಲಿನಲ್ಲಿ ರಾಜ್ಯದ ಒಟ್ಟು ವಾಣಿಜ್ಯ ತೆರಿಗೆ ಸಂಗ್ರಹ 94363.27 ಕೋಟಿ ರೂ.ನಷ್ಟಾಗಿತ್ತು.**

ಅನಂತರದ ಮೇ, ಜೂನ್ ಹಾಗೂ ಜುಲೈ ತಿಂಗಳುಗಳಲ್ಲಿ ಆ ಪ್ರಮಾಣದ ವಾಣಿಜ್ಯ ತೆರಿಗೆ ಸಂಗ್ರಹಣೆಯಾಗಿಲ್ಲ. ಕಳೆದ ವರ್ಷದ ಜುಲೈ ತಿಂಗಳಿಗೆ ಹೋಲಿಸಿದರೂ ವರ್ಷದ ಜುಲೈ ತಿಂಗಳ ವಾಣಿಜ್ಯ ತೆರಿಗೆ ಸಂಗ್ರಹ 515.44 ಕೋಟಿ ರೂ.ನಷ್ಟು ಹೆಚ್ಚಳವಾಗಿದೆ. 2024-25 ನೇ ಹಣಕಾಸು ವರ್ಷದ ಅಂದರೆ, ಕಳೆದ ನಾಲ್ಕು ತಿಂಗಳಲ್ಲಿ 32834.50 ಕೋಟಿ ರೂ. ವಾಣಿಜ್ಯ ತೆರಿಗೆ ಸಂಗ್ರಹವಾಗಿದೆ.

# ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಈಶ್ವರ ಖಂಡ್ರೆ ತಿರುಗೇಟು

## ಎಚ್.ಎಂ.ಟಿ. ವಶದಲ್ಲಿರುವ ಅರಣ್ಯ ಭೂಮಿ ಮರು ವಶಕ್ಕೆ ಪಡೆದ ಬಳಿಕ ಅಲ್ಲಿ ವೃಕ್ಷೋದ್ಯಾನ ನಿರ್ಮಾಣ

• **ಉದಯವಾಹಿನಿ, ಬೆಂಗಳೂರು**

ಅರಣ್ಯ ಭೂಮಿಯನ್ನು ಮಾರಾಟ, ದಾನ ಮಾಡಲು ಯಾರಿಗೂ ಅವಕಾಶವಿಲ್ಲ, ಎಚ್.ಎಂ.ಟಿ. ವಶದಲ್ಲಿರುವ ಅರಣ್ಯ ಭೂಮಿ ಮರು ವಶಕ್ಕೆ ಪಡೆದ ಬಳಿಕ ಅಲ್ಲಿ ವೃಕ್ಷೋದ್ಯಾನ ನಿರ್ಮಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ತುರ್ತು ಸುದ್ದಿಗೋಷ್ಠಿ ನಡೆಸಿದ ಅವರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಎಚ್.ಎಂ.ಟಿ. ವಶದಲ್ಲಿರುವ ಜಮೀನು ಪಡೆದು ಯಾರಿಗೆ ಮಾರುತ್ತೀರಿ ಎಂದು ಕೇಳಿದ್ದಾರೆ. ಅರಣ್ಯ ಭೂಮಿ ಮಾರಾಟ ಮಾಡಿರುವುದು ಈಗ ನಿಮ್ಮ ಇಲಾಖಾ ವ್ಯಾಪ್ತಿಯಲ್ಲಿರುವ ಎಚ್.ಎಂ.ಟಿ.ಯೇ ಹೊರತು ಅರಣ್ಯ ಇಲಾಖೆ ಅಲ್ಲ ಎಂದು ತಿರುಗೇಟು ನೀಡಿದರು. ಬೆಂಗಳೂರಿನ ಪ್ರಮುಖ ಭಾಗದಲ್ಲಿರುವ ಪೀಣ್ಯ ಜಾಲಹಳ್ಳಿ ಅರಣ್ಯ ಜಮೀನು ಮರು ವಶಕ್ಕೆಪಡೆದು ಶುದ್ಧ ಉಸಿರಾಟ ಕ್ಕೊಂದು ತಾಣ (ಲಂಗ್ ಸ್ಪೇಸ್) ನಿರ್ಮಾಣ ಮಾಡಲು ತಾವು ಬಯಸಿರುವುದಾಗಿ ತಿಳಿಸಿದರು.

ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್.ಎಂ.ಟಿ. ರಿಯಲ್ ಎಸ್ಟೇಟ್ ಸಂಸ್ಥೆಯಂತೆ ವರ್ತಿಸುತ್ತಿದೆ. 1997ರಿಂದ 2011ರವರೆಗೆ ಎಚ್.ಎಂ.ಟಿ. ಸಂಸ್ಥೆ ತನ್ನ ವಶದಲ್ಲಿದ್ದ ಅರಣ್ಯ ಭೂಮಿಯನ್ನು


ಉದಯವಾಹಿನಿ ಚಿತ್ರ

**ಅಧಿಕಾರಿಗಳ ಸಭೆ ಕರೆದು ಚರ್ಚೆ**

ಅಕ್ರಮವಾಗಿ ಡಾಲರ್ಸ್ ಕನ್ ಸ್ಟ್ರಕ್ಷನ್ಸ್ ಅಂಡ್ ಎಂಜಿನಿಯರ್ಸ್ ಪ್ರೈ.ಲಿ., ಯು.ಎಸ್. ಸ್ಟೀಲ್ ಕಂಪನಿ, ಸಿಲ್ವರ್ ಲೈನ್ ಎಸ್ಟೇಟ್ಸ್, ಮನೆ ಕನ್ ಸ್ಟ್ರಕ್ಷನ್ಸ್ ಲಿ, ಎಂ.ಎಂ.ಆರ್. ಕನ್ ಸ್ಟ್ರಕ್ಷನ್ಸ್, ಬ್ರಿಗೇಡ್ ಎಂಟರ್ ಪ್ರೈಸಸ್, ಬಾಗಮನೆ ಡೆವಲಪರ್ಸ್ ಪ್ರೈ.ಲಿ. ಸೇರಿದಂತೆ ಹಲವು ಖಾಸಗಿ ಮತ್ತು ಸರ್ಕಾರಿ ಸಂಸ್ಥೆಗಳಿಗೆ 165 ಎಕರೆ ಭೂಮಿಯನ್ನು 313 ಕೋಟಿಗೂ ಹೆಚ್ಚು ಹಣಕ್ಕೆ ಮಾರಾಟ ಮಾಡಿದೆ ಎಂದರು.

ಪರಿಸರ ಹೋರಾಟಗಾರರೊಬ್ಬರು ಕಳೆದ ಜುಲೈ 11ರಂದು ತಮ್ಮ ಕಚೇರಿಗೆ ನೀಡಿದ ದೂರು ಆಧರಿಸಿ, ಅಧಿಕಾರಿಗಳ ಸಭೆ ಕರೆದು ಚರ್ಚಿಸಿದಾಗ ಸತ್ಯ ಹೊರಬಿತ್ತು. ಹೀಗಾಗಿ ಮೈಸೂರು ಮಹಾರಾಜರ ಆಳ್ವಿಕೆಯ ಕಾಲದಲ್ಲಿ ಅಂದರೆ 1896 ಜೂನ್ 11ರಲ್ಲೇ ಅಧಿಸೂಚಿತ ಅರಣ್ಯ ಗೆಜೆಟ್ ಆಗಿದೆ ಎಂದು ಹೇಳಿದರು.

### ಅರಣ್ಯ ಭೂಮಿ ಒತ್ತುವರಿ ತೆರವು

**ತಾವು ಅರಣ್ಯ ಸಚಿವನಾಗಿ ಅಧಿಕಾರ ವಹಿಸಿಕೊಂಡ ತರುವಾಯ, ಅರಣ್ಯ ವಿಸ್ತರಣೆ ಮತ್ತು ಅರಣ್ಯ ಭೂಮಿ ಒತ್ತುವರಿ ತೆರವು ಮಾಡಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿರುವುದಾಗಿ ತಿಳಿಸಿದ ಈಶ್ವರ ಖಂಡ್ರೆ, ಬೆಂಗಳೂರಿನ ಕೊತ್ತನೂರಿನಲ್ಲಿ ಸುಮಾರು 500 ಕೋಟಿ ರೂ. ಬೆಲೆ ಬಾಳುವ 17.34 ಎಕರೆ, ಬಿ.ಎಂ. ಕಾವಲಿನಲ್ಲಿ ಸುಮಾರು 100 ಕೋಟಿ ರೂ.ಮೌಲ್ಯದ 15 ಎಕರೆ, ಪೀಣ್ಯ ಪ್ಲಾಂಟೇಷನ್ ಮತ್ತು ಜಾರಕಬಂಡೆ ಕಾವಲಿನಲ್ಲಿ 200 ಕೋಟಿ ರೂ.ಮೌಲ್ಯದ 18 ಎಕರೆ, ತುರಹಳ್ಳಿ ಅರಣ್ಯ ವ್ಯಾಪ್ತಿಯಲ್ಲಿ ಸುಮಾರು 50 ಕೋಟಿ ರೂ. ಬೆಲೆ ಬಾಳುವ 7 ಎಕರೆ ಸೇರಿದಂತೆ ಒಟ್ಟು 101 ಎಕರೆ 20 ಗುಂಟೆ ಜಮೀನು ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.**

> **ಉತ್ತರ ಕನ್ನಡದ ಶಿರೂರು ಮತ್ತು ವಯನಾಡಿನಲ್ಲಿ ಗುಡ್ಡ ಕುಸಿತ ಆದ ಬಳಿಕ ನೂರಾರು ಜನರು ಮೃತಪಟ್ಟಿರುವ ದಾರುಣ ಘಟನೆಯ ಬಳಿಕವೂ ನಾವು ಅರಣ್ಯ, ಪ್ರಕೃತಿ ಪರಿಸರ ಉಳಿಸದಿದ್ದರೆ ಮುಂದಿನ ಪೀಳಿಗೆ ನಮ್ಮನ್ನು ಖಂಡಿತಾ ಕ್ಷಮಿಸುವುದಿಲ್ಲ ತಿಳಿಸಿದರು.** -ಈಶ್ವರ ಖಂಡ್ರೆ

ಈ ಭೂಮಿಯನ್ನು 1963ರಲ್ಲಿ ಎಚ್.ಎಂ.ಟಿ.ಗೆ ದಾನ ನೀಡಿರುವುದಾಗಿ ಹೇಳಲಾಗಿದೆ. ಈಗ ಕುಮಾರಸ್ವಾಮಿ ಅವರು ಭೂಮಿಯನ್ನು ಎಚ್.ಎಂ.ಟಿ. ಸಂಸ್ಥೆ ಖರೀದಿಸಿರುವುದಾಗಿ ಹೇಳುತ್ತಿದ್ದಾರೆ. ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶಕ್ಕೆ ಡಿನೋಟಿಫೈ ಮಾಡದೆ, 1980ರ ಅರಣ್ಯ ಸಂರಕ್ಷಣಾ ಕಾಯಿದೆ ಸೆಕ್ಷನ್ 2ರ ಅಡಿಯಲ್ಲಿ ಕೇಂದ್ರ ಸರ್ಕಾರದಿಂದ ಪೂರ್ವಾನುಮತಿ ಪಡೆಯದೆ ಮಾರಾಟ ಮಾಡಲು ಅಥವಾ ದಾನ ಮಾಡಲು ಕಾನೂನಿನಲ್ಲಿ ಅವಕಾಶವೇ ಇರುವುದಿಲ್ಲ. ರಾಜ್ಯಕ್ಕೆ ಬೆಳಕು ನೀಡಿ, ಪ್ರಸ್ತುತ ಕತ್ತಲಲ್ಲಿ ಬದುಕು ಕಳೆಯುವಂತಾಗಿರುವ ಶರಾವತಿ ಸಂತ್ರಸ್ತರಿಗೆ ಭೂಮಿ ನೀಡಿರುವ ಕುರಿತಂತೆ ರಾಜ್ಯ ಹೈಕೋರ್ಟ್‌ನಲ್ಲಿ ಸಲ್ಲಿಕೆಯಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಖ್ಯೆ 43037-2019ಕ್ಕೆ ಸಂಬಂಧಿಸಿದಂತೆ ಮಾರ್ಚ್ 4, 2021ರಂದು ಬಂದಿರುವ ತೀರ್ಪು ಇದನ್ನು ಸ್ಪಷ್ಟಪಡಿಸುತ್ತದೆ ಎಂದರು.

# ಜನಪ್ರಿಯ ಬಿಜೆಪಿ ನಾಯಕ ಯತ್ನಾಳ್: ಪ್ರತಾಪ್ ಸಿಂಹ

## • ಮುಡಾಗಿಂತ ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಹಣದ ಅಕ್ರಮ ಗಂಭೀರವಾದ ಹಗರಣ

• **ಉದಯವಾಹಿನಿ, ಮೈಸೂರು**

ಇದೀಗ ರಾಜ್ಯದಲ್ಲಿ ಮುಡಾ, ಹಾಗೂ ವಾಲ್ಮೀಕಿ ನಿಗಮ ಹಗರಣ ಪ್ರಕರಣಗಳು ತುಂಬಾ ಸುದ್ದಿಯಲ್ಲಿವೆ. ಈ ವಿಚಾರದಲ್ಲಿ ಸರ್ಕಾರದ ವಿರುದ್ಧ ಧ್ವನಿ ಎತ್ತುವಲ್ಲಿ ವುಪಕ್ಷಗಳು ವಿಫಲವಾಗಿವೆ ಎನ್ನುವ ಮಾತುಗಳು ಕೂಡ ಕೇಳಿಬರುತ್ತಿವೆ. ಇದೀಗ ಮಾಜಿ ಸಂಸದ ಪ್ರತಾಪ್ ಸಿಂಹ ಪ್ರತಿಕ್ರಿಯೆ ನೀಡಿದ್ದಾರೆ.ಅಲ್ಲದೆ, ಇದೇ ವೇಳೆ ಯತ್ನಾಳ್ ಬಗ್ಗೆ ಆಶ್ಚರ್ಯಕರ ಹೇಳಿ ನೀಡಿ ಗಮನ ಸೆಳೆದಿದ್ದಾರೆ.

**ಯತ್ನಾಳ್ ಬಗ್ಗೆ ಆಶ್ಚರ್ಯಕರ ಹೇಳಿಕೆ**

ಮೈಸೂರಿನಲ್ಲಿ ಮಾತನಾಡಿದ ಅವರು, ಮೂಡಾಗಿಂತ ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಹಣದ ಅಕ್ರಮ ಗಂಭೀರವಾದ ಹಗರಣವಾಗಿದೆ. ಅದನ್ನು ನಾವು ಕೈಗೆತ್ತಿಕೊಂಡು ಪಾರದರ್ಶಕವಾಗಿ ಪಾದಯಾತ್ರೆ ಮಾಡಬೇಕು ಅಂತಾ ಹೇಳಿ, ವಿಪಕ್ಷದಲ್ಲಿರುವಂತಹ ಕೆಲ ಹಿರಿಯರು ಯೋಚನೆ ಮಾಡಿದ್ದಾರೆ. ಆದ್ದರಿಂದ ಬೆಳಗಾವಿಗೆ ನನ್ನನ್ನು ಸಹ ಬರುವುದಕ್ಕೆ ಹೇಳಿದ್ದರು. ಇವತ್ತು ರಾಜ್ಯದಲ್ಲಿ ಎಲ್ಲಾ ಜಾತಿ-ಜನಾಂಗಗಳಲ್ಲೂ ಹೋಲಿಕೆ ಮಾಡಿದ್ರೆ, ಎಲ್ಲಾ ಜಾತಿಗಳಲ್ಲಿರುವ ಅಭಿಮಾನಿಗಳನ್ನು ಪರಿಗಣನೆಗೆ ತೆಗೆದುಕೊಂಡರೆ, ಬಿಜೆಪಿಯಲ್ಲಿ ಅತ್ಯಂತ ಜನಪ್ರಿಯ ನೇತಾರ ಬಸನಗೌಡ ಪಾಟೀಲ್ ಯತ್ನಾಳ್ ಎನ್ನುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದರು.

ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಅಲ್ಲದೆ, ಸಿದ್ದೇಶ್ವರ್ ಅವರು ಕೂಡ ಬರುತ್ತಿದ್ದರು. ಕುಮಾರ್ ಬಂಗರಪ್ಪನವರು ಬರುತ್ತಿದ್ದರು. ಇದು ಹಿಂದುಳಿದ ಜಾತಿ-ಜನಾಂಗಗಳಿಗೆ ಆಗಿರುವಂತಹ ಅನ್ಯಾಯ ಆಗಿದೆ. ಇದರ ಬಗ್ಗೆ ನಾವು ಪಾದಯಾತ್ರೆಯನ್ನು ಮಾಡಬೇಕು. ಜನರಿಗೆ ಈ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಸರ್ಕಾರದ ವಿರುದ್ಧ ನಮ್ಮ ಬಳಿ ಎಲ್ಲಾ ರೀತಿಯ ಸಾಕ್ಷಾಧಾರಗಳಿವೆ.

ಬೆಂಗಳೂರು-ಮೈಸೂರು ನಡುವೆ ನಡೆದ ಮುಡಾಕ್ಕೆ ಸಂಬಂಧಿಸಿದಂತಹ ಮೈಸೂರು ಚಲೋದಲ್ಲಿ ಹಂಚಿಕೊಂಡ ರೀತಿ ನಿಮ್ಮ ಅನುಭವಗಳನ್ನು ಹಂಚಿಕೊಳ್ಳಿ ಎಂದರು. ನಾವು ಯಾವ ರೀತಿ ರೂಪುರೇಷೆಗಳನ್ನು ತಯಾರಿ ಮಾಡಬಹುದು ನನ್ನನ್ನು ಕೇಳಿದರು, ಹೋಗಿ ನಾನು ಹೇಳಿದ್ದೀನಿ ಅಷ್ಟೇ. ಇದನ್ನು ಹೊರತುಪಡಿಸಿದರೆ, ಇದು ಯಾವ ಭಿನ್ನಮತೀಯ ಸಭೆ, ಅತೃಪ್ತರ ಸಭೆಯಲ್ಲ ಎಂದರು.

ಅಲ್ಲದೆ, ಬಿಜೆಪಿಯ ಬಲವರ್ಧನೆಗಾಗಿ ಸಭೆ ಹೊರತು, ಯಾವ ಬಂಡಾಯದ ಸಭೆ ಅಲ್ಲ ಎಂದರು. ಮುಡಾ ಹಗರಣದ ಬಗ್ಗೆ ಮಾತನಾಡಿದ ಪ್ರತಾಪ್ ಸಿಂಹ ಅವರು, ಇದು ಕೇವಲ ಮೈಸೂರು ಜಿಲ್ಲೆಗೆ ಸಂಬಂಧಿಸಿದ ಪ್ರಕರಣದ ಆಗಿತ್ತು. ಅದರಲ್ಲಿ ಸಿಎಂ ಸಿದ್ದರಾಮಯ್ಯ ಅವರು 14-16 ಸೈಟುಗಳನ್ನು ಅಕ್ರಮವಾಗಿ ಪಡೆದುಕೊಂಡಿದ್ದಾರೆ ಎನ್ನುವುದು ದೊಡ್ಡ ವಿಷಯವಾಗಿತ್ತು. ಆದರೆ, ಅದಕ್ಕಿಂತ ದೊಡ್ಡ ಹಗರಣದ ಏನೆಂದದರೆ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡದದಿರುವುವಂತಹದ್ದು ಎಂದರು.


☛ ಉದಯವಾಹಿನಿ ಚಿತ್ರ

> ಮೂಡಾ ವಿಚಾರದಲ್ಲಿ ಮಾತ್ರ ಕಾನೂನು ಬಾಹಿರವಾಗಿ ನಡೆದುಕೊಂಡಿದ್ದೇವೆ ಅಂತಾ ಅವರು ಯಾವತೂ ಹೇಳಿಲ್ಲ. ಆದರೆ, ವಾಲ್ಮೀಕಿ ನಿಗಮದ ಹಣದ ಅಕ್ರಮದ ಬಗ್ಗೆ ಅವರೇ ಸವತಃ ಒಪ್ಪಿಕೊಂಡಿದ್ದಾರೆ. ಅವರು ಹಣಕಾಸು ಸಚಿವರೂ ಕೂಡ ಆಗಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು **-ಪ್ರತಾಪ್ ಸಿಂಹ**

**ತುಂಬಾ ದೊಡ್ಡ ಹಗರಣ**

ಸುಮಾರು 187 ಕೋಟಿ ರೂಪಾಯಿಯನ್ನ ಅಕ್ರಮವಾಗಿ ಬೇರೆ-ಬೇರೆ ಖಾತೆಗಳಿಗೆ ವರ್ಗಾವಣೆ ಮಾಡಿ, ನಮ್ಮ ಎಸ್‌ಟಿ ಜನಾಂಗಕ್ಕೆ ಸೇರಬೇಕಾದ ಹಣವನ್ನ ಕಬಳಿಸಿದ್ದಾರೆ. ಅಲ್ಲದೆ, ಗ್ಯಾರಂಟಿ ಯೋಜನೆಗಳಿಗಾಗಿ ಸಮಾಜ ಕಲ್ಯಾಣ ಇಲಾಖೆ ಮುಖಾಂತರ 20,000 ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ದುಂದುವೆಚ್ಚ ಮಾಡಿದ್ದಾರೆ. ಇದು ತುಂಬಾ ದೊಡ್ಡ ಹಗರಣ ಆಗಿದೆ. ಇದು ರಾಜ್ಯದ ಮೂಲೆ ಮೂಲೆಗಳಲ್ಲಿ ಎಸ್‌ಸಿ ಎಸ್ಟಿ ಜನಾಂಗದವರಿಗೆ ಆಗಿರುವ ಅನ್ಯಾಯವಾಗಿದೆ.

> ಆದ್ದರಿಂದ ಈ ವಿಚಾರಕ್ಕೆ ಮಹತ್ವ ಕೊಡಬೇಕಾದ ಅನಿವಾರ್ಯತೆ ನಮ್ಮದಾಗಿದೆ. ಅದರಲ್ಲೂ ಹಿಂದುಳಿದ ಜಾತಿ-ಜನಾಂಗಗಳಿಗೆ ಸೇರಬೇಕಾದ ಹಣವನ್ನು ಈ ರೀತಿ ಪೋಲ್ ಮಾಡಿರುವುವಂತಹದ್ದು ಹಾಗೂ ವಿಧಾನಸಭೆಯಲ್ಲೇ ಈ ಬಗ್ಗೆ ಸಿದ್ದರಾಮಯ್ಯನವರೇ ಒಪ್ಪಿಕೊಂಡಿದ್ದಾರೆ. ಆದರೆ, 187 ಕೋಟಿ ಅಲ್ಲ, ಬರೀ 87 ಕೋಟಿ ಅಂತಲೂ ಅವರು ಹೇಳಿದ್ದಾರೆ. ಆದರೆ, ಹಣದ ಪ್ರಮಾಣವನ್ನು ಅವರು ಕಡಿಮೆ ಮಾಡಿ ಹೇಳಿರಬಹುದು ಎಂದರು **-ಪ್ರತಾಪ್ ಸಿಂಹ**

---

## ಹಿಂದೂಗಳ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ

• **ಉದಯವಾಹಿನಿ, ಕುಶಾಲನಗರ**

ಬಾಂಗ್ಲಾದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ಖಂಡಿಸಿ ಮತಾಂಧ ಶಕ್ತಿಗಳ ವಿರುದ್ಧ ಮಂಗಳವಾರ ಪಟ್ಟಣದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಸರ್ವ ಧರ್ಮೀಯರು ಪಾಲ್ಗೊಂಡು ಸಾಮರಸ್ಯದ ಘೋಷಣೆ ಮೊಳಗಿಸಿದರು. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಲ್ಲಿ ಕೆಲಕಾಲ ರಸ್ತೆ ತಡೆ ನಡೆಸಿದರು. ಅಲ್ಪಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಅಬ್ದುಲ್ ರಜಾಕ್ ಮಾತನಾಡಿ,'ಎಲ್ಲಾ ಧರ್ಮದವರನ್ನು ಒಳಗೊಂಡ ಕಾಂಗ್ರೆಸ್ ಪಕ್ಷ ಸಹಜವಾಗಿ ಯಾವುದೇ ಧರ್ಮೀಯರಿಗೆ ಅನ್ಯಾಯವಾದಾಗ ಧ್ವನಿ ಎತ್ತಲಿದೆ. ಬಾಂಗ್ಲಾದಲ್ಲಿ ನಡೆಯುತ್ತಿರುವ ಘಟನೆ ಬಗ್ಗೆ ಪ್ರಧಾನಿ ಮೋದಿ ಮೌನ ವಹಿಸಿರುವುದು ಖಂಡನೀಯ' ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ಪಿ.ಶಶಿಧರ್ ಮಾತನಾಡಿ,' ಇತರೆ ಧರ್ಮೀಯರ ವಿರುದ್ಧ ದ್ವೇಷ ಸಾಧಿಸುವ ಮತಾಂಧ ಮನಸ್ಥಿತಿಗಳ ವಿರುದ್ಧ ಕಾಂಗ್ರೆಸ್ ಸದಾ ಧ್ವನಿ ಎತ್ತಲಿದೆ. ಎಲ್ಲೆಡೆ ಸಾಮರಸ್ಯ, ಸಹಬಾಳ್ವೆ ನೆಲೆಸಬೇಕೆಂಬುದೇ ಕಾಂಗ್ರೆಸ್ ಧ್ಯೇಯ. ಮಾನವನ ಐಕ್ಯತೆಗೆ ಎಲ್ಲೆಲ್ಲಿ ಭಂಗ ಬರುವೆಲ್ಲೆಡೆ ಹೋರಾಟ ನಡೆಸಿ ಅನ್ಯಾಯಕ್ಕೊಳಗಾದ ಕಣ್ಣೀರು ಒರೆಸುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಾ ಬರುತ್ತಿದೆ' ಎಂದರು. ಹಿಂದೂ ಸಾಮ್ರಾಜ್ಯದ ಸಾಮ್ರಾಟ ಎಂದು ಕರೆಸಿಕೊಳ್ಳುವ ಪ್ರಧಾನಿ ಮೋದಿ ಪಕ್ಕದ ರಾಷ್ಟ್ರದಲ್ಲಿ ಹಿಂದೂಗಳಿಗೆ ಉಂಟಾಗುತ್ತಿರುವ ಅನ್ಯಾಯ ತಡೆಗಟ್ಟಲು ವಿಫಲವಾಗಿದ್ದಾರೆ' ಎಂದು ಆರೋಪಿಸಿದರು. ಮುಸ್ಲಿಂ ರಾಷ್ಟ್ರಗಳನ್ನು ಭಾರತದೊಂದಿಗೆ ಒಗ್ಗೂಡಿಸುವ ಅಖಂಡ ಭಾರತ ಪರಿಕಲ್ಪನೆ ಹಾಸ್ಯಾಸ್ಪದ. ಇದರಿಂದ ಭಾರತದಲ್ಲಿ ಹಿಂದೂಗಳು ಅಲ್ಪಸಂಖ್ಯಾತರಾಗಲಿದ್ದಾರೆ' ಎಂದರು.


☛ ಉದಯವಾಹಿನಿ ಚಿತ್ರ

---

## ಮಗಳಿಗೆ ಆಸ್ತಿ ಬರೆದುಕೊಟ್ಟ ಅಪ್ಪನನ್ನು ಕೊಚ್ಚಿ ಕೊಂದ ಮಗ

• **ಉದಯವಾಹಿನಿ, ಕೊರಟಗೆರೆ**

ಆಸ್ತಿಯನ್ನು ತನ್ನ ಮಗಳಿಗೆ ಬರೆದುಕೊಟ್ಟ ಅಪ್ಪನನ್ನು ತನ್ನ ಮಗನೇ ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿರುವ ಘಟನೆ ತಾಲ್ಲೂಕಿನ ಕೋಳಾಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜರುಗಿದೆ.

ತಾಲ್ಲೂಕಿನ ಆಲಪನಹಳ್ಳಿ ಗ್ರಾಮದ ವೆಂಕಟಪ್ಪ (75) ಕೊಲೆಯಾದ ವೃದ್ಧ. ಆಸ್ತಿ ವಿವಾದ ಸಂಬಂಧ ಪುತ್ರ ಸಿದ್ದಪ್ಪ ಹಾಗೂ ವೆಂಕಟಪ್ಪನೊಂದಿಗೆ ಆಗಾಗ್ಗೆ ಜಗಳ ನಡೆಯುತ್ತಿದ್ದು, ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಕೊಲೆಯಲ್ಲಿ ಅಂತ್ಯವಾಗಿದೆ.

ವೆಂಕಟಪ್ಪ ಹೆಸರಿನಲ್ಲಿದ್ದ ಮೂರು ಎಕರೆ ಜಮೀನನ್ನು ಮಗನ ಹೆಸರಿಗೆ ಬರೆಯದೆ ಮಗಳ ಹೆಸರಿಗೆ ಬರೆದುಕೊಟ್ಟಿದ್ದಾರೆ. ಇದರಿಂದ ತಂದೆ-ಮಗನ ನಡುವೆ ಆಗಾಗ್ಗೆ ಜಗಳ ನಡೆಯುತ್ತಿತ್ತು. ಹಿರಿಯರ ಸಮುಖದಲ್ಲಿ ನ್ಯಾಯ ಪಂಚಾಯಿತಿ ನಡೆದು ಯಾವುದಕ್ಕೂ ಜಗ್ಗದ ವೆಂಕಟಪ್ಪ ಜೊತೆಗೆ ಕೋಟಾಲದಿನ್ನೆ ಬಳಿ ಇದ್ದ ಜಮೀನಿನಿಂದ ಬಂದ 25 ಲಕ್ಷ ಹಣವನ್ನೂ ಸಹ ಮಗಳಿಗೆ ಕೊಟ್ಟಿದ್ದು, ಸಾಲ ಮಾಡಿಕೊಂಡು ನಾನು ಹೊಸ ಮನೆ ಕಟ್ಟುತ್ತಿದ್ದರೂ ಸಹ ನನಗೆ ಯಾವುದೇ ಸಹಾಯ ಮಾಡಿಲ್ಲ, ಕಷ್ಟಕ್ಕೆ ಸ್ಪಂದಿಸಿಲ್ಲ. ಎಲ್ಲವನ್ನೂ ಮಗಳಿಗೇ ಕೊಟ್ಟಿದ್ದಾರೆ ಎಂದು ಆಕ್ರೋಶಗೊಂಡು ಅಪ್ಪನನ್ನೇ ಕೊಲೆ ಮಾಡಲು ಸಂಚು ರೂಪಿಸಿದ್ದ. ಮುಚ್ಚು ಹಿಡಿದುಕೊಂಡು ಹೊಂಚು ಹಾಕುತ್ತಿದ್ದ ಸಿದ್ದಪ್ಪ ಮಧ್ಯಾಹ್ನ ದ್ವಿಚಕ್ರವಾಹನದಲ್ಲಿ ತಲೆಗೆ ಹೆಲೆಟ್ ಹಾಕಿಕೊಂಡು ಯಾರಿಗೂ ತಿಳಿಯದ ರೀತಿಯಲ್ಲಿ ಬಂದವನು ಏಕಾಏಕಿ ಅಪ್ಪನ ತಲೆಗೆ ಮುಚ್ಚಿನಿಂದ ಬರ್ಬರವಾಗಿ ನಾಲ್ಕೈದು ಬಾರಿ ಕೊಚ್ಚಿ ಕೊಲೆಗೈದಿದ್ದಾನೆ.



☛ ಉದಯವಾಹಿನಿ ಚಿತ್ರ

**ಬಂಧನಕ್ಕೆ ಪೊಲೀಸರ ಬಲೆ**

ಸುದ್ದಿ ತಿಳಿದ ತಕ್ಷಣ ಘಟನಾ ಸ್ಥಳಕ್ಕೆ ತುಮಕೂರು ಅಡಿಷನಲ್ ಎಸ್‌ಪಿ ಮರಿಯಪ್ಪ, ಡಿವೈಎಸ್‌ಪಿ ರಾಮಚಂದ್ರಪ್ಪ, ಸಿಪಿಐ ಹನುಮಂತರಾಯಪ್ಪ,ಪಿಎಸ್‌ಐ ರೇಣುಕಾಯಾದವ್, ಯೋಗೇಶ್ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಕೋಳಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಸಿದ್ದಪ್ಪನ ಬಂಧನಕ್ಕೆ ಕೊರಟಗೆರೆ ಪೊಲೀಸರು ಬಲೆ ಬೀಸಿದ್ದಾರೆ.

---

## 17ಸಿ ಫಾರಂ ಲಭ್ಯ, ಸಿಸಿಟಿವಿ ದೃಶ್ಯ ಮಾಯ

• **ಉದಯವಾಹಿನಿ, ಕೋಲಾರ**

2023ರ ವಿಧಾನಸಭೆ ಚುನಾವಣೆಗೆ ಸಂಬಂಧಿಸಿದಂತೆ ಮಾಲೂರು ಕ್ಷೇತ್ರದ ಫಲಿತಾಂಶದ ತಕರಾರು ಅರ್ಜಿ ವಿಚಾರವಾಗಿ ಹೈಕೋರ್ಟ್ ಕೇಳಿದ ಕೆಲ ದಾಖಲೆಗಳು ಲಭ್ಯವಾಗಿವೆ. ಇನ್ನು ಕೆಲವು ದಾಖಲೆಗಳನ್ನು ಒದಗಿಸಲು ಕೋಲಾರ ಜಿಲ್ಲಾಡಳಿತ ಪ್ರಯತ್ನ ನಡೆಸಿದೆ.

ನ್ಯಾಯಾಲಯ ಕೇಳಿದ ನಿರ್ದಿಷ್ಟ ದಾಖಲೆಗಳು ಜಿಲ್ಲಾಡಳಿತ ಭವನದ ಆವರಣದಲ್ಲಿರುವ ವಿದ್ಯುನ್ಮಾನ ಮತಯಂತ್ರದ (ಇವಿಎಂ) ಉಗ್ರಾಣದಲ್ಲಿ ಲಭ್ಯವಾಗಲಿಲ್ಲ. ಈ ವಿಚಾರ ಜಿಲ್ಲಾಡಳಿತಕ್ಕೆ ಒಮ್ಮೆಲೇ ಆತಂಕ ತಂದೊಡ್ಡಿತು. ನಂತರ ಮಾಲೂರಿನ ತಾಲ್ಲೂಕು ಖಜಾನೆಯಲ್ಲಿ ಇರಬಹುದೇ ಎಂಬುದನ್ನು ಪರಿಶೀಲಿಸಿದಾಗ '17 ಸಿ' ಫಾರಂನ ಕಾರ್ಬನ್ ಪ್ರತಿಗಳು ಲಭ್ಯವಾಗಿವೆ. ಆದರೆ, ಮತ ಎಣಿಕೆ ಸಂದರ್ಭದಲ್ಲಿನ ಸಿ.ಸಿ.ಟಿ.ವಿ ದೃಶ್ಯಾವಳಿ ಇನ್ನೂ ಸಿಕ್ಕಿಲ್ಲ. ಈ ಸಂಬಂಧ ಚುನಾವಣಾ ಆಯೋಗಕ್ಕೆ ಪತ್ರ ಬರೆದು ಸಿ.ಸಿ.ಟಿ.ವಿ ಅಳವಡಿಸಿದ ಗುತ್ತಿಗೆದಾರರಿಂದ ದೃಶ್ಯಾವಳಿ ಪಡೆಯಲು ಜಿಲ್ಲಾಡಳಿತ ಮುಂದಾಗಿದೆ.ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಅಕ್ರಂ ಪಾಷಾ, ನ್ಯಾಯಾಲಯದ ಸೂಚನೆಯಂತೆ ಮಂಗಳವಾರ ಪೊಲೀಸರ ಬಿಗಿ ಭದ್ರತೆಯಲ್ಲಿ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಸಮ್ಮುಖದಲ್ಲಿ ಇವಿಎಂ ಉಗ್ರಾಣದ ಬಾಗಿಲು ತೆರೆದು ಮತ ಎಣಿಕೆ ಸಂದರ್ಭದಲ್ಲಿ ಸಂಗ್ರಹಿಸಿಟ್ಟಿದ್ದ ದಾಖಲೆಗಳನ್ನು ತಡಕಾಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಂಕೀರ್ಣದಲ್ಲಿರುವ ಉಗ್ರಾಣದ ಬಾಗಿಲು ತೆರೆಯಲು ರಾಜ್ಯದ ಮುಖ್ಯ ಚುನಾವಣಾ ಅಧಿಕಾರಿಯ ಅನುಮತಿಯನ್ನೂ ಪಡೆಯಲಾಗಿತ್ತು.



☛ ಉದಯವಾಹಿನಿ ಚಿತ್ರ

---

## ಕಾಯಕಲ್ಪಕ್ಕಾಗಿ ಕಾಯುತ್ತಿರುವ ಶಿವಪುರ ಧ್ವಜ ಸತ್ಯಾಗ್ರಹ ಸೌಧ

• **ಉದಯವಾಹಿನಿ, ಮದ್ದೂರು**

ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಕಿಚ್ಚು ಹೊತ್ತಿಸಿದ ಹೋರಾಟಗಾರರ ನೆನಪಿಗಾಗಿ ನಿರ್ಮಿಸಿದ ಶಿವಪುರದ ಧ್ವಜ ಸತ್ಯಾಗ್ರಹ ಸೌಧವು ನಿರ್ಲಕ್ಷ್ಯಕ್ಕೆ ಒಳಗಾಗಿದೆ.

ಶಿವಪುರದ ಧ್ವಜ ಸತ್ಯಾಗ್ರಹ ಸೌಧವು ಹಲವು ವರ್ಷಗಳಿಂದ ಅಭಿವೃದ್ಧಿ ಕಂಡಿಲ್ಲ, ಇದು ನಮ್ಮ ರಾಜ್ಯದ ಹೆಮ್ಮೆಯಾಗಿರುವ ಸೌಧವನ್ನು ದುರಸ್ತಿಗೊಳಿಸಿ ಕಾಯಕಲ್ಪ ನೀಡಬೇಕು ಎಂಬುದು ಚಳವಳಿಗಾರರ ಒತ್ತಾಸೆಯಾಗಿದೆ. ಬೆಂಗಳೂರು- ಮೈಸೂರು ಹೆದ್ದಾರಿಯಲ್ಲಿರುವ ಈ ಸ್ಮಾರಕವು ಸ್ವಾತಂತ್ರ್ಯ ಹೋರಾಟದ ಹೆಗ್ಗುರುತಾಗಿದೆ. ಇದನ್ನು 1937ರಲ್ಲಿ ಅಂದಿನ ಸ್ವಾತಂತ್ರ್ಯ ಹೋರಾಟಗಾರರಾದ ಎಚ್.ಕೆ.ವೀರಣ್ಣಗೌಡ, ಕೊಪ್ಪದ ಜೋಗಿಗೌಡ, ಸಾಹುಕಾರ ಚೆನ್ನಯ್ಯ ಸೇರಿದಂತೆ ಹಲವು ಮಹನೀಯರ ನೇತೃತ್ವದಲ್ಲಿ ನಡೆದಿದ್ದ ಸ್ವಾತಂತ್ರ್ಯ ಹೋರಾಟದ ನೆನಪಿಗಾಗಿ ಈ ಸೌಧ ನಿರ್ಮಿಸಿರುವುದು ಇತಿಹಾಸ. ಸ್ವಾತಂತ್ರ್ಯ ಹೋರಾಟಕ್ಕೆ ಅಂದಿನ ಕಾಲದಲ್ಲಿಯೇ ಸುಮಾರು 30 ಸಾವಿರಕ್ಕೂ ಅಧಿಕ ಮಂದಿ ಸೇರಿದ್ದಕ್ಕೆ ಶಿವಪುರದ ತಿರುಮಲೆಗೌಡರು ತಮ್ಮ ಜಮೀನನ್ನು ನೀಡಿದ್ದರು. ಇಲ್ಲಿ ಕೋಲಾರದ ಸ್ವಾತಂತ್ರ್ಯ ಹೋರಾಟಗಾರ ಟಿ.ಸಿದ್ದಲಿಂಗಯ್ಯ ಅವರು ಬಾವುಟ ಹಾರಿಸಿದ್ದರು. 1979ರಲ್ಲಿ ನಿರ್ಮಾಣಗೊಂಡ ಈ ಸ್ಮಾರಕಕ್ಕೆ ಅಂದಿನ ಮುಖ್ಯಮಂತ್ರಿ ದೇವರಾಜ ಅರಸುರವರು ಉದ್ಘಾಟಿಸಿದ್ದರು. ಕೆಂಗಲ್ ಹನುಮಂತಯ್ಯ ಅವರ ಅಧ್ಯಕ್ಷತೆ ವಹಿಸಿದ್ದರು. ಇಂತಹ ಇತಿಹಾಸಿಕ ಸ್ಮಾರಕ ಪಾಳು ಬಂಗಲೆ ಯಂತಿರುವುದು ದುರಂತ.

ಈ ಹಿಂದೆ ಎಸ್.ಎಂ.ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದ ವೇಳೆ ಸತ್ಯಾಗ್ರಹ ಸೌಧ ಬಳಿ ಗ್ರಂಥಾಲಯಕ್ಕೆಂದು ಆನೆಕ್ಸ್ ಕಟ್ಟಡ ನಿರ್ಮಿಸಿದ್ದು ಬಿಟ್ಟರೆ, ಬೇರೆ ಯಾವ ಸರ್ಕಾರವೂ ಇದರತ್ತ ಕಾಳಜಿ ವಹಿಸಲಿಲ್ಲ. ಹಲವು ವರ್ಷಗಳ ಹಿಂದೆ ಬೇರೆಡೆಗಳಿಂದ ಬರುವ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಪ್ರವಾಸಿಗರು ಬಂದು ಧ್ವಜ ಸತ್ಯಾಗ್ರಹ ಸೌಧವನ್ನು ವೀಕ್ಷಿಸಿ ಸ್ವಾತಂತ್ರ್ಯ ಹೋರಾಟದ ಮಾಹಿತಿ ಪಡೆಯಲು ದಿನನಿತ್ಯ ಬಾಗಿಲು ತೆರೆಯಲಾಗುತ್ತಿತ್ತು.


☛ ಉದಯವಾಹಿನಿ ಚಿತ್ರ

**ಸೌಧದ ಬಾಗಿಲಿಗೆ ಬೀಗ**

ಕಟ್ಟಡ ನೋಡಿಕೊಳ್ಳಲು ಹಾಗೂ ಒಳ ಆವರಣ ನಿರ್ವಹಣೆ ಮಾಡಲು ಲೋಕೋಪಯೋಗಿ ಇಲಾಖೆಯಿಂದ ಒಬ್ಬ ಕಾವಲುಗಾರನನ್ನು ನೇಮಿಸಲಾಗಿತ್ತು. ಆದರೆ ಇತ್ತೀಚೆಗೆ ಯಾವೊಬ್ಬ ಕಾವಲುಗಾರ ಇಲ್ಲದೇ ಯಾವಾಗಲೂ ಸೌಧದ ಬಾಗಿಲಿಗೆ ಬೀಗ ಹಾಕಿರುವ ದೃಶ್ಯ ಸಾಮಾನ್ಯವಾಗಿದೆ.

---

## ಚರಂಡಿಯಂತಾದ ರಸ್ತೆಗಳು: ಸೊಳ್ಳೆಗಳ ಉತ್ಪತ್ತಿ ತಾಣವಾಗಿ ಮಾರ್ಪಾಡು

• **ಉದಯವಾಹಿನಿ, ವೇಮಗಲ್**

ಕೋಲಾರ ತಾಲ್ಲೂಕಿನ ನರಸಾಪುರವು ಪ್ರಮುಖ ಹೋಬಳಿಯಾಗಿದೆ. ಅಲ್ಲದೆ, ಇದು ಶೈಕ್ಷಣಿಕ ಕೇಂದ್ರ, ಜಿಲ್ಲಾ ಪಂಚಾಯಿತಿ, ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳನ್ನು ಮತ್ತು ಭಾನುವಾರದ ಸಂತೆ ಜೊತೆಗೆ ಕೈಗಾರಿಕಾ ಪ್ರದೇಶವನ್ನೂ ತನ್ನ ಒಡಲೊಳಗೆ ಇಟ್ಟುಕೊಂಡಿದೆ. ಇದರಿಂದಾಗಿ ನರಸಾಪುರ ತನ್ನದೇ ಆದ ಮಹತ್ವ ಹೊಂದಿದೆ.

ವಾಣಿಜ್ಯ, ವ್ಯಾಪಾರ ಸೇರಿದಂತೆ ಇನ್ನಿತರ ಕಾರಣಗಳಿಗಾಗಿ ಹೊರಗಿನಿಂದ ಬಂದ ಸಾಕಷ್ಟು ಮಂದಿ ಇದೇ ಗ್ರಾಮದಲ್ಲಿ ನೆಲೆಸಿದ್ದಾರೆ. ಇದರಿಂದಾಗಿ ಗ್ರಾಮದಲ್ಲಿ ಜನಸಂಖ್ಯೆ ಗಣನೀಯವಾಗಿ ಏರಿಕೆಯಾಗಿದೆ. ಆದರೆ, ಸ್ವಚ್ಛತೆ ಮಾತ್ರ ಮರೀಚಿಕೆಯಾಗಿದೆ. ಕಸ, ತ್ಯಾಜ್ಯ ಮತ್ತು ಕೊಳಚೆ ನೀರು ರಸ್ತೆಯನ್ನೂ ವ್ಯಾಪಿಸಿದ್ದು, ದುರ್ನಾತ ಬೀರುತ್ತಿದೆ. ಇದರ ಪರಿಣಾಮ ಸೊಳ್ಳೆಗಳ ಉತ್ಪತ್ತಿ ತಾಣವಾಗಿ ಮಾರ್ಪಟ್ಟಿದೆ.

ದಿನಕ್ಕೆ ನೂರಾರು ಮಂದಿ ವೈದ್ಯಕೀಯ ಚಿಕಿತ್ಸೆಗಾಗಿ ಬರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಬಳಿಯಿರುವ ಚರಂಡಿಯಲ್ಲೂ ತ್ಯಾಜ್ಯ ತುಂಬಿಕೊಂಡಿದ್ದು, ಸೊಳ್ಳೆಗಳ ಉತ್ಪತ್ತಿ ಕೇಂದ್ರದಂತಾಗಿದೆ. ಹೀಗಾಗಿ, ಚಿಕಿತ್ಸೆಗೆ ಬರುವವರು ಮತ್ತಷ್ಟು ಕಾಯಿಲೆಗೆ ತುತ್ತಾಗುವ ಅಪಾಯ ಎದುರಿಸುವಂತಾಗಿದೆ.

ಗ್ರಾಮದ ಮುಖ್ಯ ರಸ್ತೆಗಳಲ್ಲೂ ಕಸ ಹಂಚಿಹೋಗಿರುತ್ತದೆ. ಸರ್ಕಾರಿ ಪಬ್ಲಿಕ್ ಶಾಲೆ ಎದುರು, ವೇಮಗಲ್ ರಸ್ತೆಯಲ್ಲಿ ಬಿದ್ದಿರುವ ಕಸದ ರಾಶಿ, ಕೊಳಚೆ ನೀರು ನರಸಾಪುರಕ್ಕೆ ಸ್ವಾಗತದಂತಿರುತ್ತದೆ.

ತೆರವು ಮಾಡಿದ ಕಟ್ಟಡ ಸಾಮಗ್ರಿಗಳು, ಚರಂಡಿ ಹೂಳು ಮಣ್ಣು, ಬೇಡವಾದ ನಾಡಹೆಂಚು, ಹಾಸಿಗೆ, ಕಲ್ನಾರ್‌ಶೀಟ್, ರುಬ್ಬುವ ಕಲ್ಲು, ಪ್ಯಾಕಿಂಗ್ ಬಳಸುವ ಥರ್ಮಾಕೋಲ್ ಇತರೆ ತ್ಯಾಜ್ಯಗಳನ್ನು ಎಲ್ಲೆಂದರಲ್ಲೇ ಬಿಸಾಡಲಾಗಿದೆ. ಒಟ್ಟಾರೆ ನರಸಾಪುರ ಗ್ರಾಮದಲ್ಲಿ ಸ್ವಚ್ಛತೆ ಎಂಬುದು ಮರೀಚಿಕೆಯಾಗಿದ್ದು, ಗಲೀಜು, ದುರ್ನಾತವನ್ನು ತಡೆದುಕೊಂಡು ಜನರು ಜೀವನ ನಡೆಸುವಂತಾಗಿದೆ.


☛ ಉದಯವಾಹಿನಿ ಚಿತ್ರ

**ಡೆಂಘಿ ಭೀತಿ**

ಇನ್ನು ಗ್ರಾಮದ ಮುಖ್ಯ ರಸ್ತೆಗಳಲ್ಲಿ ಚರಂಡಿಗಳಲ್ಲಿ ತ್ಯಾಜ್ಯ ತುಂಬಿಕೊಂಡಿದ್ದು, ನೀರು ಹರಿಯಲು ಜಾಗವೇ ಇಲ್ಲದಂತಾಗಿದೆ. ಬೆಂಗಳೂರು ಮುಖ್ಯರಸ್ತೆಗೆ ಹೊಂದಿಕೊಂಡಂತೆ ಇರುವ ಪಶು ಆಸ್ಪತ್ರೆ ಮುಂದಿನ ರಾಜ ಕಾಲುವೆಯನ್ನು ಸ್ವಚ್ಛ ಮಾಡಿ, ವರ್ಷಗಳೇ ಕಳೆದಿದೆ. ಈ ಕಲುಷಿತ ನೀರಿನಿಂದಾಗಿ ಸೊಳ್ಳೆಗಳು ಯಥೇಚ್ಛವಾಗಿದ್ದು, ಗ್ರಾಮದ ಜನರು ಡೆಂಗಿ ಭೀತಿಗೆ ಸಿಲುಕಿದ್ದಾರೆ.

> ಇನ್ನಾದರೂ ಸಂಬಂಧಪಟ್ಟವರು ಈ ಬಗ್ಗೆ ಎಚ್ಚೆತ್ತುಕೊಂಡು ಸ್ವಚ್ಛಗೊಳಿಸುವ ನಿಟ್ಟಿನಲ್ಲಿ ಕ್ರಮಕ್ಕೆ ಮುಂದಾಗಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

---

## ಎಲ್ಲೆಡೆ ಕಳಪೆ ಕಾಮಗಾರಿಯದ್ದೇ ಸದ್ದು

• **ಉದಯವಾಹಿನಿ, ಕೊರಟಗೆರೆ**

ತಾಲ್ಲೂಕಿನಲ್ಲಿ ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು ಯೋಜನೆ ಅನುಷ್ಠಾನ ಪ್ರಾರಂಭದ ಹಂತದಲ್ಲೇ ಮುಗ್ಗರಿಸಿದೆ. ಕಳಪೆ ಕಾಮಗಾರಿ ಬಗ್ಗೆ ಸಾರ್ವಜನಿಕರಿಂದ ಆರೋಪ ಬಂದಿದ್ದು, ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಕಳಪೆ ಗುಣಮಟ್ಟದ ಪೈಪ್, ಸಿಮೆಂಟ್ ಗೋಡೆ, ಕಾಂಕ್ರಿಟ್ ಬದಲಾವಣೆ ಮಾಡಲು ಅಧಿಕಾರಿಗಳು ಸೂಚಿಸಿದ್ದಾರೆ. ಸುದ್ದಿ ಪ್ರಕಟವಾದ ನಂತರ ಎಲ್ಲೆಲ್ಲಿ ಕಳಪೆ ಕಾಮಗಾರಿ ನಡೆದಿತ್ತೊ ಆ ಸ್ಥಳಗಳಿಗೆ ಖುದ್ದು ಅಧಿಕಾರಿಗಳೇ ಭೇಟಿ ನೀಡಿ ಗುಣಮಟ್ಟ ಪರಿಶೀಲಿಸಿದ್ದಾರೆ. ಕಳಪೆ ಕಂಡುಬಂದಾಗ ಕೂಡಲೇ ಅದನ್ನು ಬದಲಾಯಿಸುವಂತೆ ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಿದ್ದಾರೆ.

ಕೆಲವೆಡೆ ಕಾಂಕ್ರಿಟ್ ರಸ್ತೆಗಳನ್ನು ಕಟರ್ ಮೂಲಕ ತೆಗೆಯದೆ ಜೆಸಿಬಿ ಬಳಸಿ ರಸ್ತೆ ಅಗೆಯಲಾಗಿದೆ. ಅಂತಹ ಕಡೆಗಳಲ್ಲಿ ಸದ್ಯಕ್ಕೆ ತೇಪೆ ಹಾಕುವ ಕೆಲಸವನ್ನೂ ಮಾಡಲಾಗಿದೆ. ತೇಪೆ ಹಾಕುವ ಭರದಲ್ಲಿ ಕೆಲವೆಡೆ ಗುಣಮಟ್ಟ ಕಾಯ್ದುಕೊಂಡಿಲ್ಲ ಎಂಬ ಆರೋಪಗಳು ಕೇಳಿಬಂದಿವೆ.

ನಿಯಮದ ಪ್ರಕಾರ 20 ಮನೆಗಳಿಗಿಂತ ಜಾಸ್ತಿ ಇರುವ ಗ್ರಾಮಗಳ ಮನೆ ಮನೆಗೆ ಕೊಳಯಿ ಅಳವಡಿಸಿ ನೀರು ಒದಗಿಸುವುದಾಗಿದೆ. 193 ಕೋಟಿ ವೆಚ್ಚದ ಕಾಮಗಾರಿಯಲ್ಲಿ ಶೇ 14ರಷ್ಟು ಹಣ ಈಗಾಗಲೇ ಬಳಕೆಯಾಗಿದೆ. ತಾಲ್ಲೂಕಿನ 337 ಹಳ್ಳಿಗಳು ಈ ಯೋಜನೆಗೆ ಒಳಪಟ್ಟಿವೆ. ಸುಮಾರು 280 ಹಳ್ಳಿಗಳಲ್ಲಿ ಕಾಮಗಾರಿ ಪ್ರಾರಂಭಿಸಲಾಗಿದೆ. ಅದರಲ್ಲಿ 49 ಗ್ರಾಮಗಳಲ್ಲಿ ಈಗಾಗಲೇ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. 30 ಕಡೆಗಳಲ್ಲಿ ಕಾಮಗಾರಿ ಗುತ್ತಿಗೆ ಪಡೆದು ಕೆಲಸ ಪ್ರಾರಂಭಿಸದ ಕಾರಣಕ್ಕೆ ಗುತ್ತಿಗೆ ರದ್ದುಪಡಿಸಿ ಮರು ಗುತ್ತಿಗೆಗೆ ಆದೇಶಿಸಲಾಗಿದೆ.



☛ ಉದಯವಾಹಿನಿ ಚಿತ್ರ

---

# ಬಾಂಗ್ಲಾದಲ್ಲಿ ನಡೆಯುತ್ತಿರುವ ದಂಗೆಯಿಂದ ರಾಜ್ಯದ ಟೊಮೇಟೊ ಚಟ್ನಿ

## • ಕೆಲವು ವಾರಗಳಿಂದ ಏರುಗತಿಯಲ್ಲಿದ್ದ ಕೋಲಾರ ಟೊಮೇಟೊ ಧಾರಣೆ ಬಾಂಗ್ಲಾ ಬಿಕ್ಕಟ್ಟಿನ ಬಳಿಕ ಕುಸಿತ

• **ಉದಯವಾಹಿನಿ ಕೋಲಾರ**

ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಆಂತರಿಕ ದಂಗೆಯು ಕೋಲಾರದ ಟೊಮೇಟೊ ರೈತರು ಹಾಗೂ ವ್ಯಾಪಾರಿಗಳನ್ನು ಇಕ್ಕಟ್ಟಿಗೆ ಸಿಲುಕಿಸಿ, ನಷ್ಟದ ಭೀತಿ ತಂದೊಡ್ಡಿದೆ, ಎತ್ತಣ ಬಾಂಗ್ಲಾದೇಶ, ಎತ್ತಣ ಕೋಲಾರ, ಹೇಗೆ ಸಂಬಂಧ ಎಂಬುದು ಕುತೂಹಲಕಾರಿಯೇ. ಆದರೆ ಕೋಲಾರದ ಟೊಮೇಟೊ ಮಾರುಕಟ್ಟೆಗೆ ಪ್ರಮುಖ ಆಧಾರ ಬಾಂಗ್ಲಾದೇಶ ಎನ್ನುವುದು ವಾಸ್ತವ.

ಕೋಲಾರ ಮಾರುಕಟ್ಟೆ ಏಷ್ಯಾ ಖಂಡದಲ್ಲೇ 2ನೇ ಅತೀ ದೊಡ್ಡ ಟೊಮೇಟೊ ಮಾರುಕಟ್ಟೆ ಎಂದು ಖ್ಯಾತಿಗಳಿಸಿದೆ. ಹಿಂದೆ ಪಾಕಿಸ್ಥಾನ, ಬಾಂಗ್ಲಾ ಹಾಗೂ ಶ್ರೀಲಂಕಾಗಳಿಗೆ ನೂರಾರು ಟನ್ ಟೊಮೇಟೊ ರಫ್ತಾಗುತ್ತಿತ್ತು. ಶ್ರೀಲಂಕಾದಲ್ಲಿ ಆಂತರಿಕ ಸಮಸ್ಯೆ ಮತ್ತು ಪಾಕ್‌ನೊಂದಿಗೆ ಭಾರತದ ಸಂಬಂಧ ಹಳಸಿದ ಬಳಿಕ ಕೋಲಾರ ಟೊಮೇಟೊಗೆ ಬಾಂಗ್ಲಾ ದೇಶವೇ ಮುಖ್ಯ ವಿದೇಶಿ ಮಾರುಕಟ್ಟೆಯಾಗಿದೆ.

ಕೆಲವು ವಾರಗಳಿಂದ ಏರುಗತಿಯಲ್ಲಿದ್ದ ಕೋಲಾರ ಟೊಮೇಟೊ ಧಾರಣೆ ಬಾಂಗ್ಲಾ ಬಿಕ್ಕಟ್ಟಿನ ಬಳಿಕ ಪ್ರತೀ ಬಾಕ್ಸ್‌ಗೆ 100ರಿಂದ 200 ರೂ. ಕುಸಿತ ಕಂಡಿದೆ.

**12 ರೂ.ಗೆ ಕುಸಿತ**

ಪ್ರತೀ ವರ್ಷ ಜೂನ್‌ನಿಂದ ಆಗಸ್ಟ್ ವರೆಗೆ ಟೊಮೇಟೊ ಋತು ಆಗಿದ್ದು, ಆಗ ಎಷ್ಟು ಬೆಳೆದರೂ ಕೈತುಂಬಾ ಕಾಸು ಎನ್ನುವುದು ರೈತರ ಅನುಭವ. ಆದರೆ ಈಗ ಬಿಂಗಿ ರೋಗ, ಅತಿವೃಷ್ಟಿಯಿಂದ ಟೊಮೇಟೊ ಫಸಲು ಇಳಿಮುಖವಾಗಿದೆ. ಬಾಂಗ್ಲಾಕ್ಕೆ ಟೊಮೇಟೊ ಕಳುಹಿಸುವ ವ್ಯಾಪಾರಿಗಳು ಹರಾಜಿನಲ್ಲಿ ಭಾಗವಹಿಸದಿದ್ದರೆ ಪ್ರತೀ ಬಾಕ್ಸ್ ಮೇಲೆ 100ರಿಂದ 200 ರೂ. ತಾನಾಗಿಯೇ ಕುಸಿಯುತ್ತದೆ. ಹೀಗಾಗಿ ಕಳೆದ ತಿಂಗಳಿನಿಂದ ಪ್ರತೀ ಕೆ.ಜಿ.ಗೆ ಸರಾಸರಿ 20 ರೂ.ಗಿಂತ ಹೆಚ್ಚಿದ್ದ ಟೊಮೇಟೊ ಧಾರಣೆ 12 ರೂ.ಗೆ ಕುಸಿದಿದೆ.


☛ ಉದಯವಾಹಿನಿ ಚಿತ್ರ

ಕೋಲಾರ ಎಪಿಎಂಸಿ ಟೊಮೇಟೊ ಮಾರುಕಟ್ಟೆಯಿಂದ ಪ್ರತೀ ನಿತ್ಯ ಬಾಂಗ್ಲಾ ದೇಶಕ್ಕೆ ಸಾಮಾನ್ಯವಾಗಿ 15ರಿಂದ 20 ಲೋಡ್ ಟೊಮೇಟೊ ನಿರ್ಯಾತವಾಗುತ್ತಿತ್ತು. ಬೇಡಿಕೆ ಹೆಚ್ಚಾಗಿರುವ ಸಂದರ್ಭಗಳಲ್ಲಿ ಇದು 30 ಲೋಡ್ ವರೆಗೂ ತಲುಪುತ್ತಿತ್ತು. ಪ್ರತೀ ಲೋಡ್‌ನಲ್ಲಿ 30 ಟನ್‌ನಂತೆ ಕೋಲಾರ ಮಾರುಕಟ್ಟೆಯಿಂದ ನಿತ್ಯ 500ರಿಂದ 1 ಸಾವಿರ ಟನ್ ಟೊಮೇಟೊ ಬಾಂಗ್ಲಾಕ್ಕೆ ಸಾಗಣೆಯಾಗುತ್ತಿತ್ತು. ವಿಶೇಷ ಲಾರಿಗಳು ಕೋಲಾರದಿಂದ ಬಾಂಗ್ಲಾ ಗಡಿಗೆ ಕೇವಲ 48 ತಾಸುಗಳಲ್ಲಿ ಟೊಮೇಟೋ ಮುಟ್ಟಿಸುತ್ತಿದ್ದವು. ಪ್ರತೀ ಲೋಡ್‌ಗೆ ಸುಮಾರು 2 ಲಕ್ಷ ರೂ. ವೆಚ್ಚ ತಗಲುತ್ತಿತ್ತು. ಬಾಂಗ್ಲಾ ದೇಶದಲ್ಲಿ ಆಂತರಿಕ ದಂಗೆ ಆರಂಭವಾದ ಅನಂತರ ಕೋಲಾರದಿಂದ ಅಲ್ಲಿಗೆ ಟೊಮೇಟೊ ರಫ್ತು ಶೇ. 50ರಷ್ಟು ಕುಸಿದಿದೆ. ಈಗ ಕೇವಲ 8ರಿಂದ 12 ಲೋಡ್ ಸಾಗಿಸಲಾಗುತ್ತಿದೆ.

> ಕೋಲಾರ ಮಾರುಕಟ್ಟೆಗೆ ಆವಕವಾಗಿ ಹರಾಜಾಗುವ ಟೊಮೇಟೊಗೆ ಬಾಂಗ್ಲಾದೇಶ ಪ್ರಮುಖ ಮಾರುಕಟ್ಟೆಯಾಗಿತ್ತು. ಅಲ್ಲಿ ಆಂತರಿಕ ಬಿಕ್ಕಟ್ಟು ಉಲ್ಬಣವಾಗಿದ್ದು, ಇದರಿಂದ ಟೊಮೇಟೊ ರಫ್ತು ಶೇ. 50ರಷ್ಟು ಕುಸಿದಿದೆ. ಪರಿಣಾಮವಾಗಿ ಕೋಲಾರ ಮಾರುಕಟ್ಟೆಯಲ್ಲಿ ಧಾರಣೆ ಶೇ. 25ರಷ್ಟು ಕುಸಿದಿದೆ. ಅಲ್ಲಿಂದ ನಮಗೆ 15 ಕೋಟಿ ರೂ.ಗೂ ಹೆಚ್ಚು ಹಣ ಬಾಕಿ ಬರಬೇಕಾಗಿದ್ದು, ಬರುವ ವಿಶ್ವಾಸವೇ ಇಲ್ಲವಾಗಿದೆ
> **-ನವಾಜ್ ಪಾಷಾ,** ಸಿಝುಡ್ ಟ್ರೇಡರ್ಸ್

**ಬಾಕ್ಸ್‌ಗೆ 100ರಿಂದ 200 ರೂ. ಕುಸಿತ**

ಹೀಗೆ ಕಳುಹಿಸುವ ಟೊಮೆಧೀಟೊಗೂ ಹಣ ಸಿಗುವ ಗ್ಯಾರಂಟಿ ಇಲ್ಲವಾಗಿದೆ.

ಕೋಲಾರ ಮಾರುಕಟ್ಟೆಯಿಂದ ಬಾಂಗ್ಲಾ ದೇಶಕ್ಕೆ ಟೊಮೇಟೊ ಕಳುಹಿಸುವ ನಾಲ್ವರು ಮುಖ್ಯ ವ್ಯಾಪಾರಿಗಳಿದ್ದು, ಇವರು ಪ್ರತೀ ವರ್ಷ ಕನಿಷ್ಠ 50ರಿಂದ 60 ಕೋಟಿ ರೂ. ಮೌಲ್ಯದ ಟೊಮೇಟೊ ಕಳುಹಿಸುತ್ತಿದ್ದರು. ಕಳೆದ ವರ್ಷ ಬಾಕ್ಸ್ ಧಾರಣೆ 2,500 ಸಾವಿರ ರೂ.ಗೆ ಏರಿದ್ದಾಗ 100 ಕೋಟಿ ರೂ.ಗೂ ಹೆಚ್ಚು ವಹಿವಾಟು ದಾಖಲಾಗಿದೆ. ಆದರೆ ಈಗ ಈ ವ್ಯಾಪಾರಿಗಳಿಗೆ ಬಾಂಗ್ಲಾದಿಂದ 15 ಕೋಟಿ ರೂ. ಬಾಕಿ ಬರಬೇಕಾಗಿದೆ. ಬಾಂಗ್ಲಾ ದೇಶದ ಬ್ಯಾಂಕ್‌ಗಳು ನಿತ್ಯದ ವಹಿವಾಟನ್ನು 2 ಲಕ್ಷ ಟಾಕಾಕ್ಕೆ ಮಿತಿಗೊಳಿಸಿರುವುದು ಟೊಮೇಟೊ ವ್ಯಾಪಾರಿಗಳಿಗೆ ಬಾಕಿ ಹಣ ಬಾರದಿರಲು ಪ್ರಮುಖ ಕಾರಣವಾಗಿದೆ. ಇದರ ನೇರ ಪರಿಣಾಮ ಕೋಲಾರ ಟೊಮೇಟೊ ಧಾರಣೆ ಮೇಲೆ ಬಿದ್ದಿದೆ.

---

**ಉದಯ ವಾಹಿನಿ**

**ಪ್ರಾದೇಶಿಕ**

ಗುರುವಾರ 15 ಆಗಸ್ಟ್ 2024 | 03

## ಮಿನಿ ನ್ಯೂಸ್

### ನಿಯಂತ್ರಣ ತಪ್ಪಿ ಕಾರು ಪಲ್ಟಿ: ಚಾಲಕ ಸಾವು

• **ಉದಯವಾಹಿನಿ ಗುಂಡ್ಲುಪೇಟೆ**

ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿ ಓರ್ವ ಸಾವನ್ನಪ್ಪಿದ್ದು, ಇಬ್ಬರಿಗೆ ಗಾಯಗಳಾಗಿರುವ ಘಟನೆ ತಾಲ್ಲೂಕಿನ ಕೂತನೂರು ಬಳಿಯ ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ಆ.14ರ ಬುಧವಾರ ನಡೆದಿದೆ. ಕನ್ನೇಗಾಲ ಗ್ರಾಮದ ಚಂದ್ರು(31) ಮೃತ ವ್ಯಕ್ತಿ.ಕಾರಿನಲ್ಲಿದ್ದ ಕೃಷ್ಣಮೂರ್ತಿ ಹಾಗೂ ಕೃಷ್ಣ ಎಂಬ ಇಬ್ಬರಿಗೆ ಗಾಯಾಗಳಾಗಿದೆ.

ಮೂವರು ಸ್ನೇಹಿತರು ಕಾರಿನಲ್ಲಿ ತೆರಳುತ್ತಿದ್ದ ವೇಳೆ ಕೂತನೂರು ಗ್ರಾಮದ ಬಳಿ ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿದೆ. ಈ ವೇಳೆ ಚಾಲಕ ಚಂದ್ರು ಅವರ ತಲೆಗೆ ತೀವ್ರ ಗಾಯಗಳಾದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ನಂತರ ಗಾಯಾಳುಗಳನ್ನು ಗುಂಡ್ಲುಪೇಟೆ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ನೀಡಲಾಗಿದೆ. ಘಟನಾ ಸ್ಥಳಕ್ಕೆ ಗುಂಡ್ಲುಪೇಟೆ ಪೊಲೀಸರು ಭೇಟಿ ನೀಡಿ, ಪರಿಶೀಲಿಸಿ ಮೃತದೇಹವನ್ನು ತಾಲ್ಲೂಕು ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನಿಸಿದ್ದಾರೆ.

### ದ್ವಿಚಕ್ರ ವಾಹನಗಳು ಮುಖಾಮುಖಿ ಡಿಕ್ಕಿ: ಸ್ಥಳದಲ್ಲೇ ವ್ಯಕ್ತಿ ಸಾವು

• **ಉದಯವಾಹಿನಿ ಪಾವಗಡ**

ಆಂಧ್ರಪ್ರದೇಶದ ರೊದ್ದಂ ನಿಂದ ಕರ್ನಾಟಕದ ಕೊಡುಮಡುಗು ಗ್ರಾಮದ ಕಡೆಗೆ ಬರುತ್ತಿದ್ದ ಬೈಕ್ ಮತ್ತು ಕೊಡಮಡುಗು ಗ್ರಾಮದಿಂದ ಆಂಧ್ರ ಕಡೆ ಹೋಗುತ್ತಿದ್ದ ಬೈಕುಗಳ ನಡುವೆ ಮುಖಾಮುಖಿ ಡಿಕ್ಕಿಯಾಗಿ ಸ್ಥಳದಲ್ಲೇ ವ್ಯಕ್ತಿಯೊಬ್ಬರು ಮೃತಪಟ್ಟ ಘಟನೆ ಆ.14ರ ಬುಧವಾರ ನಡೆದಿದೆ. ಆಂಧ್ರಪ್ರದೇಶದ ಪೆದ್ದಗುವ್ವಲಪಲ್ಲಿ ಗ್ರಾಮದ ರಾಮಾಂಜನೇಯಲು (56) ಮೃತಪಟ್ಟ ವ್ಯಕ್ತಿ.

ಆ.14ರ ಬುಧವಾರ ಮಧ್ಯಾಹ್ನ ಸುಮಾರು 1 ಗಂಟೆಯ ಸಂದರ್ಭದಲ್ಲಿ ಪಾವಗಡ ತಾಲ್ಲೂಕಿನ ಕೊಡುಮಡುಗು ಗ್ರಾಮದ ಹೊರವಲಯದ ಬೈರಪುರದ ಗೇಟ್ ಬಳಿ ಆಂಧ್ರ ಮತ್ತು ಕರ್ನಾಟಕ ಗಡಿ ರೇಖೆಯ ಸಮೀಪ ಈ ಘಟನೆ ನಡಿದಿದೆ. ಇದೇ ಅಪಘಾತದಲ್ಲಿ ಮೃತಪಟ್ಟಿರುವ ರಾಮಾಂಜನೇಯಲು ಎಂಬವರ ಪುತ್ರ ಕೋಟೇಶ್ವರಲು ಅವರಿಗೂ ಸಹ ಗಂಭೀರ ಗಾಯಗಳಾಗಿದ್ದು, ಅದೇ ರೀತಿ ವಿರುದ್ಧ ದಿಕ್ಕಿನಲ್ಲಿ ಬರುತ್ತಿದ್ದ ಪಾತ್ರಪಲ್ಲಿ ಮದ್ಲೇಟಪ್ಪ ಅವರ ಕಾಲು ಮುರಿದು ಗಂಭೀರ ಗಾಯಗಳಾಗಿವೆ. ಗಾಯಗಳಾದ ಇಬ್ಬರನ್ನೂ ಪಾವಗಡ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ತುಮಕೂರಿಗೆ ರವಾನಿಸಲಾಗಿದೆ ಎಂದು ತಿಳಿದು ಬಂದಿದೆ.

ಘಟನಾ ಸ್ಥಳಕ್ಕೆ ಪಾವಗಡ ಪೊಲೀಸ್ ಠಾಣೆಯ ಸಿಪಿಐ ಸುರೇಶ್ ಭೇಟಿ ನೀಡಿ ಪರಿಶೀಲಿಸಿ ಮುಂದಿನ ಕ್ರಮಗಳನ್ನು ಕೈಗೊಂಡಿದ್ದಾರೆ.

### ಚೆಂಡುಗಳಿಂದ ರಾಷ್ಟ್ರಧ್ವಜ ತಯಾರಿಕೆ



☛ ಉದಯವಾಹಿನಿ ಚಿತ್ರ

• **ಉದಯವಾಹಿನಿ ಮೈಸೂರು**

ನಗರದ ಪೂರ್ಣ ಚೇತನ ಶಾಲೆಯ ಸುಮಾರು 530 ವಿದ್ಯಾರ್ಥಿಗಳು ಮಂಗಳವಾರ ಕಣ್ಣಿಗೆ ಬಟ್ಟೆ ಕಟ್ಟಿ ಐದು ನಿಮಿಷಗಳ ಕವಾಯತು ನಡೆಸಿದರು. ಪುನರ್ ಬಳಕೆಯ ಒರಿಗಾಮಿ ಚೆಂಡುಗಳ ಮೂಲಕ 12x8 ಮೀಟರ್ ಅಳತೆಯ ರಾಷ್ಟ್ರಧ್ವಜವನ್ನು 4 ಗಂಟೆ 5 ನಿಮಿಷದಲ್ಲಿ ತಯಾರಿಸುವ ಮೂಲಕ ದಾಖಲೆ ಮೆರೆದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಸ್ವಚ್ಛ ಮೈಸೂರು-ಸ್ವಚ್ಛ ಭಾರತ ನಿರ್ಮಾಣದ ಸಂದೇಶವನ್ನು ಸಾರಿದರು. ಎಲೈಟ್ ವರ್ಲ್ಡ್ ರೆಕಾರ್ಡ್ಸ್ ಸಂಸ್ಥೆಯ ತೀರ್ಪುಗಾರ್ತಿ ಭಾವನಾ ನವನೀತ್, ಏಷ್ಯನ್ ರೆಕಾರ್ಡ್ಸ್ ಅಕಾಡೆಮಿ ಮತ್ತು ಇಂಡಿಯಾ ರೆಕಾರ್ಡ್ಸ್ ಅಕಾಡೆಮಿಯ ತೀರ್ಪುಗಾರ್ತಿ ಪಿ.ಜಿ. ಪ್ರತಿಭಾ ಈ ದಾಖಲೆಗಳನ್ನು ಪ್ರಮಾಣೀಕರಿಸಿದರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಶಿಕ್ಷಣ ಸಂಸ್ಥೆಗೆ ಭೇಟಿ ನೀಡಿ ವಿದ್ಯಾರ್ಥಿಗಳನ್ನು ಅಭಿನಂದಿಸಿದರು. 'ಪ್ರಧಾನಿ ಮೋದಿ ಅವರ ವಿಕಸಿತ ಭಾರತದ ಕನಸನ್ನು ನನಸಾಗಿಸುವ ಜವಾಬ್ದಾರಿ ವಿದ್ಯಾರ್ಥಿ- ಯುವಜನರ ಮೇಲಿದೆ. ಈ ದೇಶಕ್ಕೆ ನಿಮಗೆ ಸಾಧ್ಯವಾದಷ್ಟು ಸೇವೆ ಸಲ್ಲಿಸಬೇಕು' ಎಂದು ಸಲಹೆ ನೀಡಿದರು. ಶಾಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ. ದರ್ಶನ್ ರಾಜ್, ಶಾಲೆಯ ಅಧ್ಯಕ್ಷೆ ಎಂ.ಆರ್. ರಜನಿ, ಮುಖ್ಯ ಆಡಳಿತಾಧಿಕಾರಿ ಮಾಧುರ್ಯ ರಾಮಸ್ವಾಮಿ, ಡೀನ್ ಲಾವಣ್ಯ, ಪ್ರಾಂಶುಪಾಲೆ ಬಿ. ಪ್ರಿಯಾಂಕಾ ಉಪಸ್ಥಿತರಿದ್ದರು.

### ಪತ್ನಿಯನ್ನು ಹತ್ಯೆಗೈದ ಪತಿ

• **ಉದಯವಾಹಿನಿ ರಾಮನಗರ**

ಕೌಟುಂಬಿಕ ಕಲಹ ಹಿನ್ನೆಲೆ ಪತಿಯಿಂದಲೇ ಪತ್ನಿ ಹತ್ಯೆಯಾಗಿರುವ ಘಟನೆ ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಹೂಜಗಲ್ಲು ಬೆಟ್ಟದಲ್ಲಿ ನಿನ್ನೆ ನಡೆದಿದೆ. ಹತ್ಯೆಯಾದ ಮಹಿಳೆ ದಿವ್ಯಾ (32) ಎಂದು ಗುರುತಿಸಲಾಗಿದೆ. ಹೆಂಡತಿಯನ್ನು ಹೂಜಗಲ್ಲು ಬೆಟ್ಟದಲ್ಲಿರುವ ದೇವಸ್ಥಾನಕ್ಕೆ ಕರೆದೊಯ್ದು ಹತ್ಯೆ ಮಾಡಲಾಗಿದೆ. ಮದುವೆಯಾಗಿ ಕೆಲವು ವರ್ಷಗಳು ಜೀವನ ನಡೆಸಿದ ಇಬ್ಬರ ನಡುವೆ ಇತ್ತೀಚೆಗೆ ಮನಸ್ತಾಪ ಉಂಟಾಗಿದೆ. ಇದರಿಂದ ನನಗೆ ಡಿವೋರ್ಸ್ ಕೊಟ್ಟುಬಿಡಿ ನಾನು ಬೇರೆ ಜೀವನ ಕಟ್ಟಿಕೊಳ್ಳುತ್ತೇನೆ ಎಂದು ದಿವ್ಯಾ ಕೇಳಿದ್ದಾಳೆ. ಆಗ ಉಮೇಶ್ ಹೆಂಡತಿಯನ್ನು ಸಮಾಧಾನಪಡಿಸಿ ಬುದ್ಧಿ ಹೇಳಿದ್ದ. ಆದರೆ, ಇದ್ಯಾವುದನ್ನೂ ಕೇಳದ ದಿವ್ಯಾಳಿಗೆ ಉಮೇಶ್ ಡಿವೋರ್ಸ್ ಕೊಡುವುದಾಗಿ ಹೇಳಿದ್ದಾನೆ. ಡಿವೋರ್ಸ್ ಕೇಸ್ ಸಂಬಂಧಿಸಿದಂತೆ ನಿನ್ನೆ ಮಾಗಡಿ ಕೋರ್ಟ್‌ಗೆ ದಂಪತಿ ಹಾಜರಾಗಿ ವಿಚಾರಣೆಯನ್ನು ಎದುರಿಸಿದ್ದರು. ಇನ್ನು ಹೆಂಡತಿಗೆ ಒಲ್ಲದ ಮನಸ್ಸಿನಿಂದ ಡಿವೋರ್ಸ್ ಕೊಡಲು ಮುಂದಾಗಿದ್ದ ಉಮೇಶ್‌ಗೆ ಪತ್ನಿ ತನ್ನನ್ನು ಬಿಟ್ಟು ಹೋಗಬಾರದು ಎಂಬ ಸ್ವಾರ್ಥ ಕಾಡುತ್ತಿತ್ತು.

ನ್ಯಾಯಾಲಯದಿಂದ ಮನೆಗೆ ವಾಪಸ್ ಹೋಗುವ ಮೊದಲು ದೇವಸ್ಥಾನಕ್ಕೆ ಹೋಗಿ ಬರೋಣ ಎಂದು ಹೇಳಿ ಹೆಂಡತಿಯನ್ನು ದೇವಸ್ಥಾನಕ್ಕೆ ಕರೆದುಕೊಂಡು ಹೋಗಿದ್ದಾನೆ. ದೇವಸ್ಥಾನದಲ್ಲಿ ದಿವ್ಯಾ ಪೂಜೆ ಮಾಡುತ್ತಿರುವಾಗಲೇ ಆಕೆಯನ್ನು ಹತ್ಯೆ ಮಾಡಿದ್ದಾನೆ. ನಂತರ ಅಲ್ಲಿಂದ ಮೃತದೇಹವನ್ನು ಚೀಲೂರು ಅರಣ್ಯ ಪ್ರದೇಶದಲ್ಲಿ ಎಸೆದು ಪರಾರಿ ಆಗಿದ್ದಾನೆ. ಇನ್ನು ಅರಣ್ಯದಲ್ಲಿ ಮೃತದೇಹ ಪತ್ತೆಯಾದ ಹಿನ್ನೆಲೆಯಲ್ಲಿ ಜಾಡು ಹಿಡಿದು ಹೊರಟ ಪೊಲೀಸರು ಶವದ ಗುರುತು ಪತ್ತೆ ಮಾಡಿದ್ದಾರೆ. ನಂತರ, ಆಕೆಯ ಮೃತದೇಹವನ್ನು ಆಸ್ಪತ್ರೆಗೆ ರವಾನಿಸಿದ್ದಾರೆ. ಈ ಘಟನೆ ಸಂಬಂಧ ಮಾಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಂತರಾಳದಿಂದ..
EDITORIAL

# ವೈದ್ಯ ಸಿಬ್ಬಂದಿಯ ಸುರಕ್ಷತೆಗೆ ತುರ್ತು ಕ್ರಮ ಅನಿವಾರ್ಯ



ಕೋಲ್ಕತ್ತದ ಆರ್.ಜಿ.ಕರ್ ಆಸ್ಪತ್ರೆಯ ಟ್ರೈನಿ ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಅವರ ಹತ್ಯೆಯು ಈ ವೃತ್ತಿಯಲ್ಲಿ ಇರುವವರು ಕೆಲಸದ ಸ್ಥಳದಲ್ಲಿ ಎದುರಿಸುತ್ತಿರುವ ಗಂಭೀರ ಅಪಾಯಗಳ ಕುರಿತು ಗಮನ ಹರಿಸುವಂತೆ ಮಾಡಿದೆ. ದೇಶದಾದ್ಯಂತ ಹಲವು ಆಸ್ಪತ್ರೆಗಳ ವೈದ್ಯರು ಘಟನೆಯನ್ನು ಖಂಡಿಸಿ ಮುಷ್ಕರ ನಡೆಸಿದ್ದಾರೆ. ಆಸ್ಪತ್ರೆಯಲ್ಲಿ ಕೆಲಸ ಮಾಡುವ ಹೊತ್ತಿನಲ್ಲಿ ವೈದ್ಯರು ಮತ್ತು ಇತರ ವೈದ್ಯಕೀಯ ಸಿಬ್ಬಂದಿಗೆ ಹೆಚ್ಚಿನ ಭದ್ರತೆ ಬೇಕು ಎಂಬ ಬೇಡಿಕೆಯನ್ನು ಹಲವು ನಗರಗಳ ವೈದ್ಯರು ಮುಂದಿಟ್ಟಿದ್ದಾರೆ. ತಮಗೆ ಕೆಲಸ ಮಾಡಲು ಸುರಕ್ಷಿತ ವಾತಾವರಣ ಇರಬೇಕು ಎಂದು ವೈದ್ಯರು ಮಾಡುತ್ತಿರುವ ಆಗ್ರಹ ಸಮರ್ಪಕವಾಗಿದೆ. ವೈದ್ಯರು ಕೆಲಸದ ಸ್ಥಳದಲ್ಲಿ ಹೆಚ್ಚಿನ ಅಪಾಯ ಎದುರಿಸುತ್ತಿದ್ದಾರೆ. ರೋಗಿಗಳು ಮತ್ತು ಅವರ ಸಂಬಂಧಿಕರು ವೈದ್ಯರ ಮೇಲೆ ಹಲ್ಲೆ ನಡೆಸಿದ ಹಲವು ಪ್ರಕರಣಗಳು ಈ ಹಿಂದೆ ನಡೆದಿವೆ. ಇಂತಹವು ಆಗಾಗ ನಡೆಯುತ್ತಲೇ ಇರುತ್ತವೆ. ಈಗ, ಅದರ ಜೊತೆ ಅತ್ಯಾಚಾರದಂತಹ ಅಪಾಯವೂ ಇದೆ ಎಂಬಂತಾಗಿದೆ. ಸ್ನಾತಕೋತ್ತರ ಟ್ರೈನಿಯಾಗಿದ್ದ ವೈದ್ಯೆಯ ಹತ್ಯೆ ಆರೋಪಿಯೊಬ್ಬನನ್ನು ಬಂಧಿಸಲಾಗಿದೆ. ಪ್ರಕರಣದ ತನಿಖೆಯನ್ನು ಸಿಬಿಐಗೆ ತಕ್ಷಣವೇ ವರ್ಗಾಯಿಸಬೇಕು ಎಂದು ಕಲ್ಕತ್ತಾ ಹೈಕೋರ್ಟ್ ಆದೇಶ ನೀಡಿದೆ. ಜೊತೆಗೆ, ಆಸ್ಪತ್ರೆಯ ಆಡಳಿತ ಮಂಡಳಿಯು ಘಟನೆಗೆ ಸ್ಪಂದಿಸಿದ ರೀತಿಯನ್ನು ತರಾಟೆಗೆ ತೆಗೆದುಕೊಂಡಿದೆ. ವೈದ್ಯ ಕಾಲೇಜಿನ ಪ್ರಾಂಶುಪಾಲರ ನಡವಳಿಕೆಯು: ಸಮರ್ಪಕವಾಗಿರಲಿಲ್ಲ ಎಂದು ಹೈಕೋರ್ಟ್ ಹೇಳಿದೆ.ತಮ್ಮ ಮೇಲೆ ಆಗುತ್ತಿರುವ ದೌರ್ಜನ್ಯವನ್ನು ಖಂಡಿಸಿ ವೈದ್ಯರು ಈ ಹಿಂದೆಯೂ ಪ್ರತಿಭಟನೆ ಮಾಡಿದ್ದರು.

> **ವೈದ್ಯರ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚಾಗಲು ಮತ್ತು ವೈದ್ಯರಲ್ಲಿ ಅಭದ್ರತೆಯ ಭಾವನೆ ಹೆಚ್ಚಲು ಹಲವು ಕಾರಣಗಳು ಇವೆ. ಆರೋಗ್ಯ ರಕ್ಷಣೆ ಕ್ಷೇತ್ರದಲ್ಲಿ ಸಿಬ್ಬಂದಿಯ ಕೊರತೆ ಸದಾ ಇರುತ್ತದೆ: ಬೇಕಾದಷ್ಟು ಸೌಲಭ್ಯಗಳು ಇರುವುದಿಲ್ಲ: ರೋಗಿಗಳ ಸಂಖ್ಯೆಯು ನಿರಂತರವಾಗಿ ಏರುತ್ತಲೇ ಇದೆ. ವೈದ್ಯರು ಕೆಲವೊಮ್ಮೆ ರಿಸ್ಕ್ ತೆಗೆದುಕೊಳ್ಳಲು ಹಿಂಜರಿಯುವುದುಂಟು; ಬೆದರಿಕೆ ಮತ್ತು ಕಿರುಕುಳದ ಭೀತಿಯಿಂದಾಗಿ ಅವರು ಹೀಗೆ ಮಾಡಬೇಕಾಗುತ್ತದೆ ಎಂದು ಐಎಂಎ ಹೇಳಿದೆ.**

ಹಿಂಸೆ ಕೊನೆಯಾಗಬೇಕು ಮತ್ತು ಅದನ್ನು ತಪ್ಪಿಸಲು ಇರುವ ಕ್ರಮಗಳು ಇನ್ನಷ್ಟು ಕಟ್ಟುನಿಟ್ಟಾಗಬೇಕು ಎಂದು ಆಗ್ರಹಿಸಿ ದೆಹಲಿಯಲ್ಲಿ ನವೆಂಬರ್‌ನಲ್ಲಿ 'ರಾಜಘಾಟ್ ಚಲೋ'ವನ್ನು ವೈದ್ಯರು ನಡೆಸಿದ್ದರು. ದೌರ್ಜನ್ಯಕ್ಕೆ ಸಂಬಂಧಿಸಿ ಪ್ರತಿ ತಿಂಗಳು ಕನಿಷ್ಠ ಒಂದಾದರೂ ಪ್ರತಿಭಟನೆಯನ್ನು ವೈದ್ಯರು ನಡೆಸುತ್ತಲೇ ಇದ್ದಾರೆ. ವೈದ್ಯರ ಮೇಲೆ ಹಿಂಸಾಚಾರ ಸಾಮಾನ್ಯವಾಗಿದೆ. ಎಂಬುದನ್ನು ಈ ಪ್ರತಿಭಟನೆಗಳು ಸೂಚಿಸುತ್ತವೆ. ಜೊತೆಗೆ, ಹಿಂಸೆ ತಡೆಯಲು ಈಗ ಇರುವ ವಿಧಾನಗಳು ಸಾಲುವುದಿಲ್ಲ ಎಂಬುದನ್ನೂ ಈ ಪ್ರತಿಭಟನೆಗಳು ತೋರಿಸುತ್ತವೆ. ಹಲವು ರಾಜ್ಯಗಳಲ್ಲಿ ಕಾಯ್ದೆ ತಂದು, ಆರೋಗ್ಯ ರಕ್ಷಣೆ ಸಿಬ್ಬಂದಿ ಮೇಲೆ ನಡೆಸುವ ದೌರ್ಜನ್ಯವನ್ನು ಜಾಮೀನುರಹಿತ ಅಪರಾಧ ಎಂದು ಪರಿಗಣಿಸಲಾಗಿದೆ. ದಂಡ ಮತ್ತು ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಲಾಗಿದೆ. ಹಾಗಿದ್ದರೂ ಈ ಕಾಯ್ದೆಗಳ ಅಡಿಯಲ್ಲಿ ಆರೋಪಿಗಳಿಗೆ ಶಿಕ್ಷೆಯಾಗಿದ್ದು ಬಹಳ ಕಡಿಮೆ. ಆರೋಗ್ಯ ಕ್ಷೇತ್ರದ ಸಿಬ್ಬಂದಿ ಮೇಲೆ ಹಲ್ಲೆ ನಡೆಯುವುದನ್ನು ತಡೆಯುವುದಕ್ಕಾಗಿ ಕೇಂದ್ರ ಸರ್ಕಾರವೇ ಕಾಯ್ದೆ ರೂಪಿಸಬೇಕು ಎಂದು ಆಗ್ರಹಿಸಿ ಭಾರತೀಯ ವೈದ್ಯಕೀಯ ಸಂಘವು (ಐಎಂಎ) ವೈದ್ಯರ ಸುರಕ್ಷತೆಯ ಅಭಿಯಾನವನ್ನು ಕಳೆದ ತಿಂಗಳು ನಡೆಸಿತ್ತು. 'ನಮ್ಮ ಆಸ್ಪತ್ರೆಗಳಲ್ಲಿ ಇರುವ ವಾತಾವರಣವು ಭೀತಿ ಮತ್ತು ಅಪನಂಬಿಕೆಯಿಂದ ತುಂಬಿದೆ' ಎಂದು ಐಎಂಎ ಹೇಳಿತ್ತು. ಕೆಲಸಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ವೈದ್ಯರ ವಿರುದ್ಧ ಕ್ರಿಮಿನಲ್ ಕ್ರಮ ಜರುಗಿಸುವುದನ್ನು ಐಎಂಎ ವಿರೋಧಿಸಿದೆ. ಚಿಕಿತ್ಸೆಯಲ್ಲಿ ಲೋಪಗಳು ಆಗಿರಬಹುದು ಎಂಬ ಭಾವನೆಯು ರೋಗಿಗಳು ಮತ್ತು ಅವರ ಸಂಬಂಧಿಕರು ಕೆರಳುವಂತೆ ಮಾಡುತ್ತದೆ. ಕಾಯ್ದೆಗಳ ಜಾರಿಯನ್ನು ಇನ್ನಷ್ಟು ಬಲಪಡಿಸಬೇಕಿದೆ. ಆದರೆ, ಆಸ್ಪತ್ರೆಗಳಲ್ಲಿನ ಹಿಂಸೆಯನ್ನು ತಡೆಯಲು ಅದಷ್ಟೇ ಸಾಕಾಗುವುದಿಲ್ಲ. ಕೋಲ್ಕತ್ತದಲ್ಲಿ ನಡೆದಿರುವ ಘಟನೆಯು ಚಿಕಿತ್ಸೆ ಅಥವಾ ನಡವಳಿಕೆಗೆ 'ದಲ್ಲ. ವೈದ್ಯರು ಮತ್ತು ಇತರ ವೈದ್ಯಕೀಯ ಸಿಬ್ಬಂದಿ ಅದರಲ್ಲೂ ಮುಖ್ಯವಾಗಿ ಮಹಿಳೆಯರ ಸುರಕ್ಷತೆಗೆ ಉಪಕ್ರಮಗಳನ್ನು ಹೆಚ್ಚಿಸಬೇಕಿದೆ ಎಂಬುದನ್ನು ಈ ಘಟನೆಯು ಸೂಚಿಸುತ್ತದೆ. ವೈದ್ಯಕೀಯ ಸಿಬ್ಬಂದಿಯು ಸುರಕ್ಷಿತ ವಾತಾವರಣದಲ್ಲಿ ಕೆಲಸ ಮಾಡುವುದಕ್ಕೆ ಸರ್ಕಾರ, ಆಸ್ಪತ್ರೆಯ ಆಡಳಿತ ಮಂಡಳಿ ಮತ್ತು ಸಮಾಜ ಒಟ್ಟಾಗಿ ಕೆಲಸ ಮಾಡಲೇಬೇಕಾದ ಅನಿವಾರ್ಯ ಇವೆ.

# ಶ್ರೀ ವರಮಹಾಲಕ್ಷ್ಮಿ ವ್ರತದ ಧಾರ್ಮಿಕ ಹಿನ್ನೆಲೆ

• **ಉದಯವಾಹಿನಿ, ವಿಶೇಷ**

2024 ರಲ್ಲಿ ಶ್ರೀ ವರಮಹಾಲಕ್ಷ್ಮಿ ವ್ರತವನ್ನು ಶ್ರಾವಣ ಶುಕ್ಲದ ಎರಡನೇ ಶುಕ್ರವಾರದಂದು, ಅಂದರೆ ಆಗಸ್ಟ್ 16 ರಂದು ಆಚರಿಸಲಾಗುವುದು. ಸರ್ವೇಸಾಮಾನ್ಯವಾಗಿ ಹಬ್ಬ, ಆಚರಣೆಗಳನ್ನು ವೈಯಕ್ತಿಕವಾಗಿ ಆಚರಿಸುವಾಗ ಅದು ವ್ರತವಾಗುತ್ತದೆ. ಒಟ್ಟಿಗೆ ಒಂದು ಕಡೆ ಸೇರಿ ಆಚರಿಸುವಾಗ ಅದು ಉತ್ಸವವಾಗುತ್ತದೆ.

ನಮ್ಮ ಅನೇಕ ವ್ರತಗಳು ಚಾತುರ್ಮಾಸದ ನಾಲ್ಕು ತಿಂಗಳಿನಲ್ಲಿ ಬರುತ್ತವೆ. ಅದರಲ್ಲಿಯೂ ಶ್ರಾವಣ ಮಾಸವು ಮಹತ್ವದ್ದಾಗಿದೆ. ಶ್ರಾವಣದಲ್ಲಿ ಬರುವಂತಹ ಶ್ರೀ ವರಮಹಾಲಕ್ಷ್ಮಿ ವ್ರತವು ಸುಮಂಗಲೆಯರಿಗೆ ಒಂದು ಮಹತ್ವದ ವ್ರತವಾಗಿದೆ. ಅಸುರರಿಂದ ರಕ್ಷಣೆಯಾಗಲು, ಸಕಲ ಸಂಪತ್ತು ಪ್ರಾಪ್ತವಾಗಲು ಪ್ರತಿಯೊಬ್ಬರೂ ಒಂದಲ್ಲ ಒಂದು ರೀತಿಯಲ್ಲಿ ಶಕ್ತಿಯ ಉಪಾಸನೆಯನ್ನು ಮಾಡುವುದು ಆವಶ್ಯಕವಾಗಿದೆ ಎಂದು ಶಾಸ್ತ್ರಗಳಲ್ಲಿ ಹೇಳಲಾಗಿದೆ. ಅದರಲ್ಲಿ ಶ್ರೀ ವರಮಹಾಲಕ್ಷ್ಮಿ ವ್ರತವೂ ಒಂದು.

ಹಿಂದೊಮ್ಮೆ ಪುರಾಣಕಾಲದಲ್ಲಿ ಕುಂಡಿನಾಪುರ ಎಂಬ ಸಂಪದ್ಭರಿತವಾದ ಊರಿನಲ್ಲಿ ಚಾರುಮತಿ ಎಂಬ ಓರ್ವ ಬ್ರಾಹ್ಮಣ ಸ್ತ್ರೀಯು ಅವಳ ಪತಿಯೊಂದಿಗೆ ವಾಸಿಸುತ್ತಿದ್ದಳು. ಮನೆಯಲ್ಲಿ ಕಡು ಬಡತನವಿದ್ದರೂ ಚಾರುಮತಿಯು ಭಕ್ತಿಯಲ್ಲಿ ಶ್ರೀಮಂತಳಾಗಿದ್ದಳು.

ಅವಳ ಅನನ್ಯ ಭಕ್ತಿಗೆ ಪ್ರಸನ್ನಳಾದ ಶ್ರೀ ವರಮಹಾಲಕ್ಷ್ಮಿ ದೇವಿಯು ಅವಳ ಕನಸಿನಲ್ಲಿ ದರ್ಶನವನ್ನು ನೀಡಿ ಮುಂದಿನ ವರವನ್ನಿತ್ತಳು. 'ಶ್ರಾವಣ ಮಾಸದ ಹುಣ್ಣಿಮೆಯ ಹತ್ತಿರದ ಶುಕ್ರವಾರದಂದು (ಅಂದರೆ 2 ನೇ ಶುಕ್ರವಾರದಂದು) ಯಾರು ಈ ವ್ರತವನ್ನು ಭಕ್ತಿ ಭಾವದಿಂದ ಆಚರಿಸಿ ಏನನ್ನೂ ಬೇಡಿದರೆ, ಅವರಿಗೆ ಅದು ಪ್ರಾಪ್ತವಾಗುತ್ತದೆ. ಆ ದಿನ ಸಂಜೆ ನಾನು ಭೂಲೋಕಕ್ಕೆ ಇಳಿದು ಬರುವೆನು. ಆ ಸಮಯದಲ್ಲಿ ಯಾರ ಮನೆಯ ಬಾಗಿಲಿನಲ್ಲಿ ದೀಪ ಬೆಳಗಿಸಿ ನನ್ನನ್ನು ಯಾರು ಭಕ್ತಿಯಿಂದ ಬರಮಾಡಿ ಕೊಳ್ಳುತ್ತಾರೆಯೋ ಅವರ ಮನೆಯಲ್ಲಿ ನಾನು ನೆಲೆಸಿ ಸಕಲ ಸಂಪತ್ತುಗಳನ್ನು ನೀಡುವೆನು' ಎಂದು ಹೇಳಿ ದೇವಿ ವರಮಹಾಲಕ್ಷ್ಮಿಯು ಅದೃಶ್ಯಳಾದಳು.



☛ ಉದಯವಾಹಿನಿ ಚಿತ್ರ

## ಶ್ರಾವಣ ಮಾಸವು ಮಹತ್ವ

## ಕೈಲಾಸದಲ್ಲಿ ಶಿವ ಪಾರ್ವತಿಯ ನಡುವಿನ ಸಂವಾದ

**ಪಾರ್ವತಿ ದೇವಿಯು ಶಿವನಲ್ಲಿ ಈ ರೀತಿ ಕೇಳುತ್ತಾಳೆ ಲೋಕದಲ್ಲಿ ಯಾವ ವ್ರತದಿಂದ ಎಲ್ಲಾ ಕಷ್ಟಗಳು ಪರಿಹಾರ ವಾಗಲು ಸಾಧ್ಯವಿದೆಯೋ, ಯಾವ ವ್ರತದಿಂದ ಸರ್ವ ಸಂಪತ್ತುಗಳು ಪ್ರಾಪ್ತವಾಗಲು ಸಾಧ್ಯವಿದೆಯೋ, ಅಂತಹ ವ್ರತವೇನಾದರೂ ಇದ್ದರೆ, ಆ ವ್ರತದ ಬಗ್ಗೆ ತಿಳಿಸುವ ದಯೆ ಮಾಡಿ' ಎಂದು. ಈ ಕೋರಿಕೆಯನ್ನು ಆಲಿಸಿದ ಶಂಕರನು ಪಾರ್ವತಿದೇವಿಗೆ ಮುಂದಿನ ಕಥೆಯನ್ನು ಹೇಳುತ್ತಾನೆ.**

ತನಗೆ ದೇವಿ ನೀಡಿದ ದರ್ಶನದ ಬಗ್ಗೆಯೂ, ವರದ ಬಗ್ಗೆಯೂ ಚಾರುಮತಿ ಬೆಳಗಾಗುತ್ತಲೇ ಊರಿನವರೆಲ್ಲರಿಗೂ ಹೇಳುತ್ತಾಳೆ. ಇವಳ ಮಾತನ್ನು ಕೇಳಿದ ಊರಿನವರು 'ಚಾರುಮತಿಗೆ ಭ್ರಮೆಯಾಗಿದೆ, ಬುದ್ಧಿ ಭ್ರಷ್ಟವಾಗಿದೆ' ಎಂದು ಹೇಳಿ ಹೀಯಾಳಿಸುತ್ತಾರೆ. ಆದರೆ ಅಂದು ಶ್ರಾವಣ ಮಾಸದ ಎರಡನೇ ಶುಕ್ರವಾರವಾಗಿತ್ತು. ಚಾರುಮತಿಯು ದೇವಿಯ ಆಜ್ಞೆಯಂತೆ ಮನೆಯನ್ನು ಶುಚಿಗೊಳಿಸಿ, ದೀಪ ಬೆಳಗಿಸಿ, ಮನೆಯನ್ನು ಯಥಾ ಶಕ್ತಿ ದೀಪಗಳಿಂದ ಅಲಂಕರಿಸಿ ಶ್ರೀ ದೇವಿಯ ಆಗಮನಕ್ಕೆ ಭಕ್ತಿ ಭಾವದಿಂದ ಕಾದುಕುಳಿತಳು. ಶ್ರೀ ದೇವಿಯು ಭೂಲೋಕಕ್ಕೆ ಇಳಿದಾಗ, ಇತರರ ಮನೆಯಲ್ಲಿ ಅವಳನ್ನು ಬರಮಾಡಿಕೊಳ್ಳಲು ದೀಪಗಳು ಇರಲಿಲ್ಲ. ಆದುದರಿಂದ ದೀಪಗಳಿಂದ ಝಗಝಗಿಸುವ ಭಕ್ತೆ ಚಾರುಮತಿಯ ಮನೆಗೆ ಬಂದು ದೇವಿಯು ಶಾಶ್ವತವಾಗಿ ಅಲ್ಲೇ ನೆಲೆಸುತ್ತಾಳೆ. ಶ್ರೀ ದೇವಿಯ ಆಗಮನದಿಂದ ಚಾರುಮತಿಯ ಮನೆಯ ಬಡತನವೆಲ್ಲ ದೂರವಾಗಿ ಅಲ್ಲಿ ಸುಖ-ಶಾಂತಿ-ನೆಮ್ಮದಿ ನೆಲೆಸುತ್ತವೆ, ಮನೆತನವು ಸಂಪದ್ಭರಿತವಾಗುತ್ತದೆ.

ಚಾರುಮತಿಯ ಮೇಲಾದ ಶ್ರೀ ದೇವಿಯ ಕೃಪೆಯನ್ನು ಕಂಡ ಊರಿನ ಇತರ ಸುಮಂಗಲೆಯರೂ ಕೂಡ ವರಮಹಾಲಕ್ಷ್ಮಿ ವ್ರತವನ್ನು ಆಚರಿಸಿ ಇಷ್ಟಾರ್ಥ ಸಿದ್ಧಿಗಳನ್ನು ಮಾಡಿಕೊಳ್ಳುತ್ತಾರೆ.ಇಂದಿಗೂ ಕೂಡ ಯಾರು ಶ್ರದ್ಧೆ-ಭಕ್ತಿಯಿಂದ ಶ್ರೀ ವರಮಹಾಲಕ್ಷ್ಮಿ ವ್ರತವನ್ನು ಆಚರಿಸುತ್ತಾರೆಯೋ ಅವರ ಮೇಲೆ ಶ್ರೀ ದೇವಿಯ ಕೃಪೆಯು ಖಂಡಿತವಾಗಿಯೂ ಇರುತ್ತದೆ.

# ಮಹಾರಾಜ ಟ್ರೋಫಿ ಪಂದ್ಯಾವಳಿಗೆ ತಂಡ ಪ್ರಕಟ

• **ಉದಯವಾಹಿನಿ, ಬೆಂಗಳೂರು**

ಭಾರತದ ಪ್ರಮುಖ ಅಗರಬತ್ತಿ ತಯಾರಕರು ಮತ್ತು ಮೈಸೂರು ವಾರಿಯರ್ಸ್ ತಂಡದ ಮಾಲೀಕರಾಗಿರುವ ಎನ್‌ಆರ್ ಗ್ರೂಪ್ ಸಂಸ್ಥೆ ಇಂದು ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 2024 ಪಂದ್ಯಾವಳಿಗೆ ತಮ್ಮ ತಂಡವನ್ನು ಪ್ರಕಟಿಸಿತು ಮತ್ತು ಇದೇ ಸಂದರ್ಭದಲ್ಲಿ ತಮ್ಮ ತಂಡದ ಜೆರ್ಸಿಯನ್ನು ಅನಾವರಣಗೊಳಿಸಿತು.

ಬೆಂಗಳೂರು ಮತ್ತು ಮೈಸೂರಿನಲ್ಲಿ ನಡೆದ ಪ್ರತಿಭಾನ್ವೇಷಣೆ ಕಾರ್ಯಕ್ರಮ ಹಾಗೂ ಕೆಎಸ್‌ಸಿಎ ಆಯೋಜಿಸಿದ್ದ ಆಟಗಾರರ ಹರಾಜು ಪ್ರಕ್ರಿಯೆ ಬಳಿಕ ತಂಡವು ಕಠಿಣ ತರಬೇತಿ ಕಾರ್ಯಕ್ರಮ ನಡೆಸಿತ್ತು. ಆ ಬಳಿಕವೇ ಬಲಿಷ್ಠ ತಂಡವನ್ನು ಆಯ್ಕೆ ಮಾಡಿದೆ. ಮಹಾರಾಜ ಟ್ರೋಫಿ 2024 ಪಂದ್ಯಾವಳಿಯು ಆಗಸ್ಟ್ 15 ರಿಂದ ಸೆಪ್ಟೆಂಬರ್ 1ರವರೆಗೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಪ್ರತಿಭಾನ್ವೇಷಣೆಯಲ್ಲಿ ಪ್ರತಿಭಾವಂತ ಆಟಗಾರರಾದ ಕಿಶನ್ ಬೇಡರೆ ಮತ್ತು ಗೌತಮ್ ಸಾಗರ್ ಆಯ್ಕೆಯಾಗಿದ್ದರು. ಅದರ ಹೊರತಾಗಿ ಸತತ ಮೂರನೇ ವರ್ಷ ಖ್ಯಾತ ಕ್ರಿಕೆಟ್ ಆಟಗಾರ ಕರುಣ್ ನಾಯರ್ ಅವರು ತಂಡದ ನಾಯಕರಾಗಿ ಆಯ್ಕೆಯಾಗಿದ್ದಾರೆ. ಅವರು ಈ ಹಿಂದೆ ಯಶಸ್ವಿಯಾಗಿ ತಂಡವನ್ನು ಮುನ್ನಡೆಸಿದ್ದು, ಆ ಅನುಭವವನ್ನು ಬಳಸಿಕೊಂಡು ತಂಡಕ್ಕೆ ಸೂಕ್ತ ಮಾರ್ಗದರ್ಶನ ನೀಡಲಿದ್ದಾರೆ. ತಂಡದ ಸಾಮರ್ಥ್ಯವನ್ನು ಹೆಚ್ಚಿಸುವ ಮತ್ತು ಸಮರ್ಥ ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಆರ್ ಎಕ್ಸ್ ಮುರಳೀಧರ್ ಆರ್ ಅವರನ್ನು ಪ್ರಧಾನ ಕೋಚ್ ಆಗಿ ನೇಮಿಸಲಾಗಿದೆ. ಸಹಾಯಕ ಕೋಚ್ ಆಗಿ ವಿಜಯ್ ಮದ್ಯಾಲ್ಕರ್ ಇರುತ್ತಾರೆ. ಬೌಲಿಂಗ್ ಕೋಚ್ ಆಗಿ ಆದಿತ್ಯ ಸಾಗರ್ ಮತ್ತು ತಂಡದ ವ್ಯವಸ್ಥಾಪಕರಾಗಿ ಸುರೇಶ್ ಎಂಆರ್ ಆಯ್ಕೆಯಾಗಿದ್ದಾರೆ. ತಂಡವನ್ನು ಅಭಿವೃದ್ಧಿ ಪಥದಲ್ಲಿ ಸಾಗಿಸುವ ಉದ್ದೇಶಕ್ಕೆ ಪೂರಕವಾಗಿ ಸಹಾಯಕ ಸಿಬ್ಬಂದಿ ತಂಡವನ್ನು ಆಯ್ಕೆ ಮಾಡಲಾಗಿದೆ.

## ಆಟಗಾರರ ಹರಾಜು ಪ್ರಕ್ರಿಯೆ



☛ ಉದಯವಾಹಿನಿ ಚಿತ್ರ

> **ಮೈಸೂರು ವಾರಿಯರ್ಸ್ ತಂಡದ ನಾಯಕ ಕರುಣ್ ನಾಯರ್ ಅವರು, ''ಮೈಸೂರು ವಾರಿಯರ್ಸ್ ತಂಡವನ್ನು ನಾಯಕನಾಗಿ ಮುನ್ನಡೆಸುವ ಅವಕಾಶ ಸಿಕ್ಕಿರುವುದು ನನಗೆ ದೊಡ್ಡ ಗೌರವವಾಗಿದೆ. ನಮ್ಮ ತಂಡ ಗೆಲುವು ಸಾಧಿಸುವುದನ್ನು ಎದುರು ನೋಡುತ್ತಿದ್ದೇನೆ'' ಎಂದು ಹೇಳಿದರು.**

ಮೈಸೂರು ವಾರಿಯರ್ಸ್ ತಂಡವನ್ನು ನಾಯಕ ಕರುಣ್ ನಾಯರ್ ಮುನ್ನಡೆಸುತ್ತಾರೆ. ಕೃಷ್ಣಪ್ಪ ಗೌತಮ್, ಸುಚಿತ್ ಜೆ, ಮನೋಜ್ ಭಾಂಡಗೆ, ಕಾರ್ತಿಕ್ ಸಿ ಎ, ವೆಂಕಟೇಶ್ ಎಂ, ಸುಮಿತ್ ಕುಮಾರ್, ವಿದ್ಯಾಧರ್ ಪಾಟೀಲ್, ಕಿಶನ್ ಬೇಡರೆ, ಎಂಡಿ ಸರ್ಫರಾಜ್ ಅಶ್ರಫ್, ಗೌತಮ್ ಮಿಶ್ರಾ, ಗೌತಮ್ ಸಾಗರ್, ಕಾರ್ತಿಕ್ ಎಸ್ ಯು, ದೀಪಕ್ ದೇವಾಡಿಗ, ಧನುಷ್ ಗೌಡ, ಜಾಸ್ಪರ್ ಇ ಜೆ, ಹರ್ಷಿಲ್ ಧರ್ಮಾನಿ, ಸಮಿತ್ ದ್ರಾವಿಡ್, ಸಮ್ಯನ್ ಶ್ರೀವಾಸ್ತವ, ಮತ್ತು ಪ್ರಸಿದ್ಧ್ ಕೃಷ್ಣ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಈ ಸಂದರ್ಭದಲ್ಲಿ ತಂಡದ ಜೆರ್ಸಿಯನ್ನು ಅನಾವರಣಗೊಳಿಸಲಾಯಿತು. ಮೈಸೂರು ವಾರಿಯರ್ಸ್ ತಂಡದ ಮಾಲೀಕರಾದ ಎನ್‌ಆರ್ ಗ್ರೂಪ್ ಮತ್ತು ಮೈಸೂರಿಗೆ ಗೌರವ ಸಲ್ಲಿಸುವ ಸಲುವಾಗಿ ನೀಲಿ ಮತ್ತು ಹಳದಿ ಬಣ್ಣದ ಸಂಯೋಜನೆಯ ಹೊಸ ಜೆರ್ಸಿಯನ್ನು ಪ್ರದರ್ಶಿಸಲಾಯಿತು. ಈ ಜೆರ್ಸಿ ತಂಡದ ಶೀರ್ಷಿಕೆ ಪ್ರಾಯೋಜಕರಾದ ಭಾರತದ ಪ್ರಮುಖ ಅಗರಬತ್ತಿ ಬ್ರಾಂಡ್ ಆಗಿರುವ ಸೈಕಲ್ ಪ್ಯೂರ್ ಅಗರಬತ್ತಿ, ಕ್ರೀಡಾ ಸುದ್ದಿ ವಾಹಿನಿ ಜೆ ಎಸ್ ಕೆ1 ಮತ್ತು ಮೈಸೂರಿನ ವಿಶ್ವಾಸಾರ್ಹ ಡೆವಲಪರ್ ಆಗಿರುವ ಸಂಕಲ್ಪ್ ಸಂಸ್ಥೆಯ ಲೋಗೋಗಳನ್ನು ಹೊಂದಿದೆ.

ತಮ್ಮ ತಂಡದ ಕುರಿತು ಮಾತನಾಡಿದ ಮೈಸೂರು ವಾರಿಯಸ್‌ರ್‌ನ ಮಾಲೀಕರು ಮತ್ತು ಸೈಕಲ್ ಪ್ಯೂರ್ ಅಗರಬತ್ತಿಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಅರ್ಜುನ್ ರಂಗಾ ಅವರು, ''ಇಂದು ನಿಮ್ಮೆದುರು ಮೈಸೂರು ವಾರಿಯರ್ಸ್ ತಂಡದ ಪ್ರತಿಭಾವಂತ ತಂಡವನ್ನು ಪ್ರಕಟಿಸಲು ಸಂತೋಷಗೊಂಡಿದ್ದೇನೆ. ಮಹಾರಾಜ ಟ್ರೋಫಿ ಪಂದ್ಯಾವಳಿಯಲ್ಲಿ ನಾವು ಜಯಗಳಿಸುವ ವಿಶ್ವಾಸ ಹೊಂದಿದ್ದೇವೆ'' ಎಂದು ಹೇಳಿದರು.

ಮೈಸೂರು ವಾರಿಯರ್ಸ್‌ನ ಮಾಲೀಕರು ಮತ್ತು ರಂಗಾಸನ್ಸ್ ಏರೋಸ್ಪೇಸ್‌ನ ಸಿಇಒ ಶ್ರೀ ಪವನ್ ರಂಗಾ ಅವರು, ''ಮಹಾರಾಜ ಟ್ರೋಫಿ ಶುರುವಾಗುತ್ತಿದೆ. ಈ ಸಂದರ್ಭದಲ್ಲಿ ನಮ್ಮ ತಂಡವನ್ನು ಪರಿಚಯಿಸಲು ಮತ್ತು ತಂಡದ ಜೆರ್ಸಿ ಅನಾವರಣ ಮಾಡಲು ಸಂತೋಷ ಪಡುತ್ತೇನೆ. ಈ ಬಾರಿ ನಾವು ಅಸಾಧಾರಣ ಪ್ರದರ್ಶನ ನೀಡಲಿದ್ದೇವೆ'' ಎಂದು ಹೇಳಿದರು.

ಪ್ರಧಾನ ತರಬೇತುದಾರರಾದ ಶ್ರೀ ಆರ್‌ಎಕ್ಸ್ ಮುರಳೀಧರ್ ಆರ್ ಅವರು, ''ಮೈಸೂರು ವಾರಿಯರ್ಸ್ ತಂಡದ ಪ್ರಧಾನ ಕೋಚ್ ಆಗುವ ಅವಕಾಶ ಸಿಕ್ಕಿರುವುದರಿಂದ ಖುಷಿ ಇದೆ. ಈ ಪಂದ್ಯಾವಳಿಯಲ್ಲಿ ನಮ್ಮ ತಂಡ ಸಂಪೂರ್ಣ ಸಾಮರ್ಥ್ಯ ಪ್ರದರ್ಶಿಸಿ ಗೆಲುವಿನತ್ತ ಮುನ್ನಡೆಯುವುದನ್ನು ನೋಡಲು ಉತ್ಸುಕನಾಗಿದ್ದೇನೆ'' ಎಂದು ಹೇಳಿದರು.

ಎನ್‌ಆರ್ ಗುಂಪಿನ ಕುರಿತು ಹೆಚ್ಚಿನ ಮಾಹಿತಿ ತಿಳಿಯಲು ದಯವಿಟ್ಟು ಭೇಟಿ ನೀಡಿ: http://www.nrgroup.co.in/

# ಸ್ವಾತಂತ್ರ್ಯ ದಿನಾಚರಣೆಯನ್ನು ಸಡಗರ ಸಂಭ್ರಮದಿಂದ ಆಚರಿಸಿ



☛ **ವಿ.ಎಂ.ಎಸ್.ಗೋಪಿ**

• **ಉದಯವಾಹಿನಿ, ವಿಶೇಷ**

ಬೆಂಗಳೂರಿನ ಬಹುತೇಕ ಮಳಿಗೆಗಳು ಸೇರಿದಂತೆ ವ್ಯಾಪಕ ಕೇಂದ್ರಗಳು ಸೇಲ್‌ಗಳ ಪೈಪೋಟಿಯಲ್ಲಿ ತೊಡಗಿವೆ. ದೊಡ್ಡ ದೊಡ್ಡ ಮಾಲ್‌ಗಳು ನವವಧುವಿನಂತೆ ಕಂಗೊಳಿಸುತ್ತ ಶೃಂಗಾರಗೊಂಡಿವೆ. ಒಂದು ಕೊಂಡರೆ ಇನ್ನೊಂದು ಉಚಿತ ಅಷ್ಟು ರಿಯಾಯಿತಿ ಇಷ್ಟು ರಿಯಾಯಿತಿ ಅದು ಕೊಂಡರೆ ಇದು ಫ್ರೀ.. ಎಂಬ ಟಿವಿ ಜಾಯಿರಾತು ಮತ್ತು ಬ್ಯಾನರ್‌ಗಳಿಂದ ಪ್ರಚಾರವಾಗುತ್ತಿವೆ. ಸ್ವಾತಂತ್ರ್ಯ ದಿನಾಚರಣೆ, ವರ ಮಹಾಲಕ್ಷ್ಮಿ ಹಬ್ಬದ ಸಡಗರ. ಪ್ರತಿ ವರ್ಷ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಡಗರ ಸಂಭ್ರಮದಿಂದ ನಾವು ಆಚರಿಸುತ್ತೇವೆ. ನಾವೆಲ್ಲರೂ ಭಾರತೀಯರು ಎಂದು ಜಾತಿ, ಮತ, ಭೇದವಿಲ್ಲದೆ ಸಂಭ್ರಮಿಸುವ ದಿನವಿದು 77 ವಸಂತಗಳನ್ನು ಪೂರೈಸಿ 78ನೇ ಸ್ವಾತಂತ್ರ್ಯೋತ್ಸವವನ್ನು ಆಚರಿಸುತ್ತಿದ್ದೇವೆ. ದಿನಾಚರಣೆಯ ದಿನದಂತ ದೇಶ ಭಕ್ತಿಯ ಹಾಡುಗಳು ಭಾಷಣಗಳು ಕಲೆ ಸಂಸ್ಕೃತಿ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಾರುವ ವಿವಿಧ ರೀತಿಯ ಕಾರ್ಯಕ್ರಮಗಳು ನಡೆಯುತ್ತವೆ. ನಾವೆಲ್ಲರೂ ಭಾರತೀಯರು ಧರ್ಮ, ಜಾತಿ ಭಾಷೆ ಕುಲಗೋತ್ರ ಬಡವ, ಶ್ರೀಮಂತರು, ವಿದ್ಯಾವಂತ, ಅವಿದ್ಯಾವಂತ ಎಂಬ ಭೇದವಿಲ್ಲದೇ ನಮ್ಮ ಭಾರತ ದೇಶವನ್ನು ಪ್ರತಿಯೊಬ್ಬ ಪ್ರಜೆಯು ಪ್ರೀತಿಸುತ್ತಾನೆ. ಪ್ರೀತಿಸಲೇಬೇಕು, ಏಕೆಂದರೆ ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಪ್ರಾಣಗಳನ್ನೇ ಬಲಿದಾನ ಮಾಡಿದ್ದಾರೆ. ಸ್ವಾತಂತ್ರ್ಯನಂತರ ನಾವು ಸಾಕಷ್ಟು ಪ್ರಗತಿಯನ್ನು ಸಾಧಿಸಿದ್ದೇವೆ. ಕೃಷಿ ವಿದ್ಯೆ, ಆರೋಗ್ಯ, ಕೈಗಾರಿಕೆ, ಕಲೆ, ಸಂಸ್ಕೃತಿ, ವಿಜ್ಞಾನ, ತಂತ್ರಜ್ಞಾನ, ಸಿನಿಮಾ, ಕ್ರೀಡೆ ಇತ್ಯಾದಿ ರಂಗದಲ್ಲಿ ನಮ್ಮ ದೇಶ ಮುಂದುವರದೆ ರಾಷ್ಟ್ರಗಳ ಶ್ರೇಣಿಯಲ್ಲಿ ಇದೆ. ಪ್ರಗತಿ ಪಥದಲ್ಲಿರುವ ಈ ದೇಶದ ಪ್ರಗತಿ ನಮ್ಮ ಪ್ರಗತಿ ಎಂಬ ಭಾವನೆ ಸದಾ ನಮ್ಮಲ್ಲಿರಬೇಕು. ಸತ್ಯಮೇವ ಜಯತೇ ಇದು ನಮ್ಮ ರಾಷ್ಟ್ರೀಯ ಧ್ಯೇಯವಾಕ್ಯ, ಈ ಧ್ಯೇಯವಾಕ್ಯದ ಪರಿಪಾಲನೆ ಎಷ್ಟಾಗುತ್ತಿದೆ. ಎಲ್ಲಾ ಕಡೆ ಸುಳ್ಳು ವ್ಯಾಪಿಸಿಕೊಂಡು ಬಿಟ್ಟಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಅನೇಕ ಮಹಿಳೆಯರು ಕೂಡ ಹೋರಾಡಿದ್ದಾರೆ. ದೇಶವನ್ನು ಗೌರವಿಸುವ ನಾವು ಮಹಿಳೆಯರನ್ನು ಗೌರವಿಸಬೇಕು. ತಾಯಿ ಎಂಬ ಗೌರವ, ಮಗಳೆಂಬ ವಾತ್ಸಲ್ಯ. ಅತ್ತೆ ಎಂಬ ಅಭಿಯಾನ. ಸೊಸೆ ಎಂಬ ಪ್ರೀತಿ ಸಹೋದರ ಸಹೋದರಿಯರ ಪ್ರೀತಿ ಭಾಂದವ್ಯ. ನಾವೆಲ್ಲರೂ ಒಂದೇ ನಮ್ಮೆಲ್ಲರ ಸೃಷ್ಟಿಕರ್ತನು ಒಬ್ಬನೆ ಆಗಿರುವಾಗ ನಾವೆಲ್ಲರೂ ಒಂದೇ ಸಹೋದರ ಸಹೋದರಿಯಾಗಿ ಒಂದೇ ದೇಶದ ನಿವಾಸಿಗಳಾಗಿ ಜಾತಿ ಮತ ಧರ್ಮ ಭಾಷೆ ಭೇದವಿಲ್ಲದೇ ನಾವು ಭಾರತೀಯರು ಎಂಬ ಒಗ್ಗಟ್ಟು, ಏಕತೆಯನ್ನು ಪ್ರದರ್ಶಿಸಬೇಕಾಗಿದೆ. ಸ್ವಾತಂತ್ರ್ಯ ದಿನಾಚರಣೆ ಎನ್ನುವುದು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದ ನಾವೆಲ್ಲರು ಒಂದೇ ಎಂಬ ಭಾವನೆಯನ್ನು ಗಟ್ಟಿಗೊಳಿಸೋಣ ಸ್ವಾತಂತ್ರ್ಯ ದಿನಾಚರಣೆಯ ಎಲ್ಲಾರು ಸಡಗರ ಸಂಭ್ರಮದಿಂದ ಆಚರಿಸೋಣ.






• **ಹಿಂದಿನ ಸಂಚಿಕೆಯಿಂದ**

ಧರ್ಮ ಅಥವಾ ಋಜುತ್ವವೊಂದೇ ಸಾವಿನ ನಂತರವೂ ಮಾನವನ ಜೊತೆಗೆ ಬರುವುದು; ಆದ್ದರಿಂದ ಮಾನವನು ಅದನ್ನೇ ಆಶ್ರಯಿಸಬೇಕು. ಯುಧಿಷ್ಠಿರ ಈ ಲೋಕದಲ್ಲಿ ಎಲ್ಲರಿಗೂ ಏಕಮಾತ್ರ ಆಶ್ರಯವಾದ, ನಮ್ಮ ಅಭಿಲಾಷೆಗಳನ್ನೆಲ್ಲ ಪೂರೈಸಬಲ್ಲ ಒಬ್ಬ ದೇವನಿರುವನೆ? ಯಾವ ಧರ್ಮವು ಎಲ್ಲಾ ಧರ್ಮಗಳಿಗಿಂತಲೂ ಮೇಲಾದುದು ಯಾವ ಮಂತ್ರವು ಮನುಷ್ಯನನ್ನು ಪುನರ್ಜನ್ಮದ ಬಂಧನದಿಂದ ಬಿಡಿಸಬಲ್ಲುದು ಭೀಷ್ಮ ದೇವರ ದೇವನಾದ ಕೃಷ್ಣನೇ ಲೋಕದೊಡೆಯನು. ಸಮಸ್ತ ಜೀವಿಗಳಲ್ಲೂ ಅವನೇ ಶ್ರೇಷ್ಠನು. ಅವನೇ ವಿಶ್ವವ್ಯಾಪಿಯು. ಅವನ ನಾಮಸ್ಮರಣೆಯ ಮೂಲಕ, ಅವನನ್ನು ಧ್ಯಾನಮಾಡುವುದರ ಮೂಲಕ, ಮನುಷ್ಯನು ದುಃಖವನ್ನು ದಾಟುವನು. ಕೃಷ್ಣನೇ ಶ್ರೇಷ್ಠಧರ್ಮವು. ಅವನೇ ಪರಾಶಕ್ತಿಯು. ಅವನೇ ಉತ್ಕೃಷ್ಟ ತಪಸ್ಸು. ಪವಿತ್ರರಲ್ಲಿ ಪವಿತ್ರನಾದ ಅವನೇ ಏಕಮಾತ್ರ ಆಶ್ರಯನು.

ಸೃಷ್ಟಿಯ ಆದಿ, ಅಂತ್ಯಗಳೂ ಅವನೇ. ಅವನೇ ಪರಬ್ರಹ್ಮವು. ಭೂತ ಭವಿಷ್ಯದ್ವರ್ತಮಾನಗಳಿಗೆ ಅಧಿಪತಿಯೂ ಪರಮಾತ್ಮನೂ ಆದ ಅವನಿಗೇ ಶರಣಾಗಿ ಅವನೊಡನೆ ನೀನು ಐಕ್ಯವಾಗು. ಯುಧಿಷ್ಠಿರನ ಪ್ರಶ್ನೆಗಳೆಲ್ಲ ಮುಗಿದವು. ಭೀಷ್ಮನು, ಮಗು, ನೀನು ಅಪೇಕ್ಷಿಸಿದುದನ್ನೆಲ್ಲ ನಿನಗೆ ತಿಳಿಸಿಕೊಟ್ಟಿರುವೆ. ನಿನ್ನ ರಾಜ್ಯಕ್ಕೆ ಹಿಂದಿರುಗಿ ಆಳ್ವಿಕೆಯನ್ನು ಪ್ರಾರಂಭಿಸು. ಈ ಲೋಕದಲ್ಲಿ ನಹುಷ ಹರಿಶ್ಚಂದ್ರ, ಯಯಾತಿ ಇತ್ಯಾದಿ ರಾಜರ ಆಳ್ವಿಕೆಯಲ್ಲಿದ್ದಂತೆಯೇ ನಿನ್ನ ಆಳ್ವಿಕೆಯಲ್ಲಿಯೂ ಪ್ರಜೆಗಳು ಸುಖವಾಗಿರುವರು. ನನ್ನ ಹಾರ್ದಿಕ ಶುಭ ಹಾರೈಕೆ ನಿನ್ನ ಮೇಲಿದೆ. ಈಗ ಹೋಗು; ಉತ್ತರಾಯಣ ಪುಣ್ಯಕಾಲ ಬಂದಾಗ ಮತ್ತೆ ಬಾ. ಅದಕ್ಕಾಗಿಯೇ ನಾನು ಕಾಯುತ್ತಿರುವೆ. ಆಗ ಮತ್ತೆ ಭೇಟಿಯಾಗೋಣ.''

ಯುಧಿಷ್ಠಿರನು ಭೀಷ್ಮನನ್ನು ನಮಸ್ಕರಿಸಿ ಮೃದುವಾಗಿ ಬೀಳ್ಕೊಂಡನು. ಎಲ್ಲರೂ ಹಸ್ತಿನಾಪುರಕ್ಕೆ ಹಿಂದಿರುಗಿದರು.

## ಅನುಶಾಸನಪರ್ವ

ಭೀಷ್ಮನಿಗೆ ಮಾನವಜನ್ಮದಿಂದ ಮುಕ್ತಿಕೊಡುವ ಆ ದಿನ ಬಂದೊದಗಿದ ಕೂಡಲೆ ಪಾಂಡವರು ಧೃತರಾಷ್ಟ್ರನನ್ನೂ ಕೃಷ್ಣನನ್ನೂ ಮುಂದಿಟ್ಟುಕೊಂಡು, ಗಂಧಪುಷ್ಪಧೂಪದೀಪಗಳನ್ನೂ ರತ್ನಾಭರಣಗಳನ್ನೂ ತೆಗೆದುಕೊಂಡು ರಣರಂಗದಲ್ಲಿ ಭೀಷ್ಮನು ಶರಶಯ್ಯೆಯಲ್ಲಿ ಮಲಗಿದ್ದೆಡೆಗೆ ನಡೆದರು. ಅವರೊಡನೆ ಕುಂತಿ ಗಾಂಧಾರಿ ದ್ರೌಪದಿ ಸಾತ್ಯಕಿ ವಿದುರ ಯುಯುತ್ಸು ಮೊದಲಾದವರೂ ಹೋದರು. ಭೀಷ್ಮನ ಸುತ್ತಲೂ ವ್ಯಾಸ ಪರಾಶರ ನಾರದರೇ ಮೊದಲಾದ ಋಷಿಗಳು ನೆರೆದಿದ್ದರು. ಯುಧಿಷ್ಠಿರನು ಅಜ್ಜನಿಗೆ ನಮಸ್ಕರಿಸಿ, ದೇವ, ನಾನು ಪಾಂಡವನಾದ ಯುಧಿಷ್ಠಿರ. ನನ್ನ ಸಹೋದರರನ್ನೂ ನಿನ್ನ ಪ್ರೀತಿಪಾತ್ರರನ್ನೂ ಕರೆತಂದಿದ್ದೇನೆ. ನಿನ್ನನ್ನು ಗೌರವಿಸಲು ಇಡೀ ಹಸ್ತಿನಾವತಿಯೇ ಇಲ್ಲಿಗೆ ಬಂದಿದೆ.

**ಮುಂದುವರಿಯುವುದು...**

# 78ನೇ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಹಾರ್ದಿಕ ಶುಭಾಶಯಗಳು



**ಕಲಾ ಸಾಹಿತ್ಯ**
**ಕೃಷ್ಣಪ್ಪ**
**ಲೇಖಕರು**
**ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು**

• **ಉದಯವಾಹಿನಿ, ವಿಶೇಷ**

ಭಾರತ ಬ್ರಿಟೀಷರ ದಾಸ್ಯ ಸಂಕೋಲೆಯಿಂದ ವಿಮುಕ್ತಿಯಾಗಿ ಸ್ವತಂತ್ರ ರಾಷ್ಟ್ರವಾಗಬೇಕೆಂಬ ಬಹಳ ವರ್ಷಗಳ ನಿರಂತರ ಸ್ವಾತಂತ್ರ್ಯ ಹೋರಾಟಗಾರರ ಕನಸನ್ನು ನೆನಸು ಮಾಡಿಕೊಳ್ಳುವ ಕಾಲ ಒದಗಿಬಂದದ್ದು ಅವಿಸ್ಮರಣೀಯ. ಆ ಮೇರೆಗೆ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಮುಂದಾಳತ್ವದಲ್ಲಿ ಇಡೀ ರಾಷ್ಟ್ರದ ಸ್ವಾತಂತ್ರ್ಯ ಹೋರಾಟಗಾರರು ಕಂಕಣಭದ್ಧರಾಗಿ ದೃಢವಾದ ಸಂಕಲ್ಪ, ಸ್ಥಿರವಾದ ನಿಶ್ಚಯ, ಸತತ ಪ್ರಯತ್ನ ಈ ಮೂರರ ಸಮ್ಮಿಲನದೊಂದಿಗೆ ಸ್ವಇಚ್ಛೆಯಿಂದ ಬ್ರಿಟೀಷರ ವಿರುದ್ಧ ಹೋರಾಟಕ್ಕೆ ಧುಮುಕಿದರು. ಸ್ವಾತಂತ್ರ್ಯ ಹೋರಾಟದಲ್ಲಿ ಸತ್ಯಾಗ್ರಹಗಳು, ಧರಣಿ,ಪ್ರತಿಭಟನೆ, ಚಳುವಳಿ, ಇತರೆ ಸ್ವಾತಂತ್ರ್ಯದ ಕಿಚ್ಚು ದೇಶದ ಉದ್ದಗಲಕ್ಕೂ ತೀವ್ರಗೊಂಡು ಇದರಿಂದ ಅನೇಕ ಮುಖಂಡರು, ಇತರರು ಬ್ರಿಟೀಷರಿಂದ ಕಾರಾಗೃಹವಾಸ, ಶಿಕ್ಷೆಯನ್ನೂ ಸಹ ಅನುಭವಿಸಿದರು. ಅವರುಗಳೆಲ್ಲರ ದೇಶಪ್ರೇಮ,ದೇಶಭಕ್ತಿ, ದೇಶಾಭಿಮಾನದಿಂದ ನಿರಂತರ ಸ್ವಾತಂತ್ರ್ಯ ಹೋರಾಟದ ಪ್ರತಿಫಲವಾಗಿ ತ್ಯಾಗ, ಬಲಿದಾನದಿಂದ ಆಗಸ್ಟ್ 15, 1947 ರಂದು ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕಿತು. ಅಂದು ಅವಿಸ್ಮರಣೀಯ ದಿನ, ಸುವರ್ಣಾಕ್ಷರದಲ್ಲಿ ಬರೆಯುವ ದಿನ. ಅಂದಿನಿಂದ ಭಾರತ ಸ್ವತಂತ್ರ ರಾಷ್ಟ್ರವಾಯಿತು.

ಪ್ರಮುಖವಾಗಿ ಸ್ವಾತಂತ್ರ್ಯಗಳಿಸಲು ಗಾಂಧೀಜಿಯವರ ಸತ್ಯ, ಧರ್ಮ ಮತ್ತು ಅಹಿಂಸೆ ಇವುಗಳು ಅವರ ಹೋರಾಟದ ಅಸ್ತ್ರಗಳನ್ನಾಗಿ ಬಳಸಿ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಹೊಸ ದಿಕ್ಕನ್ನು ರೂಪಿಸಿದರು.

ಇಂದು ನಾವು 78ನೇ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ಬಹಳ ಸಡಗರ-ಸಂಭ್ರಮದಿಂದ ಇಡೀ ರಾಷ್ಟ್ರಾದ್ಯಂತ ರಾಷ್ಟ್ರೀಯ ಹಬ್ಬವನ್ನು ಆಚರಿಸುವುದು ಭಾರತೀಯರಾದ ನಮ್ಮೆಲ್ಲರ ಆದ್ಯ ಕರ್ತವ್ಯ, ಜವಾಬ್ದಾರಿ ಹಾಗೂ ಹೊಣೆಗಾರಿಕೆ. ಮುಖ್ಯವಾಗಿ ಸ್ವಾತಂತ್ರ್ಯ ಸಂಗ್ರಾಮ ಹಾಗೂ ನಿರಂತರ ಸ್ವಾತಂತ್ರ್ಯ ಹೋರಾಟದಲ್ಲಿ ತ್ಯಾಗ, ಬಲಿದಾನ ಮಾಡಿದ ಧೀರ ಹಾಗೂ ಪ್ರಾಮಾಣಿಕ ದೇಶ ಭಕ್ತರಿಗೆ ಹಾಗೂ ದೇಶಪ್ರೇಮಿಗಳಿಗೆ ಸ್ಮರಿಸಿ, ನೆನೆಯುತ್ತಾ ಅವರೆಲ್ಲರಿಗೂ ಗೌರವ ಹಾಗೂ ನಮನ ಸಲ್ಲಿಸುವುದು ಹಾಗೂ ಅವರ ದೇಶ ಪ್ರೇಮದ ಹಾದಿಯಲ್ಲಿ ನಡೆಯಲು ಪ್ರತಿಜ್ಞೆ, ಸಂಕಲ್ಪ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಭಾರತದ ಸ್ವಾತಂತ್ರ್ಯ ದಿನಾಚರಣೆಯನ್ನು ಆಗಸ್ಟ್ 15 ಕ್ಕೆ ಮಾತ್ರ ಸೀಮಿತವಾಗಿರಬಾರದು. ದಿನನಿತ್ಯವೂ ಸ್ವಾತಂತ್ರ್ಯ ನಿತೋತ್ಸವವಾಗಬೇಕು ಆ ದೇಶಾಭಿಮಾನದ ಮನೋಭಾವ ಭಾರತೀಯರೆಲ್ಲಾ ಧರ್ಮದವರ ಹೃದಯದಲ್ಲಿ ಬರಬೇಕು. ಆ ಎದೆಗಾರಿಕೆ,ಆತ್ಮ, ಹೃದಯ, ಮನಃಪೂರ್ವಕವಾಗಿ ಬರಬೇಕು. ಸ್ವಾತಂತ್ರ್ಯ,ಸಮಾನತೆ, ಭ್ರಾತೃತ್ವ, ಸಂವಿಧಾನ,ರಾಷ್ಟ್ರಗೀತೆ ಮತ್ತು ರಾಷ್ಟ್ರಧ್ವಜ ಇವುಗಳು ರಾಷ್ಟ್ರದ ನಿಜವಾದ ಸ್ವತ್ತು ಹಾಗೂ ಶಕ್ತಿ. ಭಾರತೀಯರೆಲ್ಲರೂ ರಾಷ್ಟ್ರಧ್ವಜ ಮತ್ತು ರಾಷ್ಟ್ರಗೀತೆಯ ಮಹತ್ವವನ್ನು ಅರಿಯುವುದು ಮುಖ್ಯ.



☛ ಉದಯವಾಹಿನಿ ಚಿತ್ರ

ರಾಷ್ಟ್ರಗೀತೆಯ ಮಹತ್ವ ಅಖಂಡ ಭಾರತದ ಎಲ್ಲಾ ಜನ, ಮನ,ಗಣ,ಜಾತಿ,ಧರ್ಮ, ಭಾಷೆ,ಗಡಿ,ನದಿ,ಪ್ರಕೃತಿ, ಪರ್ವತ,ಕಾಡು,ಸಂಸ್ಕೃತಿ ಒಳಗೊಂಡ ರಾಷ್ಟ್ರಗೀತೆ.

ರಾಷ್ಟ್ರಗೀತೆಯನ್ನು ರಚಿಸಿದವರು ನೊಬೆಲ್ ಪ್ರಶಸ್ತಿ ಪುರಸ್ಕೃತರು ರವೀಂದ್ರನಾಥ ಟಾಗೂರ್ ರವರು. ವಂದೇ ಮಾತರಂ ಎಂಬ ದೇಶಭಕ್ತಿ ಗೀತೆಯನ್ನು ರಚಿಸಿದವರು ಬಂಕಿಮ ಚಂದ್ರ ಚಟರ್ಜಿರವರು.

ಇವುಗಳನ್ನು ಸದಾ ಗೌರವಿಸುವ,ರಕ್ಷಿಸುವ, ಸ್ವತಂತ್ರವಾಗಿ ಬದುಕುವ ಸಮನಾದ ಹಕ್ಕು,ಸ್ವತಂತ್ರ,ಸಮಾನತೆ ಎಲ್ಲಾ ಧರ್ಮವನ್ನೊಳಗೊಂಡ ಭಾರತೀಯರೆಲ್ಲರಿಗೂ ಸಂವಿಧಾನ ದೊರೆಕಿಸಿಕೊಟ್ಟಿದೆ. ಸಂವಿಧಾನ, ಪ್ರಜಾಪ್ರಭುತ್ವ ಈ ದೇಶದಲ್ಲಿ ಉಳಿಯಬೇಕಾದರೆ ಕಾಲ, ದೇಶ, ಜಾತಿ, ಧರ್ಮ, ಭಾಷೆ, ಪಕ್ಷ ಮೀರಿ ನಾವೆಲ್ಲರೂ ಒಂದಾಗಿ ಬಾಳಬೇಕು ಆಗ ಸ್ವಾತಂತ್ರ್ಯಕ್ಕೆ ಒಂದು ಅರ್ಥ ಸಿಗುತ್ತದೆ. ಯಾವುದೇ ಕಾರಣಕ್ಕೂ ಸಹ ಜಾತಿ ಧರ್ಮದಿಂದ ದೇಶವನ್ನ ವಿಭಜನೆ ಮಾಡಬಾರದು ಕಾರಣ ಈ ದೇಶವು ಸರ್ವ ಜನಾಂಗದ ಶಾಂತಿಯ ತೋಟವಾಗಿ ಇತಿಹಾಸ ಪುಟ ಸೇರಿರುವ ಜೊತೆಗೆ ಜಗತ್ತಿನ ಭೂಪಟದಲ್ಲಿ ಶಾಶ್ವತವಾಗಿ ಜಾಗ ಮಾಡಿಕೊಂಡಿದೆ ಇದರ ಅಭದ್ರತೆಗೆ ಯಾರೂ ಕೂಡ ಕೈಹಾಕಬಾರದು. ಸೂರ್ಯ ಚಂದ್ರ ಎಷ್ಟು ಸತ್ಯವೋ ಅಷ್ಟೇ ಸತ್ಯ ಸಂವಿಧಾನ ಮತ್ತು ಪ್ರಜಾಪ್ರಭುತ್ವ. ಪ್ರಾಮಾಣಿಕ ಸ್ವಾತಂತ್ರ್ಯ ಹೋರಾಟಗಾರರು ಪರಕೀಯರ ಗುಲಾಮಗಿರಿ ಯಿಂದ ಬಿಡಿಸಿಕೊಂಡು ಭಾರತಕ್ಕೆ ಸ್ವತಂತ್ರ ತಂದುಕೊಟ್ಟರು,ಆದರೆ ಜಾತಿ,ಧರ್ಮ,ಪಕ್ಷ,ಮತ, ಪಂಗಡ, ಅಸ್ಪೃಶ್ಯತೆ, ಮತಾಂದತೆ, ಧರ್ಮಾಂಧತೆಯ ಸಂಕೋಲೆಯಿಂದ ದೇಶವು ನಲುಗಿ, ನರಳುತ್ತಾ ಸ್ವತಂತ್ರವಾಗಿ ಬದುಕಲು ಸ್ವತಂತ್ರ ಸಿಕ್ಕಿಲ್ಲ, ಎಲ್ಲರೂ ಒಂದಾಗಿ ಬಾಳಲು ಸಾಧ್ಯವಾಗುತ್ತಿಲ್ಲ. ಸ್ವಾತಂತ್ರ್ಯ ಸಿಕ್ಕಿ ಇಲ್ಲಿಗೆ 77 ವರ್ಷವಾದರೂ ಅದರಿಂದ ಇನ್ನೂ ಸಹ ವಿಮುಕ್ತಿ ಕಾಣಲಿಲ್ಲ. ದೇಶದಲ್ಲಿ ಬಡತನ, ದಾರಿದ್ರ್ಯ,ನಿರುದ್ಯೋಗ, ಹಸಿವು ಇನ್ನೂ ಅನೇಕ ಜ್ವಲಂತ ಸಮಸ್ಯೆಗಳು ತಾಂಡವಾಡುತ್ತಾ ಎಷ್ಟೋ ಕುಟುಂಬಗಳಿಗೆ ಸ್ವಾತಂತ್ರ್ಯ ಸಿಗದೇ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ. ಕೈಗಾರಿಕೋದ್ಯಮಿಗಳಿಗೆ, ವಾಣಿಜ್ಯೋದ್ಯಮಿಗಳಿಗೆ, ದೊಡ್ಡ ದೊಡ್ಡ ಬಂಡವಾಳ ಗಾರರಿಗೆ, ದೊಡ್ಡ ದೊಡ್ಡ ಉದ್ಯಮಿಗಾರರಿಗೆ, ತೆರಿಗೆ ವಂಚನೆ ಮಾಡುವವರಿಗೆ, ಭ್ರಷ್ಟಾಚಾರಿಗಳಿಗೆ, ತಪ್ಪು ಮಾಡಿದ ದೇಶದ್ರೋಹಿಗಳ ಹಾಗೂ ವಂಚನೆ, ಸುಳ್ಳು, ಮೋಸ, ನಂಬಿಕೆ ದ್ರೋಹ ಹಾಗೂ ಶಿಕ್ಷೆಯಿಂದ ತಪ್ಪಿಸಿಕೊಂಡವರಿಗೆ ಮಾತ್ರ ಈ ದೇಶದಲ್ಲಿ ಸ್ವತಂತ್ರ ಸಿಕ್ಕಿದೆ ಎಂಬುದು ಕೆಲವು ಸಜ್ಜನರ ಅಭಿಪ್ರಾಯವಾಗಿದೆ. ಇನ್ನೂ ಮಿಕ್ಕವರ ಪರಿಸ್ಥಿತಿ ಕೇವಲ ಮರೀಚಿಕೆಯಾಗಿದೆ. ಆದರೆ ದೇಶದಲ್ಲಿ ಒಗ್ಗಟ್ಟು, ಐಕ್ಯತೆ ,ಭಾವೈಕ್ಯತೆ, ಭ್ರಾತೃತ್ವ, ರಾಷ್ಟ್ರಾಭಿಮಾನ, ದೇಶಭಕ್ತಿ, ದೇಶಪ್ರೇಮ ಎಲ್ಲಾ ಧರ್ಮದ ಜನಾಂಗದವರಲ್ಲಿ ತಾರತಮ್ಯವಿದೆ, ಕೀಳರಮೆಇದೆ, ಅಸಮಧಾನವಿದೆ ಅನುಮಾನವಿದೆ ಎಂತಹ ವಿಪರ್ಯಾಸ. ಆಗಸ್ಟ್ 15, ಜನವರಿ 26 ರಂದು ಮಾತ್ರ ನಾವುಗಳು ಭಾರತೀಯರು ಎಂದು ವೇದಿಕೆಯಲ್ಲಿ ಗಣ್ಯರು ಹೇಳುವುದು ಸಮಾರಂಭದ ವೇದಿಕೆಗೆ ಮಾತ್ರ ಸೀಮಿತ. ಇನ್ನೂ ಮಿಕ್ಕ ದಿನಗಳು ಜಾತಿ, ಧರ್ಮ, ಪಕ್ಷ ಭಾಷೆಯ ಸಂಕೋಲೆಯಿಂದ ಬದುಕುತ್ತಾ ಅದರಿಂದ ವಿಮುಕ್ತಿಯಾಗಿ ಸ್ವತಂತ್ರರಾಗಿಲ್ಲ ಎಂತಹ ವಿಪರ್ಯಾಸ. ಭಾರತ ದೇಶವು ಶಕ್ತಿ ಬಲಿಷ್ಠ ರಾಷ್ಟ್ರವಾಗಲು ಅಭಿವೃದ್ಧಿಯತ್ತ ದಾಪುಗಾಲು ಹಾಕಿ ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳುವ ಸ್ಥಾನಮಾನವನ್ನು ಕಾಪಾಡಿಕೊಳ್ಳಬೇಕಾಗಿದೆ. 78 ನೇ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ರಾಷ್ಟ್ರೀಯ ನಾಡ ಹಬ್ಬದ ಪ್ರಯುಕ್ತ ನಾಡಿನ ಸಮಸ್ತ ಸರ್ವರಿಗೂ ಸ್ವಾತಂತ್ರ್ಯ ದಿನಾಚರಣೆಯ ಈ ಅಮೃತ ಮಹೋತ್ಸವದ ಹಾರ್ದಿಕ ಶುಭಾಶಯಗಳು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ನಮಗೆ ಸ್ಪೂರ್ತಿಯಾಗಲಿ, ಅವರ ರಾಷ್ಟ್ರಾಭಿಮಾನ, ರಾಷ್ಟ್ರಭಕ್ತಿ, ರಾಷ್ಟ್ರಪ್ರೇಮದ ಹಾದಿಯಲ್ಲಿ ಹೆಜ್ಜೆ ಹಾಕೋಣ. ಭಾರತ ದೇಶವು ಭವಿಷ್ಯದಲ್ಲಿ ಜಗತ್ತಿಗೆ ಮಾದರಿಯಾಗಿ ಕಂಗೊಳಿಸಲಿ,ಪ್ರಜ್ವಲಿಸಲಿ, ಪ್ರಕಾಶಮಾನವಾಗಿ ಬೆಳಗಲಿ.

**ಭಾರತ್ ಮಾತಾ ಕೀ ಜೈ.**
**ಸತ್ಯಂ-ಶಿವಂ-ಸುಂದರಂ**
**ವಂದೇ ಮಾತರಂ.**

## ರಾಷ್ಟ್ರಧ್ವಜದ ಸಂಕೇತ

- **ಕೇಸರಿ: ಸ್ಥೈರ್ಯ, ತ್ಯಾಗ,**
- **ಬಿಳಿ: ಸತ್ಯ ಮತ್ತು ಶಾಂತಿ,**
- **ಹಸಿರು: ಭರವಸೆ, ಶೌರ್ಯ, ಸಮೃದ್ಧಿ,**
- **ಅಶೋಕ ಚಕ್ರ: ಧರ್ಮದ ಸಂಕೇತ ಈ ರೀತಿಯ ರಾಷ್ಟ್ರೀಯ ಮಹತ್ವವನ್ನು ಸೂಚಿಸುತ್ತದೆ.**

## ದಿನ ಭವಿಷ್ಯ

| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಹಠಾತ್ ಪ್ರವೃತ್ತಿ ನಿಮಗೆ ಗಂಭೀರವಾದ ಆರೋಗ್ಯದ ಸಮಸ್ಯೆಗಳನ್ನು ಉಂಟುಮಾಡಬಹುದು. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ.

**ವೃಷಭ** ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ. ಇಂದು ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು. ಏಕೆಂದರೆ ನಿಮ್ಮ ಪ್ರೇಮಿ ಅತ್ಯಂತ ಅನಿರೀಕ್ಷಿತ ಮನಸ್ಥಿತಿಯನ್ನು ಹೊಂದಿರುತ್ತಾರೆ.

**ಮಿಥುನ** ಸಂತೋಷದ ಸುದ್ದಿ ಪಡೆಯುವ ಸಾಧ್ಯತೆಯಿದೆ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು. ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ.

**ಕರ್ಕಾಟಕ** ಯಾವುದಾದರೂ ಸೃಜನಾತ್ಮಕ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸೋಮಾರಿಯಾಗಿ ಕುಳಿತುಕೊಳ್ಳುವ ನಿಮ್ಮ ಅಭ್ಯಾಸ ಮಾನಸಿಕ ಶಾಂತಿಗೆ ಮಾರಣಾಂತಿಕವಾಗಬಹುದು.

**ಸಿಂಹ** ನಿಮ್ಮ ಕೋಪ ಕಡ್ಡಿಯನ್ನು ಗುಡ್ಡ ಮಾಡಬಹುದು. ಇದು ನಿಮ್ಮ ಕುಟುಂಬದ ಸದಸ್ಯರ ಅಸಮಾಧಾನಕ್ಕೆ ಕಾರಣವಾಗುತ್ತದೆ. ಕೋಪವನ್ನು ನಿಯಂತ್ರಣದಲ್ಲಿಡುವುದನ್ನು ಕಲಿತ ಆ ಮಹಾನ್ ಆತ್ಮಗಳೇ ಅದೃಷ್ಟಶಾಲಿಗಳು.

**ಕನ್ಯಾ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಇಂದು ಕೆಲಸ ಒತ್ತಡ ಮತ್ತು ಸುಸ್ತಿನಿಂದ ಕೂಡಿರುತ್ತದೆ.

**ತುಲಾ** ಪ್ರಣಯ ನಿಮ್ಮ ಪ್ರೀತಿಪಾತ್ರರು ಇಂದು ಅತಿಯಾದ ಬೇಡಿಕೆಗಳನ್ನಿಡುವುದರಿಂದ ಪ್ರಣಯದಲ್ಲಿ ಹಿನ್ನಡೆಯಿರುತ್ತದೆ. ನೀವು ಪ್ರಭಾವಿ ಜನರ ಜೊತೆ ಓಡಾಡಿದಲ್ಲಿ ನಿಮ್ಮ ವೃತ್ತಿಯಲ್ಲಿ ಭರ ಬೆಳವಣಿಗೆ ಸಾಧಿಸುತ್ತೀರಿ.

**ವೃಶ್ಚಿಕ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ.

**ಧನಸ್ಸು** ಬಾಕಿಯಿರುವ ಯೋಜನೆಗಳು ಅಂತಿಮ ರೂಪ ಪಡೆಯುತ್ತವೆ. ಯಾವುದೇ ಹೊಸ ಕೆಲಸವನ್ನು ಪ್ರಾರಂಭಿಸುವ ಮೊದಲು ಅದರ ಬಗ್ಗೆ ಅನುಭವಿ ಜನರೊಂದಿಗೆ ಮಾತನಾಡಬೇಕು.

**ಮಕರ** ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು. ಹೇಗಾದರೂ, ನಿಮ್ಮ ಸಂಗಾತಿ ತನ್ನ ಬುದ್ಧಿವಂತಿಕೆಯನ್ನು ತೋರಿಸುತ್ತ ನಿಮ್ಮನ್ನು ಶಾಂತಗೊಳಿಸುತ್ತಾರೆ.

**ಕುಂಭ** ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು. ನೀವು ಯಾವಾಗಲೂ ಪರಸ್ಪರರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವವಿರುವುದಿಲ್ಲ.

**ಮೀನ** ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ.

# ದಂಡಗುಂಡ ಬಸವಣ್ಣ ದೇವಸ್ಥಾನದ ಜಾತ್ರಾಮಹೋತ್ಸವ ನಿಮಿತ್ತ ಶಾಂತಿ ಸಭೆ

## • 19ರಂದು ರಥೋತ್ಸವ: ಅದ್ದೂರಿ ಜಾತ್ರಾ ಮಹೋತ್ಸವ ಆಚರಣೆಗೆ ಟ್ರಸ್ಟ್ ನಿರ್ಧಾರ: ಚಂದ್ರಶೇಖರ ಅವಂಟಿ

• ಉದಯವಾಹಿನಿ ಚಿತ್ತಾಪುರ

ಆ.19ರಂದು ತಾಲ್ಲೂಕಿನ ದಂಡಗುಂಡ ಗ್ರಾಮದ ಬಸವಣ್ಣ ದೇವಸ್ಥಾನದ ಜಾತ್ರಾಮಹೋತ್ಸವ ಅದ್ದೂರಿಯಾಗಿ ವಿಜೃಂಭಣೆಯಿಂದ ನಡೆಯಲಿದೆ ಎಂದು ದೇವಸ್ಥಾನದ ಟ್ರಸ್ಟ್ ಸಮಿತಿ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ಅವಂಟಿ ಹೇಳಿದರು.

**ಸೂಕ್ತ ಬಂದೋಬಸ್ತ್ ಅಗತ್ಯ**

ತಾಲ್ಲೂಕಿನ ದಂಡಗುಂಡ ಬಸವಣ್ಣ ದೇವಸ್ಥಾನದ ಯಾತ್ರಿ ನಿವಾಸದಲ್ಲಿ ಜಾತ್ರಾಮಹೋತ್ಸವ ಅಂಗವಾಗಿ ನಡೆದ ಶಾಂತಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಶ್ರಾವಣ ಮಾಸದ ಪವಿತ್ರವಾದ ದಿನ ನಡುವಿನ ಸೋಮವಾರ ದಿವಸ ಪ್ರತಿ ವರ್ಷ ದಂಡಗುಂಡ ಬಸವಣ್ಣನ ಜಾತ್ರೆ ಅದ್ದೂರಿಯಾಗಿ ನಡೆಯುತ್ತದೆ ಎಂದರು.

ಕಳೆದ ವಾರ ಭಾನುವಾರ ಅಮವ್ಯಾಸೆಯಂದು ಇಲ್ಲಿನ ದೇವಸ್ಥಾನದಲ್ಲಿ ಸುಮಾರು 20 ಸಾವಿರಕ್ಕೂ ಹೆಚ್ಚು ಭಕ್ತರು ಸೇರಿ ದರ್ಶನ ಪಡೆದರು. ಇದರಿಂದಾಗಿ ಜಾತ್ರೆಗೆ 2 ಲಕ್ಷಕ್ಕೂ ಹೆಚ್ಚು ಭಕ್ತರು ಸೇರುವ ಸಾಧ್ಯತೆ ಇದೆ. ಆದ್ದರಿಂದ ಜಾತ್ರೆ ಸುಗಮ ನಡೆಯಲು ಸೂಕ್ತ ಬಂದೋಬಸ್ತ ಅಗತ್ಯವಿದೆ ಎಂದು ಹೇಳಿದರು. ಡಿವೈಎಸ್ಪಿ ಶಂಕರಗೌಡ ಪಾಟೀಲ್ ಮಾತನಾಡಿ, ತಾಲ್ಲೂಕಿನ ದಂಡಗುಂಡ ಗ್ರಾಮದ ಬಸವಣ್ಣ ದೇವಸ್ಥಾನದ ಜಾತ್ರಾಮಹೋತ್ಸವ ಶಾಂತಿಯುತವಾಗಿ ಆಚರಣೆಗೆ ಜನರ ಸಹಕಾರ ಅಗತ್ಯವಿದೆ ಎಂದು ಹೇಳಿದರು.

ನೂರಾರು ವರ್ಷಗಳಿಂದ ಈ ಜಾತ್ರೆ ಅದ್ದೂರಿಯಾಗಿ ಹಾಗೂ ಶಾಂತಿಯುತವಾಗಿ ನಡೆದಿದೆ.

ಯಾವುದೇ ಅಹಿತಕರ ಘಟನೆ ಅವಕಾಶ ನೀಡದೇ ಈ ಬಾರಿಯು ಜಾತ್ರೆಯನ್ನು ಯಶಸ್ವಿಗೊಳಿ ಸೋಣ ಎಂದು ಹೇಳಿದರು.

ಜಾತ್ರೆಗೆ ರಾಜ್ಯ ಸೇರಿದಂತೆ ದೂರದ ವಿವಿಧ ರಾಜ್ಯಗಳಿಂದ ಭಕ್ತರು ಆಗಮಿಸುತ್ತಾರೆ.

ಜಾತ್ರೆಯಲ್ಲಿ ಮುಖ್ಯವಾಗಿ ಸಮಸ್ಯೆಯಾಗುವುದು ಪಾರ್ಕಿಂಗ್ ವಿಚಾರ. ಸುಮಾರು 4-5 ಕಿ.ಮಿ ವರಗೆ ಟ್ರಾಫಿಕ್ ಇರುತ್ತೆ, ಸುಗಮ ಸಂಚಾರಕ್ಕೆ ವಾಹನಗಳಿಗೆ ಉತ್ತಮ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗುವುದು. ಪಾರ್ಕಿಂಗ್ ಸ್ಥಳದಲ್ಲಿಯೇ ವಾಹನಗಳು ಪಾರ್ಕಿಂಗ್ ಮಾಡಬೇಕು.

ಸಿಕ್ಕ ಸಿಕ್ಕಲೇ ವಾಹನಗಳನ್ನು ನಿಲ್ಲಿಸಿದರೇ, ಸುಗಮ ಸಂಚಾರಕ್ಕೆ ತೊಂದರೆಯಾಗುವುದು. ಅದಕ್ಕೆ ಯಾರು ವಾಹನಗಳನ್ನು ಬೇಕಾಬಿಟ್ಟಿಯಾಗಿ ನಿಲುಗಡೆ ಮಾಡಬಾರದು. ಬೇಕಾಬಿಟ್ಟಿಯಾಗಿ ನಿಲ್ಲಿಸಿದರೇ ದಂಡ ವಿಧಿಸಲಾಗುವುದು ಎಂದು ಎಚ್ಚರ ನೀಡಿದರು.

ದೇವಸ್ಥಾನದ ದುರಸ್ತಿ ಕಾರ್ಯ ನಡೆದಿದೆ. ದೇವಸ್ಥಾನ ಆಡಳಿತ ಮಂಡಳಿಯವರು ಪುರುಷರಿಗೆ, ಮಹಿಳೆಯರಿಗೆ ಪ್ರತ್ಯೇಕವಾದ ಸರದಿಯ ಸಾಲು ವ್ಯವಸ್ಥೆ ಮಾಡಿದರೇ ಅಲ್ಲಿ ಮಹಿಳಾ ಪೊಲೀಸ್



ಉದಯವಾಹಿನಿ ಚಿತ್ರ

ಸಿಬ್ಬಂದಿಯ ನಿಯೋಜನೆ ಮಾಡಲಾಗುವದು ಎಂದು ತಿಳಿಸಿದರು.

ದೂರದ ಜಿಲ್ಲೆ, ಬೇರೆ ರಾಜ್ಯಗಳಿಂದ ಬಂದ ಭಕ್ತರನ್ನು ಇಲ್ಲಿನ ಜನರು ಪ್ರೀತಿ ವಿಶ್ವಾಸದಿಂದ ನೋಡಿ ನೀರು, ಕುಳಿತುಕೊಳ್ಳಲು ವ್ಯವಸ್ಥೆ ಕಲ್ಪಿಸಬೇಕು. ಸ್ವಚ್ಛತೆ ಕಾಪಾಡಬೇಕು. ಗ್ರಾಮ ಪಂಚಾಯತಿಯವರು ಸ್ವಚ್ಛತೆಯತ್ತ ಗಮನ ಹರಿಸಬೇಕು. ಉತ್ತಮವಾದ ಕಂಡಿಷನ್ ಇರೋ ಬಸ್ಸಗಳು ಜಾತ್ರೆಗೆ ಬಿಡಬೇಕು. ಭಕ್ತರಿಗೆ ಯಾವುದೇ ರೀತಿಯಲ್ಲಿ ತೊಂದರೆ ಆಗದಂತೆ ಪೋಲಿಸ್ ಇಲಾಖೆ ನೋಡಿಕೊಳ್ಳಲಾಗವದು. ಟ್ರಸ್ಟ್ ವತಿಯಿಂದ ಅಥವಾ ಗ್ರಾಮಸ್ಥರವತಿಯಿಂದ ಕೆಲವರನ್ನು ನಮಗೆ ವಾಲೇಂಟರ್ಸ್ ಆಗಿ ನೀಡಿದರೇ, ಅವರಿಗೆ ಗುರುತಿನ ಚೀಟಿ, ಡ್ರೆಸ್ ಕೋಡ್ ನೀಡಿದರೇ ನಮಗೆ ಸಾಕಷ್ಟು ಅನುಕೂಲವಾಗುತ್ತದೆ.

ಎಷ್ಟೇ ಸಂಖ್ಯೆಯಲ್ಲಿ ಜನ ಬಂದರೂ ನಾವು ಅವರಿಗೆ ಭದ್ರತೆ ಮತ್ತು ಅನಾನುಕೂಲವಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪೋಲಿಸ್ ಇಲಾಖೆ ಮೇಲಿದೆ. ಪೋಲಿಸ್ ಇಲಾಖೆ ನಿಮ್ಮ ಜೊತೆ ಇದೆ. ಜಾತ್ರೆ ಯಶಸ್ವಿ ಮಾಡೋಣವೆಂದು ಹೇಳಿದರು.ಟ್ರಸ್ಟ್ ಸಮಿತಿ ಉಪಾಧ್ಯಕ್ಷ ಭೀಮಣ್ಣ ಸಾಲಿ ಮಾತನಾಡಿ, ಮಳೆ ಬಂದರೆ ಸಾರ್ವಜನಿಕರಿಗೆ ತೊಂದರೆ ಆಗದಂತೆ ತಾಡಪತ್ರಿ ಹಾಕುವ ವ್ಯವಸ್ಥೆ ಮಾಡಲಾಗುವುದು ಎಂದರು. ಸಿಪಿಐ ಚಂದ್ರಶೇಖರ ತಿಗಡಿ, ಪಿಎಸ್ಐ ಶ್ರೀಶೈಲ್ ಅಂಬಾಟಿ ಮಾತನಾಡಿದರು.

ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಭಾಗಣ್ಣಗೌಡ ಸಂಕನೂರ, ಸದಸ್ಯರಾದ ಭೀಮರಾಯಗೌಡ ಚಾಮನೂರ್, ಬಸವರಾಜಗೌಡ ಭಾಸರೆಡ್ಡಿ, ಮಹಾಂತಗೌಡ ಮಾಲಿ ಪಾಟೀಲ್ ದಂಡಗುಂಡ, ಪ್ರಮುಖರಾದ ಗುರುರಾಜ್, ಕಲ್ಯಾಣಕುಮಾರ, ಕೆಎಸ್ಆರ್‌ಟಿಸಿಯ ಬಸವರಾಜ, ಅಗ್ನಿಶಾಮಕ್ ದಳದ ಶಿವರಾಜ್, ಬಸವರಾಜ್, ಶಿವರಾಜಗೌಡ ಸೇರಿದಂತೆ ಇತರರಿದ್ದರು. ಬಸ್ಸುಗೌಡ ಮಾಲಿ ಪಾಟೀಲ್ ಸ್ವಾಗತಿಸಿ, ನಿರೂಪಣೆ ಮಾಡಿದರು.

> ಸುಗಮ ಸಂಚಾರಕ್ಕೆ ಒನ್ ವೇ ಮಾಡಿದರೇ ಮಾತ್ರ ಪರಿಹಾರ. ಏಕ ಮುಖ ರಸ್ತೆ ಮಾಡಿದಾಗ ಮಾತ್ರ ವಾಹನಗಳ ಸುಗಮವಾಗಿ ಸಂಚಾರ ಅನುಕೂಲವಾಗುತ್ತದೆ. ದಂಡಗುಂಡ ಬಸವೇಶ್ವರ ಜಾತ್ರೆಗೆ ರಾಜ್ಯ ಮತ್ತು ಅನ್ಯರಾಜ್ಯಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಬರುತ್ತಾರೆ. ಸಾವಿರಾರು ಸಂಖ್ಯೆಯಲ್ಲಿ ವಾಹನಗಳು ಬರುತ್ತವೆ. ವಾಹನಗಳಿಗೆ ಒಂದು ಕಡೆಯಿಂದ ಬರುವುದು, ಇನ್ನೊಂದು ಕಡೆಯಿಂದ ಹೋಗುವುದು ಸೂಕ್ತ. ದೇವಸ್ಥಾನಕ್ಕೆ ಬರುವ ವಾಹನಗಳು ಅಳ್ಳೊಳ್ಳಿ ಮಾರ್ಗದಿಂದ ದೇವಸ್ಥಾನಕ್ಕೆ ಬರಬೇಕು. ವಾಪಸ್ಸು ಹೋಗುವಾಗ ಸಂಕನೂರ ಅಥವಾ ಯಾಗಾಪುರ ಮಾರ್ಗದ ಮೂಲಕ ವಾಹನಗಳು ಸಂಚರಿಸಿದರೇ ಮಾತ್ರ ಸುಗಮ ಸಂಚಾರಕ್ಕೆ ಮಾಡಬಹುದು. ಇದರಿಂದ ಸುಗಮ ಸಂಚಾರಕ್ಕೆ ಸಾಕಷ್ಟು ಅನುಕೂಲವಾಗುತ್ತದೆ. ಈ ಕುರಿತು ಚರ್ಚಿಸಿ ನಿರ್ಧಾರ ಮಾಡಲಾಗುವುದು. -ಡಿವೈಎಸ್ಪಿ ಶಂಕರಗೌಡ ಪಾಟೀಲ್ ಶಹಾಬಾದ

> ಟ್ರಸ್ಟ್ ವತಿಯಿಂದ ಅದ್ದೂರಿ ಜಾತ್ರೆಗೆ ಎಲ್ಲಾ ರೀತಿ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ. ಯಾವುದೇ ರೀತಿಯ ಊಹಾಪೋಹಗಳಿಗೆ ಯಾರು ಕಿವಿ ಕೊಡಬೇಡಿ. ಜಾತ್ರೆಯು ಕುಂಭ, ಕಳಸ, ಪಲ್ಲಕಿ ಮೆರವಣಿಗೆ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಸಂಪ್ರದಾಯದ ಪ್ರಕಾರ ಪದ್ದತಿಯಂತೆ ಅಚ್ಚುಕಟ್ಟಾಗಿ ನಡೆಯಲಿದೆ. ಈಗಾಗಲೇ ಬಹುತೇಕ ಜಾತ್ರೆಯ ಕಾರ್ಯಗಳನ್ನು ಮುಗಿಯುವ ಹಂತದಲ್ಲಿದೆ. ಜಾತ್ರಾಮಹೋತ್ಸವ ಯಶಸ್ವಿ ಮಾಡಲು ಕೈಜೋಡಿಸಿ -ಚಂದ್ರಶೇಖರ ಅವಂಟಿ, ದೇವಸ್ಥಾನದ ಟ್ರಸ್ಟ್ ಸಮಿತಿ ಪ್ರಧಾನ ಕಾರ್ಯದರ್ಶಿ

# ಲೋಕಲ್ ರಾಜಕಾರಣದಲ್ಲಿ ಮೈತ್ರಿಗೆ ಬೆಲೆನೇ ಇಲ್ವಾ?

• ಉದಯವಾಹಿನಿ ಜೇವರ್ಗಿ

ಕರ್ನಾಟಕ ರಾಜ್ಯ ಸರ್ಕಾರ ಪುರಸಭೆ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆ ಘೋಷಣೆ ಮಾಡಿದ್ದು. ಜೇವರ್ಗಿ ಪುರಸಭೆಯಲ್ಲಿ ಅತಿ ಹೆಚ್ಚು ಬಹುಮತ ಪಡೆದ ಬಿಜೆಪಿ ಪಕ್ಷವು ಅಧಿಕಾರ ಪಡೆದಿದೆ. ಆದರೆ ಲೋಕಲ್ ರಾಜಕಾರಣ ಬಹಳ ಕುತೂಹಲಕ್ಕೆ ಇಡು ಮಾಡಿದೆ.

ಒಟ್ಟು 23 ಸದಸ್ಯರಲ್ಲಿ ಕಾಂಗ್ರೆಸ್ ಪಕ್ಷಕ್ಕೆ 3ಸದಸ್ಯರು ಜೆಡಿಎಸ್ ಪಕ್ಷಕ್ಕೆ 3 ಸದಸ್ಯರು ಬಿಜೆಪಿ ಪಕ್ಷಕ್ಕೆ 17 ಸದಸ್ಯರನ್ನು ಹೊಂದಿ ಬಹುಮತ ಪಡೆದ ಪಕ್ಷವಾಗಿದೆ. ಆದರೆ ಈ ಸದ್ಯದ ಪರಿಸ್ಥಿತಿಯಲ್ಲಿ ಜೇವರ್ಗಿ ಪುರಸಭೆ ಅಧ್ಯಕ್ಷ ಉಪಾಧ್ಯಕ್ಷ ಗಾದೆಗಾಗಿ ಮಿತ್ರ ಪಕ್ಷಗಳಾದ ಜೆಡಿಎಸ್ ಮತ್ತು ಬಿಜೆಪಿ ಹಗ್ಗ ಜಗ್ಗಾಟ ನಡೆದಿದೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಕೇಂದ್ರದಲ್ಲಿ ಜೆಡಿಎಸ್ ಪಕ್ಷ ಮತ್ತು ಬಿಜೆಪಿ ಪಕ್ಷ ಮೈತ್ರಿ ಮಾಡಿಕೊಂಡು ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ಅವರು ಕೇಂದ್ರದ ಮಂತ್ರಿಯಾಗಿದ್ದಾರೆ. ರಾಜ್ಯದಲ್ಲಿ ಮೈತ್ರಿ ಯಶಸ್ವಿಯಾಗಿದ್ದು. ಆದರೆ ಲೋಕಲ್ ರಾಜಕಾರಣದಲ್ಲಿ ಮೈತ್ರಿ ಯಶಸ್ವಿ ಆಗುತ್ತಾ ಎನ್ನುವುದು ಕಾದು ನೋಡಬೇಕಾಗಿದೆ.



ಉದಯವಾಹಿನಿ ಚಿತ್ರ

13 ಜನ ಬಿಜೆಪಿ ಪಕ್ಷದಿಂದ ಜಯಶಾಲಿಯಾದ ಪುರಸಭೆ ಸದಸ್ಯರನ್ನು ಜೆಡಿಎಸ್ ಪಕ್ಷದ ಕಾರ್ಯಕರ್ತರು ಕರೆದುಕೊಂಡು ಬೇರೆ ಕಡೆ ಹೋಗಿದ್ದಾರೆ ಎನ್ನುವ ಸುದ್ದಿ ತಾಲ್ಲೂಕಿನಲ್ಲಿ ಹರಿದಾಡುತ್ತಿದೆ. ತಾಲ್ಲೂಕಿನ ಜನತೆ ಪುರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಯಾವ ಪಕ್ಷದ ಪಾಲಾಗುವುದು ಎಂದು ಬಕಪಕ್ಷಿಯಂತೆ ಕಾದು ನೋಡುತ್ತಿದ್ದಾರೆ. ಒಟ್ಟಿನಲ್ಲಿ ಬಿಜೆಪಿ ಪಕ್ಷದ ಸದಸ್ಯರು ಪಕ್ಷ ನಿಷ್ಠೆ ಮರೆತಿದ್ದು ಇನ್ನೊಂದು ಕಡೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮೈತ್ರಿ ಲೋಕಲ್ ರಾಜಕಾರಣದಲ್ಲಿ ಇಲ್ಲದಂತೆ ಕಾಣುತ್ತದೆ.

### ಪಕ್ಷದ ಸದಸ್ಯರು ಪಕ್ಷ ನಿಷ್ಠೆ ಮರೆತಿದ್ದಾರೆ

ಜೇವರ್ಗಿ ಪಟ್ಟಣದಲ್ಲಿ ಸಾರ್ವಜನಿಕರು ಮಾತನಾಡಿಕೊಳ್ಳುತ್ತಿದ್ದಾರೆ 13 ಬಿಜೆಪಿ ಪಕ್ಷದಿಂದ ಸ್ಪರ್ಧೆಗೆದು ಗೆಲುವು ಸಾಧಿಸಿದ ಸದಸ್ಯರು ಬೇರೆ ಕಡೆ ಹೋಗಿದ್ದಾರೆ ಎಂದು ಸ್ಥಳೀಯ ಸಾರ್ವಜನಿಕರು ಮಾತನಾಡಿಕೊಳ್ಳುತ್ತಿದ್ದಾರೆ. ರಾಜ್ಯದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ನಿಷ್ಠೆಯಿಂದ ನಡೆದುಕೊಂಡು ಬಂದಿದ್ದು. ಆದರೆ ತಾಲ್ಲೂಕಿನ ರಾಜಕಾರಣದಲ್ಲಿ ಬಿಜೆಪಿ ಪಕ್ಷದ ಸದಸ್ಯರು ಪಕ್ಷ ನಿಷ್ಠೆ ಮರೆತಿದ್ದಾರೆ ಜೆಡಿಎಸ್ ಪಕ್ಷದ ನಾಯಕರು ಮೈತ್ರಿ ಪಾಲನೆ ಮಾಡುತ್ತಿಲ್ಲ ಎನ್ನುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಜೇವರ್ಗಿ ಪುರಸಭೆ ಅಧ್ಯಕ್ಷಸ್ಥಾನ ಸಾಮಾನ್ಯ ವರ್ಗಕ್ಕೆ ಸೇರಿದೆ ಉಪಾಧ್ಯಕ್ಷ ಸ್ಥಾನ ಎಸ್ ಟಿ ಮಹಿಳೆಗೆ ಮೀಸಲಾಗಿರುತ್ತದೆ.

# ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ

• ಉದಯವಾಹಿನಿ ಮುದ್ದೇಬಿಹಾಳ

ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ವಿಜಯಪುರ ಜಿಲ್ಲೆಯ ನೂರು ಜನ ಪರೀಕ್ಷಾರ್ಥಿಗಳಿಗೆ ದಲಿತ ವಿದ್ಯಾರ್ಥಿ ಪರಿಷತ್ ವತಿಯಿಂದ 02 ತಿಂಗಳ ಉಚಿತ ತರಬೇತಿ ಆಯೋಜಿಸಲಾಗಿದೆ ಎಂದು ಪರಿಷತ್ ತಾಲ್ಲೂಕು ಅಧ್ಯಕ ಮುತ್ತು ಚಲವಾದಿ (ನೇಬಗೇರಿ) ಪತ್ರಿಕಾ ಹೇಳಿಕೆ ನೀಡಿದ್ದಾರೆ

ವಿಜಯಪುರ ಜಿಲ್ಲೆಯ 100 ಪರೀಕ್ಷಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಾದ ಕೆಎಎಸ್, ಪಿಡಿಒ, ಪಿಎಸ್ ಐ, ಎಸಡಿಎ, ಎಫ್‌ಡಿಎ, ಬ್ಯಾಂಕಿಂಗ್, ಗ್ರಾಮ ಲೆಕ್ಕಾಧಿಕಾರಿ ಜೊತೆಗೆ ಇನ್ನು ಹಲವು ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಇರಲಿದೆ.

ಬಿಡಿಎ ಕ್ರಾಸ್ ಹತ್ತಿರ ಜಿಲ್ಲಾ ಪಂಚಾಯಿತಿ ಮುಖ್ಯದ್ವಾರದ ಬಳಿ ಇರುವ ಅನಮೂಲ್ ಟವರ್ ಬಿಲ್ಡಿಗ್ ನಲ್ಲಿರುವ ಡಾ.ಬಿ.ಆರ್ ಅಂಬೇಡ್ಕರ್ ಆಫಿಸರ್ಸ್ ಅಕಾಡೆಮಿ ಮೂಲಕ ಈ 02 ತಿಂಗಳ ಉಚಿತ ತರಬೇತಿ ನೀಡಲು ನಿಯೋಜಿಸಲಾಗಿದೆ.


ಉದಯವಾಹಿನಿ ಚಿತ್ರ

ವಿಜಯಪುರ ಜಿಲ್ಲೆಯ ಪರೀಕ್ಷಾರ್ಥಿಗಳು ಇದರ ಸದುಪಯೋಗವನ್ನು ಪಡೆದು ಕೊಳ್ಳಬಹುದು. ಪರೀಕ್ಷಾರ್ಥಿಗಳು 9008890578 /9686888580 ಈ ಮೊಬೈಲ್ ಸಂಖ್ಯೆಗೆ ಕರೆ ಮಾಡುವ ಮೂಲಕ ತಮ್ಮ ಹೆಸರನ್ನು ನೋಂದಾಯಿಸಬಹದು.

100 ಜನ ಪರೀಕ್ಷಾರ್ಥಿಗಳಿಗೆ ಈ ಉಚಿತ ತರಬೇತಿಗೆ ಅವಕಾಶ ಇರುವುದರಿಂದ ಬೇಗನೆ ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಬೆಳಗಿನ ಜಾವ ಸುರಿದ ಭಾರೀ ಮಳೆ: ಸಾಕಷ್ಟು ಅವಾಂತರ

• ಉದಯವಾಹಿನಿ ದಾವಣಗೆರೆ

ಬುಧವಾರ ಬೆಳಗಿನ ಜಾವ ಸುರಿದ ಭಾರೀ ಮಳೆಯಿಂದ ಜಿಲ್ಲೆಯ ವಿವಿಧೆಡೆ ಜನರು ತೀವ್ರ ತೊಂದರೆ ಅನುಭವಿ ಸುವಂತಾಯಿತು.ಕೆಲವು ಕಡೆ ರಸ್ತೆಯಲ್ಲಿ ನೀರು ಹರಿದ ಪರಿಣಾಮ ಸಂಪರ್ಕ ಬಂದ್ ಆಗಿತ್ತು. ಅಡಕೆ ಇತರೆ ತೋಟಗಳಿಗೆ ನೀರು ನುಗ್ಗಿದೆ. ಜಿಲ್ಲಾ ಕೇಂದ್ರ ದಾವಣಗೆರೆಯ ಬಂಬೂಬಜಾರ್, ಶೇಖರಪ್ಪ ನಗರ ಇತರೆಡೆ ತಗ್ಗು ಪ್ರದೇಶಗಳಲ್ಲಿ ಮನೆಗಳಿಗೆ ನೀರು ನುಗ್ಗಿದ್ದರಿಂದ ಜನರು ಪರದಾಡುವಂತಾಯಿತು.

ಸೇಂಟ್ ಪಾಲ್ಸ ಕಾನ್ವೆಂಟ್ ಇತರೆ ರಸ್ತೆಗಳು ಕೆಸರುಮಯವಾಗಿದ್ದವು. ಶಿವಪ್ಪಯ್ಯ ವೃತ್ತ ಇತರೆಡೆ ವಿದ್ಯುತ್ ತಂತಿಗಳ ಮೇಲೆ ಮರದ ಕೊಂಬೆಗಳು ಬಿದ್ದ ಪರಿಣಾಮ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಿತ್ತು.

ನಿರಂತರವಾಗಿ ಸುರಿದ ಮಳೆಯಿಂದ ಚನ್ನಗಿರಿ ತಾಲ್ಲೂಕಿನ ಹಲವಾರು ಕಡೆ ತೋಟಗಳಿಗೆ ನೀರು ನುಗ್ಗಿತ್ತು. ಕೆಲವು ಕಡೆ ರಸ್ತೆ ಸಂಪರ್ಕ ಕಡಿತವಾಗಿತ್ತು. ಬೇತೂರು-ರಾಂಪುರ ಸಂಪರ್ಕಿಸುವ ರಸ್ತೆಯ ಮೇಲೆ ನೀರು ಹರಿದಿದ್ದರಿಂದ ವಾಹನ ಸವಾರರು ಪರದಾಡ ಬೇಕಾಯಿತು. ಬೇತೂರು ಗ್ರಾಮದಲ್ಲಿ ತಗ್ಗು ಪ್ರದೇಶದ ಮನೆಗಳಿಗೆ ನೀರು ನುಗ್ಗಿದ್ದರಿಂದ ಜನರು ನೀರನ್ನು ಮನೆಯಿಂದ ಹೊರ ಹಾಕಲು ಹರ ಸಾಹಸ ಪಡ ಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು.

### ಕೆರೆಕಟ್ಟೆಗಳು ತುಂಬಿ ಹರಿಯುತ್ತಿವೆ

ಎಚ್.ಕಲ್ಪನಹಳ್ಳಿ ಗ್ರಾಮದಲ್ಲಿ ನಾಲೆಗಳಲ್ಲಿ ಚಾನಲ್‌ಗಳಲ್ಲಿ ಹೂಳು ತುಂಬಿದ್ದರಿಂದ ನೀರು ಗ್ರಾಮಕ್ಕೆ ನುಗ್ಗಿದ ಘಟನೆ ಕೂಡ ನಡೆದಿತ್ತು. ಗ್ರಾಮದಲ್ಲಿ ಮನೆಗಳಿಗೆ ನೀರು ನುಗ್ಗಿದ್ದರಿಂದ ಗ್ರಾಮಸ್ಥರು ಸಂಕಷ್ಟ ಪಡಬೇಕಾಯಿತು. ಬೆಳಗಿನ ಜಾವ ಮೂರು ಗಂಟೆಯಿಂದ ಆರಂಭವಾದ ಮಳೆ ಎಡೆಬಿಡದೆ ಸುರಿದಿದೆ. ಕೆರೆಕಟ್ಟೆಗಳು ತುಂಬಿ ಹರಿಯುತ್ತಿವೆ. ಅಡಕೆ ತೋಟಗಳೆಲ್ಲಾ ಸಂಪೂರ್ಣವಾಗಿ ಜಲಾವೃತಗೊಂಡಿವೆ. ಭಾರೀ ಮಳೆಗೆ ಕೆರೆಕಟ್ಟೆಗಳು ಮೈದುಂಬಿ ಹರಿಯುತ್ತಿದ್ದು ಹಲವೆಡೆ ಸಾಕಷ್ಟು ಅವಾಂತರ ಸೃಷ್ಟಿಸಿದೆ.

# ಹರ್ ಘರ್ ತಿರಂಗಾ ಅಭಿಯಾನ: ಗಮನ ಸೆಳೆದ ತಿರಂಗಾ ಯಾತ್ರೆ

• ಉದಯವಾಹಿನಿ ಚಿತ್ರದುರ್ಗ

78ನೇ ಸ್ವಾತಂತ್ರ್ಯೋತ್ಸವದ ಪ್ರಯುಕ್ತ ಹರ್ ಘರ್ ತಿರಂಗಾ ಅಭಿಯಾನದಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅಂಗನವಾಡಿ ಕಾರ್ಯಕರ್ತೆಯರು ತ್ರಿವರ್ಣ ಧ್ವಜ ಹಿಡಿದು ನಗರದಲ್ಲಿ ಬುಧವಾರ ತಿರಂಗಾ ಯಾತ್ರೆ ನಡೆಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಹರ್ ಘರ್ ತಿರಂಗಾ ಅಭಿಯಾನದಡಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆಗೆ ನಗರದ ಒನಕೆ ಓಬವ್ವ ವೃತ್ತದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿ ಕಾರಿ ಎಸ್.ಜೆ.ಸೋಮಶೇಖರ್, ಭಾರತದಲ್ಲಿ ಯಾವುದಾದರೂ ಒಂದು ದಿನವನ್ನು ಸುವರ್ಣ ಅಕ್ಷರಗಳಿಂದ ದಾಖಲಿಸುವುದಾದರೆ ಅದು 1947 ಆಗಸ್ಟ್ 15. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನಗಳ ಪ್ರತೀಕವಾಗಿ ಸ್ವಾತಂತ್ರ್ಯ ದಿನಾಚರಣೆ ಆಚರಿಸಲಾಗುತ್ತಿದೆ. ಹರ್ ಘರ್ ತಿರಂಗಾ ಅಭಿಯಾನದಡಿ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

### ಸ್ವಾತಂತ್ರ್ಯ ಸೇನಾನಿಗಳಿಗೆ ಜೈಕಾರ

ತಿರಂಗಾ ಯಾತ್ರೆ ಜಾಥಾವು ನಗರದ ಒನಕೆ ಓಬವ್ವ ವೃತ್ತದಿಂದ ಪ್ರಾರಂಭವಾಗಿ ಮದಕರಿ ವೃತ್ತ, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇಗುಲದವರೆಗೆ ಸಾಗಿ ತದನಂತರ ಪುನಃ ಒನಕೆ ಓಬವ್ವ ವೃತ್ತದಲ್ಲಿ ಅಂತ್ಯಗೊಂಡಿತು. ಜಾಥಾದಲ್ಲಿ ದೇಶ ಭಕ್ತಿಯ ಘೋಷಣೆಗಳು ಹಾಗೂ ಸ್ವಾತಂತ್ರ್ಯ ಸೇನಾನಿಗಳಿಗೆ ಜೈಕಾರ ಕೂಗಿದರು.

ತಿರಂಗಾ ಯಾತ್ರೆಯು ರಾಷ್ಟ್ರೀಯ ಐಕ್ಯತೆ ಮತ್ತು ಭಾವೈಕ್ಯತೆ ಸಾರುವ ಕೆಲಸ ಮಾಡುತ್ತಿದೆ. ದೇಶದ ತ್ರಿವರ್ಣ ಧ್ವಜವು ಕೇಸರಿ ಬಣ್ಣ ತ್ಯಾಗ ಶೌರ್ಯಗಳ ಸಂಕೇತವಾದರೆ, ಬಿಳಿ ಶಾಂತಿಯ ಸಂಕೇತ ಹಾಗೂ ಹಸಿರು ಸಮೃದ್ಧಿಯ ಸಂಕೇತ ಸೂಚಿಸುತ್ತದೆ ಎಂದು ತಿಳಿಸಿದ ಅವರು, ರಾಷ್ಟ್ರೀಯ ಹಬ್ಬಗಳನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಎಂ.ವಿ.ವೀಣಾ, ಸುಧಾ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಬೈಕ್‌ಗಳ ಮಧ್ಯೆ ಭೀಕರ ಅಪಘಾತ ಓರ್ವ ಯುವತಿ ಸಾವು, ಐವರಿಗೆ ಗಾಯ

• ಉದಯವಾಹಿನಿ ಹಾವೇರಿ

ಎರಡು ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿಯಾಗಿ ಓರ್ವ ಯುವತಿ ಸಾವನ್ನಪ್ಪದ್ದು ಐದು ಜನರಿಗೆ ಗಾಯವಾದ ಘಟನೆಯು ಹಾವೇರಿ ಜಿಲ್ಲೆಯ ಹಾನಗಲ್ ಹೊರವಲಯದ ಗೊಂದಿ - ತಡಸ ರಸ್ತೆಯಲ್ಲಿ ಈ ಒಂದು ಅಪಘಾತ ನಡೆದಿದೆ. ಹಾನಗಲ್ ತಾಲ್ಲೂಕಿನ ಮೂಡುರು ಗ್ರಾಮದ ಕೀರ್ತಿ ಮಣ್ಣಮ್ಮನವರ್(21) ಮೃತ ಯುವತಿ. ಹನುಮಂತಪ್ಪ (55), ರಕ್ಷಿತಾ (12), ಅಶ್ವಿತಾ (10), ವಿಜಯ (24), ಸುಮಾ (23) ಎಂಬುವವರು ಗಾಯಗೊಂಡಿದ್ದಾರೆ. ಕೂಡಲೇ ಗಾಯಾಳುಗಳನ್ನು ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಇನ್ನು ಗೆಜ್ಜೆಹಳ್ಳಿ ಗ್ರಾಮದಿಂದ ಹಾನಗಲ್ ಕಡೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದ್ದು, ಸ್ಥಳಕ್ಕೆ ಹಾನಗಲ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ರೈಲು ಸಂಚಾರ ಪುನರಾರಂಭ

• ಉದಯವಾಹಿನಿ ಮಂಗಳೂರು

ಬಾಳುಪೇಟೆ ಮತ್ತು ಸಕಲೇಶಪುರ ನಡುವೆ ಭೂಕುಸಿತದಿಂದ ಹಾನಿಗೊಳಗಾದ ಹಳಿಯನ್ನು ಪುನರ್ ಸ್ಥಾಪಿಸಲಾಗಿದೆ. ಹೀಗಾಗಿ ಇಂದಿನಿಂದ ಬೆಂಗಳೂರು-ಮಂಗಳೂರು ಸೆಕ್ಟರ್‌ನಲ್ಲಿ ಸೇವೆಯನ್ನು ಪುನರಾರಂಭಿಸುವುದಾಗಿ ನೈಋತ್ಯ ರೈಲ್ವೆ ತಿಳಿಸಿದೆ.

ಆಗಸ್ಟ್ 10 ರ ಮುಂಜಾನೆ ಮೈಸೂರು ವಿಭಾಗದ ಬಾಳುಪೇಟೆ ಮತ್ತು ಸಕಲೇಶಪುರ ನಡುವೆ ಭೂಕುಸಿತ ಸಂಭವಿಸಿದ ನಂತರ ಸೇವೆಗಳನ್ನು ರದ್ದುಗೊಳಿಸಲಾಗಿತ್ತು.

ಅಧಿಕಾರಿಗಳ ಪ್ರಕಾರ, ಬೆಂಗಳೂರು-ಮಂಗಳೂರು ಹಾಗೂ ಕಾರವಾರ ಸೆಕ್ಟರ್‌ನಲ್ಲಿ ರಾತ್ರಿಯ ಮೂರು ರೈಲುಗಳನ್ನು ಅಲ್ಪಾವಧಿಗೆ ನಿಲ್ಲಿಸಲಾಗಿದೆ.ಅದೇ ಭಾಗದಲ್ಲಿ ಹೊಸದಾಗಿ ಭೂಕುಸಿತ ಸಂಭವಿಸಿದ್ದರಿಂದ ಟ್ರ್ಯಾಕ್ ಮರುಸ್ಥಾಪನೆ ಕಾರ್ಯಕ್ಕೆ ಸಾಕಷ್ಟು ಸಮಯ ಬೇಕಾಗಿತ್ತು. ಜುಲೈ 26 ರಿಂದ ಆಗಸ್ಟ್ 9 ರವರೆಗೆ ಸಕಲೇಶಪುರ-ಸುಬ್ರಹ್ಮಣ್ಯ ರಸ್ತೆ ಘಾಟ್ ಮಾರ್ಗದಲ್ಲಿ ಯಡಕುಮಾರಿ ಮತ್ತು ಕಡಗರವಳ್ಳಿ ನಿಲ್ದಾಣಗಳ ನಡುವೆ ಭೂಕುಸಿತದಿಂದಾಗಿ ಈ ವಲಯದಲ್ಲಿ ಸೇವೆಗಳ ಮೇಲೆ ಪರಿಣಾಮ ಬೀರಿತು. ಸೇವೆಗಳನ್ನು ಪುನರಾರಂಭಿಸಿದ ಒಂದು ದಿನದೊಳಗೆ, ಹೊಸ ಭೂಕುಸಿತಗಳು ರೈಲು ಸೇವೆಗಳನ್ನು ತಡೆದಿದ್ದವು.

# ಅರಣ್ಯ ಜಮೀನು ಒತ್ತುವರಿ ಮಾಡಿದ್ರೆ 1 ವರ್ಷ ಜೈಲು ಶಿಕ್ಷೆ, 10 ಸಾವಿರ ರೂ. ದಂಡ ಫಿಕ್ಸ್

• ಉದಯವಾಹಿನಿ ಶಿವಮೊಗ್ಗ

ತಾಲ್ಲೂಕಿನ ಹೊಳಲೂರು ಹೋಬಳಿಯ ಬಿಕ್ಕೋನಹಳ್ಳಿ ಗ್ರಾಮದ ಸರ್ವೇ ನಂ 09 ರ ಕುಂಚೇನಹಳ್ಳಿ ಮೀಸಲು ಅರಣ್ಯ ಪ್ರದೇಶದಲ್ಲಿ ಅದೇ ಗ್ರಾಮದ ಚಂದ್ರಪ್ಪ, 50 ವರ್ಷ ಇವರು 01 ಎಕರೆ 20 ಗುಂಟೆ ಜಮೀನನ್ನು ಒತ್ತುವರಿ ಮಾಡಿಕೊಂಡಿರುವುದು ಸಾಬೀತಾದ ಕಾರಣ ಆರೋಪಿಗೆ 01 ವರ್ಷ ಸಾದಾ ಶಿಕ್ಷೆ ಮತ್ತು ರೂ.10 ಸಾವಿರ ದಂಡ ವಿಧಿಸಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯ ಆದೇಶಿಸಿದೆ.

ದೂರುದಾರರಾದ ಉಪ ವಲಯ ಅರಣ್ಯಾಧಿಕಾರಿ, ಗೆಜ್ಜೇನಹಳ್ಳಿ ಶಾಖೆ, ಶಂಕರ ವಲಯ, ಶಿವಮೊಗ್ಗ ಇವರು ದೂರು ನೀಡಿದ ಅನ್ವಯ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವು ಈ ಪ್ರಕರಣವನ್ನು ಎಲ್‌ಜಿಸಿ(ಸಿ) ಸಂಖ್ಯೆ 1726/2019 ಎಂದು ದಾಖಲಿಸಿಕೊಂಡು ಸಂಪೂರ್ಣ ಸಾಕ್ಷ್ಯ ವಿಚಾರಣೆಯನ್ನು ನಡೆಸಿದ ನಂತರ ಆರೋಪಿಯು ಅರಣ್ಯ ಜಮೀನನ್ನು ಭೂ ಕಬಳಿಕೆ ಮಾಡಿರುವುದು ಸಾಬೀತಾದ ಕಾರಣ ಆರೋಪಿಗೆ 01 ವರ್ಷ ಸಾದಾ ಶಿಕ್ಷೆ ಮತ್ತು ರೂ.10,000/- ದಂಡವನ್ನು ವಿಧಿಸಿ, ದಂಡ ಪಾವತಿಸಲು ತಪ್ಪಿದಲ್ಲಿ 03 ತಿಂಗಳ ಸಾದಾ ಶಿಕ್ಷೆಯನ್ನು 02ನೇ ವಿಶೇಷ ನ್ಯಾಯಾಲಯದ ನ್ಯಾಯಿಕ ಸದಸ್ಯರಾದ ಪಾಟೀಲ ನಾಗಲಿಂಗನಗೌಡ ಮತ್ತು ಕಂದಾಯ ಸದಸ್ಯರಾದ ಕೆ.ಹೆಚ್. ಅಶ್ವತ್ಥ ನಾರಾಯಣಗೌಡ ಇವರು ಇದ್ದ ಪೀಠವು ದಿ: 11-07-2024 ರಂದು ತೀರ್ಪು ನೀಡಿರುತ್ತದೆ.

# ಬುರ್ಖಾ ಧರಿಸಿ ಭಿಕ್ಷೆ ಬೇಡುತ್ತಿದ್ದ ಯುವಕ: ಸ್ಥಳೀಯರಿಂದ ಗೂಸಾ

• ಉದಯವಾಹಿನಿ ಚಿಕ್ಕಮಗಳೂರು

ಭಿಕ್ಷೆ ಬೇಡಲು ಬುರ್ಖಾ ಧರಿಸಿ ನಗರಕ್ಕೆ ಬಂದ ಯುವಕನಿಗೆ ಸ್ಥಳೀಯರು ಸಖತ್ ಗೂಸಾ ಕೊಟ್ಟಿರುವ ಘಟನೆ ನಡೆದಿದೆ.

ಬೆರಳಿಗೆ ನೈಲ್ ಪಾಲಿಶ್ ಹಚ್ಚಿಕೊಂಡು ಶೃಂಗಾರ ಮಾಡಿಕೊಂಡು ಚಾಕು ಇಟ್ಟುಕೊಂಡ ಯುವಕನ ಸಾರ್ವಜನಿಕರ ಕೈಗೆ ಸಿಕ್ಕಿಬಿದ್ದಿದ್ದಾನೆ.ಬುರ್ಖಾ ತೊಟ್ಟು ನಗರದ ಮಲ್ಲಂದೂರು ರಸ್ತೆಯಲ್ಲಿ ಯುವಕನ ಓಡಾಟ ನಡೆಸುವಾಗ ಅನುಮಾನಗೊಂಡು ಜನರು ಹಿಡಿದಿದ್ದಾರೆ. ಹರೀಶ್ ಎಂಬ ಯುವಕನ ಕೈ ಬೆರಳು ಕಾಲು ನೋಡಿ ಅನುಮಾನಗೊಂಡ ಸ್ಥಳೀಯರು ಹಿಡಿದು ವಿಚಾರಿಸಿದ್ದಾರೆ. ಥೇಟ್ ಯುವತಿಯಂತೆ ಬುರ್ಖಾ ಧರಿಸಿ ನಿಂತಿದ್ದವನಿಗೆ ಹಿಗ್ಗಾಮುಗ್ಗಾ ಗೂಸಾ ಕೊಟ್ಟಿದ್ದಾರೆ.

ಬಾಳೆಹೊನ್ನೂರು ಮೂಲದ ಹರೀಶ್ ಎಂಬ ಯುವಕನನ್ನು ಸ್ಥಳೀಯರು ಥಳಿಸಿದ್ದಾರೆ. ಭಿಕ್ಷೆ ಬೇಡಲು ಬುರ್ಖಾ ಧರಿಸಿ ಬಂದಿದ್ದಾಗಿ ಯುವಕ ಹೇಳಿಕೆ ನೀಡಿದ್ದಾನೆ.


ಉದಯವಾಹಿನಿ ಚಿತ್ರ

ಆದರೆ ಬುರ್ಖಾ ಒಳಗೆ ಚಾಕು ಇಟ್ಟುಕೊಂಡಿದ್ದ ಬಂದಿದ್ದು, ಸಾಕಷ್ಟು ಅನುಮಾನ ಹುಟ್ಟಿಸಿದ್ದು ಆತನನ್ನು ಪೊಲೀಸರಿಗೆ ಒಪ್ಪಿಸಲಾಗಿದೆ.

ತನಿಖೆ ವೇಳೆ ಬಾಳೆಹೊನ್ನೂರಿನಲ್ಲಿ ಬುರ್ಖಾ ಖರೀದಿ ಮಾಡಿದ್ದಾಗಿ ಗೊತ್ತಾಗಿದೆ. ಬಸವನಹಳ್ಳಿ ಪೊಲೀಸರು ಯುವಕನ ವಿಚಾರಣೆಗೊಳಪಡಿಸಿ ತಹಶೀಲ್ದಾರ್ ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ.

# ಅಪಘಾತದಂತೆ ಬಿಂಬಿಸಿ ಸಂಚಿನಿಂದ ವಕೀಲನ ಹತ್ಯೆ: ಐವರ ಬಂಧನ

## ವಕೀಲನ ಸಾವು ಅಪಘಾತದಿಂದ ಆದದ್ದಲ್ಲ, ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಎಂಬುದು ಪೊಲೀಸರ ತನಿಖೆಯಲ್ಲಿ ಬಯಲು

• ಉದಯವಾಹಿನಿ ವಿಜಯಪುರ

ನಗರದಲ್ಲಿ ಆ.8 ರಂದು ನಡೆದಿದ್ದ ವಕೀಲನ ಸಾವು ಅಪಘಾತದಿಂದ ಆದದ್ದಲ್ಲ, ಹಳೆಯ ದ್ವೇಷದ ಹಿನ್ನೆಲೆಯಲ್ಲಿ ವ್ಯವಸ್ಥಿತ ಸಂಚಿನಿಂದ ನಡೆಸಿದ ಹತ್ಯೆ ಎಂಬುದು ಪೊಲೀಸರ ತನಿಖೆಯಲ್ಲಿ ಬಯಲಾಗಿದೆ. ಪ್ರಕರಣದಲ್ಲಿ ಐವರನ್ನು ಬಂಧಿಸಿರುವ ಪೊಲೀಸರು, ತಲೆ ಮರೆಸಿಕೊಂಡಿರುವ ಇತರರ ಪತ್ತೆಗೆ ಜಾಲ ಬೀಸಿದ್ದಾರೆ.

**ಇತರರ ಪತ್ತೆಗೆ ಬಲೆ**

ತಮ್ಮ ಕಛೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಪ್ರಕರಣದ ವಿವರ ನೀಡಿದ ಎಸ್ಪಿ ಋಷಿಕೇಶ ಭಗವಾನ್, ನಗರದಲ್ಲಿ ಆ.8 ರಂದು ಸಂಜೆ 5-30 ರ ಸುಮಾರಿಗೆ ನಡೆದಿದ್ದ ಅಪಘಾತದಲ್ಲಿ ಇನ್ನೋವಾ ಕಾರಿನಲ್ಲಿ ಸಿಲುಕಿ ಸುಮಾರು ಎರಡೂವರೆ ಕಿ.ಮೀ. ದೂರಕ್ಕೆ ಎಳೆದೊಯ್ದ ಘಟನೆಯಲ್ಲಿ ನಗರದ ಯುವ ವಕೀಲ ರವಿ ಮೇಲಿನಕೇರಿ ಮೃತಪಟ್ಟಿದ್ದ.

ಅಪಘಾತ ಪ್ರಕರಣ ದಾಖಲಿಸಿಕೊಂಡು


ಉದಯವಾಹಿನಿ ಚಿತ್ರ

ತನಿಖೆಗೆ ಇಳಿದಿದ್ದ ಪೊಲೀಸರಿಗೆ ಇದು ಅಪಘಾತದಿಂದ ಆಗಿರುವ ಸಾವಲ್ಲ, ಬೆಚ್ಚಿಬೀಳುವಂತ ಸಂಚು ರೂಪಿಸಿ ಹತ್ಯೆ ಎಂದು ಲಭ್ಯವಾದ ಸುಳಿವು ಆಧರಿಸಿ ಐವರು ಆರೋಪಿಗಳನ್ನು ಬಂಧಿಸಿದ್ದಾರೆ.

ಬಂಧಿತರನ್ನು ತುಳಸಿರಾಮ ಹರಿಜನ, ಅಲೆಕ್ಸ್ ಗೊಲ್ಲರ, ಷಣ್ಮುಖ ನಡುವಿನಕೇರಿ, ಪ್ರಕಾಶ ಗೊಲ್ಲರ, ಮುರುಗೇಶ ಉಳ್ಳಾಗಡ್ಡಿ ಎಂಧು ಗುರುತಿಸಲಾಗಿದೆ.

ಬಂಧಿತರೆಲ್ಲರೂ ದಿನಗೂಲಿ ಕಾರ್ಮಿಕರಾಗಿದ್ದು, ಎಲ್ಲರೂ ಅಪರಾಧ ಪ್ರಕರಣಗಳ ಹಿನ್ನೆಲೆ ಹೊಂದಿದ್ದಾರೆ. ಎಲ್ಲರ ಮೇಲೂ ಜಿಲ್ಲೆಯ ವಿವಿಧ ಠಾಣೆಗಳಲ್ಲಿ ಹತ್ಯೆ, ಹತ್ಯೆ ಯತ್ನ, ದರೋಡೆ, ಜೀವ ಬೆದರಿಕೆಯಂಥ ಪ್ರಕರಣ ದಾಖಲಾಗಿವೆ. ಬಂಧಿತ ಆರೋಪಿಗಳು ಇತರರೊಂದಿಗೆ ಸೇರಿ ವಕೀಲ ರವಿ ಕೋರ್ಟ್‌ನಿಂದ ಮನೆಗೆ ಹೊರಟಿದ್ದಾಗ ನಂಬರ್ ಪ್ಲೇಟ್ ಇಲ್ಲದ ಇನ್ನೋವಾ ವಾಹನದಲ್ಲಿ ಬಂದು ಡಿಕ್ಕಿ ಹೊಡೆದಿದ್ದರು. ಡಿಕ್ಕಿಯ ಬಳಿಕ ಸುಮಾರು ಎರಡೂವರೆ ಕಿ.ಮೀ. ವರೆಗೆ ರವಿಯನ್ನು ರಸ್ತೆಯಲ್ಲೇ ಎಳೆದೊಯ್ದ ಕಾರಣ ರವಿ ಸ್ಥಳದಲ್ಲೇ ಮೃತಪಟ್ಟಿದ್ದ. ವಕೀಲ ರವಿ ತನ್ನ ಸಹೋದರರ ಜೊತೆ ಸೇರಿ ಸುಮಾರು 4-5 ತಿಂಗಳ ಹಿಂದೆ ತುಳಸಿರಾಮ ಹರಿಜನ ಎಂಬವನ ಮೇಲೆ ಹಲ್ಲೆ ನಡೆಸಿದ್ದಲ್ಲದೆ, ಹತ್ಯೆ ಮಾಡುವುದಾಗಿ ಬೆದರಿಕೆ ಹಾಕಿದ್ದ. ಇದಲ್ಲದೇ ಸುಮಾರು 20 ದಿನಗಳ ಹಿಂದೆ ಇದೇ ಅಲೆಕ್ಸ್ ಗೊಲ್ಲರ ಎಂಬವನನ್ನು ಅಪಹರಿಸಿ, ಹತ್ಯೆ ಮಾಡುವ ಬೆದರಿಕೆ ಹಾಕಿದ್ದ.

### ತನಿಖಾ ತಂಡ ಯಶಸ್ವಿ

ಪ್ರಾಥಮಿಕ ಹಂತದದ ತನಿಖೆಯಲ್ಲಿ ಇಡೀ ಪ್ರಕರಣದಲ್ಲಿ ಇನ್ನೂ ಕೆಲವರು ಈ ಸಂಚಿನಲ್ಲಿ ಪಾಲ್ಗೊಂಡಿರುವ ಮಾಹಿತಿ ಇದೆ, ಅವರೆಲ್ಲ ತಲೆ ಮರೆಸಿಕೊಂಡಿದ್ದಾರೆ. ಇಡೀ ಪ್ರಕರಣವನ್ನು ತ್ವರಿತವಾಗಿ ಪತ್ತೆ ಮಾಡಿ, ಆರೋಪಿಗಳನ್ನು ಬಂಧಿಸುವಲ್ಲಿ ತನಿಖಾ ತಂಡ ಯಶಸ್ವಿಯಾಗಿದೆ.

> ಡಿಎಸ್ಪಿ ಬಸವರಾಜ ಎಲಿಗಾರ ನೇತೃತ್ವದಲ್ಲಿದ್ದ ಗೋಲಗುಂಬಜ ಸಿಪಿಐ ಮಹಾಂತೇಶ ಮಠಪತಿ, ಗಾಂಧಿಚೌಕ ಠಾಣೆ ಸಿಪಿಐ ಪ್ರದೀಪ ತಳಕೇರಿ ಹಾಗೂ ತಂಡದ ಪೊಲೀಸರ ಕಾರ್ಯಕ್ಕೆ ಬಹುಮಾನ ಘೋಷಿಸಲಾಗಿದೆ. ಸ್ವಾತಂತ್ರ್ಯೋತ್ಸವ ದಿನದಂದು ನಡೆಯುವ ಪರೇಡ್ ಸಮಾರಂಭದಲ್ಲಿ ಬಹುಮಾನ ವಿತರಿಸುವುದಾಗಿ ಹೇಳಿದರು.

> ದ್ವೇಷ ಸಾಧಿಸುತ್ತಿದ್ದ ಈ ಹತ್ಯಾ ಸಂಚಿನ ಸೂತ್ರಧಾರ ತುಳಸಿರಾಮ, ತನ್ನ ಸ್ನೇಹಿತರಾದ ಪ್ರಕರಣದ ಬಂಧಿತ ಆರೋಪಿಗಳೊಂದಿಗೆ ಸೇರಿ ಅಪಘಾತ ಎಂಬಂತೆ ಬಿಂಬಿಸಲು ವ್ಯವಸ್ಥಿತವಾಗಿ ಸಂಚು ರೂಪಿಸಿ ಹತ್ಯೆ ಮಾಡಿದ್ದಾರೆ -ಎಸ್ಪಿ

ಹತ್ಯೆ ಬಳಸಿರುವ ನಂಬರ್ ಪ್ಲೇಟ್ ಇಲ್ಲದ ಇನ್ನೋವಾ ಕಾರು ಕೂಡ ಜೂಜಾಟದಲ್ಲಿ 1 ಲಕ್ಷ ರೂ.ಗೆ ಸಚಿನ್ ಎಂಬವನಿಂದ ಆರೋಪಿಗಳು ಕಿತ್ತುಕೊಂಡಿದ್ದ ಕಾರು ಎಂಬುದು ಪತ್ತೆಯಾಗಿದೆ. ಇದಲ್ಲದೇ ವಕೀಲ ರವಿ ಕೋರ್ಟ್‌ನಿಂದ ಮನೆಗೆ ಮರಳುವ ಕುರಿತು ನಿಗಾ ಇರಿಸಿ ಮಾಹಿತಿ ನೀಡಲು ಇಬ್ಬರು ಬೈಕ್‌ನಲ್ಲಿ ತಿರುಗುತ್ತಿದ್ದರು ಎಂಬುದು ಪೊಲೀಸರ ತನಿಖೆಯಲ್ಲಿ ಹೊರ ಬಿದ್ದಿದೆ.

ಎಎಸ್ಪಿ ಶಂಕರ ಮಾರಿಹಾಳ, ಡಿಎಸ್ಪಿ ಬಸವರಾಜ ಎಲಿಗಾರ ಸಿಪಿಐ ಪ್ರದೀಪ ತಳಕೇರಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.




# ಭಾರತೀಯನಿಂದ ಮುಸ್ಲಿಮರಿಗೆ ಪ್ರತ್ಯೇಕ ಟೌನ್ ಶಿಪ್

## ಅಮೆರಿಕದ ಮಿನೆಸೊಟಾ ಎಂಬ ರಾಜ್ಯದಲ್ಲಿ ಮಿನೆಪೊಲಿಸ್ ಎಂಬಲ್ಲಿ ಮುಸ್ಲಿಮರಿಗಾಗಿ ಹೊಸ ಟೌನ್ ಶಿಪ್ ನಿರ್ಮಾಣಕ್ಕೆ ನಿರ್ಧಾರ



**ಸ್ಥಳೀಯರಿಂದ ಭಾರೀ ವಿರೋಧ**

**ಮಿನೆಸೊಟಾ:** ಅಮೆರಿಕದಲ್ಲಿರುವ ಮಿನೆಸೊಟಾ ರಾಜ್ಯದ ಮಿನೆಪೊಲಿಸ್ ಎಂಬ ಪ್ರಾಂತ್ಯದಲ್ಲಿ ಭಾರತ ಮೂಲದ ಉದ್ಯಮಿಯಾದ ಫರಾಜ್ ಯೂಸುಫ್ ಎಂಬುವರು ಮಿನೆಸೋಟಾ ಪ್ರಾಂತ್ಯದಲ್ಲಿರುವ ಮುಸ್ಲಿಮರಿಗಾಗಿ ಪ್ರತ್ಯೇಕ 'ಮದೀನಾ ಲೇಕ್' ಎಂಬ ಟೌನ್ ಶಿಪ್ ಕಟ್ಟಲು ಮುಂದಾದ್ದು ಅದು ವಿವಾದಕ್ಕೆ ಕಾರಣವಾಗಿದೆ. ಟೌನ್ ಶಿಪ್ ನಿರ್ಮಾಣ ವಿಚಾರ, ಅಲ್ಲಿನ ಸಾಮಾಜಿಕ ಸ್ತರಗಳಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

**ಯಾರು ಈ ಯೂಸುಫ್?:** ಯೂಸುಫ್ ಅವ ರು ಭಾರತೀಯ ಸಂಜಾತರು. ಆದರೆ, ಮಿನ್ನೆ ಸೋಟಾದಲ್ಲಿಯೇ ಹುಟ್ಟಿ ಬೆಳೆದಿದ್ದಾರೆ. ಅಲ್ಲಿಯ ಸ್ಥಳೀಯ ಶಾಲೆಗಳಲ್ಲಿ ಓದುತ್ತಿದ್ದ ಅವರು, ಯೂನಿವರ್ಸಿಟಿ ಆಫ್ ಮಿನ್ನೆಸೊಟಾದಿಂದ ಪದವಿ ಪಡೆದಿದ್ದಾರೆ. ಸದ್ಯಕ್ಕೆ ಬ್ಲೇನ್ ಎಂಬ ನಗರದಲ್ಲಿ ಅವರು ತಮ್ಮ ಕುಟುಂಬದೊಂದಿಗೆ ಜೀವನ ನಡೆಸುತ್ತಿದ್ದು, ಇದೇ ಮೊದಲ ಬಾರಿಗೆ ಮದೀನಾ ಲೇಕ್ ಟೌನ್ ಶಿಪ್ ನಿರ್ಮಾಣದ ದೊಡ್ಡ ಪ್ರಾಜೆಕ್ಟ್ ಗೆ ಕೈ ಹಾಕಿದ್ದಾರೆ. ಮಿನೆಸೊಟಾದಲ್ಲಿರುವ ಹೆರಾಲ್ಡ್ ರಾಬಿನ್ಸನ್ ಎಂಬುವರಿಗೆ ಸೇರಿದ ಹುಲ್ಲುಗಾವಲು ಪ್ರದೇಶದಲ್ಲಿ ಈ ಟೌನ್ ಶಿಪ್ ನಿರ್ಮಿಸಲು ಯೂಸುಫ್ ನಿರ್ಧ ರಿಸಿದ್ದಾರೆ. ಅವರಿಗೆ, ಸ್ಥಳೀಯ ರಿಯಲ್ ಎಸ್ಟೇಟ್ ಉದ್ಯಮಿ ಹಾಗೂ ದಿವಾಳಿಯಂಚಿಗೆ ಸರಿದ ಸ್ಥಳೀಯ ಕಂಪನಿಗಳ ಪುನರುತ್ಥಾನ ಸಾಲ ವ್ಯವಸ್ಥೆಯ ಏಜೆಂಟ್ ಆಗಿರುವ ಜಮೀಲ್ ಅಹ್ಮದ್ ಎಂಬುವರು ಸಾಥ್ ನೀಡುತ್ತಿದ್ದಾರೆ. ಯೂಸುಫ್ ಅವರ ಮಾಲೀಕತ್ವದ ಝಿಕಾರ್ ಹೋಲ್ಡಿಂಗ್ಸ್ ಅಡಿಯಲ್ಲೇ ಈ ಯೋಜನೆಯನ್ನು ಜಾರಿಗೊಳಿಸಲು ನಿರ್ಧರಿಸಲಾಗಿದೆ.

**ಅಮೆರಿಕದ ಮಿನೆಸೊಟಾ ಎಂಬ ರಾಜ್ಯದಲ್ಲಿರುವ ಮಿನೆಪೊಲಿಸ್ ಎಂಬ ಪ್ರಾಂತ್ಯದಲ್ಲಿರುವ ಹೆರಾಲ್ಡ್ ರಾಬಿನ್ಸನ್ ಎಂಬ ವಿಶಾಲವಾದ ಹುಲ್ಲುಗಾವಲಿನಲ್ಲಿ ಮದೀನಾ ಲೇಕ್ಸ್ ಎಂಬ ಟೌನ್ ಶಿಪ್ ನಿರ್ಮಿಸಲು, ಮಿನೆಸೊಟಾದ ಬ್ಲೈನ್ ಎಂಬ ನಗರದ ನಿವಾಸಿ ಹಾಗೂ ಭಾರತ ಮೂಲದ ಝಿಕಾರ್ ಯೂಸುಫ್ ಎಂಬ ಉದ್ಯಮಿ ನಿರ್ಧರಿಸಿದ್ದಾರೆ. ಇದು ಸ್ಥಳೀಯರ ಅಸಮಾಧಾನಕ್ಕೆ ಕಾರಣವಾಗಿದೆ. ಮಿನೆಸೊಟಾದಲ್ಲಿ ಎಲ್ಲಾ ಧರ್ಮೀಯರು ಐಕಮತ್ಯದಿಂದ ಜೀವನ ನಡೆಸುತ್ತಿದ್ದು ಈಗ ಮುಸ್ಲಿಮರಿಗಾಗಿ ಪ್ರತ್ಯೇಕ ಟೌನ್ ಶಿಪ್ ಕಟ್ಟಿದರೆ ಸಮಾಜವನ್ನು ಒಡೆದಂತಾಗುತ್ತದೆ ಎಂದು ಅವರು ವಾದಿಸಿದ್ದಾರೆ.**

**ಟೌನ್ ಶಿಪ್ ವಿಶೇಷವೇನು?:** ವಿಶಾಲವಾದ ಈ ಟೌನ್ ಶಿಪ್‌ನಲ್ಲಿ 434 ಮನೆಗಳನ್ನು, ವಿಲ್ಲಾಗಳನ್ನು ನಿರ್ಮಿಸಲು ನಿರ್ಧರಿಸಲಾಗಿದೆ. ಈ ಟೌನ್ ಶಿಪ್ ನಲ್ಲಿ ಐಷಾರಾಮಿ ರೆಸ್ಟೋರೆಂಟ್‌ಗಳು, ಆಟದ ಮೈದಾನಗಳು, ಒಂದು ಪಾರ್ಕ್, ವಿಶಾಲವಾದ ಮಸೀದಿಯೊಂದು ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ. ಇದನ್ನೊಂದು ಮಾದರಿ ಮುಸ್ಲಿಂ ಟೌನ್ ಶಿಪ್ ಆಗಿಯೂ, ಮುಸ್ಲಿಂ ಸ್ನೇಹಿ ಪರಿಸರವುಳ್ಳ ಟೌನ್ ಶಿಪ್ ಆಗಿಯೂ ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ.

**ಟೌನ್ ಶಿಪ್ ಬೆಂಬಲಿಗರು ಹೇಳೋದೇನು?:** ಮುಸ್ಲಿಮರಿಗಾಗಿ ಪ್ರತ್ಯೇಕ ಟೌನ್ ಶಿಪ್ ಕಟ್ಟುವುದರಿಂದ ಸಮಾಜದಲ್ಲಿ ಪ್ರತ್ಯೇಕತೆಯ ಭಾವನೆಯನ್ನು ಬಿತ್ತಿದಂತಾಗುತ್ತದೆ ಎಂದು ಟೌನ್ ಶಿಪ್ ವಿರೋಧಿಗಳು ಹೇಳುತ್ತಿದ್ದರೆ, ಟೌನ್ ಶಿಪ್ ಕಟ್ಟುವುದರಿಂದ ಮುಸ್ಲಿಮರಿಗೆ ಸಮಾನ ಮನಸ್ಕರು ಒಂದೆಡೆ ಸೇರಿ ತಮ್ಮ ಧಾರ್ಮಿಕ ಸಂಪ್ರದಾಯಗಳನ್ನು ಪಾಲಿಸಲು ಅನುವು ಮಾಡಿಕೊಟ್ಟಂತಾಗುತ್ತದೆ. ಅಷ್ಟಕ್ಕೂ ಅಲ್ಲಿ ಮುಸ್ಲಿಮೇತರರೂ ವಸತಿಗಳನ್ನು ಪಡೆಯಲು ಅವಕಾಶವಿದೆ ಎಂದು ಹೇಳಿದ್ದಾರೆ. ಆದರೆ, ಇದನ್ನು ಅಲ್ಲಿನ ಕೆಲವರು ಒಪ್ಪದೇ ಇರುವುದು ವಿವಾದಕ್ಕೆ ಕಾರಣವಾಗಿದೆ.

### ಮೊದಲು ವಿರೋಧ ಬಂದಿದ್ದು ಯಾರಿಂದ?

**ಈ ಟೌನ್ ಶಿಪ್ ನಿರ್ಮಾಣ ಮಾಡುವ ಜಾಗಕ್ಕೆ ಹತ್ತಿರದಲ್ಲೇ ವಾಸಿಸುತ್ತಿರುವ ಬ್ರಿಟನ್ ಮೂಲದ ಲ್ಯೂಕ್ ವಾಲ್ಟರ್ ಎಂಬುವರು ಈ ಟೌನ್ ಶಿಪ್ ಗೆ ಮೊದಲು ವಿರೋಧ ವ್ಯಕ್ತಪಡಿಸಿದ್ದರು. ವಿವಿಧ ದೇಶಗಳಿಂದ ಬಂದಿರುವ ನಾಗರಿಕರು ಮಿನೆಸೊಟಾದಲ್ಲಿ ಅನೇಕ ವರ್ಷಗಳಿಂದ ಸಾಮರಸ್ಯದ ಜೀವನ ನಡೆಸುತ್ತಿದ್ದಾರೆ. ಈಗ ಮುಸ್ಲಿಮರಿಗಾಗಿ ಅಲ್ಲಿ ಪ್ರತ್ಯೇಕ ಟೌನ್ ಶಿಪ್ ಕಟ್ಟಲು ಹೋದಾಗ ಅದು ಸಮಾಜದಲ್ಲಿ ಪ್ರತ್ಯೇಕತೆಯ ಬೀಜ ಬಿತ್ತಿದಂತಾಗುತ್ತದೆ. ಸದ್ಯಕ್ಕೆ ಮಿನೆಸೊಟಾದಲ್ಲಿರುವ ಎಲ್ಲಾ ಧರ್ಮೀಯರು ಮುಂದೆ ತಮಗಾಗಿ ಪ್ರತ್ಯೇಕ ಟೌನ್ ಶಿಪ್ ನಿರ್ಮಿಸಲು ಹೋದರೆ ಸಮಾಜದಲ್ಲಿ ವಿಭಜನೆ ಸೃಷ್ಟಿಯಾಗುತ್ತದೆ ಎಂದು ಅವರು ಹೇಳಿದ್ದಾರೆ.**

# ಚಿನ್ನದ ಹುಡುಗ ನದೀಮ್‌ಗೆ ಬಹುಮಾನಗಳ ಸುರಿಮಳೆ



**ಇಸ್ಲಾಮಾಬಾದ್:** ಒಲಂಪಿಕ್ ಜಾವೆಲಿನ್ ಚಿನ್ನದ ಪದಕ ವಿಜೇತ ಅರ್ಷದ್ ನದೀಮ್ ಅವರಿಗೆ ಒಟ್ಟು 250 ಮಿಲಿಯನ್ ರೂಪಾಯಿ ಬಹುಮಾನದ ಹಣ ಸಿಕ್ಕಿದೆ. ಇಸ್ಲಾಮಾಬಾದ್‌ನಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರು ನದೀಮ್‌ಗೆ 150 ಮಿಲಿಯನ್ ರೂಪಾಯಿಗಳನ್ನು (538,000) ಘೋಷಿಸಿದರು.

ಪಂಜಾಬ್‌ನ ಮುಖ್ಯಮಂತ್ರಿ ಮರಿಯಮ್ ನವಾಜ್ ಅವರು ಮಿಯಾನ್ ಚನ್ನು ಜಿಲ್ಲೆಯ ಹಳ್ಳಿಯೊಂದರಲ್ಲಿ ನದೀಮ್ ಅವರ ಮನೆಗೆ ಭೇಟಿ ನೀಡಿ 100 ಮಿಲಿಯನ್ ರೂಪಾಯಿಗಳ (359,000) ಚೆಕ್‌ಅನ್ನು ನೀಡಿದ ಗಂಟೆಗಳ ನಂತರ ಷರೀಫ್ ಅವರ ಘೋಷಣೆ ಹೊರಬಿದ್ದಿದೆ. ನದೀಮ್ ಅವರು ಪ್ಯಾರಿಸ್‌ನಲ್ಲಿ 92.97 ಮೀಟರ್‌ಗಳನ್ನು ಎಸೆದದ್ದನ್ನು ನೆನಪಿಟ್ಟುಕೊಳ್ಳಲು 92.97 ವಿಶೇಷ ನೋಂದಣಿ ಸಂಖ್ಯೆಯನ್ನು ಹೊಂದಿರುವ ಹೊಸ ಕಾರಿನ ಕೀಗಳನ್ನು ನವಾಜ್ ಅವರಿಗೆ ನೀಡಿದರು, ಇದು ಒಲಿಂಪಿಕ್ ದಾಖಲೆಯಾಗಿದೆ. ನದೀಮ್ ಅವರ ಕೋಚ್ ಸಲ್ಮಾನ್ ಇಕ್ಬಾಲ್ ಬಟ್ ಅವರಿಗೆ 5 ಮಿಲಿಯನ್ ರೂಪಾಯಿ (18,000) ನೀಡಲಾಯಿತು.

ನೀವು 250 ಮಿಲಿಯನ್ ಪಾಕಿಸ್ತಾನಿಯರ ಸಂತೋಷವನ್ನು ದ್ವಿಗುಣಗೊಳಿಸಿದ್ದೀರಿ ಏಕೆಂದರೆ ನಾವು ನಾಳೆ ನಮ್ಮ ಸ್ವಾತಂತ್ರ್ಯ ಅರ್ಷದ್ ನದೀಮ್ ರಾಷ್ಟ್ರಕ್ಕೆ ಅಭೂತ ಪೂರ್ವ ಸಂತೋಷವನ್ನು ತಂದಿದ್ದಾರೆ ಎಂದು ನವಾಜ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

1984 ಲಾಸ್ ಏಂಜಲೀಸ್ ಕ್ರೀಡಾಕೂಟದಲ್ಲಿ ಪುರುಷರ ಫೀಲ್ಡ್ ಹಾಕಿ ತಂಡವು ಗೆದ್ದಾಗ ನದೀಮ್ 40 ವರ್ಷಗಳಲ್ಲಿ ಪಾಕಿಸ್ತಾನದ ಮೊದಲ ಒಲಿಂಪಿಕ್ ಚಿನ್ನವನ್ನು ಗೆದ್ದು ಇತಿಹಾಸ ನಿರ್ಮಿಸಿದ್ದಾರೆ.

# ಕಾಶ್ಮೀರದ ದೋಡಾದಲ್ಲಿ ಭೀಕರ ಗುಂಡಿನ ಚಕಮಕಿ



**ನಾಲ್ವರು ಉಗ್ರರು ಫಿನಿಶ್**

**ಶ್ರೀನಗರ:** ಉಗ್ರರು ಹಾಗೂ ಸೇನಾಪಡೆಗಳ ನಡುವೆ ನಡೆದ ಭೀಕರ ಗುಂಡಿನ ಚಕಮಕಿಯಲ್ಲಿ ಓರ್ವ ಸೇನಾಧಿಕಾರಿ ಸಾವನ್ನಪ್ಪಿ ನಾಲ್ವರು ಭಯೋತ್ಪಾದಕರು ಹತರಾಗಿರುವ ಘಟನೆ ಜಮ್ಮು-ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ನಡೆದಿದೆ. ಘಟನೆಯಲ್ಲಿ 48ನೇ ರಾಷ್ಟ್ರೀಯ ರೈಫಲ್ಸ್‌ನ ಕ್ಯಾಪ್ಟನ್ ಅವರು ಸಾವನ್ನಪ್ಪಿರುವುದನ್ನು ಖಚಿತಪಡಿಸಿರುವ ಅಧಿಕಾರಿಗಳು ಕೆಲವು ಸೈನಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಮಾಹಿತಿ ನೀಡಿದ್ದಾರೆ. ಇದೇ ಸಂದರ್ಭದಲ್ಲಿ ಸೇನಾಪಡೆಗಳು ನಡೆಸಿದ ಮಿಂಚಿನ ಕಾರ್ಯಾಚರಣೆಯಲ್ಲಿ ನಾಲ್ವರು ಉಗ್ರರು ಸಾವನ್ನಪ್ಪಿದ್ದಾರೆ. ದೋಡಾ ಜಿಲ್ಲೆಯ ದಟ್ಟಾರಣ್ಯ ಪ್ರದೇಶದಲ್ಲಿ ಉಗ್ರರು ಅಡಗಿ ಕುಳಿತಿರುವ ಬಗ್ಗೆ ಖಚಿತ ಮಾಹಿತಿ ಪಡೆದ ಸೇನಾಪಡೆ ಮುಂಜಾನೆಯಿಂದಲೇ ಈ ಭಾಗದಲ್ಲಿ ಸುತ್ತುವರಿದಿತ್ತು. ಜಿಲ್ಲೆಯ ಶಿವ್ ನಗರ-ಅಸ್ಸಾರ್ ಪ್ರದೇಶದಲ್ಲಿ ಉಗ್ರರು ಅಡಗಿ ಕುಳಿತಿದ್ದಾರೆ ಎಂಬ ಸುಳಿವು ಸಿಕ್ಕ ತಕ್ಷಣವೇ ಪೊಲೀಸರು ಸುತ್ತುವರಿದು ಕಾರ್ಯಾಚರಣೆಗಿಳಿದರು. ಪ್ರಾರಂಭದಲ್ಲಿ ಶರಣಾಗುವಂತೆ ಉಗ್ರರಿಗೆ ಸೂಚನೆ ಕೊಡಲಾಗಿತ್ತು. ಆದರೆ ಶರಣಾಗುವ ಬದಲು ಸೇನಾಪಡೆಗಳ ಮೇಲೆ ಗುಂಡಿನ ದಾಳಿ ನಡೆಸಲಾಯಿತು.

ಇದಕ್ಕೆ ಪ್ರತಿಯಾಗಿ ಸೇನಾಪಡೆಗಳು ನಡೆಸಿದ ಗುಂಡಿನ ದಾಳಿಯಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ.

ಜೊತೆಗೆ ಎಂ 4 ಪಿಸ್ತೂಲು, ಬಟ್ಟೆ ಸೇರಿದಂತೆ ಕೆಲವು ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಡಗಿ ಕುಳಿತಿರುವ ಉಗ್ರರ ಶೋಧ ಕಾರ್ಯಕ್ಕೆ ಕಾರ್ಯಾಚರಣೆ ಮುಂದುವರೆದಿದೆ. ಆಕಾರ್ ಅರಣ್ಯಪ್ರದೇಶದಲ್ಲಿ ಉಗ್ರರು ಬೀಡು ಬಿಟ್ಟಿದ್ದು, ಪ್ರಮುಖವಾಗಿ ಸೇನಾಪಡೆ ಮತ್ತು ಸ್ಥಳೀಯ ಪೊಲೀಸರನ್ನು ಗುರಿಯಾಗಿಟ್ಟುಕೊಂಡು ದಾಳಿ ನಡೆಸುತ್ತಿದ್ದಾರೆ. ಇದೀಗ ಇಡೀ ಪ್ರದೇಶವನ್ನು ಸುತ್ತುವರಿದಿರುವ ಸೇನಾಪಡೆ ಉಗ್ರರನ್ನು ಸದೆಬಡಿಯಲು ಹೆಚ್ಚುವರಿ ಸೈನಿಕರನ್ನು ಕರೆಸಿಕೊಳ್ಳಲಾಗಿದೆ. ಘಟನೆ ಕುರಿತಂತೆ ಸೇನಾಪಡೆಯ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿಯವರು ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರಿಗೆ ಎಲ್ಲಾ ಮಾಹಿತಿಯನ್ನು ಒದಗಿಸಿದ್ದಾರೆ.

ದೋಡಾ ಮತ್ತು ಉಧಂಪುರ ಜಿಲ್ಲೆಯ ಪಟ್ನಿ ಟಾಪ್ ಎಂಬ ಪ್ರದೇಶದಿಂದ ಒಳನುಸುಳಿದ್ದಾರೆ ಎಂದು ಶಂಕಿಸಲಾಗಿದೆ. ಉಗ್ರರನ್ನು ಸಂಪೂರ್ಣವಾಗಿ ಸದೆಬಡಿಯುವಂತೆ ಸೇನಾಮುಖ್ಯಸ್ಥರು ಸೂಚನೆ ಕೊಟ್ಟಿದ್ದಾರೆ.

# ರಾಜಧನ ವಿಚಾರ: ಕೇಂದ್ರದ ಮೇಲ್ಮನವಿ ವಜಾಗೊಳಿಸಿದ ಸುಪ್ರೀಂ



**ನವದೆಹಲಿ:** ಖನಿಜಯುಕ್ತ ಭೂಮಿಯ ಮೇಲೆ ರಾಜಧನ ವಿಧಿಸಲು ರಾಜ್ಯ ಸರ್ಕಾರಗಳಿಗೆ ಹಕ್ಕು ಇದೆ ಎಂದು ನೀಡಿದ್ದ ತೀರ್ಪನ್ನು ಪುರ್ನಪರಿಶೀಲನೆ ಮಾಡಬೇಕು ಎಂಬ ಕೇಂದ್ರ ಸರ್ಕಾರದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ಕಳದೆ ಜುಲೈ 25ರ ತೀರ್ಪಿನ ಕುರಿತು ಕೇಂದ್ರದ ಮನವಿಯನ್ನು ಸುಪ್ರೀಂ ಕೋರ್ಟ್ ಬುಧವಾರ ತಿರಸ್ಕರಿಸಿದ್ದು, ಏಪ್ರಿಲ್ 1, 2005 ರಿಂದ ರಾಯಲ್ಟಿ ಮರುಪಾವತಿ ಪಡೆಯಲು ಅವಕಾಶ ನೀಡಿದೆ. ಈ ಹಿಂದೆ ಜುಲೈ 25ರ ತೀರ್ಪಿನ ನಿರೀಕ್ಷಿತ ಪರಿಣಾಮದ ವಾದವನ್ನು ತಿರಸ್ಕರಿಸಲಾಗಿದೆ ಎಂದು ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ಒಂಬತ್ತು ನ್ಯಾಯಾಧೀಶರ ಸಂವಿಧಾನ ಪೀಠ ಹೇಳಿದೆ. ನ್ಯಾಯಮೂರ್ತಿಗಳಾದ ಹೃಷಿಕೇಶ್ ರಾಯ್, ಅಭಯ್ ಎಸ್ ಓಕಾ, ಬಿವಿ ನಾಗರತ್ನ, ಜೆಬಿ ಪರ್ದಿವಾಲಾ, ಮನೋಜ್ ಮಿಶ್ರಾ, ಉಜ್ಜಲ್ ಭುಯಾನ್, ಸತೀಶ್ ಚಂದ್ರ ಶರ್ಮಾ, ಆಗಸ್ಟಿನ್ ಜಾರ್ಜ್ ಮಸಿಹ್ ಅವರನ್ನೊಳಗೊಂಡ ಪೀಠವು ಹಿಂದಿನ ಬಾಕಿ ಪಾವತಿಗೆ ಷರತ್ತುಗಳಿವೆ. ಜೊತೆಗೆ ಮುಂದಿನ 12 ವರ್ಷಗಳಲ್ಲಿ ಕೇಂದ್ರ ಮತ್ತು ಗಣಿ ಕಂಪನಿಗಳು ಖನಿಜ ಸಮೃದ್ಧ ರಾಜ್ಯಗಳಿಗೆ ಬಾಕಿ ಪಾವತಿ ಮಾಡಬಹುದಾಗಿದೆ ಎಂದು ಅದು ಹೇಳಿದೆ. ಆದಾಗ್ಯೂ, ಬಾಕಿ ಪಾವತಿಗೆ ಯಾವುದೇ ರೀತಿಯ ದಂಡವನ್ನು ವಿಧಿಸದಂತೆ ಪೀಠವು ರಾಜ್ಯಗಳಿಗೆ ನಿರ್ದೇಶನ ನೀಡಿದೆ. 1989 ರಿಂದ ಗಣಿ ಮತ್ತು ಖನಿಜಗಳ ಮೇಲೆ ವಿಧಿಸಲಾದ ರಾಯಲ್ಟಿ ಮರುಪಾವತಿಗಾಗಿ ರಾಜ್ಯಗಳ ಬೇಡಿಕೆಯನ್ನು ಕೇಂದ್ರವು ವಿರೋಧಿಸಿತ್ತು. ಇದು ಸಾರ್ವಜನಿಕರ ಮೇಲೆ ಪರಿಣಾಮ ಬೀರುತ್ತದೆ. ಆರಂಭಿಕ ಅಂದಾಜಿನ ಪ್ರಕಾರ ಕೇಂದ್ರ ಸರ್ಕಾರದ ಬೊಕ್ಕಸಕ್ಕೆ 70,000 ಕೋಟಿಗಳಷ್ಟು ಹೊರೆಯಾಗುತ್ತದೆ ಎಂದು ಹೇಳಿತ್ತು. ಖನಿಜ ಹಕ್ಕುಗಳ ಮೇಲೆ ತೆರಿಗೆ ವಿಧಿಸುವ ಅಧಿಕಾರವನ್ನು ನೀಡುವ ಜುಲೈ 25 ರ ತೀರ್ಪನ್ನು ಬಹುಮತದಿಂದ ನಿರ್ಧರಿಸಿದ ಪೀಠದ ಎಂಟು ನ್ಯಾಯಾಧೀಶರು ಈ ತೀರ್ಪಿಗೆ ಸಹಿ ಹಾಕುತ್ತಾರೆ ಎಂದು ಸಿಜೆಐ ಚಂದ್ರಚೂಡ್ ಹೇಳಿದರು. ಜುಲೈ 25ರ ತೀರ್ಪಿನಲ್ಲಿ ನ್ಯಾಯಮೂರ್ತಿ ನಾಗರತ್ನ ಅವರು ಭಿನ್ನಾಭಿಪ್ರಾಯ ವ್ಯಕ್ತಪಡಿಸಿರುವುದರಿಂದ ಬುಧವಾರದ ತೀರ್ಪಿಗೆ ಸಹಿ ಹಾಕುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

> **ಅಂತಹ ತೆರಿಗೆ ವಿಧಿಸಿದರೆ ಅದು ಅಮಾನ್ಯವಾಗುತ್ತದೆ ಹಾಗೂ ಅಸಾಂವಿಧಾನಿಕ ವಾಗುತ್ತದೆ. ಏಕರೂಪತೆಗಾಗಿ ಕೇಂದ್ರ ಸರ್ಕಾರವೇ ತೆರಿಗೆ ಪ್ರಮಾಣ ನಿರ್ಧರಿಸುತ್ತದೆ** -ಮೆಹ್ತಾ

ಜುಲೈ 25 ರಂದು 8:1 ರ ಬಹುಮತದ ತೀರ್ಪಿನಲ್ಲಿ, ಖನಿಜ ಹಕ್ಕುಗಳ ಮೇಲೆ ತೆರಿಗೆ ವಿಧಿಸುವ ಶಾಸಕಾಂಗ ಅಧಿಕಾರವನ್ನು ರಾಜ್ಯಗಳ ವ್ಯಾಪ್ತಿಗೆ ನೀಡಿ ಮಹತ್ವದ ತೀರ್ಪು ನೀಡಿತ್ತು. ಇದರಿಂದಾಗಿ 1989 ರ ತೀರ್ಪನ್ನು ರದ್ದುಗೊಂಡಿತ್ತು. ಇದು ಖನಿಜಗಳು ಮತ್ತು ಖನಿಜಗಳನ್ನು ಹೊಂದಿರುವ ಭೂಮಿಯ ಮೇಲೆ ರಾಯಧನವನ್ನು ವಿಧಿಸುವ ಅಧಿಕಾರವನ್ನು ಕೇಂದ್ರಕ್ಕೆ ಮಾತ್ರ ಹೊಂದಿದೆ ಎಂಬುದಾಗಿತ್ತು. 1989 ರ ತೀರ್ಪಿನ ನಂತರ ಕೆಲವು ಖನಿಜ ಶ್ರೀಮಂತ ರಾಜ್ಯಗಳು ಕೇಂದ್ರದಿಂದ ವಿಧಿಸಲಾದ ರಾಯಲ್ಟಿ ಮತ್ತು ಗಣಿ ಕಂಪನಿಗಳಿಂದ ತೆರಿಗೆಗಳನ್ನು ಮರುಪಾವತಿಸಲು ಕೋರಿದ್ದವು. ಮರುಪಾವತಿ ವಿಚಾರವನ್ನು ಜುಲೈ 31ರಂದು ವಿಚಾರಣೆ ನಡೆಸಿ ಆದೇಶವನ್ನು ಕಾಯ್ದಿರಿಸಲಾಗಿತ್ತು ರಾಜಧನ ಸಂಗ್ರಹಿಸಲು ರಾಜ್ಯ ಸರ್ಕಾರಗಳಿಗೆ ಅರ್ಹತೆ, ಅಧಿಕಾರ ಎರಡೂ ಇದೆ ಎಂದು ನ್ಯಾಯಾಲಯ ಹೇಳಿತ್ತು.

ಈ ತೀರ್ಪಿನಿಂದ ಒಡಿಶಾ, ಜಾರ್ಖಂಡ್, ಬಂಗಾಳ, ಛತ್ತೀಸ್‌ಗಢ, ಮಧ್ಯಪ್ರದೇಶ ಮತ್ತು ರಾಜಸ್ಥಾನದಂತಹ ಖನಿಜ ಸಂಪತ್ತನ್ನು ಹೊಂದಿರುವ ರಾಜ್ಯಗಳಿಗೆ ಅನುಕೂಲವಾಗಲಿದೆ. ಇಲ್ಲಿನ ಸರ್ಕಾರಗಳು ತಮ ರಾಜ್ಯದೊಳಗೆ ಕಾರ್ಯ ನಿರ್ವಹಣೆ ಮಾಡುತ್ತಿರುವ ಗಣಿ ಕಂಪೆನಿಗಳಿಂದ ಹೆಚ್ಚುವರಿ ರಾಜಸ್ವ ಸಂಗ್ರಹಿಸಲು ಸಾಧ್ಯವಾಗಲಿದೆ.

ರಾಜಸ್ವ ಮತ್ತು ಬಾಡಿಗೆಯ ಸಾಲ ಎರಡೂ ತೆರಿಗೆಯ ಉದ್ದೇಶವನ್ನು ಪೂರೈಸುವುದಿಲ್ಲ, ಖನಿಜ ಮೇಲೆ ತೆರಿಗೆ ವಿಧಿಸುವ ರಾಜ್ಯಗಳ ಅಧಿಕಾರದ ಮೇಲೆ ಮಿತಿಯ ಬಗ್ಗೆ ಗಣಿ, ಖನಿಜ ಅಭಿವೃದ್ಧಿ, ನಿಯಂತ್ರಣ ಕಾಯ್ದೆಯಲ್ಲಿ (ಎಂಎಂಡಿಆರ್‌ಎ) ಯಾವುದೇ ನಿಯಮ ಇಲ್ಲ ಎಂದು ತೀರ್ಪು ಹೇಳಿತ್ತು.

### ಸಂಸತ್‌ಗೆ ಮಾತ್ರ ಇದೆ ಎಂದಿದ್ದ ಸರ್ಕಾರ

**ಖನಿಜಗಳ ಮೇಲೆ ತೆರಿಗೆ ವಿಧಿಸುವ ಹಕ್ಕು ಸಂಸತ್‌ಗೆ ಮಾತ್ರವೇ ಇದೆ, ರಾಜ್ಯಗಳಿಗೆ ಇಲ್ಲ ಎಂದು ಕೇಂದ್ರ ಸರ್ಕಾರ ವಾದಿಸಿತ್ತು. ಮಾರ್ಚ್ ತಿಂಗಳಲ್ಲಿ ರಾಜ್ಯ ಸರ್ಕಾರಗಳ ವಾದ ಆಲಿಸಿದ್ದ ಸಿಜೆಐ, ರಾಜಸ್ವ ಸಂಗ್ರಹಣೆ ಅಧಿಕಾರವು ಸಂವಿಧಾನದ ಪ್ರಕಾರ ರಾಜ್ಯಗಳು ಮತ್ತು ಕೇಂದ್ರದ ನಡುವಿನ ಅಧಿಕಾರ ಹಂಚಿಕೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆಯೇ ಎಂದು ಕೇಂದ್ರ ಸರ್ಕಾರದ ಪರ ವಕೀಲರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರನ್ನು ಪ್ರಶ್ನಿಸಿದ್ದರು.**

# 50 ಲಕ್ಷ ರೂ. ಮೌಲ್ಯದ ಬೀದಿ ದೀಪಗಳ ಕಳವು



**ಲಕ್ನೋ:** ಅಯೋಧ್ಯೆಯ ರಾಮಪಥ, ಭಕ್ತಿ ಪಥದಲ್ಲಿದ್ದ 50 ಲಕ್ಷ ರೂ. ಮೌಲ್ಯದ ಬೀದಿ ದೀಪಗಳನ್ನು ಕಳವು ಮಾಡಲಾಗಿದೆ. ಆ.9 ರಂದು ದೂರು ದಾಖಲಿಸಿದ ನಂತರ ವಿಷಯ ಬೆಳಕಿಗೆ ಬಂದಿದೆ. 3,800ಕ್ಕೂ ಅಧಿಕ ಬೀದಿ ದೀಪಗಳು, 36 ಪ್ರೊಜೆಕ್ಟರ್ ದೀಪಗಳನ್ನು ಕಳವು ಮಾಡಲಾಗಿದ್ದು, ಪೊಲೀಸರಿಗೆ ದೂರು ನೀಡಲಾಗಿದೆ. ಮಾರ್ಗಗಳಲ್ಲಿ ದೀಪಗಳನ್ನು ಅಳವಡಿಸಿದ ಸಂಸ್ಥೆಗಳ ಪ್ರತಿನಿಧಿ, ರಾಮಜನಭೂಮಿ ಪೊಲೀಸ್ ಠಾಣೆಯಲ್ಲಿ ನೀಡಿದ ದೂರು ಆಧರಿಸಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಖಾಸಗಿ ಸಂಸ್ಥೆಗಳಾದ ಯಶ್ ಎಂಟರ್‌ಪ್ರೈಸಸ್ ಮತ್ತು ಕೃಷ್ಣಾ ಆಟೋಮೊಬೈಲ್ಸ್ ರಾಮಪಥದಲ್ಲಿ 6,400 ಬಿದಿರಿನ ದೀಪಗಳು ಮತ್ತು ಭಕ್ತಿಪಥದಲ್ಲಿ 96 ಗೋಬೋ ಪ್ರೊಜೆಕ್ಟರ್ ದೀಪಗಳನ್ನು ಅಳವಡಿಸಿವೆ. ಭಕ್ತಿ ಪಥವು ಅಯೋಧ್ಯೆಯ ರಾಮಮಂದಿರಕ್ಕೆ ಹೋಗುವ ಮುಖ್ಯ ರಸ್ತೆಯಾಗಿದ್ದು, ಶೃಂಗಾರ್ ಘಾಟ್ ಅನ್ನು ಹನುಮಾನ್ ಗರ್ಹಿ ಮತ್ತು ಅಂತಿಮವಾಗಿ ದೇವಸ್ಥಾನಕ್ಕೆ ಸಂಪರ್ಕಿಸುತ್ತದೆ.

ಅಯೋಧ್ಯೆಯಲ್ಲಿ ಹೆಚ್ಚಿನ ಭದ್ರತಾ ಪ್ರದೇಶದಲ್ಲಿರುವ ಭಕ್ತಿ ಪಥ, ರಾಮ ಪಥ ಮೇಲೆ ದೀಪಗಳನ್ನು ಅಳವಡಿಸಲಾಗಿತ್ತು. ಅಯೋಧ್ಯೆ ಅಭಿವೃದ್ಧಿ ಪ್ರಾಧಿಕಾರವು ನೀಡಿದ ಗುತ್ತಿಗೆಯಡಿಯಲ್ಲಿ ದೀಪಗಳನ್ನು ಸ್ಥಾಪಿಸಿದ ಯಶ್ ಎಂಟರ್‌ಪ್ರೈಸಸ್ ಮತ್ತು ಕೃಷ್ಣ ಆಟೋಮೊಬೈಲ್ಸ್ ಸಂಸ್ಥೆಯ ಪ್ರತಿನಿಯಿಂದ ದೂರು ದಾಖಲಾಗಿದೆ. ರಾಮಪಥದಲ್ಲಿ 6,400 ಬಿದಿರಿನ ದೀಪಗಳು ಮತ್ತು ಭಕ್ತಿ ಪಥದಲ್ಲಿ 96 ಪ್ರೊಜೆಕ್ಟರ್ ದೀಪಗಳನ್ನು ಅಳವಡಿಸಲಾಗಿದೆ. ಮಾರ್ಚ್ 19 ರವರೆಗೆ ಎಲ್ಲಾ ದೀಪಗಳು ಇದ್ದವು ಆದರೆ ಮೇ 9 ರಂದು ಪರಿಶೀಲನೆಯ ನಂತರ ಕೆಲವು ದೀಪಗಳು ಕಾಣೆಯಾಗಿರುವುದು ಕಂಡುಬಂದಿದೆ. ಇದುವರೆಗೆ ಸುಮಾರು 3,800 ದೀಪಗಳು ಬಿದಿರಿನ ದೀಪಗಳು ಮತ್ತು 36 ಪ್ರೊಜೆಕ್ಟರ್ ದೀಪಗಳನ್ನು ಕಳ್ಳರು ಕೊಯ್ದಿದ್ದಾರೆ ಎಂದು ಶೇಖರ್ ಶರ್ಮಾ ದೂರಿನಲ್ಲಿ ತಿಳಿಸಿದ್ದಾರೆ. ಅಯೋಧ್ಯೆಯ ಮತ್ತೊಂದು ಪ್ರಮುಖ ಮಾರ್ಗವಾದ ರಾಮಪಥ, 13 ಕಿಮೀ ಉದ್ದದ ಹೆದ್ದಾರಿಯಾಗಿದ್ದು, ಅದು ಸದಾತ್ಗಂಜ್ ಅನ್ನು ನಯಾ ಘಾಟ್ಗೆ ಸಂಪರ್ಕಿಸುತ್ತದೆ. ಪ್ರಯಾಣಿಕರು ನೇರವಾಗಿ ರಾಮಮಂದಿರಕ್ಕೆ ಪ್ರಯಾಣಿಸಲು ಅನುವು ಮಾಡಿಕೊಡುತ್ತದೆ.

ಅಯೋಧ್ಯೆ ಅಭಿವೃದ್ಧಿ ಪ್ರಾಧಿಕಾರದಿಂದ ಮಾರ್ಗಗಳಲ್ಲಿ ದೀಪಗಳನ್ನು ಅಳವಡಿಸುವ ಗುತ್ತಿಗೆಯನ್ನು ಇಬ್ಬರಿಗೆ ನೀಡಲಾಯಿತು. ಜನವರಿ 22 ರಂದು ಪವಿತ್ರ ನಗರದಲ್ಲಿ ರಾಮಮಂದಿರದ ಪ್ರತಿಷ್ಠಾಪನೆ ಸಮಾರಂಭದ ಮೊದಲು ಅಯೋಧ್ಯೆಯನ್ನು ಪ್ರಮುಖ ಯೋಜನೆಯಡಿ ನವೀಕರಿಸಲಾಗಿದೆ.

**ಖಾಸಗಿ ಸಂಸ್ಥೆಗಳು ಅಯೋಧ್ಯೆಯ ಅತ್ಯಂತ ಭದ್ರತಾ ಪ್ರದೇಶದಲ್ಲಿರುವ ಭಕ್ತಿಪಥ ಮತ್ತು ರಾಮಪಥದಲ್ಲಿ ಅಳವಡಿಸಲಾದ 50 ಲಕ್ಷಕ್ಕೂ ಹೆಚ್ಚು ಮೌಲ್ಯದ 3,800 ಬಿದಿರು ಮತ್ತು 36 ಪ್ರೊಜೆಕ್ಟರ್ ಲೈಟ್ಗಳನ್ನು ಸ್ಥಾಪಿಸಲಾಗಿದ್ದು, ಕಳ್ಳತನವಾಗಿದೆ ಎಂದು ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಈ ಸಂಬಂಧ ಎಫ್‌ಐಆರ್ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.**

# 6 ವರ್ಷದ ಬಾಲಕಿ, ಮೇಕೆ ಮೇಲೆ ಸರ್ಕಾರಿ ನೌಕರನಿಂದ ಅತ್ಯಾಚಾರ



**ಲಕ್ನೋ:** ಉತ್ತರ ಪ್ರದೇಶದ ಬುಲಂದ್‌ಶಹರ್‌ನಲ್ಲಿ ಆರು ವರ್ಷದ ದಲಿತ ಬಾಲಕಿಯ ಮೇಲೆ ಅತ್ಯಾಚಾರ ನಡೆಸಿ ನಂತರ ಮೇಕೆಯೊಂದಿಗೆ ಮೃಗೀಯ ಕೃತ್ಯ ಎಸಗಿದ್ದಕ್ಕಾಗಿ 57 ವರ್ಷದ ಸರ್ಕಾರಿ ಅಧಿಕಾರಿಯನ್ನು ಬಂಧಿಸಲಾಗಿದೆ.

ಸರ್ಕಾರಿ ಅಧಿಕಾರಿ ಅಧಿಕೃತ ಕೆಲಸಕ್ಕಾಗಿ ಗ್ರಾಮಕ್ಕೆ ಆಗಾಗ್ಗೆ ಬರುತ್ತಿದ್ದನು ಮತ್ತು ಹುಡುಗಿ ನೆರೆ ಹೊರೆಯವರ ಮಗುವಿನೊಂದಿಗೆ ಅಂಗಳದಲ್ಲಿ ಆಡುತ್ತಿದ್ದಾಗ ಯಾರೂ ಇಲ್ಲದಿರುವುದನು ಗಮನಿಸಿ ಅವರ ಮನೆಗೆ ಪ್ರವೇಶಿಸಿ ಈ ಕೃತ್ಯವೆಸಗಿದ್ದಾನೆ. ಆರು ವರ್ಷದ ಬಾಲಕಿ ಮೇಲೆ ಅತ್ಯಾಚಾರ ನಡೆಸಿದ ಅಧಿಕಾರಿಯನ್ನು ಅಮಾನತುಗೊಳಿಸಲಾಗಿದೆ ಮತ್ತು ರಾಜ್ಯ ಸರ್ಕಾರ ಬಾಲಕಿಯ ಕುಟುಂಬಕ್ಕೆ 8.25 ಲಕ್ಷ ನೆರವು ಘೋಷಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಸೂಲ್‌ಪುರ ಗ್ರಾಮದ ನಿವಾಸಿ ಗಜೇಂದ್ರ ಸಿಂಗ್ ಅವರು ಶಿಕಾರ್‌ಪುರ ಬ್ಲಾಕ್‌ನಲ್ಲಿ ಕೃಷಿ ಅಭಿವೃದ್ಧಿ ಅಧಿಕಾರಿಯಾಗಿ (ಕೃಷಿ ರಕ್ಷಣೆ) ನೇಮಕಗೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಸೋಮವಾರ ಸಂಜೆ ಅಹ್ಮದ್‌ಗಢ ಪೊಲೀಸ್ ಠಾಣಾ ವ್ಯಾಪ್ತಿಯ ಗ್ರಾಮವೊಂದಕ್ಕೆ ತೆರಳಿದ ಅವರು, ಬಾಲಕಿ ಮತ್ತು ಹುಡುಗ ಮನೆಯ ಅಂಗಳದಲ್ಲಿ ಆಟವಾಡುತ್ತಿರುವುದನ್ನು ಕಂಡು ಅಲ್ಲಿದ್ದ ಮಂಚದ ಮೇಲೆ ಕುಳಿತುಕೊಂಡರು ಎಂದು ಹಿರಿಯ ಪೊಲೀಸ್ ಅಧೀಕ್ಷಕ (ಬುಲಂದ್‌ಶಹರ್) ಶ್ಲೋಕ್ ಕುಮಾರ್ ತಿಳಿಸಿದ್ದಾರೆ.

ನಂತರ ಬಾಲಕಿಯ ಮೇಲೆ ಅತ್ಯಾಚಾರವೆಸಗಿದ್ದಾನೆ ಮತ್ತು ನಂತರ ಹತ್ತಿರದಲ್ಲಿ ಕಟ್ಟಿದ್ದ ಮೇಕೆಯೊಂದಿಗೆ ಅಸ್ವಾಭಾವಿಕ ಲೈಂಗಿಕ ಕ್ರಿಯೆ ನಡೆಸಿದ್ದಾನೆ. ಒಬ್ಬ ಹುಡುಗ ತನ್ನ ಫೋನ್‌ನಲ್ಲಿ ಅಪರಾಧವನ್ನು ಸೆರೆಹಿಡಿದಿರುವುದರಿಂದ ಕೃತ್ಯ ಬಯಲಾಗಿದೆ.

ಅವನು ಸರ್ಕಾರಿ ಅಧಿಕಾರಿಯಾಗಿರುವುದರಿಂದ ಅವನನ್ನು ಅಮಾನತುಗೊಳಿಸಲಾಗಿದೆ ಮತ್ತು ಇಲಾಖಾ ವಿಚಾರಣೆ ನಡೆಸಲಾಗುತ್ತಿದೆ.

# ಸಂಜೆ 6ರ ನಂತರ ಕೆಲಸ ಮಾಡಲ್ಲ: ಸ್ಟಾರ್‌ಬಕ್ಸ್ ಸಿಇಒ ವಜಾ

## ತಕ್ಷಣದಿಂದ ಜಾರಿಗೆ ಬರುವಂತೆ ಆದೇಶ ನೀಡಲಾಗಿದೆ ಎಂದು ಸ್ಟಾರ್ ಬಕ್ಸ್ ಅಧಿಕೃತ ಮಾಧ್ಯಮ ಪ್ರಕಟಣೆ



**ಅಮೆರಿಕ:** ಸಂಜೆ 6ರ ನಂತರ ಕೆಲಸ ಮಾಡಲ್ಲ ಎಂಬ ಹೇಳಿಕೆ ಮೂಲಕ ಕುಖ್ಯಾತರಾಗಿದ್ದ ಸ್ಟಾರ್‌ಬಕ್ಸ್ ಸಿಇಒ ಭಾರತೀಯ ಮೂಲದ ಲಕ್ಷ್ಮಣ್ ನರ ಸಿಂಹನ್ ಅವರನ್ನು ಸಿಇಒ ಸ್ಥಾನದಿಂದ ಕೆಳಗಿಳಿಸಲಾಗಿದೆ. ಅವರ ಜಾಗಕ್ಕೆ ಬ್ರಿಯಾನ್ ನಿಕೋಲ್ ಅವರನ್ನು ಸಿಇಒ ಆಗಿ ನೇಮಕ ಮಾಡಲಾಗಿದೆ. ಲಕ್ಷ್ಮಣ್ ನರಸಿಂಹನ್ ಅವರನ್ನು ಸ್ಟಾರ್ ಬಕ್ಸ್ ನ ಸಿಇಒ ಹುದ್ದೆಯಿಂದ ಮಾತ್ರವಲ್ಲ, ಸ್ಟಾರ್ ಬಕ್ಸ್ ಮಂಡಳಿಯ ಸದಸ್ಯತ್ವದಿಂದಲೂ ತೆರವು ಮಾಡಲಾಗಿದೆ. ತಕ್ಷಣದಿಂದ ಜಾರಿಗೆ ಬರುವಂತೆ ಆದೇಶ ನೀಡಲಾಗಿದೆ ಎಂದು ಸ್ಟಾರ್ ಬಕ್ಸ್ ತನ್ನ ಅಧಿಕೃತ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಿದೆ.

2023ರ ಮಾರ್ಚ್‌ನಲ್ಲಿ ಲಕ್ಷ್ಮಣ್ ನರಸಿಂಹನ್ ಅವರನ್ನು ಸ್ಟಾರ್ ಬಕ್ಸ್‌ನ ಸಿಇಒ ಹುದ್ದೆಗೆ ನೇಮಕ ಮಾಡಲಾಗಿತ್ತು. ಇದಕ್ಕೂ ಮುನ್ನ ಪೆಪ್ಸಿಕೋ, ಇನ್ನಿತರ ಗ್ರಾಹಕ ಪ್ರಧಾನ ಉತ್ಪನ್ನಗಳ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸಿದ ಅನುಭವ ಲಕ್ಷ್ಮಣ್ ನರಸಿಂಹನ್ ಅವರಿಗೆ ಇದೆ. ಸ್ಟಾರ್ ಬಕ್ಸ್‌ನ ಸುದೀರ್ಘ ಅವಧಿಯ ಸಿಇಒ ಹಾಗೂ ಮಧ್ಯಂತರ ಮಾಲೀಕರಾದ ಹಾವರ್ಡ್ ಶುಲ್ಟ್ಜ್ ಅವರ ಸ್ಥಾನವನ್ನು ಲಕ್ಷ್ಮಣ್ ನರಸಿಂಹನ್ ತುಂಬಿದ್ದರು. ಕಳೆದ ತಿಂಗಳಷ್ಟೇ ಲಕ್ಷ್ಮಣ್ ನರಸಿಂಹನ್ ಅವರು ಅಮೆರಿಕದ ಉದ್ಯಮ ಪತ್ರಿಕೆ ಯಾದ ಫಾರ್ಚ್ಯೂನ್‌ಗೆ ನೀಡಿದ್ದ ಸಂದರ್ಶನವೊಂದು ಭಾರೀ ಸದ್ದು ಮಾಡಿತ್ತು. ಈ ಸಂದರ್ಶನದಲ್ಲಿ ಲಕ್ಷ್ಮಣ್ ನರಸಿಂಹನ್ ಕೆಲಸ ಮತ್ತು ಜೀವನ ನಿರ್ವಹಣೆ ನಡುವಣ ಸಮತೋಲನ ಸಾಧಿಸುವ ಕುರಿತಾಗಿ ಮಾತನಾಡಿದ್ದರು.

ನಾನು ಪ್ರತಿ ದಿನ ಸಂಜೆ 6 ಗಂಟೆ ಒಳಗೆ ನನ್ನ ಕೆಲಸ ಕಾರ್ಯಗಳನ್ನ ಮುಗಿಸುತ್ತೇನೆ. ಸಂಜೆ 6 ಗಂಟೆ ನಂತರ ಯಾರಾದ್ರೂ ನನ್ನ ಬಳಿ ಮಾತನಾಡಲು ಬಂದರೆ ನಾಳೆ ಬರಲು ಹೇಳುತ್ತೇನೆ. ಒಂದು ವೇಳೆ ಅದು ಅತ್ಯಂತ ಮಹತ್ವದ ವಿಚಾರವಾಗಿದ್ದರೆ ಮಾತ್ರ ನಾನು ಅದೇ ದಿನ ಮಾತನಾಡಲು ಬಯಸುತ್ತೇನೆ ಎಂದು 57 ವರ್ಷ ವಯಸ್ಸಿನ ಲಕ್ಷ್ಮಣ್ ನರಸಿಂಹನ್ ಹೇಳಿದ್ದಾರೆ. ಉದ್ಯೋಗ, ವೈಯಕ್ತಿಕ ಜೀವನಕ್ಕೆ ಸಮಯ ಹೊಂದಿಸುವ ವಿಚಾರದಲ್ಲಿ ತಾವು ಶಿಸ್ತನ್ನು ಪಾಲಿಸೋದಾಗಿ ಹೇಳಿದ್ದ ಲಕ್ಷ್ಮಣ್ ನರಸಿಂಹನ್, ಸಂಜೆ 6 ರ ನಂತರ ನಾನು ಯಾವುದಾದರೂ ಕಚೇರಿ ವಿಚಾರದ ಸಂಬಂಧ ಮಾತುಕತೆ ನಡೆಸುತ್ತಿದ್ದೇನೆ ಎಂದಾದರೆ ಅದು ಅತ್ಯಂತ ಮಹತ್ವದ ವಿಚಾರವೇ ಆಗಿರುತ್ತದೆ ಎಂದು ಲಕ್ಷ್ಮಣ್ ನರಸಿಂಹನ್ ಹೇಳಿದ್ದರು. ಜುಲೈ 7 ರಂದು ಲಕ್ಷ್ಮಣ್ ನರಸಿಂಹನ್ ಅವರು ನೀಡಿದ್ದ ಈ ಸಂದರ್ಶನದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಇದೀಗ ವೈರಲ್ ಆಗಿದೆ. ಸಂಜೆ 6ರ ಬಳಿಕ ಕೆಲಸ ಮಾಡಲ್ಲ ಎಂದಿದ್ದಕ್ಕೆ ಲಕ್ಷ್ಮಣ್ ನರಸಿಂಹನ್ ಅವರನ್ನು ವಜಾ ಮಾಡಲಾಗಿದೆ ಎಂದು ನೆಟ್ಟಿಗರು ವಾದಿಸುತ್ತಿದ್ದಾರೆ.

### ವರ್ಕ್-ಲೈಫ್-ಬ್ಯಾಲನ್ಸ್ ಹೇಳಿಕೆ ವೈರಲ್

**ಸ್ಟಾರ್ ಬಕ್ಸ್ ಸಿಇಒ ಹುದ್ದೆ ಹಾಗೂ ಸ್ಟಾರ್ ಬಕ್ಸ್ ಆಡಳಿತ ಮಂಡಳಿಯ ಸದಸ್ಯತ್ವದಿಂದ ಲಕ್ಷ್ಮಣ್ ನರಸಿಂಹನ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಜಾ ಮಾಡಿ ಆದೇಶ ನೀಡಲಾಗಿದೆ. ಲಕ್ಷ್ಮಣ್ ನರಸಿಂಹನ್ ಜಾಗಕ್ಕೆ ಬ್ರಿಯಾನ್ ನಿಕೋಲ್ ಅವರನ್ನು ನೂತನ ಸಿಇಒ ಆಗಿ ನೇಮಕ ಮಾಡಲಾಗಿದೆ. ಸ್ಟಾರ್ ಬಕ್ಸ್ ಅಧಿಕೃತ ಮಾಧ್ಯಮ ಪ್ರಕಟಣೆ ಹಲವು ಚರ್ಚೆಗಳನ್ನ ಹುಟ್ಟು ಹಾಕಿದೆ. ಏಕೆಂದರೆ ಕೆಲ ದಿನಗಳ ಹಿಂದಷ್ಟೇ ನರಸಿಂಹನ್ ಅವರ ವರ್ಕ್-ಲೈಫ್-ಬ್ಯಾಲನ್ಸ್ ಹೇಳಿಕೆ ವೈರಲ್ ಆಗಿತ್ತು.**

### ಲಕ್ಷ್ಮಣ್ ನರಸಿಂಹನ್ ಅವರನ್ನು ಹೊಗಳಿದ ಸ್ಟಾರ್ ಬಕ್ಸ್

**ಸಾಮಾಜಿಕ ಜಾಲತಾಣಗಳಲ್ಲಿ ಲಕ್ಷ್ಮಣ್ ನರಸಿಂಹನ್ ಅವರನ್ನು ವಜಾ ಮಾಡಲಾಗಿದೆ ಎಂಬ ಸುದ್ದಿಗಳ ನಡುವಲ್ಲೇ ಸ್ಟಾರ್ ಬಕ್ಸ್ ಲಕ್ಷ್ಮಣ್ ನರಸಿಂಹನ್ ಅವರನ್ನು ಹೊಗಳಿದೆ. ತನ್ನ ಕಾರ್ಯಾವಧಿಯಲ್ಲಿ ಲಕ್ಷ್ಮಣ್ ನರಸಿಂಹನ್ ಸ್ಟಾರ್ ಬಕ್ಸ್‌ನ ಬ್ರ್ಯಾಂಡ್ ಮೌಲ್ಯ ವೃದ್ಧಿಗೆ ಗಣನೀಯ ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದೆ. ಸಂಸ್ಥೆಯ ಪೂರೈಕೆ ಸಂಪರ್ಕವನ್ನು ಬಲ ಪಡಿಸೋದು ಸೇರಿದಂತೆ ಹಲವು ರಂಗಗಳಲ್ಲಿ ಲಕ್ಷ್ಮಣ್ ನರಸಿಂಹನ್ ದುಡಿದಿದ್ದಾರೆ ಎಂದು ಸಂಸ್ಥೆ ಹೇಳಿದೆ.**

## ಮಿನಿ ನ್ಯೂಸ್

### ಚುನಾವಣಾ ಸ್ಪರ್ಧೆಯಿಂದ ಹಿಂದೆ ಸರಿದ ಕಿಶಿಡಾ, ಜಪಾನ್‌ಗೆ ಹೊಸ ಪ್ರಧಾನಿ

**ಟೋಕಿಯೋ:** ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಜಪಾನ್ ಪ್ರಧಾನಿ ಫ್ಯೂಮಿಯೊ ಕಿಶಿಡಾ ಘೋಷಿಸಿದ್ದಾರೆ. ಹೀಗಾಗಿ ಮುಂದೆ ಆದೇಶಕ್ಕೆ ಹೊಸ ಪ್ರಧಾನಿ ಆಯ್ಕೆಯಾಗುವುದು ಬಹುತೇಕ ಖಚಿತ ಎನ್ನುವಂತಾಗಿದೆ. ಜಪಾನ್ ಪ್ರಧಾನಿ ಫ್ಯೂಮಿಯೊ ಕಿಶಿಡಾ ಅವರು ಸೆಪ್ಟೆಂಬರ್‌ನಲ್ಲಿ ಮುಂಬರುವ ಪಕ್ಷದ ನಾಯಕತ್ವದ ಮತದಲ್ಲಿ ಸ್ಪರ್ಧಿಸುವುದಿಲ್ಲ ಎಂದು ತಮ್ಮ ಆಡಳಿತ ಪಕ್ಷದ ಕಾರ್ಯನಿರ್ವಾಹಕರಿಗೆ ಸೂಚಿಸಿದ್ದಾರೆ, ಅಂದರೆ ಜಪಾನ್ ಹೊಸ ಪ್ರಧಾನಿಯನ್ನು ಹೊಂದಲಿದೆ ಎಂದು ಜಪಾನ್‌ನ ಮಾಧ್ಯಮಗಳು ವರದಿ ಮಾಡಿವೆ. ಕಿಶಿಡಾ 2021 ರಲ್ಲಿ ಅವರ ಆಡಳಿತ ಲಿಬರಲ್ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷರಾಗಿ ಆಯ್ಕೆ ಯಾದರು, ಅವರ ಅವಧಿಯು ಸೆಪ್ಟೆಂಬರ್‌ನಲ್ಲಿ ಮುಕ್ತಾಯಗೊಳ್ಳುತ್ತದೆ. ಅವರು ಮತ್ತೊಂದು ಅವಧಿಯ ಓಟದಿಂದ ಹೊರಗುಳಿಯುತ್ತಾರೆ ಎಂದರೆ ಪಕ್ಷದ ಮತವನ್ನು ಗೆಲ್ಲುವ ಹೊಸ ನಾಯಕ ಅವರನ್ನು ಪ್ರಧಾನ ಮಂತ್ರಿಯಾಗುತ್ತಾರೆ ಏಕೆಂದರೆ ಸಂಸತ್ತಿನ ಎರಡೂ ಸದನಗಳನ್ನು ನಿಯಂತ್ರಿಸುತ್ತದೆ. ಅವರ ಪಕ್ಷದ ಭ್ರಷ್ಟಾಚಾರ ಹಗರಣಗಳಿಂದ ಕುಟು ಕಿರುವ ಕಿಶಿಡಾ ಅವರು ಶೇ.20ಕ್ಕಿಂತ ಕಡಿಮೆಯಾದ ಬೆಂಬಲದ ರೇಟಿಂಗ್‌ಗಳನ್ನು ಹೊಂದಿದ್ದಾರೆ.

### ಪತ್ನಿ ಮತ್ತು ಮೂವರು ಅಪ್ರಾಪ್ತ ಮಕ್ಕಳನ್ನು ಕೊಂದ ವ್ಯಕ್ತಿಗೆ ಮರಣದಂಡನೆ ಶಿಕ್ಷೆ

**ಬಿಲಾಸ್ಪುರ:** ಛತ್ತೀಸ್ಗಢದ ಬಿಲಾಸ್ಪುರ ಜಿಲ್ಲೆಯಲ್ಲಿ ಶೀಲ ಶಂಕೆ ವ್ಯಕ್ತಪಡಿಸಿ ಪತ್ನಿ, ಮೂವರು ಮಕ್ಕಳನ್ನು ತೀವ್ರ ಕ್ರೂರವಾಗಿ ಕೊಂದ ಅಪರಾಧಿಗೆ ಸ್ಥಳೀಯ ನ್ಯಾಯಾಲಯವು ಮರಣದಂಡನೆ ಶಿಕ್ಷೆ ವಿಧಿಸಿದೆ. ಹತ್ತನೇ ಹೆಚ್ಚುವರಿ ಸೆಷನ್ಸ್ ಮತ್ತು ಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶ ಅವಿನಾಶ್ ಕೆ ತ್ರಿಪಾಠಿ ಈ ತೀರ್ಪು ನೀಡಿದ್ದಾರೆ. ಈ ವರ್ಷದ ಜನವರಿಯಲ್ಲಿ ದಾಖಲಾದ ಪ್ರಕರಣವೊಂದಲ್ಲಿ ತನ್ನ ಕುಟುಂಬದ ನಾಲ್ವರನ್ನು ಕೊಲೆ ಮಾಡಿದ ಆರೋಪಿ ಉಮೆಂದ್ ಕೇವತ್ ತಪ್ಪಿತಸ್ಥ ಎಂದು ನ್ಯಾಯಾಲಯ ತೀರ್ಪು ನೀಡಿದೆ. ಅಪರಾಧಿ ಸಾಯುವವರೆಗೂ ಅವನ ಕುತ್ತಿಗೆಗೆ ಹಗ್ಗದಿಂದ ನೇಣು ಹಾಕಬೇಕು ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ. ಇದಲ್ಲದೆ 10,000 ರೂಪಾಯಿ ದಂಡವನ್ನೂ ವಿಧಿಸಿದೆ. ವಿಚಾರಣೆ ಮುಗಿದ ನಂತರ, ನ್ಯಾಯಾಲಯವು ಜುಲೈ 29 ರಂದು ಆದೇಶವನ್ನು ಕಾಯ್ದಿರಿಸಿತು ಮತ್ತು ಅದನ್ನು ಈಗ ಪ್ರಕಟಿಸಲಾಗಿದೆ.

ಕಳೆದ ಜನವರಿ 1 ರಂದು, ಬಿಲಾಸ್ಪುರ ಜಿಲ್ಲೆಯ ಮಸ್ತೂರಿ ಪೊಲೀಸ್ ಠಾಣಾ ವ್ಯಾಪ್ತಿಯ ಹಿರ್ರಿ ಗ್ರಾಮದ ಮನೆಯಲ್ಲಿ ಪತ್ನಿ ಸುಕೃತಾ (32), ಇಬ್ಬರು ಪುತ್ರಿಯರಾದ ಖುಷಿ (5), ಲೀಸಾ (3) ಮತ್ತು ಮಗ ಪವನ್ (18 ತಿಂಗಳು)ಮಗುವನ್ನು ಕತ್ತು ಹಿಸುಕಿ ಕೊಂದಿದ್ದ ಉಮೆಂದ್ ಕೇವತ್ ಪರಾರಿಯಾಗಿದ್ದ. ಪೊಲೀಸರು ಈತನನ್ನು ಬಂಧಿಸಿ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಕ್ಕೆ ಸಲ್ಲಿಸಿದ್ದರು.

### ಏರ್ ಇಂಡಿಯಾ ವಿಮಾನಕ್ಕೆ ಹಕ್ಕಿ ಡಿಕ್ಕಿ, ಟೇಕ್ ಆಫ್ ಸ್ಥಗಿತ

**ಪಣಜಿ:** ಗೋವಾದ ದಾಬೋಲಿಮ್ ವಿಮಾನ ನಿಲ್ದಾಣದಿಂದ ಮುಂಬೈಗೆ ತೆರಳಲು ಹೊರಟಿದ್ದ ಏರ್ ಇಂಡಿಯಾ ವಿಮಾನ ಬೆಳಗ್ಗೆ ಹಕ್ಕಿ ಢಿಕ್ಕಿಯಾದ ಕಾರಣ ಟೇಕ್‌ಆಫ್ ಸ್ಥಗಿತಗೊಳಿಸಬೇಕಾಯಿತು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇಂದು ಬೆಳಗ್ಗೆ 6.45ಕ್ಕೆ ಈ ಘಟನೆ ನಡೆದಿದೆ ಎಂದರು. ಮುಂಬೈಗೆ ತೆರಳುತ್ತಿದ್ದ ವಿಮಾನವು ರನ್‌ವೇನಲ್ಲಿ ಮೇಲೇರಲು ಮುಂದಾಗುವ ಸಂದರ್ಭದಲ್ಲಿ ಹಕ್ಕಿಯೊಂದು ಇಂಜಿನ್‌ಗೆ ಸಿಕ್ಕಿಕೊಂಡಿದೆ,ಎಚ್ಚೆತ್ತ ಪೈಲೆಟ್ ಹಾರಾಟ ನಿಲ್ಲಿಸಿದ್ದಾರೆ. ಪ್ರಯಾಣಿಕರಿಗೆ ಬದಲಿ ಸೇವೆ ಒದಗಿಸಿ ವಿಮಾನವನ್ನು ತಂಗುದಾಣಕ್ಕೆ ತಂದು ನಿಲ್ಲಿಸಲಾಗಿದೆ ಎಂದು ವಿಮಾನ ನಿಲ್ದಾಣದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಘಟನೆಯ ಬಗ್ಗೆ ತನಿಖೆ ಕೈಗೊಳ್ಳಲಾಗಿದೆ.

### 50 ಸಾವಿರ ಲಂಚ ಪಡೆದಿದ್ದ ಡಿಸಿ ಕಚೇರಿ ಅಧಿಕಾರಿ ಅರೆಸ್ಟ್

**ಪಾಲ್ಘರ್:** ಭೂ ವ್ಯವಹಾರದ ವಿಷಯದಲ್ಲಿ ವ್ಯಕ್ತಿಯೊಬ್ಬರಿಂದ 50,000 ರೂಪಾಯಿ ಲಂಚ ಪಡೆದ ಆರೋಪದ ಮೇಲೆ ಮಹಾರಾಷ್ಟ್ರದ ಪಾಲ್ಘರ್ ಜಿಲ್ಲಾಧಿಕಾರಿ ಕಚೇರಿಯ ಹಿರಿಯ ಅಧಿಕಾರಿಯೊಬ್ಬರನ್ನು ಭ್ರಷ್ಟಾಚಾರ ನಿಗ್ರಹ ದಳ ಬಂಧಿಸಿದೆ. ಡಿಸಿ ಕಚೇರಿಗೆ ಆಗಮಿಸಿದ್ದ ವ್ಯಕ್ತಿಯೊಬ್ಬರು ತಮ್ಮ ಜಮೀನಿನ ಸರ್ವೆ ಸೇರಿ ಹಲವು ವಿಷಯದ ತಕರಾರಿಗೆ ಅರ್ಜಿ ಸಲ್ಲಿಸಿದ್ದರು ಇದಕ್ಕೆ ಹಿರಿಯ ಅಧಿಕಾರಿಯೊಬ್ಬರು 1 ಲಕ್ಷಕ್ಕೆ ಬೇಡಿಕೆ ಇಟ್ಟು ನಂತರ 50 ಸಾವಿರ ನೀಡುವಂತೆ ಒತ್ತಾಯಿಸಿದ್ದರು.

ಈ ಬಗ್ಗೆ ಎಸಿ ಬಿಗೆ ದೂರು ನೀಡಲಾಗಿತ್ತು ಇದರಿಂದ ಜಿಲ್ಲಾಧಿಕಾರಿ ಕಚೇರಿಯಲ್ಲಿ ದಿಢೀರ್ ದಾಳಿ ನಡೆಸಿ ದೂರುದಾರರಿಂದ ಲಂಚದ ಮೊತ್ತವನ್ನು ಸ್ವೀಕರಿಸುತ್ತಿದ್ದಾಗ ಆರೋಪಿ ಸಿಕ್ಕಿಬಿದ್ದಿದ್ದಾರೆ ಎಂದು ತಿಳಿಸಲಾಗಿದೆ. ಆರೋಪಿಯನ್ನು ವಶಕ್ಕೆ ಪಡೆಯಲಾಗಿದ್ದು ಜಿಲ್ಲಾಧಿಕಾರಿ ಕೂಡ ಎಸಿಬಿ ಕಾರ್ಯಾಚರಣೆ ಮೆಚ್ಚಿದ್ದಾರೆ.

### ಶಾಸಕ ಮನೆ ಮುಂದೆ ಪತ್ನಿ ಪ್ರತಿಭಟನೆ

**ಹೈದರಾಬಾದ್:** ಆಂಧ್ರದ ವೈಎಸ್‌ಆರ್ ಕಾಂಗ್ರೆಸ್ ಎಂಎಲ್ಸಿ ದುವ್ವಾಡ ಶ್ರೀನಿವಾಸ್ ಅವರ ಪತ್ನಿ ವಾಣಿ ಆರಂಭಿಸಿರುವ ಪ್ರತಿಭಟನೆ ಆರನೇ ದಿನಕ್ಕೆ ಕಾಲಿಟ್ಟಿದೆ. ವಾಣಿ ಮತ್ತು ಹಿರಿಯ ಪುತ್ರಿ ಹೈಂದವಿ ಶ್ರೀಕಾಕುಳಂ ಜಿಲ್ಲೆಯ ತೆಕ್ಕಲಿಯ ಮನೆ ಹೊರಗೆ ಕಾರ್ ಶೆಡ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಶಾಸಕನ ಬಂಧನಕ್ಕೆ ಪಟ್ಟುಹಿಡಿದಿದ್ದಾರೆ. ತನ್ನ ಪತಿ ವೈಎಸ್ ಆರ್ ಕಾಂಗ್ರೆಸ್‌ನ ಕಾರ್ಯಕರ್ತೆ ದಿವ್ವಳ ಮಾಧುರಿ ಜೊತೆ ವಿವಾಹೇತರ ಸಂಬಂಧ ಹೊಂದಿದ್ದಾರೆ ಎಂದು ವಾಣಿ ಆರೋಪಿಸಿದ್ದಾರೆ. ಸಮಸ್ಯೆ ಬಗೆಹರಿಸಲು ಎರಡು ಕುಟುಂಬಗಳ ನಡುವೆ ಮಾತುಕತೆ ನಡೆದಿದೆ. ಆದರೆ ದುವ್ವಾಡ ಶ್ರೀನಿವಾಸ್ ಮತ್ತು ವಾಣಿ ಈಗಾಗಲೇ ತೆಕ್ಕಲಿ ಪೊಲೀಸ್ ಠಾಣೆಯಲ್ಲಿ ಪರಸ್ಪರ ದೂರು ದಾಖಲಿಸಿಕೊಂಡಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಈ ಘಟನೆ ಆಂಧ್ರದಲ್ಲಿ ಸಂಚಲನ ಮೂಡಿಸಿದೆ.

### ಶೇಖ್ ಹಸೀನಾ ಪದಚ್ಯುತಿ ಹಿಂದೆ ತನ್ನ ಕೈವಾಡವಿಲ್ಲ ಎಂದ ಅಮೆರಿಕ

**ವಾಷಿಂಗ್ಟನ್:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಪದಚ್ಯುತಿ ಹಿಂದೆ ತನ್ನ ಕೈವಾಡವಿದೆ ಎಂಬ ಆರೋಪವನ್ನು ತಳ್ಳಿಹಾಕಿರುವ ಅಮೆರಿಕ, 'ಇದು ನಗೆಪಾಟಲಿನ ಹೇಳಿಕೆಯಾಗಿದ್ದು, ಸಂಪೂರ್ಣ ಸುಳ್ಳಿನಿಂದ ಕೂಡಿದೆ' ಎಂದಿದೆ.

ಹಸೀನಾ ಆರೋಪದ ಕುರಿತು ಪ್ರತಿಕ್ರಿಯಿಸಿದ ಅಮೆರಿಕದ ರಾಜ್ಯ ಇಲಾಖೆಯ ಪ್ರಧಾನ ಉಪ ವಕ್ತಾರ ವೇದಾಂತ್ ಪಟೇಲ್, 'ಇದು ನಗೆಪಾಟಲಿನ ಹೇಳಿಕೆಯಾಗಿದೆ. ಹಸೀನಾ ಪದಚ್ಯುತಿ ಹಿಂದೆ ಅಮೆರಿಕದ ಕೈವಾಡವಿಲ್ಲ' ಎಂದರು.



# ಆ.16ರಂದು ಯುಐ ಚಿತ್ರದ ಸರ್‌ಪ್ರೈಸ್

ರಿಯಲ್ ಸ್ಟಾರ್ ಉಪೇಂದ್ರ ನಟಿಸಿ, ನಿರ್ದೇಶನ ಮಾಡಿರುವ 'ಯುಐ' ಸಿನಿಮಾಗಾಗಿ ಎದುರು ನೋಡುತ್ತಿರುವ ಫ್ಯಾನ್ಸ್‌ಗೆ ಇದೀಗ ಇಂಟರೆಸ್ಟಿಂಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಯುಐ ಸಿನಿಮಾದ ಗುಡ್ ನ್ಯೂಸ್ ಕೊಡಲು ಮುಹೂರ್ತ ಫಿಕ್ಸ್ ಆಗಿದೆ.

ಇದೇ ಆ.16ರಂದು 'ಯುಐ' ಸಿನಿಮಾ ಬಗ್ಗೆ ಅಭಿಮಾನಿಗಳು ಖುಷಿಪಡುವಂತಹ ಸುದ್ದಿ ಹೊರಬೀಳಲಿದೆ. ಚಿತ್ರದ ಬಗ್ಗೆ ಬಿಗ್ ಅನೌನ್ಸ್‌ಮೆಂಟ್ ಬಗ್ಗೆ ಎಂದು ಉಪೇಂದ್ರ ಸೋಷಿಯಲ್ ಮೀಡಿಯಾದಲ್ಲಿ ಅಧಿಕೃತವಾಗಿ ತಿಳಿಸಿದ್ದಾರೆ. ಈ ಸಿನಿಮಾ ರಿಲೀಸ್ ಕುರಿತು ಮತ್ತು ಚಿತ್ರದ ಟ್ರೈಲರ್ ಬಗ್ಗೆ ಅಪ್‌ಡೇಟ್ ಸಿಗಲಿದೆ ಎನ್ನಲಾಗಿದೆ. ಅಧಿಕೃತ ಮಾಹಿತಿಗಾಗಿ ಕಾದುನೋಡಬೇಕಿದೆ. ಟೈಟಲ್‌ನಲ್ಲೇ ವಿಭಿನ್ನತೆ ತೋರಿಸಿರುವ ನಟ ಉಪೇಂದ್ರ, ಈ ಬಾರಿ ಕಲಿಯುಗದ ಕಥೆ ಹೇಳೋಕೆ ಹೊರಟಿದ್ದಾರೆ. ಉಪೇಂದ್ರಗೆ ಜೋಡಿಯಾಗಿ ಕೊಡಗಿನ ಬೆಡಗಿ ರೀಷ್ಮಾ ನಾಣಯ್ಯ ನಟಿಸಿದ್ದಾರೆ. ಈ ಚಿತ್ರವನ್ನು ಲಹರಿ ಸಂಸ್ಥೆ ಕೆ ಪಿ ಶ್ರೀಕಾಂತ್ ಜಂಟಿಯಾಗಿ ನಿರ್ಮಾಣ ಮಾಡಿದ್ದಾರೆ. ಈ ಚಿತ್ರಕ್ಕೆ 'ಕಾಂತಾರ' ಖ್ಯಾತಿಯ ಅಜನೀಶ್ ಲೋಕನಾಥ್ ಸಂಗೀತವಿದೆ. ಅಂದಹಾಗೆ, 'ಯುಐ' ಸಿನಿಮಾ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ.





# ಎಡಗೈಯೇ ಅಪಘಾತಕ್ಕೆ ಕಾರಣ

ಅಂತಾರಾಷ್ಟ್ರೀಯ ಎಡಗೈ ಬಳಕೆದಾರರ ದಿನದ ಅಂಗವಾಗಿ 'ಎಡಗೈ ಅಪಘಾತಕ್ಕೆ ಕಾರಣ' ಸಿನಿಮಾ ತಂಡದಿಂದ ಹೊಸ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. ಎಡಗೈ ಬಳಸುವವರನ್ನೇ ಗಮನದಲ್ಲಿಟ್ಟುಕೊಂಡು, ಅವರ ಜೀವನ ಶೈಲಿ ಕುರಿತು ಈ ಚಿತ್ರ ಕಟ್ಟಿಕೊಡಲಾಗಿದೆ. ಅದರಂತೆಯೇ ಪೋಸ್ಟರ್ ಕೂಡ ಆಕರ್ಷಕವಾಗಿದೆ. ಸೆಟ್ಟೇರಿದ ದಿನದಂದಲೂ ಚಿತ್ರತಂಡ ವಿಭಿನ್ನ ಪೋಸ್ಟರ್ ಅನಾವರಣ ಮಾಡುವ ಮೂಲಕ ಪ್ರೇಕ್ಷಕರ ಕುತೂಹಲವನ್ನು ಹೆಚ್ಚು ಮಾಡಿದೆ. ಎಡಗೈಯೇ ಅಪಘಾತಕ್ಕೆ ಕಾರಣ' ಸಿನಿಮಾಗೆ ಸಮರ್ಥ್ ಬಿ ಕಡಕೊಳ್ ಆಕ್ಷನ್ ಕಟ್ ಹೇಳಿದ್ದು, ಇದು ಇವರ ಚೊಚ್ಚಲ ನಿರ್ದೇಶನದ ಚಿತ್ರವಾಗಿದೆ. ಮರ್ಡರ್ ಮಿಸ್ಟರಿ, ಡಾರ್ಕ್ ಕಾಮಿಡಿ ಹಾಗೂ ಸಸ್ಪೆನ್ಸ್‌ಥ್ರಿಲ್ಲರ್ ಸಬ್ಜೆಕ್ಟ್ ಒಳಗೊಂಡ ಕಥಾ ಹಂದರ ಈ ಸಿನಿಮಾದಲ್ಲಿದೆ. ದೂದ್ ಪೇಡ ದಿಗಂತ್ ನಾಯಕನಾಗಿ ನಟಿಸಿದ್ದು, ಅವರಿಗೆ ಜೋಡಿಯಾಗಿ ಹೊಸ ನಟಿ ಧನು ಹರ್ಷ ನಟಿಸಿದ್ದಾರೆ. ನಿಧಿ ಸುಬ್ಬಯ್ಯ, ರಾಧಿಕಾ ನಾರಾಯಣ್, ಭಜರಂಗಿ ಲೋಕಿ, ಕೃಷ್ಣ ಹೆಬ್ಬಾಳ್ ಕೂಡಾ ಚಿತ್ರದ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.

# ಶ್ರೀನಗರ ಕಿಟ್ಟಿಗೆ ರಾಗಿಣಿ ವಿಲನ್

ಸ್ಯಾಂಡಲ್‌ವುಡ್ ಬ್ಯೂಟಿ ರಾಗಿಣಿ ದ್ವಿವೇದಿ ಸದ್ಯ ಕನ್ನಡ ಮತ್ತು ಪರಭಾಷೆಯ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಹೊಸ ಬಗೆಯ ಪಾತ್ರದಲ್ಲಿ ಕಾಣಿಸಿಕೊಳ್ಳಲು ನಟಿ ಮುಂದಾಗಿದ್ದಾರೆ. ಶ್ರೀನಗರ ಕಿಟ್ಟಿಗೆ ವಿಲನ್ ಆಗಿ ರಾಗಿಣಿ ಕಾಣಿಸಿಕೊಂಡಿದ್ದಾರೆ. 'ಸಂಜು ವೆಡ್ಸ್ ಗೀತಾ ಪಾರ್ಟ್ 2' ಸಿನಿಮಾದಲ್ಲಿ ಶ್ರೀನಗರ ಕಿಟ್ಟಿ ಮತ್ತು ರಚಿತಾ ರಾಮ್ ಲೀಡ್ ರೋಲ್‌ನಲ್ಲಿ ಕಾಣಿಸಿಕೊಳ್ತಿದ್ದಾರೆ. ಈ ಚಿತ್ರದಲ್ಲಿ ಹೀರೋ ಶ್ರೀನಗರ ಕಿಟ್ಟಿಗೆ ರಾಗಿಣಿ ವಿಲನ್ ಆಗಿ ಠಕ್ಕರ್ ಕೊಡಲಿದ್ದಾರೆ. ಹೀರೋಯಿನ್ ಆಗಿ ಗ್ಲ್ಯಾಮರ್ ಗೊಂಬೆಯಾಗಿ ಗುರುತಿಸಿಕೊಂಡಿದ್ದ ನಟಿ ರಾಗಿಣಿ, 'ಸಂಜು ವೆಡ್ಸ್ ಗೀತಾ 2' ಮೂಲಕ ವಿಭಿನ್ನ ಪಾತ್ರದಲ್ಲಿ ನಟಿಸುವ ಪ್ರಯತ್ನ ಮಾಡುತ್ತಿದ್ದಾರೆ. ಚಿತ್ರದಲ್ಲಿ ರಾಗಿಣಿ ವಿಲನ್ ಎಂದು ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಅದಷ್ಟೇ ಅಲ್ಲ, ಚಿತ್ರದಲ್ಲಿ ಸ್ಪೆಷಲ್ ಹಾಡಿಗೂ ಕೂಡ ನಟಿ ಹೆಜ್ಜೆ ಹಾಕಿದ್ದಾರೆ. ಇನ್ನೂ ಶ್ರೀನಗರ ಕಿಟ್ಟಿ, ರಮ್ಯಾ ನಟನೆಯ 'ಸಂಜು ವೆಡ್ಸ್ ಗೀತಾ' ಮೊದಲ ಭಾಗ ಸೂಪರ್ ಡೂಪರ್ ಹಿಟ್ ಆಗಿತ್ತು. ಹಾಗಾಗಿ ನಾಗಶೇಖರ್ ನಿರ್ದೇಶನದ ಈ ಸಿನಿಮಾ ಬಗ್ಗೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ. ರಿಲೀಸ್‌ಗಾಗಿ ಫ್ಯಾನ್ಸ್ ಕಾಯುತ್ತಿದ್ದಾರೆ.



ಸಂಜು ವೆಡ್ಸ್ ಗೀತಾ 2

# ಉದ್ಯಮಿ ಕಬೀರ್ ಜೊತೆಗಿನ ಡೇಟಿಂಗ್ ಸುದ್ದಿ ಸುಳ್ಳು

ಬಾಲಿವುಡ್ ಬೆಡಗಿ ಕೃತಿ ಸನೋನ್ ಸಿನಿಮಾಗಿಂತ ಆಗಾಗ ವೈಯಕ್ತಿಕ ವಿಚಾರವಾಗಿ ಸುದ್ದಿಯಾಗುತ್ತಲೇ ಇರುತ್ತಾರೆ. ಇದೀಗ ಉದ್ಯಮಿ ಕಬೀರ್ ಬಹಿಯಾ ಜೊತೆಗಿನ ಡೇಟಿಂಗ್ ಬಗ್ಗೆ ನಟಿ ಪ್ರತಿಕ್ರಿಯೆ ನೀಡಿದ್ದಾರೆ. ಕಬೀರ್ ಜೊತೆಗಿನ ರಿಲೇಷನ್‌ಶಿಪ್ ಸುದ್ದಿ ಸುಳ್ಳು ಎಂದು ಕೃತಿ ಸನೋನ್ ಸ್ಪಷ್ಟನೆ ನೀಡಿದ್ದಾರೆ. ಸುಳ್ಳು ಸುದ್ದಿ ವೈರಲ್ ಆದಾಗ ನನಗೆ ಮಾತ್ರವಲ್ಲದೇ ನಮ್ಮ ಕುಟುಂಬಕ್ಕೂ ನೋವಾಗುತ್ತದೆ. ಒಬ್ಬರ ಬಗ್ಗೆ ಕಟ್ಟುಕಥೆ ಹರಡುವುದಕ್ಕೂ ಮುನ್ನ ನಿಜವೇನು ಎಂಬುದು ತಿಳಿದುಕೊಳ್ಳಬೇಕು. ಇಂತಹ ವಿಚಾರಗಳು ಸೋಷಿಯಲ್ ಮೀಡಿಯಾದಲ್ಲಿ ಬೇಗನೆ ವೈರಲ್ ಆಗುತ್ತದೆ. ಹೀಗೆ ಸುಳ್ಳು ಸುದ್ದಿ ಪ್ರತಿ ಬಾರಿ ಹಬ್ಬಿದಾಗ ಸ್ಪಷ್ಟನೆ ನೀಡುವುದು ಕಿರಿಕಿರಿ ಆಗುತ್ತದೆ. ಅದಕ್ಕಿಂತ ದೊಡ್ಡ ತಲೆನೋವು ಬೇರೊಂದಿಲ್ಲ ಎಂದು ಸಂದರ್ಶನವೊಂದರಲ್ಲಿ ಕೃತಿ ಸನೋನ್ ಮಾತನಾಡಿದ್ದಾರೆ. ಈ ಮೂಲಕ ಕಬೀರ್ ಜೊತೆಗಿನ ಡೇಟಿಂಗ್ ವಿಚಾರ ಸುಳ್ಳು ಎಂದು ಕ್ಲ್ಯಾರಿಟಿ ಕೊಟ್ಟಿದ್ದಾರೆ.

ಇತ್ತೀಚೆಗೆ ತನಗಿಂತ 10 ವರ್ಷ ಕಿರಿಯನಾಗಿರುವ ಕಬೀರ್ ಜೊತೆ ಕೃತಿ ಸನೋನ್ ಗ್ರೀಸ್‌ನಲ್ಲಿ ಹುಟ್ಟುಹಬ್ಬ ಆಚರಿಸಿಕೊಂಡಿದ್ದಾರೆ ಎನ್ನಲಾದ ಕೆಲ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು. ಇಬ್ಬರ ಸಂಬಂಧದ ಬಗ್ಗೆ ಭಾರೀ ಚರ್ಚೆ ಶುರುವಾಗಿತ್ತು. ಈ ವಿಷ್ಯ ಕೃತಿ ಕಿವಿಗೂ ಬಿದ್ದಿದೆ. ಈ ಹಿನ್ನೆಲೆ ನಟಿ ಸ್ಪಷ್ಟನೆ ನೀಡುವ ಕೆಲಸ ಮಾಡಿದ್ದಾರೆ.

ಅಂದಹಾಗೆ, 'ಕ್ರೀವ್' ಸಿನಿಮಾದ ಸಕ್ಸಸ್ ನಂತರ 'ಕಣ್ಣಪ್ಪ' ಸಿನಿಮಾದಲ್ಲಿ ಕೃತಿ ಸನೋನ್ ಕಾಣಿಸಿಕೊಳ್ತಿದ್ದಾರೆ. ಬಾಲಿವುಡ್‌ನ ಹಲವು ಪ್ರಾಜೆಕ್ಟ್‌ಗಳು ನಟಿಯ ಕೈಯಲ್ಲಿವೆ.

# ತೆಲುಗು ಬಿಗ್ ಬಾಸ್ ಶುರು

ಕಿರುತೆರೆ ಅತೀ ದೊಡ್ಡ ರಿಯಾಲಿಟಿ ಶೋ ಬಿಗ್ ಬಾಸ್ ಕನ್ನಡ ಸೀಸನ್ 11ರ ಶುರುವಾಗಲು ದಿನಗಣನೆ ಆರಂಭವಾಗಿದೆ. ಇದರ ನಡುವೆ ತೆಲುಗಿನ ಬಿಗ್ ಬಾಸ್ ಬಗ್ಗೆ ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಇದೇ ಸೆಪ್ಟೆಂಬರ್‌ನಿಂದ ತೆಲುಗಿನ ಬಿಗ್ ಬಾಸ್ ಸೀಸನ್- 8 ಶುರುವಾಗುವ ಕುರಿತು ಅಧಿಕೃತ ಮಾಹಿತಿ ಹೊರಬಿದ್ದಿದೆ. ಇದರ ಜೊತೆ ಸಂಭಾವ್ಯರ ಪಟ್ಟಿಯಲ್ಲಿ ಅನೇಕರ ಹೆಸರು ಹರಿದಾಡುತ್ತಿದೆ. ಅದರಲ್ಲಿ ಇಬ್ಬರು ಕನ್ನಡತಿಯರ ಹೆಸರು ಇದೆ.

ಇದೇ ಸೆ.8ರಂದು ಬಿಗ್ ಬಾಸ್ ತೆಲುಗಿಗೆ ಅದ್ಧೂರಿ ಚಾಲನೆ ಸಿಗಲಿದೆ. ಸಂಜೆ 6 ಗಂಟೆಯಿಂದ ಶೋ ಪ್ರಾರಂಭವಾಗಲಿದೆ. ನಾಗಾರ್ಜುನ ಅಕ್ಕಿನೇನಿ ಅವರ ಬಿಗ್ ಬಾಸ್ ಪ್ರೋಮೋ ರಿಲೀಸ್ ಆಗಿದ್ದು, ಎಲ್ಲರ ಗಮನ ಸೆಳೆಯುತ್ತಿದೆ. ಬಿಗ್ ಬಾಸ್ ಪ್ರೋಮೋ ರಿಲೀಸ್ ಆದ ಬೆನ್ನಲ್ಲೇ, ಸಂಭಾವ್ಯ ಅಭ್ಯರ್ಥಿಗಳ ಹೆಸರು ವೈರಲ್ ಆಗುತ್ತಿದೆ. ಅದರಂತೆ ಜ್ಯೋತಿಷ್ಯ ವೇಣುಸ್ವಾಮಿ, ಯೂಟ್ಯೂಬರ್ ಯಾದಂ ರಾಜು ರಿತು ಚೌಧರಿ, ಕಿರುತೆರೆ ತಾರೆಯರಾದ ಅಂಜಲಿ, ಹಿರಿಯ ನಟಿ ಸನಾ, ನಟ ಅನಿಲ್ ಗೀಲಾ, ಹಾಸ್ಯನಟ ಬುಂಚಿಕ್ ಬಬ್ಲು, ರಿಂಗ್ ರಿಯಾಜ್, ನಿರೂಪಕಿ ವಿಂಧ್ಯಾ ವಿಶಾಖ, ಪಾಗಲ್ ಪವಿತ್ರಾ, ಹೀಗೆ ಹಲವು ಜನರ ಹೆಸರಿದೆ. ಮೂಲತಃ ಕನ್ನಡದವರಾದ ಯಶ್ಮಿ ಗೌಡ, ತೇಜಸ್ವಿನಿ ಗೌಡ ದೊಡ್ಮನೆಗೆ ಕಾಲಿಡಲಿದ್ದಾರೆ ಎನ್ನಲಾಗಿದೆ.

ಮತ್ತೊಂದು ಇಂಟರೆಸ್ಟಿಂಗ್ ವಿಚಾರ ಅಂದರೆ, ನಂದಮೂರಿ ಕುಟುಂಬದಿಂದ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿರುವ ಚೈತನ್ಯ ಕೃಷ್ಣ ಬಿಗ್ ಬಾಸ್‌ಗೆ ಬರಲಿದ್ದಾರೆ ಎಂದು ಸುದ್ದಿ ಹಬ್ಬಿದೆ. ಅಧಿಕೃತ ಮಾಹಿತಿಗಾಗಿ ಸೆ.8ರವರೆಗೂ ಕಾದು ನೋಡಬೇಕಿದೆ.



ಸಂಭಾವ್ಯರ ಪಟ್ಟಿಯಲ್ಲಿ ಕನ್ನಡತಿಯರು

# ಕೆ.ಎಲ್ ರಾಹುಲ್ ಮತ್ತೆ ಆರ್‌ಸಿಬಿಗೆ

ಕನ್ನಡಿಗ ಕೆ.ಎಲ್ ರಾಹುಲ್ ಅವರು ಮುಂದಿನ ವರ್ಷ ನಡೆಯಲಿರುವ 18ನೇ ಆವೃತ್ತಿಯ ಐಪಿಎಲ್‌ನಲ್ಲಿ ಆರ್‌ಸಿಬಿ ಪರ ಆಡಲಿದ್ದಾರೆ ಎಂಬ ಸುದ್ದಿ ಹಲವು ದಿನಗಳಿಂದ ಕೇಳಿ ಬರುತ್ತಲೇ ಇದೆ. ಇದೀಗ ರಾಹುಲ್ ಆರ್‌ಸಿಬಿ ಸೇರುವ ಕುರಿತು ಮತ್ತೊಂದು ಬಿಗ್ ಅಪ್ಡೇಟ್ ಸಿಕ್ಕಿದೆ. ಹೌದು, ರಾಹುಲ್ ಅವರನ್ನು ಆರ್‌ಸಿಬಿಗೆ ಕರೆತರಲು ಅವರ ಗೆಳೆಯ ವಿರಾಟ್ ಕೊಹ್ಲಿ ಪ್ರಯತ್ನಿಸುತ್ತಿದ್ದಾರೆ ಎಂದು ತಿಳಿದುಬಂದಿದೆ.



ಇದೇ ವರ್ಷ ನಡೆದಿದ್ದ ಐಪಿಎಲ್ ವೇಳೆ ಆರ್. ಅಶ್ವಿನ್ ಜತೆಗಿನ ಕುಟ್ಟಿ ಸ್ಟೋರೀಸ್ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಕೆಎಲ್ ರಾಹುಲ್, 2013ರಲ್ಲಿ ವಿರಾಟ್ ಕೊಹ್ಲಿ ಅವರು ತನ್ನನ್ನು ಆರ್‌ಸಿಬಿ ತಂಡಕ್ಕೆ ಸೇರಿಸಿಕೊಂಡರು. ನಾನು ಬೆಂಗಳೂರು ತಂಡದಲ್ಲಿ ಆಡಲು ಇಷ್ಟಪಡುತ್ತೇನೆ. ನಾನು ಅಲ್ಲಿಂದಲೇ ಈ ಪಯಣ ಆರಂಭಿಸಿದೆ. ಅಲ್ಲಿಯೇ ಇದನ್ನು ಅಂತ್ಯಗೊಳಿಸಲು ಬಯಸುತ್ತೇನೆ. ಅದು ತನ್ನ ತಲೆಯಲ್ಲಿದೆ ಎಂದು ಹೇಳಿದ್ದರು. ಇದೀಗ ಕೊಹ್ಲಿ ಮತ್ತೆ ರಾಹುಲ್ ಅವರನ್ನು ಆರ್‌ಸಿಬಿ ತಂಡಕ್ಕೆ ಸೇರಿಸಿಕೊಳ್ಳಲು ಫ್ರಾಂಚೈಸಿ ಜತೆ ಮಾತುಕತೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ.

ಲಕ್ನೋ ತಂಡದ ಮಾಲಿಕ ಗೋಯೆಂಕಾ ತೋರಿದ್ದ ವರ್ತನೆಯಿಂದ ಬೇಸರಗೊಂಡಿರುವ ರಾಹುಲ್ ಈ ಬಾರಿ ಲಕ್ನೋ ತೊರೆಯುವುದು ಬಹುತೇಕ ಖಚಿತವಾಗಿದೆ. ಈ ಬಾರಿ ಆರ್‌ಸಿಬಿ ಕೇವಲ ಮೂರು ಆಟಗಾರರನ್ನು ಮಾತ್ರ ರೀಟೈನ್ ಮಾಡಿಕೊಳ್ಳಲಿದೆ ಎನ್ನಲಾಗಿದೆ. ವಿರಾಟ್ ಕೊಹ್ಲಿ, ಮೊಹಮ್ಮದ್ ಸಿರಾಜ್ ಮತ್ತು ವಿಲ್ ಜಾಕ್ಸ್ ಈ ಮೂವರು ಆಟಗಾರರು ಎನ್ನಲಾಗಿದೆ. ಕಳೆದ ಮೂರು ಸೀಸನ್‌ನಲ್ಲಿ ಫಾಫ್ ಡು ಪ್ಲೆಸಿಸ್ ಆರ್‌ಸಿಬಿ ತಂಡವನ್ನು ಮುನ್ನಡೆಸಿದರೂ ತಂಡದ ಭವಿಷ್ಯ ಮಾತ್ರ ಬದಲಾಗಲಿಲ್ಲ. ಹೀಗಾಗಿ ಅವರನ್ನು ಈ ಬಾರಿ ತಂಡದಿಂದ ಕೈಬಿಡಲು ನಿರ್ಧರಿಸಲಾಗಿದೆ ಎಂದು ವರದಿಯಾಗಿದೆ.

ಟಿ20ಗೆ ನಿವೃತ್ತಿ ಹೇಳಿ ಎಲ್ಲಾ ಒತ್ತಡ ಕಡಿಮೆ ಮಾಡಿರುವ ಕೊಹ್ಲಿಯೇ ಮತ್ತೆ ಆರ್‌ಸಿಬಿಗೆ ನಾಯಕನಾಗಲಿದ್ದಾರೆ ಎಂಬ ಮಾತುಗಳು ಕೂಡ ಕೇಳಿ ಬರುತ್ತಿವೆ.

ವಿರಾಟ್ ಕೊಹ್ಲಿ ಅವರು ಭಾರತ ತಂಡದ ಮೂರು ಮಾದರಿಯ ನಾಯಕತ್ವ ವಹಿಸಿಕೊಂಡಿದ್ದ ವೇಳೆ ಐಪಿಎಲ್‌ನಲ್ಲಿಯೂ ತಂಡವನ್ನು ಮುನ್ನಡೆಸುವುದು ಕಷ್ಟವಾಗುತ್ತದೆ, ಕೆಲಸದ ಒತ್ತಡದಿಂದಾಗಿ ಆಟದ ಕಡೆ ಸರಿಯಾಗಿ ಗಮನ ಕೊಡಲು ಸಾಧ್ಯವಾಗುತ್ತಿಲ್ಲ ಎಂದು ಐಪಿಎಲ್ ನಾಯಕತ್ವಕ್ಕೆ ರಾಜೀನಾಮೆ ನೀಡಿದ್ದರು.

ವಿರಾಟ್ ಕೊಹ್ಲಿ 2013ರಲ್ಲಿ ಆರ್‌ಸಿಬಿಯ ಪೂರ್ಣ ಪ್ರಮಾಣದ ನಾಯಕನಾಗಿ ನೇಮಕಗೊಂಡಿದ್ದರು. 2021ರ ತನಕ ಅವರು ಆರ್‌ಸಿಬಿಯನ್ನು ಮುನ್ನಡೆಸಿದ್ದರು. ಕೊಹ್ಲಿ ನಾಯಕತ್ವದಲ್ಲಿ ಒಟ್ಟು 140 ಪಂದ್ಯಗಳನ್ನು ಆಡಿದ್ದ ಆರ್‌ಸಿಬಿ 66 ಪಂದ್ಯಗಳನ್ನು ಜಯಿಸಿದೆ. 70 ಪಂದ್ಯಗಳಲ್ಲಿ ಸೋಲು ಕಂಡಿದೆ. ಐಪಿಎಲ್ ಇತಿಹಾಸದಲ್ಲಿ ವಿನ್ನಿಂಗ್ಸ್ ಸರಾಸರಿಯಲ್ಲಿ ಕೊಹ್ಲಿ ಮೂರನೇ ಸ್ಥಾನದಲ್ಲಿದ್ದಾರೆ. ಅವರ ನಾಯಕತ್ವದ ಸರಾಸರಿ ಗೆಲುವು ಶೇ. 46.15 ರಷ್ಟಿದೆ. ದಾಖಲೆ ಧೋನಿ ಹೆಸರಿನಲ್ಲಿದೆ. ಧೋನಿ ನಾಯಕತ್ವದ ಗೆಲುವಿನ ಸರಾಸರಿ 60.38 ರಷ್ಟಿದೆ.





# ಕೀನ್ಯಾ ತಂಡದ ಮುಖ್ಯ ಕೋಚ್ ಆಗಿ ಕನ್ನಡಿಗ

ಟೀಮ್ ಇಂಡಿಯಾದ ಮಾಜಿ ಆಟಗಾರ, ಕನ್ನಡಿಗ ದೊಡ್ಡ ಗಣೇಶ್ ಅವರು ಕೀನ್ಯಾ ರಾಷ್ಟ್ರೀಯ ತಂಡದ ಮುಖ್ಯ ಕೋಚ್ ಆಗಿ ನೇಮಕವಾಗಿದ್ದಾರೆ. 2012-13 ರಲ್ಲಿ ಗೋವಾ ತಂಡದ ಕೋಚ್ ಆಗಿ ಕಾರ್ಯ ನಿರ್ವಹಿಸಿದ್ದ ಕರ್ನಾಟಕ ವೇಗಿ ಇದೀಗ ರಾಷ್ಟ್ರೀಯ ತಂಡದ ಪರ ಹೊಸ ಇನಿಂಗ್ಸ್ ಆರಂಭಿಸಲು ಸಜ್ಜಾಗಿದ್ದಾರೆ. ದೊಡ್ಡ ಗಣೇಶ್ ಅವರ ನೇತೃತ್ವದಲ್ಲಿ ಕೀನ್ಯಾ ತಂಡವು ಮುಂಬರುವ ಐಸಿಸಿ ಡಿವಿಷನ್ 2 ಚಾಲೆಂಜ್ ಲೀಗ್‌ನಲ್ಲಿ ಕಣಕ್ಕಿಳಿಯಲಿದೆ. ಈ ಲೀಗ್‌ನಲ್ಲಿ ಕೀನ್ಯಾ ತಂಡದ ಎದುರಾಳಿಗಳಾಗಿ ಪಪುವಾ ನ್ಯೂಗಿನಿಯಾ, ಕತಾರ್, ಡೆನ್ಮಾರ್ಕ್ ಮತ್ತು ಜರ್ಸಿ ತಂಡಗಳು ಕಾಣಿಸಿಕೊಳ್ಳಲಿದೆ.

ಅಕ್ಟೋಬರ್ ತಿಂಗಳಲ್ಲಿ ಟಿ20 ವಿಶ್ವಕಪ್ ಆಫ್ರಿಕಾ ವಿಭಾಗದ ಅರ್ಹತಾ ಸುತ್ತು ನಡೆಯಲಿದ್ದು, ಈ ಸುತ್ತಿನಲ್ಲಿ ಕೀನ್ಯಾ ತಂಡ ಕಾಣಿಸಿಕೊಳ್ಳಲಿದೆ. ಹೀಗಾಗಿ ಒಂದು ಕಾಲದ ಬಲಿಷ್ಠ ತಂಡ ಎನಿಸಿಕೊಂಡಿದ್ದ ಕೀನ್ಯಾ ತಂಡವನ್ನು ಮತ್ತೆ ಮುನ್ನಲೆಗೆ ತರುವ ಮಹತ್ವದ ಜವಾಬ್ದಾರಿ ದೊಡ್ಡ ಗಣೇಶ್ ಅವರ ಮುಂದಿದೆ.

1990-2000 ರಲ್ಲಿ ದೇಶೀಯ ಅಂಗಳದಲ್ಲಿ ಸಂಚಲನ ಸೃಷ್ಟಿಸಿದ್ದ ದೊಡ್ಡ ಗಣೇಶ್ ಟೀಮ್ ಇಂಡಿಯಾ ಪರ ಒಟ್ಟು 5 ಪಂದ್ಯಗಳನ್ನಾಡಿದ್ದಾರೆ. ಭಾರತದ ಪರ 4 ಟೆಸ್ಟ್ ಪಂದ್ಯಗಳಲ್ಲಿ ಕಣಕ್ಕಿಳಿದಿರುವ ಕರ್ನಾಟಕ ವೇಗಿ 5 ವಿಕೆಟ್ ಕಬಳಿಸಿದ್ದರು. ಹಾಗೆಯೇ 1997 ರಲ್ಲಿ ನಡೆದ ಝಿಂಬಾಬ್ವೆ ವಿರುದ್ಧ ಏಕೈಕ ಏಕದಿನ ಪಂದ್ಯವಾಡಿದ್ದ ದೊಡ್ಡ ಗಣೇಶ್ ಅವರು ಒಂದು ವಿಕೆಟ್ ಪಡೆದಿದ್ದರು.

ಇನ್ನು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 104 ಪಂದ್ಯಗಳಲ್ಲಿ 20355 ಎಸೆತಗಳನ್ನು ಎಸೆದಿರುವ ದೊಡ್ಡ ಗಣೇಶ್ 10739 ರನ್‌ಗಳನ್ನು ನೀಡಿ 365 ವಿಕೆಟ್ ಕಬಳಿಸಿದ್ದಾರೆ. ಹಾಗೆಯೇ 89 ಲೀಸ್ಟ್ ಎ ಕ್ರಿಕೆಟ್‌ನಲ್ಲಿ 4346 ಎಸೆತಗಳ ಮೂಲಕ ಒಟ್ಟು 128 ವಿಕೆಟ್ ಉರುಳಿಸಿದ್ದಾರೆ.

ವಿಶೇಷ ಎಂದರೆ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ದೊಡ್ಡ ಗಣೇಶ್ 6 ಬಾರಿ 10 ಕ್ಕೂ ಅಧಿಕ ವಿಕೆಟ್ ಕಬಳಿಸಿದ್ದಾರೆ. ಹಾಗೆಯೇ 20 ಬಾರಿ 5+ ವಿಕೆಟ್ ಉರುಳಿಸಿ ಕರ್ನಾಟಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ಇದೀಗ ಕೀನ್ಯಾ ತಂಡದ ನೂತನ ಕೋಚ್ ಆಗಿ ದೊಡ್ಡ ಗಣೇಶ್ ಅವರು ಹೊಸ ಇನಿಂಗ್ಸ್ ಆರಂಭಿಸುತ್ತಿರುವುದು ವಿಶೇಷ.



# ಸ್ಯಾಂಟ್ನರ್ ಅದ್ಭುತ ಡೈವಿಂಗ್ ಕ್ಯಾಚ್

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ದಿ ಹಂಡ್ರೆಡ್ ಲೀಗ್‌ನಲ್ಲಿ ಮಿಚೆಲ್ ಸ್ಯಾಂಟ್ನರ್ ಅವರ ಫೀಲ್ಡಿಂಗ್ ಪರಾಕ್ರಮ ಮುಂದುವರೆದಿದೆ. ಓವಲ್ ಇನ್ವಿನ್ಸಿಬಲ್ಸ್ ವಿರುದ್ಧದ ಪಂದ್ಯದಲ್ಲಿ ಬೌಂಡರಿ ಲೈನ್‌ನಲ್ಲಿ ಅತ್ಯುತ್ತಮ ಡೈವಿಂಗ್ ಕ್ಯಾಚ್ ಹಿಡಿದು ಮಿಂಚಿದ್ದ ಸ್ಯಾಂಟ್ನರ್ ಇದೀಗ ಬ್ಯಾಕ್ ರನ್ನಿಂಗ್ ಕ್ಯಾಚ್‌ನೊಂದಿಗೆ ಎಲ್ಲರ ಹುಬ್ಬೇರುವಂತೆ ಮಾಡಿದ್ದಾರೆ. ಲೀಡ್ಸ್‌ನ ಹೆಂಡಿಗ್ಲೆ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ನಾರ್ಥನ್ ಸೂಪರ್ ಚಾರ್ಜರ್ಸ್ ಮತ್ತು ಲಂಡನ್ ಸ್ಪಿರಿಟ್ ತಂಡಗಳು ಮುಖಾಮುಖಿಯಾಗಿದ್ದವು.



ಮೊದಲು ಬ್ಯಾಟ್ ಮಾಡಿದ ಲಂಡನ್ ಸ್ಪಿರಿಟ್ ತಂಡದ ಪರ ಮೈಕೆಲ್ ಪೆಪ್ಪರ್ ಹಾಗೂ ಜೆನ್ನಿಂಗ್ಸ್ ಆರಂಭಿಕರಾಗಿ ಕಣಕ್ಕಿಳಿದಿದ್ದರು. ರೀಸ್ ಟೋಪ್ಲಿ ಎಸೆದ ಪಂದ್ಯದ 11ನೇ ಎಸೆತದಲ್ಲಿ ಮೈಕೆಲ್ ಪೆಪ್ಪರ್ ಲಾಂಗ್ ಆನ್‌ನತ್ತ ಬಾರಿಸಿದರು. ಇದೇ ವೇಳೆ ಮಿಡ್ ಆನ್‌ನಲ್ಲಿ ಫೀಲ್ಡಿಂಗ್‌ನಲ್ಲಿದ್ದ ಮಿಚೆಲ್ ಸ್ಯಾಂಟ್ನರ್ ಹಿಮ್ಮುಖವಾಗಿ ಓಡಿ ಹೋಗಿ ಅದ್ಭುತವಾಗಿ ಡೈವಿಂಗ್ ಕ್ಯಾಚ್ ಹಿಡಿದರು. ಸ್ಯಾಂಟ್ನರ್ ಅವರ ಈ ಬ್ಯಾಕ್ ರನ್ನಿಂಗ್ ನೋಡಿ ಇಡೀ ಪ್ರೇಕ್ಷಕರು ನಿಬ್ಬೆರಗಾದರು.

ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಲಂಡನ್ ಸ್ಪಿರಿಟ್ ತಂಡವು 100 ಎಸೆತಗಳಲ್ಲಿ 8 ವಿಕೆಟ್ ಕಳೆದುಕೊಂಡು 111 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ನಾರ್ಥನ್ ಸೂಪರ್ ಚಾರ್ಜರ್ಸ್ ತಂಡವು 44 ಎಸೆತಗಳಲ್ಲಿ 61 ರನ್ ಗಳಿಸಿದ್ದ ವೇಳೆ ಮಳೆ ಬಂದಿದ್ದರಿಂದ ಫಲಿತಾಂಶ ನಿರ್ಧರಿಸಲು ಡಕ್ ವರ್ತ್ ಲೂಯಿಸ್ ನಿಯಮದ ಮೊರೆ ಹೋಗಲಾಯಿತು. ಅದರಂತೆ ನಾರ್ಥನ್ ಸೂಪರ್ ಚಾರ್ಜರ್ಸ್ ತಂಡವು ಡಿಎಲ್‌ಎಸ್ ನಿಯಮದ ಪ್ರಕಾರ ಈ ಪಂದ್ಯದಲ್ಲಿ 21 ರನ್‌ಗಳ ಜಯ ಸಾಧಿಸಿದೆ.

# 15 ವರ್ಷಗಳ ಬಳಿಕ ಟಿ20 ಕ್ರಿಕೆಟ್‌ಗೆ ಆಡಲು ಜೇಮ್ಸ್ ಆ್ಯಂಡರ್ಸನ್

ಇಂಗ್ಲೆಂಡ್‌ನ ಸರ್ವಶ್ರೇಷ್ಠ ಬೌಲರ್ ಜೇಮ್ಸ್ ಆ್ಯಂಡರ್ಸನ್ ಕೊನೆಯ ಬಾರಿ ಟಿ20 ಪಂದ್ಯವಾಡಿದ್ದು 2009 ರಲ್ಲಿ. ಇದೀಗ 15 ವರ್ಷಗಳ ಬಳಿಕ ಮತ್ತೆ ಟಿ20 ಕ್ರಿಕೆಟ್ ಆಡುವ ಇಂಗಿತ ವ್ಯಕ್ತಪಡಿಸಿದ್ದಾರೆ. ಅದು ಸಹ ತಮ್ಮ 42ನೇ ವಯಸ್ಸಿನಲ್ಲಿ ಎಂಬುದು ವಿಶೇಷ.

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ದಿ ಹಂಡ್ರೆಡ್ ಲೀಗ್ ವೀಕ್ಷಿಸುತ್ತಿದ್ದೇನೆ. ಈ ಲೀಗ್‌ನಲ್ಲಿ ಒಬ್ಬ ಬೌಲರ್‌ಗೆ ಕೇವಲ 20 ಎಸೆತಗಳು ಮಾತ್ರ ಇದೆ. ವಿಶೇಷ ಎಂದರೆ ಮೊದಲ 20 ಎಸೆತಗಳಲ್ಲಿ ಚೆಂಡು ಸ್ವಿಂಗ್ ಪಡೆಯುತ್ತಿರುವುದನ್ನು ನಾನು ಗಮನಿಸಿದ್ದೇನೆ. ನಾನು ಸಹ ಅದನ್ನು ಮಾಡಬಲ್ಲೆ ಎಂದು ಜೇಮ್ಸ್ ಅಯಂಡರ್ಸನ್ ಹೇಳಿದ್ದಾರೆ.

ಈ ಹೇಳಿಕೆಯೊಂದಿಗೆ, ಚುಟುಕು ಮಾದರಿಯ ಕ್ರಿಕೆಟ್‌ನಲ್ಲಿ ಅತ್ಯುತ್ತಮ ಬೌಲಿಂಗ್ ಮಾಡಬಲ್ಲೆ ಎಂಬ ವಿಶ್ವಾಸವನ್ನು ಆ್ಯಂಡರ್ಸನ್ ತಿಳಿಸಿದ್ದಾರೆ. ಈ ಮೂಲಕ ಇಂಗ್ಲೆಂಡ್ ವೇಗಿ ಮತ್ತೆ ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಮರಳುವ ಇಂಗಿತ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಮುಂಬರುವ ದಿನಗಳಲ್ಲಿ ಆ್ಯಂಡರ್ಸನ್ ದಿ ಹಂಡ್ರೆಡ್ ಲೀಗ್ ಅಥವಾ ಇತರೆ ಫ್ರಾಂಚೈಸಿ ಲೀಗ್‌ನಲ್ಲಿ ಕಾಣಿಸಿಕೊಂಡರೂ ಅಚ್ಚರಿಪಡಬೇಕಿಲ್ಲ.

ಸದ್ಯ ಜೇಮ್ಸ್ ಆ್ಯಂಡರ್ಸನ್ ಇಂಗ್ಲೆಂಡ್ ತಂಡದ ಬೌಲಿಂಗ್ ಕೋಚ್ ಆಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ ಇನ್ನುಳಿದ ಸಮಯದಲ್ಲಿ ಲೀಗ್ ಕ್ರಿಕೆಟ್ ಆಡುವ ಇರಾದೆಯಲ್ಲಿದ್ದಾರೆ. ಅಂದರೆ ಇಂಗ್ಲೆಂಡ್ ತಂಡವು ಸೀಮಿತ ಓವರ್‌ಗಳ ಸರಣಿ ಆಡುವ ವೇಳೆ ಜೇಮ್ಸ್ ಆ್ಯಂಡರ್ಸನ್ ಸಂಪೂರ್ಣ ಫ್ರೀಯಾಗಿರಲಿದ್ದು, ಹೀಗಾಗಿ ಚುಟುಕು ಕ್ರಿಕೆಟ್‌ನತ್ತ ಮುಖ ಮಾಡಲು ಇಚ್ಛಿಸಿದ್ದಾರೆ. ಇಂಗ್ಲೆಂಡ್ ಪರ 188 ಟೆಸ್ಟ್ ಪಂದ್ಯಗಳನ್ನಾಡಿರುವ 42ರ ಹರೆಯದ ಜೇಮ್ಸ್ ಆ್ಯಂಡರ್ಸನ್ (ಜಿಮ್ಮಿ) ಒಟ್ಟು 40037 ಎಸೆತಗಳನ್ನು ಎಸೆದಿದ್ದಾರೆ. ಈ ವೇಳೆ 18627 ರನ್ ನೀಡುವ ಮೂಲಕ ಒಟ್ಟು 704 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಟೆಸ್ಟ್ ಇತಿಹಾಸದಲ್ಲಿ ಅತೀ ಹೆಚ್ಚು ವಿಕೆಟ್ ಪಡೆದ ವೇಗದ ಬೌಲರ್ ಎಂಬ ವಿಶ್ವದಾಖಲೆಯನ್ನು ನಿರ್ಮಿಸಿ ನಿವೃತ್ತಿ ಘೋಷಿಸಿದ್ದಾರೆ.



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**